ಸಂಪುಟ: 21, ಸಂಚಿಕೆ: 159, ಪುಟಗಳು: 8, ಸೋಮವಾರ, 18 ಮಾರ್ಚ್ 2024 RNI NO. KARKAN/2002/08054
epaper: www.sanjemugilu.com


ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

## ಮೋದಿಯಂತಹ ದೇವರು ನಮ್ಮೂರಿಗೆ ಬರ್ತಿದ್ದಾರೆ, ಆದರೆ ನಾನು ಹೋಗಲ್ಲ

**ಶಿವಮೊಗ್ಗ:** ಇಡೀ ದೇಶದ ಜನರು ನಮ್ಮ ಪ್ರಧಾನಿ ನರೇಂದ್ರ ಮೋದಿ ಅವರನ್ನು ದೇವರು ಅಂದುಕೊಂಡಿದ್ದಾರೆ. ಅಂತಹ ದೇವರು ನಮ್ಮ ಊರಿಗೆ ಬರುತ್ತಿದ್ದಾರೆ. ನಮ್ಮ ಜನತೆಯ ಪರವಾಗಿ ದೇವರಿಗೆ ಸ್ವಾಗತ ಎಂದು ಕೆಎಸ್ ಈಶ್ವರಪ್ಪ ಹೇಳಿದ್ದಾರೆ.

ಇಂದು ಪ್ರಧಾನಿ ನರೇಂದ್ರ ಮೋದಿ ಅವರು ಶಿವಮೊಗ್ಗಕ್ಕೆ ಆಗಮಿಸುತ್ತಿದ್ದು, ಈ ಸಂಬಂಧ ಸುದ್ದಿಗಾರರು, ನೀವು ಈ ಕಾರ್ಯಕ್ರಮದಲ್ಲಿ ಭಾಗಿಯಾಗುತ್ತೀರಾ ಎಂದು ಕೇಳಿದ ಪ್ರಶ್ನೆಗೆ ಉತ್ತರಿಸಿದ ಕೆಎಸ್ ಈಶ್ವರಪ್ಪ, ನಾನು ಇಂದಿನ ಕಾರ್ಯಕ್ರಮಕ್ಕೆ ಹೋಗಲು ಆಗುತ್ತಿಲ್ಲ. ಪ್ರಧಾನಿ ಮೋದಿಯವರಿಗೆ ನಾನು ಈ ವಿಚಾರವಾಗಿ ಕ್ಷಮೆ ಕೇಳುತ್ತೇನೆ. ನರೇಂದ್ರ ಮೋದಿ ಅವರು ಹಿಂದುತ್ವ ಉಳಿಸುವ ಕೆಲಸ ಮಾಡುತ್ತಿದ್ದಾರೆ. ಆದರೆ ನಾನು ಪ್ರಧಾನಿ ಕಾರ್ಯಕ್ರಮಕ್ಕೆ ಹೋಗುತ್ತಿಲ್ಲ ಎಂದು ಹೇಳಿದರು.

ಇಂದು ನರೇಂದ್ರ ಮೋದಿಯವರ ಕಾರ್ಯಕ್ರಮದಲ್ಲಿ ಅನಿವಾರ್ಯವಾಗಿ ಭಾಗವಹಿಸುತ್ತಿಲ್ಲ ಎಂದ ಕೆಎಸ್ ಈಶ್ವರಪ್ಪ, ವಿವಿಧ ಮಠಾಧೀಶರು, ದೇವಸ್ಥಾನಗಳಿಗೆ ತೆರಳಿ ಆಶೀರ್ವಾದ ಪಡೆಯುತ್ತೇನೆ. ಶಿವಮೊಗ್ಗದಿಂದ ಗೆದ್ದು ಮತ್ತೆ ಪ್ರಧಾನಿ ಮೋದಿ ಅವರ ಬಳಿ ತೆರಳುತ್ತೇನೆ ಎಂದು ಹೇಳುವ ಮೂಲಕ ಶಿವಮೊಗ್ಗ ಲೋಕಸಭಾ ಕ್ಷೇತ್ರದಿಂದ ತಾನು ಸ್ಪರ್ಧಿಸುವ ಬಗ್ಗೆ ಪುನರುಚ್ಚಾರ ಮಾಡಿದರು.

ಇನ್ನೊಂದೆಡೆ ತನ್ನ ತವರೂರಿಗೆ ಬಿಜೆಪಿಯ ಅತ್ಯುನ್ನತ ನಾಯಕ ಪ್ರಧಾನಿ ನರೇಂದ್ರ ಮೋದಿ



ಆಗಮನ ಹಿನ್ನೆಲೆ ಮಾಜಿ ಡಿಸಿಎಂ ಕೆ ಎಸ್ ಈಶ್ವರಪ್ಪ ನಡೆ ಕುತೂಹಲ ಕೆರಳಿಸಿದ್ದು, ಮೋದಿ ಕಾರ್ಯಕ್ರಮಕ್ಕೆ ಹೋಗ್ತಾರಾ ಈಶ್ವರಪ್ಪ ಅನ್ನೋ ಪ್ರಶ್ನೆಗೆ ಈಶ್ವರಪ್ಪ ಮಾತ್ರ ತಾನು ಹೋಗೋದಿಲ್ಲ ಎಂದು ಹೇಳಿದ್ದಾರೆ. ಆ ಮೂಲಕ ಬಿಜೆಪಿಯ ಘಟಾನುಘಟಿಗಳ ಮನವೊಲಿಕೆಗೂ ಕೆ.ಎಸ್.ಈಶ್ವರಪ್ಪ ಬಗ್ಗಿಲ್ಲ. ರಾಷ್ಟ್ರೀಯ ನಾಯಕರು ಮನೆಗೆ ಬಂದು ನಿರ್ಧಾರ ಕೈಬಿಡುವಂತೆ ಕೇಳಿಕೊಂಡರೂ ಸಹ ಬಿಗಿಪಟ್ಟು ಬಿಡದ ಈಶ್ವರಪ್ಪ, ಇವತ್ತು ಇಡೀ ದಿನ ದೇವಾಲಯ ಹಾಗೂ ಮಠಗಳಿಗೆ ಭೇಟಿ ನೀಡಲಿದ್ದಾರೆ.

ಮಗನಿಗೆ ಹಾವೇರಿ ಟಿಕೆಟ್ ಕೈತಪ್ಪಿದ ಹಿನ್ನೆಲೆ ಇತ್ತೀಚೆಗಷ್ಟೇ ಮಾಧ್ಯಮದ ಜೊತೆ ಮಾತನಾಡಿದ್ದ ಮಾಜಿ ಶಾಸಕ ಕೆಎಸ್ ಈಶ್ವರಪ್ಪ, ಹಾವೇರಿ ಲೋಕಸಭೆ ಚುನಾವಣೆಗೆ ಯಡಿಯೂರಪ್ಪರ ಮನೆಗೆ ಹೋದಾಗ ಆ ಕ್ಷೇತ್ರದಲ್ಲಿ ನಿಲ್ಲಿಸಿ ಗೆಲ್ಲಿಸುತ್ತೇನೆ ಅಂತ ಹೇಳಿದ್ದರು. ಈಗ ಕಾಂತೇಶ್ ಗೆ ಟಿಕೆಟ್ ತಪ್ಪಿಸಿ ಯಡಿಯೂರಪ್ಪನವರು ಅನ್ಯಾಯ ಮಾಡಿದ್ದಾರೆ. ಯಡಿಯೂರಪ್ಪ ಹಾಗೂ ಅವರ ಮಗನೇ ನೇರವಾಗಿ ಟಿಕೆಟ್ ಕೈ ತಪ್ಪಿದ್ದಕ್ಕೆ ಕಾರಣ. ಐದು ಬಾರಿ ಶಿವಮೊಗ್ಗ ವಿಧಾನಸಭಾ ಕ್ಷೇತ್ರದಿಂದ ನನ್ನನ್ನು ಗೆಲ್ಲಿಸಿದ್ದಾರೆ. ಅನ್ಯಾಯ ಆಗಿರೋದು ಎಲ್ಲಾ ನಾಯಕರಿಗೂ ಗೊತ್ತಿದೆ ಎಂದು ಹೇಳಿದ್ದರು.

ಅಲ್ಲದೇ ಬೆಂಬಲಿಗರ ಸಭೆಯಲ್ಲಿ ಭಾಗಿಯಾಗಿ ಎಲ್ಲರ ಅಭಿಪ್ರಾಯ ಸಂಗ್ರಹಣೆ ಮಾಡುತ್ತೇನೆ ಎಂದಿದ್ದ ಕೆಎಸ್ ಈಶ್ವರಪ್ಪ, ಸಭೆ ಬಳಿಕ ತಾನು ಶಿವಮೊಗ್ಗ ಲೋಕಸಭಾ ಕ್ಷೇತ್ರದಿಂದ ಪುಟ 2

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಸೋಮವಾರ 18, ಮಾರ್ಚ್ -2024)

- ಶ್ರೀ ಶೋಭಕೃತ್ ನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು
- ಪಾಲ್ಗುಣ ಮಾಸ, ಶುಕ್ಲ ಪಕ್ಷ,
- ವಾರ : ಸೋಮವಾರ, ತಿಥಿ : ನವಮಿ
- ನಕ್ಷತ್ರ : ಆರಿದ್ರ
- ರಾಹುಕಾಲ: 7:59 ರಿಂದ 9:30
- ಗುಳಿಕಕಾಲ: 2:02 ರಿಂದ 3:33
- ಯಮಗಂಡಕಾಲ: 11:01 ರಿಂದ 12:32

## ಸಂಕ್ಷಿಪ್ತ ಸುದ್ದಿ

### ಕೆಎಸ್ ಈಶ್ವರಪ್ಪಗೆ ಠಕ್ಕರ್ ನೀಡಿದ ವಿಜಯೇಂದ್ರ

**ಶಿವಮೊಗ್ಗ:** ಒಂದೆಡೆ ಶಿವಮೊಗ್ಗಕ್ಕೆ ಪ್ರಧಾನಿ ನರೇಂದ್ರ ಮೋದಿ ಆಗಮಿಸುತ್ತಿದ್ದಾರೆ. ಮತ್ತೊಂದೆಡೆ ಬಿಜೆಪಿಯ ಹಿರಿಯ ನಾಯಕ ಕೆಎಸ್ ಈಶ್ವರಪ್ಪ ಅವರು ತನ್ನ ತವರೂರಿಗೆ ಮೋದಿ ಬರುತ್ತಿದ್ದರೂ ಕಾರ್ಯಕ್ರಮಕ್ಕೆ ಗೈರಾಗಿ ಇತರ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಇತ್ತ ಮಾಜಿ ಡಿಸಿಎಂ ಕೆಎಸ್ ಈಶ್ವರಪ್ಪಗೆ ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿವೈ ವಿಜಯೇಂದ್ರ ಠಕ್ಕರ್ ನೀಡಿದ್ದಾರೆ. ಪುಟ 2



### ನೀರಿನ ಟ್ಯಾಂಕರ್ ಗಳ ಮೇಲೆ ನಿಗಾ



**ಬೆಂಗಳೂರು:** ಕರ್ನಾಟಕದ 28 ಲೋಕಸಭಾ ಸ್ಥಾನಗಳಿಗೆ ಏಪ್ರಿಲ್ 26 ಮತ್ತು ಮೇ 7 ರಂದು ಎರಡು ಹಂತಗಳಲ್ಲಿ ಚುನಾವಣೆ ನಡೆಯಲಿದೆ. ಏಪ್ರಿಲ್ 26 ರಂದು ಬೆಂಗಳೂರು ಉತ್ತರ ಸೇರಿದಂತೆ ದಕ್ಷಿಣ ಕರ್ನಾಟಕದ ಹದಿನಾಲ್ಕು ಸ್ಥಾನಗಳು, ಬೆಂಗಳೂರು ಗ್ರಾಮಾಂತರ, ಬೆಂಗಳೂರು ಸೆಂಟ್ರಲ್, ಬೆಂಗಳೂರು ದಕ್ಷಿಣ ಮತ್ತು ಕರಾವಳಿ ಪ್ರದೇಶಗಳಿಗೆ ಮತದಾನ ನಡೆಯಲಿದ್ದು, ಉಳಿದ ಹದಿನಾಲ್ಕು ಕ್ಷೇತ್ರಗಳಿಗೆ ಮೇ 7 ರಂದು ಎರಡನೇ ಹಂತದಲ್ಲಿ ಮತದಾನ ನಡೆಯಲಿದೆ. ಪುಟ 2

### ಚಾರ್ಮಾಡಿ ಘಾಟಿಯಲ್ಲಿ ಕೆಟ್ಟು ನಿಂತ 16 ಚಕ್ರದ ಲಾರಿ ಟ್ರಾಫಿಕ್ ಜಾಮ್



**ಚಿಕ್ಕಮಗಳೂರು:** ಚಾರ್ಮಾಡಿ ಘಾಟಿಯಲ್ಲಿ 16 ಚಕ್ರದ ಲಾರಿ ಕೆಟ್ಟು ನಿಂತ ಪರಿಣಾಮ ಕಿ.ಮೀ.ಗಟ್ಟಲೆ ಟ್ರಾಫಿಕ್ ಜಾಮ್ ಉಂಟಾಗಿದೆ. ಪುಟ 2

## ಕಾಂಗ್ರೆಸ್ ಜತೆ ನಿಲ್ಲಲು ಯಾರೂ ಸಿದ್ಧರಿಲ್ಲ

# ಬಿಜೆಪಿ ವಾಗ್ದಾಳಿ

**ನವದೆಹಲಿ:** ಕಾಂಗ್ರೆಸ್ ಜತೆ ನಿಲ್ಲಲು ಯಾರೂ ಸಿದ್ಧರಿಲ್ಲ ಎಂದು ಬಿಜೆಪಿ ಹೇಳಿದೆ. ಮುಂಬೈನಲ್ಲಿ ನಡೆದ ರಾಹುಲ್ ಗಾಂಧಿ ನೇತೃತ್ವದ ಭಾರತ್ ಜೊಡೋ ನ್ಯಾಯ ಯಾತ್ರೆಯ ಸಮಾರೋಪದಲ್ಲಿ ಭಾಗವಹಿಸದ ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ವಿರುದ್ಧ ಬಿಜೆಪಿ ವಾಗ್ದಾಳಿ ನಡೆಸಿದೆ. ಇಂಡಿಯಾ ಒಕ್ಕೂಟದಲ್ಲಿರುವ ಯಾವ ಪಕ್ಷವೂ ಕೂಡ ಕಾಂಗ್ರೆಸ್‌ನ ಪರವಾಗಿ ನಿಲ್ಲಲು ಸಿದ್ಧವಿಲ್ಲ, ಅಮೇಥಿ, ರಾಯ್ ಬರೇಲಿಯಲ್ಲಿ ಸೋಲುವ ಭಯದಲ್ಲಿದೆ.

ರಾಹುಲ್ ಗಾಂಧಿ ಹಾಗೂ ಪ್ರಿಯಾಂಕಾ ಗಾಂಧಿ ಉತ್ತರ ಪ್ರದೇಶದ ಎರಡು ಕ್ಷೇತ್ರಗಳಿಂದ ಸ್ಪರ್ಧಿಸಲು ಉತ್ಸುಕರಾಗಿಲ್ಲ ಎಂದು ಬಿಜೆಪಿ ವಕ್ತಾರ ರಾಕೇಶ್ ತ್ರಿಪಾಠಿ ಹೇಳಿದ್ದಾರೆ. ಪ್ರತಿಪಕ್ಷಗಳ ಒಕ್ಕೂಟ ಇಂಡಿಯಾದಲ್ಲಿರುವ ಪಕ್ಷಗಳು ಆಗಾಗ ಕಾಂಗ್ರೆಸ್ ನ್ನು ಅವಮಾನಿಸುತ್ತಿದೆ. ಈ ಒಕ್ಕೂಟದಲ್ಲಿ ಕಾಂಗ್ರೆಸ್ ಅತಿದೊಡ್ಡ ಪಕ್ಷವಾಗಿದೆ. ಬಿಜೆಪಿಯನ್ನು ಚುನಾವಣೆಯಲ್ಲಿ ಸೋಲಿಸಲು ಎಲ್ಲಾ ಪ್ರತಿಪಕ್ಷಗಳು ಕಟ್ಟಿಕೊಂಡ ಒಕ್ಕೂಟ ಇದಾಗಿದೆ.

ನಿತೀಶ್ ಕುಮಾರ್ ಹಾಗೂ ಆರ್‌ಎಲ್‌ಡಿ ಇಂಡಿಯಾ ಮೈತ್ರಿ ತೊರೆದಿದ್ದಾರೆ. ಮಮತಾ ಬ್ಯಾನರ್ಜಿ ಕೂಡ ಅವರೊಂದಿಗಿಲ್ಲ, ಈಗ ಅಖಿಲೇಶ್ ಯಾದವ್ ಕೂಡ ಅಂತರ ಕಾಯ್ದುಕೊಳ್ಳುತ್ತಿದ್ದಾರೆ. ಯಾರೂ ಕಾಂಗ್ರೆಸ್ ನೊಂದಿಗೆ ನಿಲ್ಲಲು ಬಯಸುವುದಿಲ್ಲ. ಫೆಬ್ರವರಿ 25 ರಂದು ಆಗ್ರಾದಲ್ಲಿ ಭಾರತ್ ಜೋಡೊ ಯಾತ್ರೆ ನಡೆಯುತ್ತಿದ್ದ ಸಂದರ್ಭದಲ್ಲಿ ಕೊಲೆಯ ಕ್ಷಣದಲ್ಲಿ ರಾಹುಲ್ ಗಾಂಧಿಯೊಂದಿಗೆ ಅಖಿಲೇಶ್ ಯಾದವ್ ಸೇರಿಕೊಂಡಿದ್ದರು. ಎಸ್‌ಪಿ 63 ಸ್ಥಾನಗಳಲ್ಲಿ ಸ್ಪರ್ಧಿಸಲಿದ್ದು, ಕಾಂಗ್ರೆಸ್ 17 ಕ್ಷೇತ್ರಗಳಲ್ಲಿ ಸ್ಪರ್ಧಿಸಲಿದೆ.

ಮುಂಬರುವ ಲೋಕಸಭೆ ಚುನಾವಣೆಗೆ ಮೀರತ್ ಕ್ಷೇತ್ರದಿಂದ ಸಮಾಜವಾದಿ ಪಕ್ಷವು ವಕೀಲ ಭಾನು ಪ್ರತಾಪ್ ಸಿಂಗ್ ಅವರನ್ನು ನಾಮನಿರ್ದೇಶನ ಮಾಡಿದೆ. ಅವರ ಹಳೆಯ ವಿಡಿಯೋವೊಂದು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದ್ದು, ಅದರಲ್ಲಿ ಸನಾತನ ಸಂಸ್ಥೆಯ ವಿರುದ್ಧ ಮಾತನಾಡುತ್ತಿರುವುದು ಕಂಡು ಬಂದಿದೆ. ಇದೀಗ ಭಾರತೀಯ ಜನತಾ ಪಕ್ಷ ಈ ಬಗ್ಗೆ ಎಸ್‌ಪಿ ವಿರುದ್ಧ ಪ್ರಶ್ನೆ ಎತ್ತಿದೆ. ಪುಟ 2



### 4 ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಘೋಷಿಸಿದ ಬಿಎಸ್‌ಪಿ



ಮುಂಬರುವ ಲೋಕಸಭಾ ಚುನಾವಣೆಗೆ ಎಲ್ಲಾ ಪಕ್ಷಗಳು ತಯಾರಿ ನಡೆಸುತ್ತಿವೆ. ತಮ್ಮ ಪಕ್ಷದಿಂದ ಯಾವ ಕ್ಷೇತ್ರದಲ್ಲಿ ಯಾರು ನಿಲ್ಲಬೇಕೆನ್ನುವ ಪಟ್ಟಿಯನ್ನು ಸಿದ್ಧಪಡಿಸಿ, ಕೆಲವು ಪಕ್ಷಗಳು ಬಿಡುಗಡೆಯನ್ನೂ ಮಾಡಿವೆ. ಹಾಗೆಯೇ ಬಹುಜನ ಸಮಾಜವಾದಿ ಪಕ್ಷ(ಬಿಎಸ್‌ಪಿ)ದ ಮುಖ್ಯಸ್ಥೆ ಮಾಯಾವತಿ ಕೂಡ 4 ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಘೋಷಿಸಿದ್ದಾರೆ. ಪುಟ 2

## ಮೈತ್ರಿಗೆ ಮುಳುವಾಗುತ್ತಾ ಕೋಲಾರ?

**ಬೆಂಗಳೂರು:** ಲೋಕಸಭೆ ಚುನಾವಣೆಗೆ ಮುಹೂರ್ತ ಫಿಕ್ಸ್ ಆಗಿದೆ. ಸರ್ವೆಗಳೂ ಸಹ ಬಿಜೆಪಿ-ಜೆಡಿಎಸ್ ಕರ್ನಾಟಕದಲ್ಲಿ 23 ಸ್ಥಾನ ಗೆಲ್ಲುತ್ತೆಂಬ ಭವಿಷ್ಯ ನುಡಿತಿವೆ. ಹೀಗಾಗಿ ಹುಮ್ಮಸ್ಸಿನಲ್ಲಿರೋ ದೋಸ್ತಿಗಳು ಸೀಟು ಹಂಚಿಕೆ ಫೈನಲ್‌ನಲ್ಲಿ ಬ್ಯುಸಿಯಾಗಿದ್ದಾರೆ. ಶನಿವಾರ (ಮಾ.16) ರಂದು ದೆಹಲಿಗೆ ಹೋಗಿದ್ದ ಮಾಜಿ ಮುಖ್ಯಮಂತ್ರಿ ಹೆಚ್‌ಡಿ ಕುಮಾರಸ್ವಾಮಿ ಅವರು ಅಮಿತ್ ಶಾ ಭೇಟಿ ಮಾಡಿದ್ದರು. ಈ ವೇಳೆ ಹೆಚ್‌ಡಿ ಕುಮಾರಸ್ವಾಮಿ ಹಾಸನ, ಮಂಡ್ಯ ಹಾಗೂ ಕೋಲಾರ ಕ್ಷೇತ್ರಗಳ ಟಿಕೆಟ್ ತಮಗೆ ನೀಡುವಂತೆ ಕೇಳಿದ್ದಾರಂತೆ. ಆದರೆ ಬಿಜೆಪಿ ವರಿಷ್ಠರು ಕೋಲಾರ ಕ್ಷೇತ್ರ ಬಿಟ್ಟುಕೊಡಲು ಹಿಂದೇಟು ಹಾಕಿದ್ದಾರೆ ಎಂಬ ಮಾಹಿತಿ ಮೂಲಗಳಿಂದ ದೊರೆತಿದೆ. ಅಷ್ಟಕ್ಕೂ ಬಿಜೆಪಿ ಹೈಕಮಾಂಡ್ ನಾಯಕರು ಹಿಂದೇಟು ಹಾಕಿದ್ದೇಕೆ?



ಕೋಲಾರ ಲೋಕಸಭಾ ಕ್ಷೇತ್ರವನ್ನು ಜೆಡಿಎಸ್‌ಗೆ ಬಿಟ್ಟುಕೊಡಲು ಬಿಜೆಪಿ ಹಿಂದೇಟು ಹಾಕಿದೆ. ಎಸ್.ಸಿ. ಬಲಗೈ ಸಮುದಾಯಕ್ಕೆ ಅವಕಾಶ ಮಾಡಿಕೊಡುವ ಉದ್ದೇಶದಿಂದ ಕೋಲಾರ ಕ್ಷೇತ್ರ ಉಳಿಸಿಕೊಳ್ಳಲು ಬಿಜೆಪಿ ಹೈಕಮಾಂಡ್ ನಾಯಕರು ನಿರ್ಧಿಸಿದ್ದಾರೆ. ಆದರೆ ಜೆಡಿಎಸ್ ಕೋಲಾರ ಲೋಕಸಭಾ ಕ್ಷೇತ್ರ ತಮಗೆ ಬೇಕೆ ಬೇಕು ಎಂದು ಪಟ್ಟು ಹಿಡಿದಿದೆ.

ಕಳೆದ ವಿಧಾನಸಭೆ ಚುನಾವಣೆಯಲ್ಲಿ ಕೋಲಾರದಲ್ಲಿ ಬಿಜೆಪಿಗಿಂತ ಜೆಡಿಎಸ್ ಪಕ್ಷಕ್ಕೆ ಹೆಚ್ಚು ಮತಗಳ ಕ್ರೂಡಿಕರಣವಾಗಿತ್ತು. ಅಲ್ಲದೆ ಕೋಲಾರ ಲೋಕಸಭಾ ಕ್ಷೇತ್ರದಲ್ಲಿ ಮೂವರು ಜೆಡಿಎಸ್ ಶಾಸಕರಿದ್ದಾರೆ. (ಮುಳಬಾಗಿಲು, ಶ್ರೀನಿವಾಸಪುರ, ಶಿಡ್ಲಘಟ್ಟ). ಬಿಜೆಪಿಗೆ ಹೋಲಿಸಿದರೆ ಜೆಡಿಎಸ್ ಒಳ್ಳೆಯ ಸಂಘಟನೆ ಇದೆ. ಗೆಲ್ಲುವ ಅವಕಾಶ ಹೆಚ್ಚು ಇರುವ ಕಾರಣಕ್ಕೆ ಜೆಡಿಎಸ್ ಕೋಲಾರ ಕ್ಷೇತ್ರ ಬಿಟ್ಟುಕೊಡುವಂತೆ ಪಟ್ಟು ಹಿಡಿದಿದೆ. ಈ ವಿಚಾರವಾಗಿ ಮೈತ್ರಿ ನಾಯಕರಲ್ಲಿ ಅಸಮಾಧಾನ ಮೂಡಿದೆ ಎನ್ನಲಾಗುತ್ತಿದೆ.

ಈ ಗೊಂದಲದ ನಡುವೆಯೇ ಕೋಲಾರ ಕ್ಷೇತ್ರದ ಅಭ್ಯರ್ಥಿ ಆಯ್ಕೆ ಅಂತಿಮ ಮಾಡುವ ಕುರಿತು ಹೆಚ್‌ಡಿ ಕುಮಾರಸ್ವಾಮಿ ನಾಳೆ ಕೋಲಾರ ಮುಖಂಡರ ಸಭೆ ಕರೆದಿದ್ದಾರೆ. ಸಭೆ ಬಳಿಕ ಅಂತಿಮ ನಿರ್ಧಾರ ತಿಳಿಸಿದ್ದಾರೆ. ಕೋಲಾರದಲ್ಲಿ ಬಲಗೈ ಸಮುದಾಯದ ಅಭ್ಯರ್ಥಿ ಕಣಕ್ಕಿಳಿಸಿದರೆ ಹೆಚ್ಚು ಅನುಕೂಲವಾಗಲಿದೆ. ಇನ್ನು ಜೆಡಿಎಸ್‌ನಿಂದ ಭೋವಿ ಜನಾಂಗದ ಅಭ್ಯರ್ಥಿ ಮಲ್ಲೇಶ್ ಬಾಬು ಅವರನ್ನು ಕಣಕ್ಕಿಳಿಸಲು ನಿರ್ಧರಿಸಲಾಗಿದೆ. ಭೋವಿ ಅಭ್ಯರ್ಥಿ ಕಣಕ್ಕಿಳಿಸಿದರೆ ಕಾಂಗ್ರೆಸ್ ಅಭ್ಯರ್ಥಿಗೆ ಅನುಕೂಲವಾಗುವ ಸಾಧ್ಯತೆ ಹೆಚ್ಚಾಗಿದೆ.

ಸದ್ಯ ಕೋಲಾರ ಲೋಕಸಭಾ ಕ್ಷೇತ್ರ ಮೈತ್ರಿ ಪಕ್ಷಗಳಿಗೆ ಕಗ್ಗಂಟಾಗಿ ಪರಿಣಮಿಸಿದೆ. ಈ ಮಧ್ಯೆ ಕೇವಲ ಎರಡು ಕ್ಷೇತ್ರಕ್ಕಾಗಿ ಮೈತ್ರಿ ಬೇಕಿತ್ತಾ ಎಂದು ಕೆಲವು ಜೆಡಿಎಸ್ ಶಾಸಕರು ಕುಮಾರಸ್ವಾಮಿ ಅವರಿಗೆ ಪ್ರಶ್ನೆ ಮಾಡಿದ್ದಾರೆ. ಸದ್ಯ ಚುನಾವಣೆ ಹೊಸ್ತಿಲಲ್ಲಿ ದಳಪತಿಗಳು ಗೊಂದಲದಲ್ಲಿ ಸಿಲುಕಿದ್ದಾರೆ.

## ಕಾಂಗ್ರೆಸ್ ಅಭ್ಯರ್ಥಿ ಗೀತಾಗೆ ನಿರ್ಮಾಪಕರ ಸಾಥ್

**ಬೆಂಗಳೂರು:** ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್ ಅವರ ಪತ್ನಿ ಗೀತಾ ಶಿವರಾಜ್‌ಕುಮಾರ್ ಅವರು ಕಾಂಗ್ರೆಸ್ ಅಭ್ಯರ್ಥಿಯಾಗಿ ಶಿವಮೊಗ್ಗ ಲೋಕಸಭಾ ಕ್ಷೇತ್ರದಿಂದ ಸ್ಪರ್ಧೆಗೆ ಇಳಿದಿದ್ದಾರೆ. ಸದ್ಯ ದೊಡ್ಮನೆ ಕುಟುಂಬದ ಸೊಸೆಗೆ ನಿರ್ಮಾಪಕರ ಸಂಘ ಬೆಂಬಲ ಸೂಚಿಸಿದ್ದು ಗೀತಾ ಅವರ ಬಲ ದುಪ್ಪಟ್ಟಾದಂತಿದೆ. ಈ ಸಂಬಂಧ ಮಧ್ಯಾಹ್ನ 3 ಗಂಟೆಗೆ ನಟ ಶಿವರಾಜ್ ಕುಮಾರ್ ನಿವಾಸದಲ್ಲಿ ಸುದ್ದಿಗೋಷ್ಠಿ ಕರೆಯಲಾಗಿದೆ.



ಬೆಂಗಳೂರಿನ ನಾಗವಾರದಲ್ಲಿರುವ ನಟ ಶಿವರಾಜ್ ಕುಮಾರ್ ನಿವಾಸದಲ್ಲಿ ಇಂದು ಸುದ್ದಿಗೋಷ್ಠಿ ನಡೆಯಲಿದೆ. ಗೀತಾರನ್ನು ಒಮ್ಮೆ ಸಂಸದೆ ಆಗಿ ನೋಡಬೇಕು ಎಂದು ನಟ ಶಿವಣ್ಣ ಆಸೆ ವ್ಯಕ್ತಪಡಿಸಿದ್ದರು. ಸದ್ಯ ನಟ ಶಿವರಾಜ್ ಕುಮಾರ್ ಪತ್ನಿ ಗೀತಾ ಪರ ಪ್ರಚಾರಕ್ಕೆ ಸಿದ್ಧವಾಗ್ತಿದ್ದಾರೆ. ಶಿವಮೊಗ್ಗ ಜಿಲ್ಲೆಯ ಹೋಬಳಿಮಟ್ಟದಲ್ಲಿ ಪ್ರಚಾರ ನಡೆಸಲಿದ್ದಾರೆ. ತಾಲೂಕು ಮಟ್ಟದ ಸಭೆಗಳಲ್ಲಿ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಭಾಗಿಯಾಗಲಿದ್ದಾರೆ. ಮಾ.20ರಂದು ಶಿವಮೊಗ್ಗಕ್ಕೆ ಕಾಂಗ್ರೆಸ್ ಅಭ್ಯರ್ಥಿ ಗೀತಾ ಆಗಮಿಸಿ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 400 ಸಭೆ ಮಾಡಲು ಪ್ಲ್ಯಾನ್ ಮಾಡಿದ್ದಾರೆ.

ಇನ್ನು ಶಿವಮೊಗ್ಗ ಲೋಕಸಭೆ ಚುನಾವಣೆ ಕಾವು ಏರುತ್ತಿದೆ. ಶಿವಮೊಗ್ಗದಲ್ಲಿ ಕಮಲ ಒಡೆದ ಮನೆಯಾಗಿದೆ. ಪುಟ 2

## ಅಮೆರಿಕದ ಸ್ಪೇಸ್ ಎಕ್ಸ್‌ನಿಂದ ನೂರಾರು ಸೀಕ್ರೆಟ್ ಸೆಟಿಲೈಟ್‌ಗಳು

**ನವದೆಹಲಿ:** ಭವಿಷ್ಯದ ಯುದ್ಧಗಳು ಹೊಸ ತಂತ್ರಜ್ಞಾನ ಮತ್ತು ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ ಮೂಲಕ ನಡೆಯುತ್ತವೆ ಎಂದು ಹೇಳಲಾಗುತ್ತದೆ. ಆಗಸದಲ್ಲಿರುವ ಉಪಗ್ರಹಗಳು ವಿವಿಧ ಜನೋಪಯೋಗಿ ಸೇವೆಗಳಿಗೆ ಬಳಕೆ ಆಗುತ್ತವೆ. ಅವುಗಳ ಮಧ್ಯೆ ಸಾಕಷ್ಟು ಸ್ಪೈ ಸೆಟಿಲೈಟ್ ಗಳಿದ್ದು, ಇವು ರಹಸ್ಯವಾಗಿ ಕೆಲಸ ಮಾಡುತ್ತವೆ. ಯಾವುದೇ ಟಾರ್ಗೆಟ್ ಮೇಲೂ ಇವು ಕಣ್ಣಿಡಬಲ್ಲುವು. ಅಮೆರಿಕದ ಬಳಿ ಸದ್ಯದಲ್ಲೇ ಇಂಥ ಬಲಿಷ್ಠ ವ್ಯವಸ್ಥೆ ಬರಲಿದೆ. ವಿಶ್ವದ ಯಾವುದೇ ಮೂಲೆಯಲ್ಲಿರುವ ಯಾವುದೇ ಸ್ಥಳದ ಲೈವ್ ಸ್ಥಿತಿಗತಿಯನ್ನು ಕುಳಿತಲ್ಲೇ ನೋಡಬಹುದಾದಂತಹ ಶಕ್ತಿಶಾಲಿ ಗೂಢಚರ್ಯೆ ವ್ಯವಸ್ಥೆಯನ್ನು ಅಮೆರಿಕ ಅಭಿವೃದ್ಧಿಪಡಿಸುತ್ತಿದೆ. ಅದಕ್ಕಾಗಿ ಇಲಾನ್ ಮಸ್ಕ್ ಮಾಲಕತ್ವದ ಸ್ಪೇಸ್ ಎಕ್ಸ್ ಮತ್ತು ಅಮೆರಿಕದ ಗುಪ್ತಚರ ಸಂಸ್ಥೆ ಮಧ್ಯೆ ಮೂರು ವರ್ಷದ ಹಿಂದೆ ರಹಸ್ಯ ಒಪ್ಪಂದ ಆಗಿದೆ ಎನ್ನುವಂತಹ ಸುದ್ದಿ ಕೇಳಿಬಂದಿದೆ. ಪುಟ 2



## ಬೆಂಗಳೂರಿನಲ್ಲಿ ಕುಡಿಯುವ ನೀರಿಗೆ ಸಮಸ್ಯೆ

# ಇಂದು ಅಧಿಕಾರಿಗಳ ಜೊತೆ ಸಿಎಂ ಮಹತ್ವದ ಸಭೆ

**ಬೆಂಗಳೂರು:** ಬೆಂಗಳೂರು ನಗರದಲ್ಲಿ ಕುಡಿಯುವ ನೀರಿಗೆ ಸಮಸ್ಯೆ ಹಿನ್ನೆಲೆ ಇಂದು ಅಧಿಕಾರಿಗಳ ಜೊತೆ ಸಿಎಂ ಸಿದ್ದರಾಮಯ್ಯ ಮಹತ್ವದ ಸಭೆ ನಡೆಸಲಿದ್ದಾರೆ. ಗೃಹಕಚೇರಿ ಕೃಷ್ಣಾದಲ್ಲಿ ಇಂದು ಮಧ್ಯಾಹ್ನ 12 ಗಂಟೆಗೆ ಸಭೆ ನಡೆಯಲಿದೆ. ಅಗತ್ಯ ಮಾಹಿತಿಯೊಂದಿಗೆ ಸಭೆಗೆ ಆಗಮಿಸುವಂತೆ ಅಧಿಕಾರಿಗಳಿಗೆ ಸಿಎಂ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ. ಸಭೆಯಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್, ಬೆಂಗಳೂರು ನಗರ ಡಿಸಿ, ಬಿಬಿಎಂಪಿ, ಬೆಂಗಳೂರು ಜಲಮಂಡಳಿ ಹಿರಿಯ ಅಧಿಕಾರಿಗಳು ಭಾಗಿಯಾಗಲಿದ್ದಾರೆ.



ಮಾ.5ರಂದು ರಾಜ್ಯದ ನೀರಿನ ಸಮಸ್ಯೆ ಕುರಿತು ಸಿಎಂ ಸಿದ್ದರಾಮಯ್ಯ ಸಭೆ ನಡೆಸಿದ್ದರು. ಇಂದು ಬೆಂಗಳೂರು ನಗರ ಭಾಗಕ್ಕೆ ಸಂಬಂಧಿಸಿದಂತೆ ಪ್ರತ್ಯೇಕ ಸಭೆ ನಡೆಸಲಿದ್ದಾರೆ. ನೀರಿನ ಸಮಸ್ಯೆ ಪರಿಹಾರ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಲಿದ್ದಾರೆ. ಖಾಸಗಿ ಟ್ಯಾಂಕರ್ ಮಾಲೀಕರ ಸುಲಿಗೆಗೆ ಜಿಲ್ಲಾಡಳಿತ ಬ್ರೇಕ್ ಹಾಕಿದೆ. ಮೊದಲ ಬಾರಿ ಸಿಎಂ ಸಭೆ ಬಳಿಕ ಸುಲಿಗೆಗೆ ಬ್ರೇಕ್ ಹಾಕಲಾಗಿತ್ತು. ಮಾ.7ರಂದು ಟ್ಯಾಂಕರ್ ನೀರಿನ ದರ ನಿಗದಿಪಡಿಸಿ ಆದೇಶ ಮಾಡಲಾಗಿತ್ತು. ಬೆಂಗಳೂರು ನಗರದಲ್ಲಿ ಸುಮಾರು 3,500 ಖಾಸಗಿ ಟ್ಯಾಂಕರ್‌ಗಳಿವೆ. ಖಾಸಗಿ ಟ್ಯಾಂಕರ್ ಗಳ ಬಹುತೇಕ ಮಾಲೀಕರು ಪರವಾನಗಿ ಪಡೆದಿಲ್ಲ. ಹೀಗಾಗಿ ಮಾ.1ರಿಂದ 7ರೊಳಗೆ ಸ್ವಯಂ ನೋಂದಣಿಗೆ ಸೂಚಿಸಲಾಗಿತ್ತು. ಇಂದಿನ ಸಭೆಯಲ್ಲಿ ಈ ಬಗ್ಗೆ ಸಿದ್ದರಾಮಯ್ಯ ಮಾಹಿತಿ ಪಡೆಯಲಿದ್ದಾರೆ. ಜೊತೆಗೆ ಕಾವೇರಿ 5ನೇ ಹಂತದ ಮುಕ್ತಾಯ ಹಂತದ ಮಾಹಿತಿ ಸಂಗ್ರಹಿಸಲಿದ್ದಾರೆ. ನೀರಿನ ಸಮಸ್ಯೆ ಪರಿಹಾರ ಕುರಿತು ಅಧಿಕಾರಿಗಳಿಗೆ ನಿರ್ದೇಶನ ನೀಡಲಿದ್ದಾರೆ. ಪುಟ 2

## ಭಕ್ತಿಗೀತೆ ಹಾಕಿದ್ದೇ ತಪ್ಪಾಯ್ತಾ?

### ಯುವಕನ ಮೇಲೆ ಪುಂಡರಿಂದ ಹಲ್ಲೆ!

**ಬೆಂಗಳೂರು:** ಭಕ್ತಿಗೀತೆ ಹಾಡುಗಳನ್ನ ಹಾಕಿದಕ್ಕೆ ಐದಾರು ಮಂದಿಯ ಗುಂಪು ಮೊಬೈಲ್ ಶಾಪ್ ನಡೆಸುತ್ತಿದ್ದ ಯುವಕನ ಮೇಲೆ ಮನಸೋಇಚ್ಛೆ ಹಲ್ಲೆ ಮಾಡಿದ ಆರೋಪ ಬೆಂಗಳೂರಿನಲ್ಲಿ ಕೇಳಿ ಬಂದಿದೆ.

ಬೆಂಗಳೂರಿನ ನಗತರಪೇಟೆಯಲ್ಲಿ ನಿನ್ನೆ ಸಂಜೆ ಈ ಘಟನೆ ನಡೆದಿದ್ದು, ಐದಾರು ಮಂದಿ ಮುಸ್ಲಿಂ ಯುವಕರು ಅಂಗಡಿ ಬಳಿ ಬಂದು ಕಿರಿಕ್ ತೆಗೆದು ಹಲ್ಲೆ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ. ಮೊಬೈಲ್ ಸ್ಪೇರ್ ಪಾರ್ಟ್ಸ್ ಅಂಗಡಿ ನಡೆಸುತ್ತಿದ್ದ ಮುಕೇಶ್ ಎಂಬುವವರ ಮೇಲೆ ಕಿಡಿಗೇಡಿಗಳು ಹಲ್ಲೆ ನಡೆಸಿದ್ದು, ದುಷ್ಕರ್ಮಿಗಳ ದಾಂಧಲೆಯ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಸದ್ಯ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಪಡೆದು ಬಂದ ಮುಕೇಶ್,



ಹಲಸೂರು ಪೊಲೀಸ್ ಠಾಣೆಗೆ ಆಗಮಿಸಿ ದೂರು ನೀಡಿದ್ದಾರೆ.

ದೂರು ನೀಡಿದ ಬಳಿಕ ಘಟನೆಯ ಬಗ್ಗೆ ಪ್ರತಿಕ್ರಿಯೆ ನೀಡಿರುವ ಗಾಯಾಳು ಮುಕೇಶ್, ಆರು ಜನ ಬಂದಿದ್ರು, ಯಾರ್ಯಾರು ಎಂದು ಹೆಸರು ಗೊತ್ತಿಲ್ಲ. ನಾನು ಸಂಜೆ ಆರು ಗಂಟೆಗೆ ಭಜನೆ ಹಾಡು ಪ್ಲೇ ಮಾಡ್ತಾ ಇದ್ದೆ. ಆಗ ಅವರು ಬಂದು ನಮಗೆ ತೊಂದರೆ ಆಗ್ತಾ ಇದೆ ಹಾಡು ನಿಲ್ಲಿಸು ಅಂತಾ ಗಲಾಟೆ ಮಾಡಿದ್ರು. ನಂತರ ನನ್ನ ಮೇಲೆ ಹಲ್ಲೆ ಮಾಡಿದ್ರು. ಈ ಮುಂಚೆ ನನಗೆ ಅವರ ಯಾವುದೇ ಪರಿಚಯ ಇಲ್ಲ. ರೋಲ್ ಕಾಲ್ ಮಾಡೋಕೆ ಅಗಾಗ ಅಂಗಡಿಗೆ ಬರ್ತಾ ಇದ್ರು. ನಾನು ಕೊಡ್ತಾ ಇರಲಿಲ್ಲ. ಮೊಬೈಲ್ ಅಂಗಡಿ ಆದ್ದರಿಂದ ಬ್ಲೂಟೂತ್, ಪುಟ 2

## ದಕ್ಷಿಣ ಕನ್ನಡ-ಕೊಡಗು ಗಡಿಭಾಗದಲ್ಲಿ

# ನಕ್ಸಲರ ಓಡಾಟ

**ಮಂಗಳೂರು:** ಮಲೆನಾಡು ಮತ್ತು ಕರಾವಳಿಯಲ್ಲಿ ಭಾಗದಲ್ಲಿ ನಕ್ಸಲರ ಚುಟುವಟಿಕೆ ಮತ್ತೆ ಶುರುವಾಗಿದೆ. ಐದು ವರ್ಷಗಳ ಬಳಿಕ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಕ್ಸಲರು ಮತ್ತೆ ಕಾಣಿಸಿಕೊಂಡಿದ್ದಾರೆ. ಕಡಮಕಲ್ಲು ಬಳಿಯ ಕೂಜಿಮಲೆ ರಬ್ಬರ್ ಎಸ್ಟೇಟ್ ಬಳಿ ಇರುವ ಅಂಗಡಿಯೊಂದಕ್ಕೆ ಎಂಟು ಜನ ನಕ್ಸಲರು ತೆರಳಿ ದಿನಸಿ ಖರೀದಿಸಿದ್ದಾರೆ. ಈ ಬಗ್ಗೆ ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದು, ನಕ್ಸಲರಿಗಾಗಿ ತೀವ್ರ ಶೋಧ ನಡೆಸಿದ್ದಾರೆ. ನಕ್ಸಲರು ಕೊಡಗು ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಗಡಿಯಲ್ಲಿ ಕಾಣಿಸಿಕೊಳ್ಳುತ್ತಿದ್ದು, ಕೂಜಿಮಲೆ, ಕಲ್ಮಕಾರ್‌ಕ್ಕೆ ನಕ್ಸಲ್ ನಿಗ್ರಹ ಪಡೆ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದೆ. ಕೆಲ ದಿನಗಳ ಹಿಂದೆ ಕೊಲ್ಲೂರು ಭಾಗದಲ್ಲಿ ಕಾಣಿಸಿ ಕೊಂಡಿದ್ದ ನಕ್ಸಲರು, ಇದೀಗ ದಕ್ಷಿಣ ಕನ್ನಡದ ಗಡಿ ಭಾಗದಲ್ಲಿ ಪ್ರತ್ಯಕ್ಷವಾಗಿದ್ದಾರೆ.



ಉಡುಪಿ, ಚಿಕ್ಕಮಗಳೂರಿನಲ್ಲಿ ಕಾಣಿಸಿಕೊಂಡಿದ್ದ ನಕ್ಸಲರು

ನಕ್ಸಲರು ಕಳೆದ ತಿಂಗಳು ಫೆಬ್ರವರಿಯಲ್ಲಿ ಕೇರಳದಿಂದ ಉಡುಪಿ ಜಿಲ್ಲೆಯ ಬೈಂದೂರುಗೆ ಆಗಮಿಸಿರುವ ಅನುಮಾನ ವ್ಯಕ್ತವಾಗಿತ್ತು. ಉಡುಪಿಯ ಹೆಬ್ರಿ ಮೂಲದ ವಿಕ್ರಮ್ ಗೌಡ ನೇತೃತ್ವದ ನಕ್ಸಲರ ತಂಡ ಬೈಂದೂರು ತಾಲೂಕಿನ ಕೊಲ್ಲೂರು, ಮುದೂರು, ಜಡ್ಕಲ್, ಬೆಳ್ಕಲ್ ಗ್ರಾಮ ಸುತ್ತಮುತ್ತ ಓಡಾಡಿರುವ ಶಂಕೆ ಮೂಡಿತ್ತು. ವಿಕ್ರಮ್ ಗೌಡ ಸುಮಾರು 20 ವರ್ಷಗಳ ಹಿಂದೆ ನಕ್ಸಲೈಟ್ ಆಗಿದ್ದಾನೆ. ಕೇರಳದಲ್ಲಿ ಈತ ತನ್ನ ಚಟುವಟಿಕೆಗಳನ್ನು ನಡೆಸುತ್ತಿದ್ದನು. ಪುಟ 2

## ಮಾ.21 ರಿಂದ ರಾಜ್ಯದಲ್ಲಿ ಮಳೆ

**ಬೆಂಗಳೂರು:** ಮಾ.21 ರಿಂದ ರಾಜ್ಯದ ಹಲವು ಭಾಗಗಳಲ್ಲಿ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ಕೊಟ್ಟಿದೆ. ಎರಡು ದಿನಗಳ ಕಾಲ 12 ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗಲಿದೆ. ಬೆಳಗಾವಿ, ಬೀದರ್, ಧಾರವಾಡ, ಕಲಬುರಗಿ, ದಕ್ಷಿಣ ಒಳನಾಡಿನ ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಹಾಸನ, ಕೊಡಗು, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ತುಮಕೂರಿನಲ್ಲಿ ಮಳೆಯಾಗಲಿದೆ. ಉಳಿದ ಜಿಲ್ಲೆಗಳಲ್ಲಿ ಒಣಹವೆ ಮುಂದುವರೆಯಲಿದೆ. ಅಲ್ಲದೇ ಮಾ.21ರ ಬಳಿಕ ಇನ್ನಷ್ಟು ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ ಎಂದು ಇಲಾಖೆ ತಿಳಿಸಿದೆ.

## ತೆಲಂಗಾಣ ರಾಜ್ಯಪಾಲೆ ತಮಿಳ್ ಸಾಯಿ ಸೌಂದರರಾಜನ್ ರಾಜೀನಾಮೆ

ತೆಲಂಗಾಣ ರಾಜ್ಯಪಾಲೆ ತಮಿಳ್ ಸಾಯಿ ಸೌಂದರರಾಜನ್ ರಾಜೀನಾಮೆ ನೀಡಿದ್ದು, ಲೋಕಸಭೆ ಚುನಾವಣೆಗೆ ತಮಿಳುನಾಡಿನಿಂದ ಸ್ಪರ್ಧಿಸುವ ಸಾಧ್ಯತೆ ಇದೆ ಎನ್ನುವ ಮಾಹಿತಿ ಲಭ್ಯವಾಗಿದೆ. ಪುದುಚೇರಿಯಲ್ಲಿ ಎನ್ ಆರ್ ಕಾಂಗ್ರೆಸ್ -ಬಿಜೆಪಿ ಮೈತ್ರಿಕೂಟದ ಪರವಾಗಿ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಸ್ಪರ್ಧಿಸಲಿದ್ದಾರೆ. ಹಾಗೆಯೇ ತಮಿಳುನಾಡಿನಲ್ಲಿ ಬಿಜೆಪಿ ನೇತೃತ್ವದ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಮೈತ್ರಿಕೂಟ 39 ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಕೆಲವು ದಿನಗಳ ಹಿಂದೆ ತಮಿಳ್ ಸಾಯಿ ಸೌಂದರರಾಜನ್ ಅವರು ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ನಾಯಕತ್ವದಲ್ಲಿ ಸ್ಪರ್ಧಿಸುವ ಇಚ್ಛೆ ವ್ಯಕ್ತಪಡಿಸಿದ್ದರು ಎಂದು ವರದಿಯಾಗಿದೆ. ಅವರು ದೆಹಲಿಯಲ್ಲಿ ರಾಜೀನಾಮೆ ಸಲ್ಲಿಸಿದರು ಮತ್ತು ಸೋಮವಾರ ಬೆಳಗ್ಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಪತ್ರವನ್ನು ಕಳುಹಿಸಿದರು. ಲೋಕಸಭೆ ಚುನಾವಣೆಗೆ ಬಿಜೆಪಿಯ ಮೂರನೇ ಅಭ್ಯರ್ಥಿಗಳ ಪಟ್ಟಿಯಲ್ಲಿ ಸೌಂದರರಾಜನ್ ಅವರ ಹೆಸರನ್ನು ಘೋಷಿಸುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.

ಅವರು ಉತ್ತರ ತಮಿಳುನಾಡು, ಪುದುಚೇರಿ ಅಥವಾ ಚೆನ್ನೈ ದಕ್ಷಿಣ ಕ್ಷೇತ್ರದಿಂದ ಚುನಾವಣೆಗೆ ಸ್ಪರ್ಧಿಸಬಹುದು ಎಂದು ಮೂಲಗಳು ತಿಳಿಸಿವೆ. ಲೋಕಸಭೆ ಚುನಾವಣೆ ದಿನಾಂಕ ಘೋಷಣೆಯಾಗುತ್ತಿದ್ದಂತೆ ಬಿಜೆಪಿ ಅಭ್ಯರ್ಥಿಗಳ ಪಟ್ಟಿಯನ್ನು ಒಂದೊಂದಾಗಿ ಬಿಡುಗಡೆ ಮಾಡುತ್ತಿದೆ. ಇದಕ್ಕೂ ಮುನ್ನ ಬಿಜೆಪಿ ಮೊದಲ ಹಂತದಲ್ಲಿ 195 ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಿತ್ತು. ವಾರಣಾಸಿಯಲ್ಲಿ ಮೂರನೇ ಬಾರಿಗೆ ಸ್ಪರ್ಧಿಸುತ್ತಿರುವ ಪ್ರಧಾನಿ ನರೇಂದ್ರ ಮೋದಿ ಮತ್ತು ಗುಜರಾತ್‌ನ ಗಾಂಧಿನಗರದಲ್ಲಿ ಮತ್ತೆ ಸ್ಪರ್ಧಿಸುತ್ತಿರುವ ಗೃಹ ಸಚಿವ ಅಮಿತ್ ಶಾ ಅವರ ಹೆಸರುಗಳು ಪಟ್ಟಿಯಲ್ಲಿ ಸೇರಿವೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಲಕ್ನೋದಿಂದ ಮತ್ತು ಸ್ಮೃತಿ ಇರಾನಿ ಅಮೇಥಿಯಿಂದ ಸ್ಪರ್ಧಿಸಲಿದ್ದಾರೆ, ಸ್ಮೃತಿ ಇರಾನಿ 2019 ರಲ್ಲಿ ಕಾಂಗ್ರೆಸ್ ಅಧ್ಯಕ್ಷ ರಾಹುಲ್ ಗಾಂಧಿ ವಿರುದ್ಧ ಭರ್ಜರಿ ಗೆಲುವು ಸಾಧಿಸಿದ್ದಾರೆ. ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರನ್ನು ರಾಜಸ್ಥಾನದ ಕೋಟಾ ಅಭ್ಯರ್ಥಿಯಾಗಿ ಘೋಷಿಸಲಾಗಿದೆ.

28 ಮಹಿಳೆಯರು, 50 ವರ್ಷದೊಳಗಿನ 47 ಮುಖಂಡರು, ಒಬಿಸಿ ಸಮುದಾಯದ 57 ಸದಸ್ಯರು, 34 ಕೇಂದ್ರ ಮತ್ತು ರಾಜ್ಯ ಸಚಿವರು ಮತ್ತು ಇಬ್ಬರು ಮಾಜಿ ಮುಖ್ಯಮಂತ್ರಿಗಳು ಈ ಪಟ್ಟಿಯಲ್ಲಿ ಸೇರಿದ್ದಾರೆ. 195 ರಲ್ಲಿ, 51 ಪ್ರಮುಖ ರಾಜ್ಯವಾದ ಉತ್ತರ ಪ್ರದೇಶದಿಂದ, 20 ಪಶ್ಚಿಮ ಬಂಗಾಳದಿಂದ ಮತ್ತು ಐದು ದೆಹಲಿಯಿಂದ ಬಂದವರು.

### ಶೋಕಿಯಿಂದ ಚಿನ್ನ ಖರೀದಿಸಿ ಫೇಕ್ ಪೇಮೆಂಟ್

# ಖತರ್ನಾಕ್ ಜೋಡಿ ಸಿಕ್ಕಿಬಿದ್ದದ್ದೇ ರೋಚಕ

**ಬೆಂಗಳೂರು:** ಶ್ರೀಮಂತರ ರೀತಿಯಲ್ಲೇ ಶೋಕಿಯಿಂದ ಬಂದು, ಚಿನ್ನ ಖರೀದಿಸಿ ವಂಚಿಸುತ್ತಿದ್ದ ಖತರ್ನಾಕ್ ಜೋಡಿಯೊಂದನ್ನು ಬ್ಯಾಡರಹಳ್ಳಿ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಹೌದು. ಶ್ರೀಮಂತರಂತೆ ಟಿಪ್‌ಟಾಪ್ ಆಗಿ ಚಿನ್ನದ ಅಂಗಡಿಗೆ ಬಂದ ಜೋಡಿ, ಚಿನ್ನ ಖರೀದಿಸೋದ್ರಲ್ಲೇ ಬ್ಯುಸಿಯಾಗಿರುತ್ತಿತ್ತು. ಅಂಗಡಿ ಮಾಲೀಕರು ಈ ಜೋಡಿ ಕೇಳಿದ್ದನ್ನೆಲ್ಲಾ ಕೊಡುತ್ತಿದ್ದರು. ಒಳ್ಳೆಯ ವ್ಯಾಪಾರ ಆಗ್ತಿತ್ತು ಅಂದುಕೊಳ್ಳುತ್ತಿದ್ದ ಚಿನ್ನದಂಗಡಿ ಮಾಲೀಕನ ಖುಷಿ ಇರುತ್ತಿದ್ದದ್ದು ಕೇವಲ ಅರ್ಧಗಂಟೆ ಮಾತ್ರ. ಈ ಜೋಡಿ ಶಾಪಿಂಗ್ ಮಾಡ್ತಿದ್ದ ರೀತಿ ನೋಡಿ, ಅಂಗಡಿ ಮಾಲೀಕರೇ ಬೆಚ್ಚಿ ಬೀಳುತ್ತಿದ್ದರು. ಇಂತಹ ಜೋಡಿ ತಗಲಾಕ್ಕೊಂಡಿದ್ದು ಹೇಗೆ ಅನ್ನೋ ಸ್ಟೋರಿ ಇಲ್ಲಿದೆ.

ಡಿಜಿಟಲ್ ಪೇಮೆಂಟ್ ಅಪ್‌ಗಳನ್ನೇ ಬಂಡವಾಳ ಮಾಡಿಕೊಳ್ಳುತ್ತಿದ್ದ ಈ ಜೋಡಿ, ಫೇಕ್ ಪೇಮೆಂಟ್ ಆಪ್ ಮೂಲಕ ಹಣ ಪಾವತಿ ಮಾಡಿರುವುದಾಗಿ ತೋರಿಸಿ, ವಂಚಿಸುತ್ತಿದ್ದರು. ಅದೇ ರೀತಿ ಬ್ಯಾಡರಹಳ್ಳಿ ವ್ಯಾಪ್ತಿಯ ಆಭರಣದ ಅಂಗಡಿಯಲ್ಲೂ ಅದೇ ರೀತಿ ನಾಟಕ ಮಾಡಿ ಎಸ್ಕೇಪ್ ಆಗಿದ್ದರು. 15 ದಿನಗಳ ಬಳಿಕ ಬ್ಯಾಡರಹಳ್ಳಿ ಪೊಲೀಸರು ಹೆಡೆಮುರಿ ಕಟ್ಟಿದ್ದಾರೆ.

**ಹೇಗಿದೆ ನೋಡಿ ಥ್ರಿಲ್ಲಿಂಗ್ ಸ್ಟೋರಿ:** 15 ದಿನದ ಹಿಂದೆ ಗೊಲ್ಲರಹಟ್ಟಿಯಲ್ಲಿರುವ ಪರಮೇಶ್ವರ ಬ್ಯಾಂಕರ್ಸ್ ಅಂಡ್ ಜ್ಯೂವೆಲರ್ಸ್ ಆಭರಣ ಅಂಗಡಿಗೆ ಈ ಜೋಡಿ ಬಂದಿತ್ತು.



1.65 ಲಕ್ಷ ರೂ. ಮೌಲ್ಯದ 36 ಗ್ರಾಂ ಚಿನ್ನಾಭರಣ ಖರೀದಿ ಮಾಡಿದ್ದಾರೆ. ಬಳಿಕ ಆನ್‌ಲೈನ್ ಮೂಲಕ ಹಣ ಪಾವತಿಸಿ ಹೊರಟಿದ್ದಾರೆ. ಹಣ ಪಾವತಿಸಿದ ಸಂದೇಶವನ್ನು ಮಾಲೀಕರಿಗೆ ತೋರಿಸಿದ್ದಾರೆ. ಸ್ವಲ್ಪ ಹೊತ್ತಿನ ಬಳಿಕ ಅಂಗಡಿ ಮಾಲೀಕ ತಮ್ಮ ಖಾತೆಯನ್ನು ಪರಿಶೀಲಿಸಿದಾಗ ಮೋಸ ಹೋಗಿರುವುದು ಗೊತ್ತಾಗಿದೆ.

ಘಟನೆ ಸಂಬಂಧ ಅಂಗಡಿ ಮಾಲೀಕ ದೂರಿನ ಮೇರೆಗೆ ಬ್ಯಾಡರಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಈ ಕುರಿತು ತನಿಖೆ ಆರಂಭಿಸಿದ್ದ ಪೊಲೀಸರು 15 ದಿನಗಳ ಬಳಿಕ ಆರೋಪಿಗಳನ್ನ ಬಂಧಿಸಿದ್ದಾರೆ. ವಿಚಾರಣೆ ವೇಳೆ ಆರೋಪಿಗಳು 1.30 ಲಕ್ಷ ಚಿನ್ನ ಅಡಮಾನ ಇಟ್ಟಿರೋದು ಗೊತ್ತಾಗಿದೆ. ಅಷ್ಟೇ ಅಲ್ಲ, ಇದೇ ರೀತಿ ಹಲವು ಚಿನ್ನದ ಅಂಗಡಿಗಳಲ್ಲಿ ವಂಚಿಸಿರುವ ಸಂಗತಿ ಬೆಳಕಿಗೆ ಬಂದಿದೆ.

### ಚಿಕ್ಕಬಳ್ಳಾಪುರ ಟಿಕೆಟ್ ಫೈಟ್

# ಹೊರಗಿನವರಿಗೆ ಟಿಕೆಟ್ ಬೇಡವೆಂದ್ರು ವಿಶ್ವನಾಥ್

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಮೈತ್ರಿ ಟಿಕೆಟ್ ವಿಚಾರ ಸಂಬಂಧ ಸುಧಾಕರ್ ಗಾದ್ರೂ ಕೊಡಿ ಅಲೋಕ್ ವಿಶ್ವನಾಥ್ ಗಾದ್ರೂ ಕೊಡಿ. ಆದರೆ ಹೊರಗಿನವರಿಗೆ ಮಾತ್ರ ಟಿಕೆಟ್ ಕೊಡೋದು ಬೇಡ ಎಂದು ಶಾಸಕ ಎಸ್.ಆರ್ ವಿಶ್ವನಾಥ್ ಹೇಳಿದ್ದಾರೆ.



ಮಾಧ್ಯಮದ ಜೊತೆ ಮಾತನಾಡಿದ ಅವರು, ಚಿಕ್ಕಬಳ್ಳಾಪುರ ಕ್ಷೇತ್ರದ ಟಿಕೆಟ್ ಘೋಷಣೆ ತಡ ಯಾಕೆ ಅಂತ ನನಗೂ ಗೊತ್ತಾಗುತ್ತಿಲ್ಲ. ಸರ್ವೆ ಅಧಾರದ ಮೇಲೆ ಗೆಲ್ಲುವಂತಹ ಅಭ್ಯರ್ಥಿಗೆ ಟಿಕೆಟ್ ಕೊಡಿ. ಕಾರ್ಯಕರ್ತರಲ್ಲೂ ಆತಂಕ ಗೊಂದಲ ಮನೆ ಮಾಡಿದೆ. ದಿನಕ್ಕೊಂದು ಸುದ್ದಿ ಮೂರನೇ ವ್ಯಕ್ತಿ ಬರುವ ಮಾಹಿತಿ ಇದೆ. ಹಾಗಾಗಿ ವರಿಷ್ಠರಲ್ಲಿ ಹೊರಗಿನವರಿಗೆ ಟಿಕೆಟ್ ಕೊಡಬೇಡಿ ಅಂತ ಮನವಿ ಮಾಡಿದ್ದೇನೆ ಎಂದು ಹೇಳಿದರು.

ಎರಡು ದಿನದಲ್ಲಿ ಅಭ್ಯರ್ಥಿ ಘೋಷಣೆ ಆಗಲಿದೆ. ಸೋಮವಾರ ಸಭೆ ಇದೆ ಮೂರನೇ ಪಟ್ಟಿಯಲ್ಲಿ ಘೋಷಣೆ ಆಗಲಿದೆ. ಸ್ಥಳೀಯರಿಗೆ ಟಿಕೆಟ್ ಕೊಡಿ ಹೊರಗಿನವರು ಬೇಡವೇ ಬೇಡ. ಕುಮಾರಸ್ವಾಮಿಗೂ ಸಹ ಆಫರ್ ಕೊಟ್ಟಿರುವ ಬಗ್ಗೆ ಮಾಹಿತಿ ಬಂದಿದೆ. ನಿಲ್ಲುವ ಹಾಗೆ ಇದ್ರೆ ಅವರು ಪಕ್ಷ ಸಂಘಟನೆ ಮಾಡ್ತಿದ್ರು. ಹಾಗಾಗಿ ನಿಲ್ಲೋದು ಅನುಮಾನ ಎಂದರು.

ಒಂದು ವೇಳೆ ಹೈಕಮಾಂಡ್ ಕುಮಾರಸ್ವಾಮಿಯವರಿಗೆ ಕೊಟ್ರೆ ಸಹ ನಾವು ಸಹಕಾರ ಕೊಡ್ತೇವೆ. ಸುಧಾಕರ್ ಹಾಗೂ ನಾನು ಸಹ ಮಾತನಾಡಿದ್ದೇವೆ. ಇಬ್ಬರು ಸಹ ನಮ್ಮಿಬ್ಬರಲ್ಲಿ ಯಾರಿಗಾದ್ರೂ ಕೊಡಲಿ ಅಂತ ಮಾತನಾಡಿದ್ದೇವೆ. ಹೊರಗಿನವರು ಬರೋದು ಬೇಡ ಅಂತ ತೀರ್ಮಾನ ಮಾಡಿಕೊಂಡಿದ್ದೇವೆ ಎಂದು ಹೇಳಿದರು.

## ಬೀದರ್‌ನಲ್ಲಿ ಬಿರುಗಾಳಿ ಸಹಿತ ಧಾರಾಕಾರ ಮಳೆ- ಅವಾಂತರ ಸೃಷ್ಟಿ

**ಬೀದರ್:** ರಣ ಬಿಸಿಲಿಗೆ ಹೈರಾಣಾಗಿದ್ದ ಗಡಿ ಜಿಲ್ಲೆ ಬೀದರ್‌ನಲ್ಲಿ ನಿನ್ನೆ ಮಳೆರಾಯ ತಂಪೆರೆದಿದ್ದು, ಅಕಾಲಿಕ ಧಾರಾಕಾರ ಮಳೆಯಿಂದ ಗಡಿ ಜಿಲ್ಲೆಯ ಜನರ ಮೊಗದಲ್ಲಿ ಮಂದಹಾಸ ಮೂಡಿದೆ.

ಬೀದರ್ ಜಿಲ್ಲೆಯ ಔರಾದ್ ತಾಲೂಕಿನ ಚಿಕ್ಲಿ ಗ್ರಾಮದಲ್ಲಿ ಭಾರೀ ಬಿರುಗಾಳಿ ಸಹಿತ ಧಾರಾಕಾರ ಮಳೆಗೆ ವಿದ್ಯುತ್ ಕಂಬ ನೆಲಕ್ಕುರುಳಿ ಅವಾಂತರ ಸೃಷ್ಟಿಯಾಗಿದೆ. ಯಾರೂ ಇಲ್ಲದ ವೇಳೆ ವಿದ್ಯುತ್ ಕಂಬ ನೆಲಕ್ಕುರುಳಿದ್ದರಿಂದ ದೊಡ್ಡ ಅನಾಹುತ ತಪ್ಪಿದೆ. ಅಲ್ಲದೇ ಸಿಡಿಲು ಬಡಿದು ತೆಂಗಿನ ಮರ ಹೊತ್ತಿ ಉರಿದಿದೆ. ಭಾಲ್ಕಿ ತಾಲೂಕಿನ ಕೊಸಮ್ ಗ್ರಾಮದಲ್ಲಿ ಘಟನೆ ನಡೆದಿದೆ. ಸಿಡಿಲು



ಬಡಿದು ತೆಂಗಿನ ಮರ ಧಗಧಗ ಹೊತ್ತಿ ಉರಿದಿದ್ದರಿಂದ ಗ್ರಾಮದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಬೀದರ್, ಔರಾದ್, ಕಮಲನಗರ, ಭಾಲ್ಕಿ ಸೇರಿದಂತೆ ಜಿಲ್ಲೆಯಾದ್ಯಂತ ಸತತ ಒಂದು ಗಂಟೆಗಳ ಕಾಲ ಗುಡುಗು, ಸಿಡಿಲು ಹಾಗೂ ಬಿರುಗಾಳಿ ಸಹಿತ ಧಾರಾಕಾರ ಮಳೆಯಾಗಿದೆ.

## ಅಫ್ಘಾನಿಸ್ತಾನದಲ್ಲಿ 4.5 ತೀವ್ರತೆಯ ಭೂಕಂಪನ



**ಕಾಬೂಲ್:** ಅಫ್ಘಾನಿಸ್ತಾನದಲ್ಲಿ ನಿನ್ನೆ ಸಂಜೆ 07:59 ಕ್ಕೆ ಪ್ರಬಲ ಭೂಕಂಪನದ ಅನುಭವವಾಗಿದೆ. ರಿಕ್ಟರ್‌ಮಾಪಕದಲ್ಲಿ 4.5 ರಷ್ಟು ತೀವ್ರತೆ ದಾಖಲಾಗಿದೆ ಎಂದು ರಾಷ್ಟ್ರೀಯ ಭೂಕಂಪಶಾಸ್ತ್ರ ಕೇಂದ್ರ ಮಾಹಿತಿ ನೀಡಿದೆ.

ಭೂಕಂಪದ ಕೇಂದ್ರಬಿಂದು ಅಫ್ಘಾನಿಸ್ತಾನದಲ್ಲಿದೆ. ಭಾರತ ಮತ್ತು ಪಾಕಿಸ್ತಾನ ಸೇರಿದಂತೆ ತಜಕಿಸ್ತಾನದ ಹಲವು ಪ್ರದೇಶಗಳಲ್ಲಿ ಭೂಮಿ ಕಂಪಿಸಿದ ಅನುಭವವಾಗಿದೆ. ಭೂಕಂಪದ ತೀವ್ರತೆ 4.5 ಆಗಿದ್ದರಿಂದ ಜನರು ಭಯಭೀತರಾಗಿದ್ದರು. ಏಕಾಏಕಿ ಭೂಮಿ ಕಂಪಿಸಿದ ಕಾರಣ ಜನರು ಮನೆಯಿಂದ ಹೊರಗೆ ಓಡಲಾರಂಭಿಸಿದರು. ಅಲ್ಲದೇ ಮತ್ತೆ ಭೂಕಂಪನದ ಭೀತಿಯ ನಡುವೆಯೇ ಜನರು ರಸ್ತೆಯಲ್ಲಿ ಬಹಳ ಹೊತ್ತು ತಿರುಗಾಡುತ್ತಿರುವುದು ಕಂಡು ಬಂತು.

ಕಳೆದ ಅಕ್ಟೋಬರ್‌ನಲ್ಲಿಯೂ ಅಫ್ಘಾನಿಸ್ತಾನದಲ್ಲಿ ಭೂಕಂಪನ ಉಂಟಾಗಿತ್ತು. ಈ ವೇಳೆ ಸಾವು-ನೋವುಗಳು ಸಂಭವಿಸಿತ್ತು. ಸುಮಾರು 2,000 ಮಂದಿ ಸಾವನ್ನಪ್ಪಿದ್ದರು. ವಿಶ್ವ ಆರೋಗ್ಯ ಸಂಸ್ಥೆ ಲೆಕ್ಕಾಚಾರಗಳ ಪ್ರಕಾರ, ಅಫ್ಘಾನಿಸ್ತಾನದಲ್ಲಿ ಸುಮಾರು 600 ಮನೆಗಳು ಸಂಪೂರ್ಣ ಹಾನಿಗೀಡಾಗಿವೆ. ಹೆರಾತ್ ಪ್ರಾಂತ್ಯವೊಂದರಲ್ಲೇ 12 ಗ್ರಾಮಗಳು ನಾಮಾವಶೇಷವಾಗಿವೆ. ಈ ಗ್ರಾಮಗಳಲ್ಲಿ ಇದ್ದ 4,200 ಮಂದಿ ನಿರಾಶ್ರಿತರಾಗಿದ್ದರು.

## ಅಪಘಾತದಲ್ಲಿ ಎಎಸ್‌ಐ ಸಾವು: ಪಿಎಸ್‌ಐ ಸಸ್ಪೆಂಡ್



**ಬೆಳಗಾವಿ:** ಕುಂದಾನಗರಿ ಬೆಳಗಾವಿಯಲ್ಲಿ ಭೀಕರ ರಸ್ತೆ ಅಪಘಾತದಲ್ಲಿ ಎಎಸ್‌ಐ ಸಾವನ್ನಪ್ಪಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಪಿಎಸ್‌ಐ ಸಸ್ಪೆಂಡ್ ಮಾಡಿ ಎಸ್ಪಿ ಡಾ.ಭೀಮಾಶಂಕರ ಗುಳೇದ್ ಆದೇಶ ಹೊರಡಿಸಿದ್ದಾರೆ.

ಜಿಲ್ಲೆಯ ಯರಗಟ್ಟಿ ಪಟ್ಟಣದ ನಿವಾಸಿ ವಿಜಯಕಾಂತ ಮಿಕಲಿ (51) ರಸ್ತೆ ಅಪಘಾತದಲ್ಲಿ ಸಾವನ್ನಪ್ಪಿದ್ದರು. ಬೈಲಹೊಂಗಲ ತಾಲೂಕಿನ ದೊಡವಾಡ ಠಾಣೆಯಲ್ಲಿ ಎಎಸ್‌ಐ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದ ವಿಜಯಕಾಂತ ಹೆಲ್ಮೆಟ್ ಧರಿಸದೇ ಬೈಕ್ ಚಲಾಯಿಸಿದ್ದಕ್ಕೆ ರಸ್ತೆ ಅಪಘಾತದಲ್ಲಿ ಮೃತಪಟ್ಟಿದ್ದರು. ಕರ್ತವ್ಯ ಮುಗಿಸಿ ಯರಗಟ್ಟಿಯಲ್ಲಿರುವ ಮನೆಗೆ ಬರುವಾಗ ರಸ್ತೆ ಅಪಘಾತವಾಗಿತ್ತು.

ಅತಿವೇಗದಿಂದ ಬೈಕ್ ಚಲಾಯಿಸುವಾಗ ಹಂಪ್ ಜಿಗಿಸಿ ರಸ್ತೆ ಅಪಘಾತವಾಗಿದೆ. ಯರಗಟ್ಟಿಯ ಕೃಷ್ಣಾ ಬಡಾವಣೆ ಬಳಿ ತಡರಾತ್ರಿ ಘಟನೆ ನಡೆದಿತ್ತು. ಆದರೆ ಕಳೆದೊಂದು ತಿಂಗಳ ಹಿಂದಷ್ಟೇ ಎಲ್ಲಾ ಪೊಲೀಸರು ಹೆಲ್ಮೆಟ್ ಧರಿಸುವುದನ್ನು ಬೆಳಗಾವಿ ಎಸ್ಪಿ ಕಡ್ಡಾಯಗೊಳಿಸಿ ಆದೇಶ ಹೊರಡಿಸಿದ್ದರು. ಮೇಲಾಧಿಕಾರಿಗಳ ನಿರ್ದೇಶನ ಸಮರ್ಪಕವಾಗಿ ಅನುಷ್ಠಾನಗೊಳಿಸದೇ ನಿರ್ಲಕ್ಷ್ಯ ಆರೋಪದ ಮೇರೆಗೆ ದೊಡವಾಡ ಠಾಣೆ ಪಿಎಸ್‌ಐ ನಂದೀಶ ಎಂಬವರನ್ನು ಅಮಾನತು ಮಾಡಿ ಆದೇಶ ಹೊರಡಿಸಲಾಗಿದೆ.

## ನಾನು ಹೋಗಲ್ಲ

ಸ್ವತಂತ್ರ ಅಭ್ಯರ್ಥಿಯಾಗಿ ಕಣಕ್ಕೆ ಇಳಿಯುತ್ತೇನೆ ಎಂದು ಘೋಷಿಸಿದ್ದರು. ಅಲ್ಲದೇ, ಹಿಂದುತ್ವದ ವಾದವಾಗಿ ನಾನು, ಸಿಟಿ ರವಿಯಾಗಲಿ, ಪ್ರತಾಪ್ ಸಿಂಹ ಆಗ್ಲಿ ಎಲ್ಲರೂ ಹೋರಾಟ ಮಾಡಿಕೊಂಡು ಬಂದಿದ್ದೇವೆ. ಹಿಂದುತ್ವವೇ ನನ್ನ ಉಸಿರು, ಎಲ್ಲರಿಗೂ ನೋವಾಗಿದೆ. ಯಡಿಯೂರಪ್ಪನವರಿಗೆ ಅವರ ಮಗ ಮುಖ್ಯ. ನನ್ನ ಮನಸಿನಲ್ಲಿ ಇರುವುದು ಮುಖ್ಯ ಅಲ್ಲ ಎಂದು ಹೇಳಿದ್ದರು. ಅಷ್ಟೇ ಅಲ್ಲದೇ, ನನ್ನ ಎದೆ ಬಗೆದರೆ ಶ್ರೀರಾಮ ಕಾಣುತ್ತಾನೆ, ಯಡಿಯೂರಪ್ಪ ಎದೆ ಬಗೆದರೆ ಒಂದು ಕಡೆ ತನ್ನ ಮಕ್ಕಳು, ಇನ್ನೊಂದು ಕಡೆ ಶೋಭಾ ಕರಂದ್ಲಾಜೆ ಕಾಣುತ್ತಾರೆ ಎಂದು ವ್ಯಂಗ್ಯವಾಗಿ ಹೇಳಿದ್ದರು.

ಸದ್ಯ ಈಶ್ವರಪ್ಪ ನಡೆ ಕುತೂಹಲ ಕೆರಳಿಸಿದ್ದು, ಶಿವಮೊಗ್ಗ ಲೋಕಸಭಾ ಕ್ಷೇತ್ರದಲ್ಲಿ ಬಿಎಸ್ ಯಡಿಯೂರಪ್ಪ ಪುತ್ರನಿಗೆ ಆತಂಕ ಹುಟ್ಟಿಸಿರೋದು ಮಾತ್ರ ಸುಳ್ಳಲ್ಲ.

## ಬಿಜೆಪಿ ವಾಗ್ದಾಳಿ

ಸಮಾಜವಾದಿ ಪಕ್ಷವು 2024 ರ ಲೋಕಸಭಾ ಚುನಾವಣೆಯಲ್ಲಿ ತನ್ನ ಸನಾತನ ವಿರೋಧಿ ಸಂಪ್ರದಾಯವನ್ನು ಉಳಿಸಿಕೊಂಡಿದೆ ಎಂದು ಬಿಜೆಪಿ ಹೇಳಿದೆ. 2024ರ ಲೋಕಸಭೆ ಚುನಾವಣೆಗೆ ಮತ ಹಾಕುವ ಮುನ್ನ , ದೇಶವನ್ನು ಅಭಿವೃದ್ಧಿ ಪಥದತ್ತ ಕೊಂಡೊಯ್ಯುವ ಬಿಜೆಪಿ ಸರ್ಕಾರವನ್ನು ಆಯ್ಕೆ ಮಾಡಬೇಕೋ ಅಥವಾ ತುಷ್ಟೀಕರಣ ರಾಜಕಾರಣ ಮಾಡುವ ಪಕ್ಷವನ್ನು ಆಯ್ಕೆ ಮಾಡಿಕೊಳ್ಳುತ್ತೀರೋ ಅದು ನಿಮಗೆ ಬಿಟ್ಟಿದ್ದು ಎಂದು ಬಿಜೆಪಿ ಹೇಳಿದೆ.

## ಅಭ್ಯರ್ಥಿಗಳನ್ನು ಘೋಷಿಸಿದ ಬಿಎಸ್‌ಪಿ

ಇಲ್ಲಿಯವರೆಗೆ ಪಕ್ಷವು ಒಟ್ಟು 13 ಅಭ್ಯರ್ಥಿಗಳ ಹೆಸರನ್ನು ಪ್ರಕಟಿಸಿದೆ. ಬಿಎಸ್ ಪಿ ಇದುವರೆಗೆ ಐದು ಮುಸ್ಲಿಂ ಮತ್ತು ನಾಲ್ಕು ಬ್ರಾಹ್ಮಣ ಮುಖಗಳನ್ನು ತನ್ನ ಅಭ್ಯರ್ಥಿಗಳಾಗಿ ಕಣಕ್ಕಿಳಿಸಿದೆ. ಇದೀಗ ಪಕ್ಷವು ಕಾನ್ಪುರ, ಮೀರತ್, ಅಕ್ಬರ್‌ಪುರ ಮತ್ತು ಬಾಗ್ ಪತ್ ಸ್ಥಾನಗಳಿಗೆ ಅಭ್ಯರ್ಥಿಗಳ ಹೆಸರನ್ನು ಪ್ರಕಟಿಸಿದೆ.

ಬಿಎಸ್‌ಪಿ ಪಶ್ಚಿಮ ಯುಪಿಯ ಬಾಗ್‌ಪತ್ ಕ್ಷೇತ್ರದಿಂದ ಪ್ರವೀಣ್ ಬೈನ್ಸ್ಲಾ ಮತ್ತು ಮೀರತ್‌ನಿಂದ ದೇಬಬ್ರತ ತ್ಯಾಗಿ ಅವರನ್ನು ಲೋಕಸಭೆ ಚುನಾವಣೆಗೆ ತನ್ನ ಅಭ್ಯರ್ಥಿಗಳನ್ನಾಗಿ ಮಾಡಿದೆ. ಇದಲ್ಲದೆ ಅಕ್ಬರ್‌ಪುರದಿಂದ ರಾಜೇಶ್ ದ್ವಿವೇದಿ ಮತ್ತು ಕಾನ್ಪುರದಿಂದ ಕುಲದೀಪ್ ಬದೌರಿಯಾ ಅವರನ್ನು ಅಭ್ಯರ್ಥಿಯನ್ನಾಗಿ ಮಾಡಲಾಗಿದೆ. ಆದರೆ ಮಾಯಾವತಿ ಅವರ ಪಕ್ಷವು ಮೊದಲು ಇರ್ಫಾನ್ ಸೈಫಿ ಹೆಸರನ್ನು ತನ್ನ ಅಭ್ಯರ್ಥಿಯಾಗಿ ಘೋಷಿಸಿತ್ತು.

ಅವರ ಹೆಸರನ್ನು ಬಿಎಸ್‌ಪಿ ಪಶ್ಚಿಮ ಯುಪಿ ಉಸ್ತುವಾರಿ ಶಂಸುದ್ದೀನ್ ರೈನಿ ಘೋಷಿಸಿದ್ದಾರೆ. ಮೊರಾದಾಬಾದ್ ಕ್ಷೇತ್ರದಿಂದ ಇರ್ಫಾನ್ ಸೈಫಿ ಅವರನ್ನು ಬಿಎಸ್‌ಪಿ ಅಭ್ಯರ್ಥಿಯನ್ನಾಗಿ ಮಾಡಿತ್ತು.

ಮಾಯಾವತಿ ಅವರಿಗೆ ಆಗ್ರಾ, ಲೋಕಸಭಾ ಕ್ಷೇತ್ರದಿಂದ ಪೂಜಾ ಅಮ್ರೋಹಿ, ಫೈಜಾಬಾದ್‌ನಿಂದ ಬಿಜೆಪಿಯ ಮಾಜಿ ನಾಯಕ ಸಚ್ಚಿದಾನಂದ್ ಪಾಂಡೆ, ಅಮ್ರೋಹಾದಿಂದ ಡಾ. ಮುಜಾಹಿದ್ ಹುಸೇನ್, ಮೊರಾದಾಬಾದ್‌ನಿಂದ ಇರ್ಫಾನ್ ಸೈಫಿ, ಪಿಲಿಭಿತ್‌ನಿಂದ ಅನೀಶ್ ಅಹ್ಮದ್ ಖಾನ್ ಅಲಿಯಾಸ್ ಫೂಲ್ ಬಾಬು ಮತ್ತು ಸಹರಾನ್‌ಪುರದಿಂದ ಮಜೀದ್ ಅಲಿ ಅವರಿಗೆ ಟಿಕೆಟ್ ನೀಡಿದ್ದರು . ಅಭ್ಯರ್ಥಿಯನ್ನಾಗಿ ಮಾಡಲಾಗಿದೆ. ಬಿಎಸ್ಪಿ ಇದುವರೆಗೆ 13 ಅಭ್ಯರ್ಥಿಗಳ ಹೆಸರನ್ನು ಪ್ರಕಟಿಸಿದೆ. ತನ್ನ 13 ಅಭ್ಯರ್ಥಿಗಳಲ್ಲಿ, ಪಕ್ಷವು ಐದು ಮುಸ್ಲಿಮರು, ನಾಲ್ಕು ಬ್ರಾಹ್ಮಣರು, ಒಬ್ಬ ಜಾಟ್, ಒಬ್ಬ ಗುರ್ಜರ್, ಒಬ್ಬ ಒಬಿಸಿ ಮತ್ತು ಒಬ್ಬ ಕ್ಷತ್ರಿಯ ನಾಯಕನನ್ನು ತನ್ನ ಮುಖವನ್ನಾಗಿ ಮಾಡಿಕೊಂಡಿದೆ.

ಈ ಬಾರಿ ಮಾಯಾವತಿ ರಾಜ್ಯದಲ್ಲಿ ಏಕಾಂಗಿಯಾಗಿ ಚುನಾವಣೆ ಎದುರಿಸುವುದಾಗಿ ಘೋಷಿಸಿದ್ದಾರೆ. ಪಕ್ಷದೊಂದಿಗೆ ಯಾವುದೇ ಮೈತ್ರಿಕೂಟದ ಭಾಗವಾಗುವುದಿಲ್ಲ. ಮಾಯಾವತಿಯವರ ಈ ಘೋಷಣೆಯ ನಂತರವೂ ಹಲವು ಊಹಾಪೋಹಗಳು ಎದ್ದಿವೆ.

ಆದಾಗ್ಯೂ, ಈ ಊಹಾಪೋಹಗಳಿಗೆ ವ್ಯತಿರಿಕ್ತವಾಗಿ, ಅವರು ಇಲ್ಲಿಯವರೆಗೆ ಪಶ್ಚಿಮ ಯುಪಿಯಲ್ಲಿ ಹೆಚ್ಚಾಗಿ ಮುಸ್ಲಿಂ ಮುಖಗಳ ಮೇಲೆ ಬಾಜಿ ಕಟ್ಟಿದ್ದಾರೆ. ಬಿಎಸ್ಪಿ ಇದುವರೆಗೆ ಐವರು ಮುಸ್ಲಿಮರು, ನಾಲ್ವರು ಬ್ರಾಹ್ಮಣರು, ಒಬ್ಬ ಜಾಟ್, ಒಬ್ಬ ಗುರ್ಜರ್, ಒಬಿಸಿ ಮತ್ತು ಒಬ್ಬ ಕ್ಷತ್ರಿಯ ನಾಯಕರಿಗೆ ಟಿಕೆಟ್ ನೀಡಿದೆ.

## ನಿರ್ಮಾಪಕರ ಸಾಥ್

ಬಿಎಸ್ ಯಡಿಯೂರಪ್ಪ ಮತ್ತು ಕೆ.ಎಸ್ . ಈಶ್ವರಪ್ಪ ಇಬ್ಬರ ನಡುವೆ ಜಂಗೀ ಕುಸ್ತಿ ಶುರುವಾಗಿದೆ. ಬಿಎಸ್ ವೈ ಪುತ್ರನನ್ನು ಸೋಲಿಸಲು ಈಶ್ವರಪ್ಪ ಶಿವಮೊಗ್ಗ ಲೋಕಸಭೆ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕೆ ಧುಮುಕಿದ್ದಾರೆ. ಕೆ.ಎಸ್. ಈಶ್ವರಪ್ಪ ಬಂಡಾಯ ಅಭ್ಯರ್ಥಿಯಾಗಿ ಕಣಕ್ಕೆ ಇಳಿಯುತ್ತಿದ್ದು ಬಿ.ವೈ. ವಿಜಯೇಂದ್ರನಿಗೆ ಇದರ ಬಿಸಿ ತಟ್ಟಲಿದೆ. ಈ ವಿಚಾರ ಗೀತಾ ಶಿವರಾಜ್ ಕುಮಾರ್ ಅವರಿಗೆ ಪ್ಲೆಸ್ ಆಗಲಿದೆ.

ಈಶ್ವರಪ್ಪ ಪುತ್ರ, ಕಾಂತೇಶ್‌ಗೆ ಹಾವೇರಿ ಟಿಕೆಟ್ ಕೈತಪ್ಪಿಸಿದ್ದು ಯಡಿಯೂರಪ್ಪರಿಂದ. ಅವರಿಗೆ ತಮ್ಮ ಕುಟುಂಬದ ಮೇಲೆ ಮಾತ್ರ ವ್ಯಾಮೋಹ. ಮತ್ತೊಬ್ಬರ ಮಕ್ಕಳು ರಾಜಕೀಯವಾಗಿ ಬೆಳೆಯಬಾರದು. ಬಿಜೆಪಿಯು ಒಂದೇ ಕುಟುಂಬದ ಕೈಯಲ್ಲಿ ಸಿಕ್ಕು ಒದ್ದಾಡುತ್ತಿದೆ. ರಾಜ್ಯದ ಕಾರ್ಯಕರ್ತರು ಈ ವ್ಯವಸ್ಥೆ ನೋಡಿ ನೊಂದುಕೊಂಡಿದ್ದಾರೆ. ಈ ನಡುವೆ ಹಿಂದುತ್ವದ ಹಿನ್ನಲೆ ಇರುವ ಕಟೀಲು, ಪ್ರತಾಪ್ ಸಿಂಹ, ಸದಾನಂದ ಗೌಡ, ಸಿಟಿ ರವಿ ಇವರಿಗೆ ಟಿಕೆಟ್ ಕೊಟ್ಟಿಲ್ಲ. ಕೇವಲ ಬಿಎಸ್ ವೈ ಶೋಭಾಗೆ ಮತ್ತು ಬಸವರಾಜ್ ಬೊಮ್ಮಾಯಿಗೆ ಮಾತ್ರ ಹಠ ಹಿಡಿದು ಟಿಕೆಟ್ ಕೊಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಪಕ್ಷ ಉಳಿಸಲು ಮತ್ತು ಕುಟುಂಬ ರಾಜಕೀಯಕ್ಕೆ ಪಾಠ ಕಲಿಸಲು ನಾನು ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕೆ ಸ್ಪರ್ಧೆಗೆ ಧುಮುಕಿರುವುದಾಗಿ ಈಶ್ವರಪ್ಪ ಅವರು ತಿಳಿಸಿದ್ದಾರೆ.

## ಸೀಕ್ರೆಟ್ ಸೆಟಲೈಟ್‌ಗಳು

2021ರಲ್ಲಿ 1.8 ಬಿಲಿಯನ್ ಡಾಲರ್ ಮೌಲ್ಯದ ಈ ಸೀಕ್ರೆಟ ಒಪ್ಪಂದ ಆಗಿದ್ದು, ಅದರಂತೆ ಭೂಮಿಯ ಕೆಳಗಿನ ಕಕ್ಷೆಯಲ್ಲಿ ನೂರಾರು ರಹಸ್ಯ ಸೆಟಲೈಟ್ ಗಳನ್ನು ಸೇರಿಸಲಾಗುತ್ತಿದೆ. ಇವು ಸೆರೆ ಹಿಡಿಯುವ ಭೂಮಿಯ ಹೈ ರೆಸಲ್ಯೂಶನ್ ಚಿತ್ರಗಳು ಬಹಳ ಸೂಕ್ಷ್ಮ ಮಾಹಿತಿಯನ್ನೂ ತೆರೆದಿಡಬಲ್ಲುವು.

ಸ್ಪೇಸ್ ಎಕ್ಸ್ ನ ಸ್ಟಾರ್ ಶೀಲ್ಡ್ ವಿಶ್ವಾದ್ಯಂತ ಸ್ಪೈ ಸೆಟಲೈಟ್ ಗಳ ಜಾಲ ನಿರ್ಮಿಸುತ್ತಿದೆ. ಇವು ಅಮೆರಿಕದ ಸೇನಾ ಪಡೆಗಳಿಗೆ ಶಕ್ತಿಯಾಗಿ ನಿಲ್ಲಲಿವೆ. ಭೂಮಿಯ ಯಾವುದೇ ಸ್ಥಳದಲ್ಲಿ ಸಂಭಾವ್ಯ ಗುರಿಯ ಮೇಲೆ ಕಣ್ಣಿಟ್ಟು, ಆ ಮಾಹಿತಿಯನ್ನು ಅಮೆರಿಕದ ಮಿಲಿಟರಿ ಮತ್ತು ಗುಪ್ತಚರ ಅಧಿಕಾರಿಗಳಿಗೆ ಈ ಸ್ಪೈ ಸೆಟಲೈಟ್ ಗಳು ಒದಗಿಸಬಲ್ಲುವು.

ಸ್ಪೇಸ್ ಎಕ್ಸ್ ನ ಫಾಲ್ಕನ್-9 ರಾಕೆಟ್ ಗಳನ್ನು ಉಪಯೋಗಿಸಿ ಈಗಾಗಲೇ ಹಲವಾರು ಪ್ರಾಯೋಗಿಕ ಸೆಟಲೈಟ್ ಗಳನ್ನು ಉಡಾವಣೆ ಮಾಡಲಾಗಿದೆ. ಕೆಳಗಿನ ಭೂಕಕ್ಷೆಯಲ್ಲಿ ಸಾಕಷ್ಟು ಅಪರಿಚಿತ ಸೆಟಲೈಟ್ ಗಳಿದ್ದು, ಅವುಗಳನ್ನು ಸ್ಪೇಸ್ ಎಕ್ಸ್ ತೇಲಿಬಿಟ್ಟಿರಬಹುದು ಎನ್ನಲಾಗುತ್ತಿದೆ.

ಈ ಸ್ಪೈ ಸೆಟಲೈಟ್ ಜಾಲ ಸಮರದಲ್ಲಿ ಅಮೆರಿಕ ಮಾತ್ರವಲ್ಲ, ಚೀನಾ ಕೂಡ ಇದೆ. ತನ್ನದೇ ಗೂಢಚರ್ಯೆ ಉಪಗ್ರಹ ಸಮೂಹವನ್ನು ನಿರ್ಮಿಸಲು ಚೀನಾ ಯೋಜಿಸಿದೆ. ಪಾಕಿಸ್ತಾನಕ್ಕೂ ಕೆಲ ಸ್ಪೈ ಸೆಟಲೈಟ್ ಗಳನ್ನು ಚೀನಾ ಒದಗಿಸಲು ಮುಂದಾಗಿದೆ. ಚೀನಾ ಇತ್ತೀಚೆಗೆ ಭೂಮಿಯ ಮೇಲಿರುವ ಸೆಟಲೈಟ್ ಅನ್ನು ನಾಶ ಮಾಡುವ ತಂತ್ರಜ್ಞಾನ ಅಭಿವೃದ್ಧಿಪಡಿಸಿರುವುದಾಗಿ ಹೇಳಿಕೊಂಡಿತ್ತು. ಆಕಾಶದಲ್ಲಿರುವ ಗುಪ್ತ ಸೆಟಲೈಟ್ ಗಳನ್ನು ಲೇಸರ್ ಮೂಲಕ ಹೊಡೆದುರುಳಿಸುವ ಶಕ್ತಿ ಚೀನಾ ಬಳಿ ಇದೆ. ರಷ್ಯಾ ಬಳಿಯೂ ಇಡೀ ಸೆಟಲೈಟ್ ನೆಟ್ ವರ್ಕ್ ಗಳನ್ನು ನಿಷ್ಕ್ರಿಯಗೊಳಿಸಬಲ್ಲಂತಹ ಶಸ್ತ್ರಾಸ್ತ್ರ ಇದೆ ಎನ್ನಲಾಗುತ್ತಿದೆ. ಅಮೆರಿಕ ಈ ಹಿಂದೆ ಈ ಬಗ್ಗೆ ಅಪಾಯದ ಸೂಚನೆ ರವಾನಿಸಿದ್ದು ಇದೆ.

## ನಕ್ಸಲರ ಓಡಾಟ

ಬಿ.ಜಿ ಕೃಷ್ಣಮೂರ್ತಿ ಬಳಿಕ ಕರ್ನಾಟಕದ ನಕ್ಸಲ್ ನಾಯಕತ್ವವನ್ನು ವಿಕ್ರಂ ಗೌಡ ವಹಿಸಿಕೊಂಡಿದ್ದಾನೆ. ಈತನ ತಂಡದ ಮೂವರು ಮೂವರು ಸಶಸ್ತ್ರಧಾರಿಯಾಗಿ ಬೈಂದೂರಿಗೆ ಆಗಮಿಸಿರುವ ಮಾಹಿತಿ ಲಭ್ಯವಾಗಿತ್ತು. ಈ ಮೂವರು ಗ್ರಾಮದ ಮನೆಗಳಿಗೂ ತೆರಳಿ ಹೋಗಿರುವುದಾಗಿ ಮಾಹಿತಿ ಸಿಕ್ಕಿತ್ತು.

## ಮೊದಲನೇ ಪುಟದಿಂದ...

ನಕ್ಸಲರ ಓಡಾಟ ಮಾಹಿತಿ ಬೆನ್ನಲ್ಲೇ ಪೊಲೀಸರು ಅಲರ್ಟ್ ಆಗಿ, ವರ್ಷಗಳ ನಂತರ ಮತ್ತೆ ಬೈಂದೂರಿನಲ್ಲಿ ಕಾರ್ಯಾಚರಣೆ ನಡೆಸಿದ್ದರು.

1990 ರಿಂದ 2012ರ ವರೆಗು ಉತ್ತುಂಗದಲ್ಲಿದ್ದ ನಕ್ಸಲ್ ಚಟುವಟಿಕೆ

1990 ರಿಂದ 2012ರ ವರೆಗೆ ರಾಜ್ಯದಲ್ಲಿ ನಕ್ಸಲ್ ಚಟುವಟಿಕೆ ಉತ್ತುಂಗದಲ್ಲಿತ್ತು. ಸುಮಾರು 40 ರಿಂದ 45 ಸಕ್ರಿಯ ಸಶಸ್ತ್ರ ನಕ್ಸಲರು ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಕೊಡಗು, ಶಿವಮೊಗ್ಗ, ಬೀದರ್, ರಾಯಚೂರು, ಬಳ್ಳಾರಿ ಮತ್ತು ತುಮಕೂರು ಜಿಲ್ಲೆಗಳಲ್ಲಿ ಪ್ರದೇಶಗಳಲ್ಲಿ ಆಶ್ರಯ ಪಡೆದಿದ್ದರು.

2005 ಮತ್ತು 2012 ರ ನಡುವೆ, ಎಎನ್‌ಎಫ್ ಅಧಿಕಾರಿಗಳ 11 ಎನ್‌ಕೌಂಟರ್‌ಗಳಲ್ಲಿ 19 ನಕ್ಸಲರು ಮೃತಪಟ್ಟಿದ್ದರು. ಈ ಕಾರ್ಯಾಚರಣೆಯಲ್ಲಿ ಮೂವರು ಅಧಿಕಾರಿಗಳು ಹುತಾತ್ಮರಾಗಿದ್ದರು. 2005 ರಲ್ಲಿ ತುಮಕೂರಿನಲ್ಲಿ ನಕ್ಸಲರು ನಡೆಸಿದ ದಾಳಿಯಲ್ಲಿ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಯ ಎಂಟು ಜನ ಸಿಬ್ಬಂದಿಗಳು ಮೃತಪಟ್ಟಿದ್ದರು.

## ಭಕ್ತಿಗೀತೆ ಹಾಕಿದ್ದೇ ತಪ್ಪಾಯ್ತಾ?

ಹೆಡ್ ಫೋನ್ ಅಂತಾ ಬರ್ತಾ ಇದ್ರು. ನಾನು ಯಾವಾಗ್ಲೂ ಏನನ್ನೂ ಕೊಟ್ಟಿಲ್ಲ. ಇವತ್ತು ಅದೇ ರಿವೆಂಜ್ ಇಟ್ಟುಕೊಂಡು ಬಂದು ಗಲಾಟೆ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ.

ಅಲ್ಲದೇ, ಅಂಗಡಿಗೆ ಏಕಾಏಕಿ ಬಂದ ಅವರು ಹಾಡು ನಿಲ್ಲಿಸು ಅಂತಾ ಗಲಾಟೆ ಮಾಡಿದ್ರು, ಎಂದು ಆರೋಪಿಸಿರುವ ಮುಕೇಶ್, ಈಗ ಠಾಣೆಗೆ ಬಂದು ದೂರು ನೀಡಿದ್ದೀನಿ. ಎಲ್ಲಾ ಮಾಹಿತಿ ಮತ್ತು ಸಿಸಿಟಿವಿ ವಿಶ್ಯೂವಲ್ಸ್ ಪೊಲೀಸರಿಗೆ ಕೊಟ್ಟಿದ್ದೀನಿ. ನನಗೆ ಕನ್ನಡ ಓದೋಕೆ ಬರೊಲ್ಲ, ಎಫ್‌ಐಆರ್‌ನಲ್ಲಿ ಏನ್ ಬರ್ದಿದಾರೆ ಗೊತ್ತಿಲ್ಲ. ಪೊಲೀಸರು ಅವರಿಗೆ ಬೇಕಾದ ಹಾಗೆ ಬರೆದಿರಬಹುದು ಅಂತಾನೂ ಅನುಮಾನ ಪಟ್ಟಿದ್ದಾರೆ.

ಮುಕೇಶ್ ಪೊಲೀಸ್ ಠಾಣೆಗೆ ಆಗಮಿಸಿ ದೂರು ನೀಡಿದ ಬೆನ್ನಲ್ಲೇ ಹಲಸೂರು ಗೇಟ್ ಪೊಲೀಸ್ ಠಾಣೆ ಮುಂದೆ ವರ್ತಕರು ಜಮಾಯಿಸಿದ್ದು, ಹಲ್ಲೆ ಮಾಡಿದ ಪುಂಡರನ್ನ ಬಂಧಿಸುವಂತೆ ಒತ್ತಾಯ ಮಾಡಿದ್ದಾರೆ. ಕಳೆದ 15 ದಿನಗಳಿಂದಲೂ ಅಂಗಡಿ ಮುಂದೆ ಬಂದು ಕಿರುಕುಳ ನೀಡುತ್ತಿದ್ದ ಆರೋಪ ಪುಂಡರ ಮೇಲೆ ಕೇಳಿ ಬಂದಿದ್ದು, ನಿನ್ನೆ ಸಂಜೆ ಏಕಾಏಕಿ ಕಿರಿಕ್ ತೆಗೆದು ಹಲ್ಲೆ ಮಾಡಿದ್ದಾರೆ. ಹಲ್ಲೆ ಮಾಡಿದವರನ್ನು ನಾಳೆ ಸಂಜೆಯೊಳಗೆ ಬಂಧಿಸದಿದ್ದರೆ ಉಗ್ರ ಹೋರಾಟ ಮಾಡುವುದಾಗಿ ವ್ಯಾಪಾರಿಗಳು ಎಚ್ಚರಿಕೆ ನೀಡಿದ್ದಾರೆ. ಸದ್ಯ ಹಲಸೂರು ಗೇಟ್ ಪೊಲೀಸ್ ಠಾಣೆ ಬಳಿ ಬಂದೋಬಸ್ತ್ ಹೆಚ್ಚಳ ಮಾಡಲಾಗಿದ್ದು, ಇಬ್ಬರು ಎಸಿಪಿ, ಒಂದು ಕೆಎಸ್‌ಆರ್‌ಪಿ ತುಕಡಿ, ಮೂವರು ಇನ್ಸ್‌ಪೆಕ್ಟರ್ ಸ್ಥಳದಲ್ಲಿ ಮೊಕ್ಕಾಂ ಹೂಡಿದ್ದಾರೆ.

ಇನ್ನು, ನಗರತಪೇಟೆ ಮೊಬೈಲ್ ಶಾಪ್ ಯುವಕನ ಮೇಲೆ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಹಲಸೂರು ಗೇಟ್ ಪೊಲೀಸ್ ಠಾಣೆಯಲ್ಲಿ ಐಪಿಸಿ 506, 504, 149, 307, 323 ಹಾಗೂ 324 ರ ಅಡಿ ಎಫ್‌ಐಆರ್ ದಾಖಲು ಮಾಡಲಾಗಿದ್ದು, ಸುಲೇಮಾನ್, ಶನವಾಜ್, ರೋಹಿತ್, ದ್ಯಾನಿಶ್, ತರುಣ್ ಹಾಗೂ ಇತರರ ವಿರುದ್ಧ ಎಫ್‌ಐಆರ್ ದಾಖಲು ಮಾಡಲಾಗಿದೆ.

ಹಲ್ಲೆಗೊಳಗಾದ ಯುವಕ ಮುಕೇಶ್ ಕೊಟ್ಟ ದೂರಿನ ಆಧಾರದ ಮೇರೆಗೆ ಪೊಲೀಸರು ಕಿಡಿಗೇಡಿಗಳ ವಿರುದ್ಧ ಪ್ರಕರಣ ದಾಖಲು ಮಾಡಿದ್ದಾರೆ.

## ಸಿಎಂ ಮಹತ್ವದ ಸಭೆ

ಮತ್ತೊಂದೆಡೆ ಕಳೆದ 6 ತಿಂಗಳ ಹಿಂದೆ ಬೆಂಗಳೂರು ಸೇರಿದಂತೆ ರಾಜ್ಯದ 17 ಜಿಲ್ಲೆಗಳಿಗೆ ಜಲಕ್ಷಾಮದ ಎಚ್ಚರಿಕೆಯನ್ನ ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನೆ ಸಂಸ್ಥೆ ನೀಡಿತ್ತು. ರಾಜ್ಯದಲ್ಲಿನ ಅಂತರ್ಜಲದ ಕುರಿತು ಅಧ್ಯಯನದ ವರದಿಯನ್ನ ಸರ್ಕಾರಕ್ಕೆ ನೀಡಿತ್ತು. ನೀರಿನ ಕೊರತೆ ಬಗ್ಗೆ ಎಚ್ಚರಿಸಿತ್ತು. ಆದ್ರೆ ಸರ್ಕಾರ ಈ ಬಗ್ಗೆ ಯಾವುದೇ ಸೂಕ್ತ ಕ್ರಮವಹಿಸದೆ ನಿರ್ಲಕ್ಷ್ಯ ಹಿನ್ನಲೆ ಬೆಂಗಳೂರಿಗೆ ಜಲಕ್ಷಾಮದ ಸಮಸ್ಯೆ ಎದುರಾಗಿದೆ. ಹೀಗಾಗಿ ಸರ್ಕಾರ ಈಗ ಮತ್ತೆ ಹಲವು ಜಿಲ್ಲೆಗಳಲ್ಲಿ ಜಲಕ್ಷಾಮದ ಬಗ್ಗೆ ಅಧ್ಯಯನಕ್ಕೆ ಮುಂದಾಗಿದೆ. ಅಂತರ್ಜಲ ಲಭ್ಯತೆ, ಕಾಡು ಪ್ರದೇಶ, ಜನಸಾಂದ್ರತೆ, ದಿನ ಬಳಕೆಗೆ ನೀರಿನ ಬೇಡಿಕೆ, ಕೃಷಿ ಜಾನುವಾರು ಹಾಗೂ ಕಾರ್ಖಾನೆ, ಸರಾಸರಿ ವಾರ್ಷಿಕ ಮಳೆ ಮತ್ತು ದಶಕಗಳ ಉಷ್ಣಾಂಶವನ್ನ ಗಣನೆಗೆ ತೆಗೆದುಕೊಂಡು ಮತ್ತೊಂದು ವರದಿ ನೀಡಲು ಮುಂದಾಗಿದೆ.

## ವಿಜಯೇಂದ್ರ

ಈ ಬಗ್ಗೆ ಸುದ್ದಿಗಾರರ ಜೊತೆ ಮಾತನಾಡಿರುವ ಬಿವೈ ವಿಜಯೇಂದ್ರ, ಮೂರು ಲೋಕಸಭಾ ಕ್ಷೇತ್ರದ ಚುನಾವಣಾ ಪ್ರಚಾರ ಹಿನ್ನೆಲೆ ಕಾರ್ಯಕರ್ತರಲ್ಲಿ ಉತ್ಸಾಹ ಇದೆ. ಇಂದು ದೊಡ್ಡ ಸಂಖ್ಯೆಯಲ್ಲಿ ಜನ ಸೇರಲಿದ್ದಾರೆ. ರಾಜ್ಯಕ್ಕೆ ಒಂದು ಉತ್ತಮ ಸಂದೇಶ ಹೋಗಲಿದೆ, ಈಶ್ವರಪ್ಪನವರು ಹಿರಿಯರಿದ್ದಾರೆ, ಸೂಕ್ತ ಸಂದರ್ಭದಲ್ಲಿ ಸೂಕ್ತ ತೀರ್ಮಾನ ತೆಗೆದುಕೊಳ್ಳುತ್ತಾರೆ ಎಂದು ಹೇಳಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷನಾಗಿ ನಾನೊಬ್ಬನೇ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಸಾಧ್ಯವಿಲ್ಲ ಎಂದಿರುವ ಬಿವೈ ವಿಜಯೇಂದ್ರ, ನನ್ನಬ್ಬೊನ ಮಾತು ಕೇಳುವ ಸ್ಥಿತಿಯಲ್ಲಿ ರಾಷ್ಟ್ರೀಯ ನಾಯಕರಿಲ್ಲ. ಎಲ್ಲದಕ್ಕೂ ಕಾಲವೇ ಉತ್ತರ ಕೊಡುತ್ತದೆ. ರಾಘವೇಂದ್ರರವರು ಅತಿ ಹೆಚ್ಚಿನ ಅಭಿವೃದ್ಧಿ ಕೆಲಸ ಮಾಡಿದ್ದಾರೆ. ಪಕ್ಷಾತೀತವಾಗಿ ಅವರನ್ನು ಜನರು ಒಪ್ಪಿಕೊಳ್ಳುತ್ತಾರೆ. ಯಾರೇ ಅಭ್ಯರ್ಥಿಯಾಗಿ ಆಯ್ಕೆಯಾಗಿದ್ದರೂ ಅದು ರಾಷ್ಟ್ರೀಯ ನಾಯಕರ ಆಯ್ಕೆ. ಚುನಾವಣೆಯಲ್ಲಿ ಗೆದ್ದು ಪ್ರಧಾನಿ ನರೇಂದ್ರ ಮೋದಿಯವರ ಕೈ ಬಲ ಪಡಿಸುವ ಕೆಲಸ ಇದೆ ಎಂದು ಹೇಳಿದ್ದಾರೆ.

ಈ ಹಿಂದೆ ಕೂಡ ವರುಣಾದಲ್ಲಿ ನನಗೆ ಟಿಕೆಟ್ ಕೈ ತಪ್ಪಿತು. ಆದರೆ ಅದು ವರಿಷ್ಠರ ತೀರ್ಮಾನ ಎಂದುಕೊಂಡು ಪಕ್ಷದ ಕೆಲಸ ಮಾಡಿದ್ದೇನೆ ಎಂದಿರುವ ಬಿವೈ ವಿಜಯೇಂದ್ರ, ಎಲ್ಲವು ಕೂಡ ಬಗೆಹರಿಯುತ್ತದೆ ಎಂಬ ವಿಶ್ವಾಸ ಇದೆ. ಜೆಡಿಎಸ್ ಮೈತ್ರಿ ಬಗ್ಗೆ ರಾಷ್ಟ್ರ ಮಟ್ಟದಲ್ಲಿ ಏನು ಚರ್ಚೆ ಆಗಿದಿಯೋ ಗೊತ್ತಿಲ್ಲ, ಸೀಟ್ ಶೇರಿಂಗ್ ವಿಚಾರವಾಗಿ ಎಲ್ಲವು ಬಗೆಹರಿಯುತ್ತದೆ. ಯಾರು ಅಭ್ಯರ್ಥಿ ಆಗಿ ತೀರ್ಮಾನ ಆಗಿದಿಯೋ ಅದು ರಾಷ್ಟ್ರೀಯ ನಾಯಕರ ತೀರ್ಮಾನ. ಅದಕ್ಕೆ ಗೌರವ ಕೊಡಬೇಕಾಗುತ್ತದೆ ಎಂದರು.

## ನಿಗಾ

ಈ ನಡುವೆ ಕರ್ನಾಟಕ ಚುನಾವಣಾ ಆಯೋಗವು ನೀರಿನ ಟ್ಯಾಂಕರ್‌ಗಳ ಮೇಲೆ ನಿಗಾ ವಹಿಸಿದೆ.

ನೀರಿನ ಟ್ಯಾಂಕರ್‌ಗಳ ಮೇಲೆ ನಿಗಾ!

ಕರ್ನಾಟಕ ಚುನಾವಣಾ ಆಯೋಗವು ನೀರಿನ ಟ್ಯಾಂಕರ್‌ಗಳ ಮೇಲೆ ನಿಗಾ ಇಡುತ್ತದೆ ಎಂದು ಕರ್ನಾಟಕ ಮುಖ್ಯ ಚುನಾವಣಾ ಅಧಿಕಾರಿ (ಸಿಇಒ) ಮನೋಜ್ ಕುಮಾರ್ ಮೀನಾ ಅವರು ತಿಳಿಸಿದ್ದಾರೆ. ಯಾವುದೇ ರಾಜಕೀಯ ಪಕ್ಷಗಳು ಅಥವಾ ವ್ಯಕ್ತಿಗಳು ಮತದಾರರನ್ನು ದುರ್ಬಳಕೆ ಮಾಡಲು ನೀರು ಸರಬರಾಜು ಮಾಡುವುದನ್ನು ಗಮನಿಸಿದರೆ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಹೇಳಿದ್ದಾರೆ ಎಂದು ಎಂದು ತಿಳಿದುಬಂದಿದೆ.

ಒಂದು ರಾಜಕೀಯ ಪಕ್ಷದಿಂದ ಸೌಲಭ್ಯಗಳನ್ನು ಒದಗಿಸುವುದು ಮತದಾರರ ಮೇಲೆ ಪ್ರಭಾವ ಬೀರುವ ಕಾರಣ ಅದನ್ನು ಉಲ್ಲಂಘನೆ ಎಂದು ಪರಿಗಣಿಸಲಾಗುತ್ತದೆ. ಅಂತಹ ಅಕ್ರಮಗಳನ್ನು ಯಾರಾದರೂ ಗುರುತಿಸಿದರೆ 1950ಗೆ ಡಯಲ್ ಮಾಡುವ ಸಮಸ್ಯೆಯನ್ನು ವರದಿ ಮಾಡುವ ಮೂಲಕ ಚುನಾವಣಾ ಅಧಿಕಾರಿಗಳಿಗೆ ಎಚ್ಚರಿಕೆ ನೀಡಬಹುದು ಎಂದು ತಿಳಿಸಿದ್ದಾರೆ.

## ಟ್ರಾಫಿಕ್ ಜಾಮ್

ಹುಬ್ಬಳ್ಳಿಯಿಂದ ಮಂಗಳೂರಿಗೆ ಹೋಗುತ್ತಿದ್ದ ಸಿಮೆಂಟ್ ಲಾರಿ ಬೆಳಗ್ಗೆ 8:30ರ ವೇಳೆಗೆ ಚಾರ್ಮಾಡಿ ಘಾಟಿಯ 10ನೇ ತಿರುವಿನಲ್ಲಿ ಕೆಟ್ಟು ನಿಂತಿದೆ. ಘಾಟಿಯ ತಿರುವಿನಲ್ಲಿ ಟರ್ನ್ ಮಾಡಲಾಗದೇ ಲಾರಿ ನಿಂತ ಕಾರಣ ಮುಂದೆಯೂ ಹೋಗಲಾಗದೆ, ಹಿಂದೆಯೂ ಹೋಗಲಾಗದೆ ವಾಹನಗಳ ಚಾಲಕರು ಈಗ ಪರದಾಡುತ್ತಿದ್ದಾರೆ.

ಚಿಕ್ಕಮಗಳೂರು-ಮಂಗಳೂರಿಗೆ ಸಂಪರ್ಕ ಕಲ್ಪಿಸುವ ಚಾರ್ಮಾಡಿ ಘಾಟನಲ್ಲಿ 10 ಚಕ್ರದ ವಾಹನಕ್ಕಿಂತ ದೊಡ್ಡ ವಾಹನಗಳು ಸಂಚಾರಕ್ಕೆ ನಿಷೇಧವಿದೆ. ಹೀಗಿದ್ದರೂ ಕೊಟ್ಟಿಗೆಹಾರ ಚೆಕ್ ಪೋಸ್ಟ್ ನಲ್ಲಿ ಪೊಲೀಸರು ಇದ್ದರೂ ಈ ಲಾರಿಗೆ ಅನುಮತಿ ನೀಡಿದ್ದು ಹೇಗೆ ಎಂಬ ಪ್ರಶ್ನೆ ಎದ್ದಿದೆ. ಪೊಲೀಸರು ವಾಹನ ಬಿಟ್ಟಿರುವುದಕ್ಕೆ ಸ್ಥಳೀಯರು ಅಸಮಾಧಾನಗೊಂಡಿದ್ದು ಬೆಳಗ್ಗೆಯಿಂದಲೂ ನೂರಾರು ವಾಹನ ಸವಾರರು ಪರದಾಡುತ್ತಿದ್ದಾರೆ.

## ಯಡಿಯೂರಪ್ಪ ಕುತ್ತಿಗೆ ಹಿಸುಕಿದ್ದಾರೋ, ಎತ್ತರಕ್ಕೆ ಬೆಳೆಸಿದ್ದಾರೋ ಚುನಾವಣೆ ಮುಗಿದ ಮೇಲೆ ಗೊತ್ತಾಗಲಿದೆ

**ಶಿವಮೊಗ್ಗ:** ಮಾಜಿ ಸಚಿವ ಕೆಎಸ್ ಈಶ್ವರಪ್ಪ ಬಿಎಸ್ ಯಡಿಯೂರಪ್ಪ ಮತ್ತು ಪುತ್ರ ಬಿವೈ ವಿಜಯೇಂದ್ರ ಮೇಲೆ ಮುನಿಸಿಕೊಂಡು, ಅವರ ವಿರುದ್ಧ ವಾಗ್ದಾಳಿ ನಡೆಸುತ್ತಿದ್ದಾರೆ. ಈ ವಿಚಾರವಾಗಿ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಮಾತನಾಡಿ, ಎಲ್ಲವೂ ಸರಿಯಾಗುತ್ತದೆ, ಎಲ್ಲವನ್ನು ಸರಿಪಡಿಸುವ ಕೆಲಸ ವರಿಷ್ಠರು ಮಾಡುತ್ತಾರೆ. ಬಿಎಸ್ ಯಡಿಯೂರಪ್ಪನವರ ಕುಟುಂಬದ ಬಗ್ಗೆ ಮಾತನಾಡುವುದು



ಅರ್ಥಹೀನ. ಸೈಕಲ್ ನಲ್ಲಿ ರಾಜ್ಯಾದ್ಯಂತ ಸುತ್ತಾಡಿ ಪಕ್ಷ ಕಟ್ಟಿದ ಫಲವಾಗಿ ರಾಜ್ಯದಲ್ಲಿ ಇಂದು ಪಕ್ಷ ಬಲಿಷ್ಠವಾಗಿದೆ. ಯಡಿಯೂರಪ್ಪ ಅವರಿಂದಲೇ ಕೆಲವರು ಮಂತ್ರಿ ಆಗಿದ್ದಾರೆ ಎಂದು ಪರೋಕ್ಷವಾಗಿ ಕೆಎಸ್ ಈಶ್ವರಪ್ಪಗೆ ಟಾಂಗ್ ಕೊಟ್ಟರು.

ಬಿಎಸ್ ಯಡಿಯೂರಪ್ಪನವರು ಕುತ್ತಿಗೆ ಹಿಸುಕಿದ್ದಾರೋ ಇಲ್ಲ ಎತ್ತರಕ್ಕೆ ಬೆಳೆಸಿದ್ದಾರೋ ಎಂದು ಲೋಕಸಭೆ ಚುನಾವಣೆ ಮುಗಿದ ಮೇಲೆ ಗೊತ್ತಾಗಲಿದೆ. ಎಲ್ಲವನ್ನೂ ಎದುರಿಸುವ ಧಮ್ ಮತ್ತು ತಾಕತ್ತು ನಮ್ಮ ಕಾರ್ಯಕರ್ತರಿಗೆ ಇದೆ. ಸಾಮೂಹಿಕವಾಗಿ ಚರ್ಚಿಸಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಿದ್ದಾರೆ. ಗೆಲ್ಲುವ ಪಕ್ಷಕ್ಕೆ ಸಮಸ್ಯೆ ಬಹಳ. ಕಾಂಗ್ರೆಸ್ ಗೆ ಸಮಸ್ಯೆ ಯಾಕೆ ಇಲ್ಲ ಅಂದರೇ ಅಲ್ಲಿ ಹೋದರೆ ಠೇವಣಿ ಸಿಗುವುದಿಲ್ಲ ಎನ್ನುವುದು ಗೊತ್ತಿದೆ ಅದಕ್ಕೆ ಸಮಸ್ಯೆ ಇಲ್ಲ ಎಂದು ವ್ಯಂಗ್ಯವಾಡಿದರು.

ಅಪ್ಪ-ಮಕ್ಕಳು ವರ್ಸಸ್ ಹಿಂದುತ್ವದ ಚುನಾವಣೆ ಎಂಬ ಈಶ್ವರಪ್ಪ ಹೇಳಿಕೆ ವಿಚಾರವಾಗಿ ಮಾತನಾಡಿದ ಅವರು, ಬಿಜೆಪಿಯಲ್ಲಿ ಹಿಂದುತ್ವದ ನಾಯಕರು ಬಹಳ ಇದ್ದಾರೆ. ಎಲ್ಲವನ್ನು ಸರಿದೂಗಿಸುವ ಕೆಲಸ ವರಿಷ್ಠರು ಮಾಡುತ್ತಾರೆ. ಇದು ಚುನಾವಣೆಯಲ್ಲಿ ಯಾವುದೇ ಪರಿಣಾಮ ಬೀರಲ್ಲ. ಎಲ್ಲವೂ ಸರಿ ಹೋಗುತ್ತೆ ಎಂದರು.

ಟಿಕೆಟ್ ತಪ್ಪಿದಾಗ ನೋವಾಗುವುದು ಸರ್ವೇ ಸಾಮಾನ್ಯ. ಏನೇ ಆಗಿದ್ದರೂ ಅದು ಪಕ್ಷದ ವರಿಷ್ಠರ ತೀರ್ಮಾನ. ಕೆ.ಎಸ್ .ಈಶ್ವರಪ್ಪನವರ ಪ್ರಶ್ನೆಗಳಿಗೆ ಉತ್ತರ ಸಿಗಲಿವೆ. ಸೂಕ್ತ ಸಮಯದಲ್ಲಿ ಅವರ ಪ್ರಶ್ನೆಗಳಿಗೆ ಉತ್ತರ ಸಿಗುತ್ತದೆ. ಲೋಕಸಭೆಗೆ ಅಭ್ಯರ್ಥಿಗಳ ಆಯ್ಕೆಯಲ್ಲಿ ನನ್ನ ಪಾತ್ರವಿಲ್ಲ, ಅದು ರಾಷ್ಟ್ರೀಯ ನಾಯಕರ ತೀರ್ಮಾನ. ಎಲ್ಲದಕ್ಕೂ ಕಾಲ ಉತ್ತರ ಕೊಡಲಿದೆ. ಪಕ್ಷಾತೀತವಾಗಿ ರಾಘವೇಂದ್ರ ಅವರಿಗೆ ಬೆಂಬಲ ಸಿಗುತ್ತಿದೆ. ಶಿವಮೊಗ್ಗದಲ್ಲಿ ದೊಡ್ಡ ಅಂತರದಲ್ಲಿ ರಾಘವೇಂದ್ರ ಗೆಲ್ಲುತ್ತಾರೆ. ಮಾಜಿ ಸಚಿವ ಈಶ್ವರಪ್ಪನವರಿಗೆ ತಪ್ಪು ಮಾಹಿತಿ ಹೋಗಿವೆ. ಎಲ್ಲ ಸರಿ ಹೋಗುತ್ತೆ ಎಂಬ ವಿಶ್ವಾಸವಿದೆ ಎಂದು ಹೇಳಿದರು.

ಬಿಎಸ್ ಯಡಿಯೂರಪ್ಪ ಮಗ ಅಂತ ನನ್ನ ರಾಜ್ಯಾಧ್ಯಕ್ಷ ಮಾಡಿಲ್ಲ. ರಾಷ್ಟ್ರೀಯ ನಾಯಕರು ನನ್ನ ಅಧ್ಯಕ್ಷರನ್ನಾಗಿ ಮಾಡಿದ್ದು. ಅಭ್ಯರ್ಥಿಗಳಾಗಿ ಘೋಷಣೆ ಆಗಿದ್ದು ರಾಷ್ಟ್ರೀಯ ನಾಯಕರ ತೀರ್ಮಾನ. ನನಗೆ ಟಿಕೆಟ್ ತಪ್ಪಿದಾಗ ಪರಿಪಾಲನೆ ಮಾಡಿದ್ದೆ. ಅದು ರಾಷ್ಟ್ರೀಯ ನಾಯಕರ ತೀರ್ಮಾನ ಆಗಿತ್ತು. ನಾನು ಅವರ ಹಾಗೆ ಮಾತಾಡಿದರೆ ಅವರಿಗೂ ನನಗೂ ವ್ಯತ್ಯಾಸ ಇರಲ್ಲ ಎಂದು ವರುಣಾ ಟಿಕೆಟ್ ತಪ್ಪಿರೋದನ್ನು ನೆನಪಿಸಿ ಟಾಂಗ್ ಕೊಟ್ಟರು.

ಇವತ್ತು ಶಿವಮೊಗ್ಗಕ್ಕೆ ಪ್ರಧಾನಿ ಮೋದಿ ಬರುತ್ತಿದ್ದಾರೆ. ನರೇಂದ್ರ ಮೋದಿಯವರ ಇಂದಿನ ಕಾರ್ಯಕ್ರಮ, ಮೂರು ಲೋಕಸಭಾ ಕ್ಷೇತ್ರದ ಚುನಾವಣಾ ಪ್ರಚಾರವಾಗಿದೆ. ಮೂರು ಲೋಕಸಭಾ ಕ್ಷೇತ್ರದ ಕಾರ್ಯಕರ್ತರಲ್ಲಿ ಉತ್ಸಾಹ ಇದೆ. ಇಡೀ ರಾಜ್ಯಕ್ಕೆ ಒಂದು ಸಂದೇಶ ಹೋಗಲಿದೆ.

# ಬೆಂಗಳೂರು ಪಾಲಿಕೆಯಿಂದ ಘನತ್ಯಾಜ್ಯ ವಿಂಗಡಣೆ ಕುರಿತು ಜನಜಾಗೃತಿ

**ಬೆಂಗಳೂರು:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ದಕ್ಷಿಣ ವಲಯ ವ್ಯಾಪ್ತಿಯಲ್ಲಿ ಭಾನುವಾರ ಘನತ್ಯಾಜ್ಯ ನಿರ್ವಹಣೆ ಕುರಿತಂತೆ ಸಾರ್ವಜನಿಕ ಸ್ಥಳಗಳಲ್ಲಿ ಜಾಗೃತಿ ಮೂಡಿಸಲಾಯಿತು.

ಘನತ್ಯಾಜ್ಯ ನಿರ್ವಹಣೆ ಕುರಿತಂತೆ ದಕ್ಷಿಣ ವಲಯದ ವಿವಿಧ ಸ್ಥಳಗಳಲ್ಲಿ ತ್ಯಾಜ್ಯ ವಿಂಗಡಣೆ, ಪರಿಸರ ಸ್ವಚ್ಛತೆ ಹಾಗೂ ಏಕ ಬಳಕೆ ಪ್ಲಾಸ್ಟಿಕ್ ನಿಷೇಧದ ಕುರಿತಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಸಂಬಂಧ ದಕ್ಷಿಣ ವಲಯ ಆಯುಕ್ತೆ ವಿನೋತ್ ಪ್ರಿಯಾ, ಜಂಟಿ ಆಯುಕ್ತ ಶಿವಕುಮಾರ್ ಹಾಗೂ ಮುಖ್ಯ ಅಭಿಯಂತರ ಎಸ್ ವಿ ರಾಜೇಶ್ ನೇತೃತ್ವದಲ್ಲಿ ಸ್ಥಳೀಯ ಮಟ್ಟದಲ್ಲಿ ಜಾಗೃತಿ ಕಾರ್ಯಕ್ರಮ ನಡೆಯಿತು.

ದಕ್ಷಿಣ ವಲಯದಲ್ಲಿ ಘನತ್ಯಾಜ್ಯ ವಿಲೇವಾರಿ, ಹಸಿ ಕಸ, ಒಣ ಕಸ ಹಾಗೂ ಸ್ಯಾನಿಟರಿ ಕಸ ವಿಂಗಡಣೆ, ಆರಂಭದಲ್ಲಿ ತ್ಯಾಜ್ಯವನ್ನು ಸಂಸ್ಕರಿಸುವ, ಏಕ ಬಳಕೆ ಪ್ಲಾಸ್ಟಿಕ್ ಬಳಕೆ ನಿಷೇಧ, ರಸ್ತೆ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ತ್ಯಾಜ್ಯ ಬಿಸಾಡದಿರುವುದು. ಖಾಲಿ ನಿವೇಶನಗಳಲ್ಲಿ ಕಸ ಹಾಕದಿರುವುದು ಸೇರಿದಂತೆ ಇನ್ನಿತರ ವಿಷಯಗಳ ಕುರಿತು ನಾಗರಿಕರಲ್ಲಿ ಜಾಗೃತಿ ಮೂಡಿಸಲಾಯಿತು.

ಪ್ರತಿನಿತ್ಯ ಆಟೋ ಟಿಪ್ಪರ್?ಗಳ ಮೂಲಕ ಮನೆ ಮನೆಗೆ ತೆರಳಿ ಹಸಿ ಕಸ ಸಂಗ್ರಹಿಸಲಾಗುತ್ತದೆ. ಇನ್ನು ವಾರಕ್ಕೆ ಎರಡು ದಿನಗಳ ಕಾಲ ಒಣ ಕಸವನ್ನು ಸಂಗ್ರಹಿಸಲಾಗುತ್ತದೆ. ಎಲ್ಲಾ ನಾಗರಿಕರು ರಸ್ತೆ, ಬೀದಿ ಬದಿ ಹಾಗೂ ಖಾಲಿ ನಿವೇಶನಗಳಲ್ಲಿ ಕಸವನ್ನು ಬಿಸಾಡದೆ ಆಟೋ ಟಿಪ್ಪರ್ ಗಳಿಗೆ ಕಸವನ್ನು ನೀಡಿ ನಗರವನ್ನು ಸ್ವಚ್ಛ ಸುಂದರ ನಗರವನ್ನಾಗಿಸುವ ಪಣ ತೊಡಬೇಕು ಎಂದು ಅರಿವು ಮೂಡಿಸಲಾಯಿತು.



ಘನತ್ಯಾಜ್ಯ ಸಮರ್ಪಕ ನಿರ್ವಹಣೆ ಕುರಿತು ಭಿತ್ತಿ ಪತ್ರ ಹಂಚಲಾಯಿತು. ರಸ್ತೆಯುದ್ದಕ್ಕೂ ಜಾಗೃತಿ ಘೋಷಣೆಗಳನ್ನು ಕೂಗುತ್ತ ನಾಗರಿಕರಲ್ಲಿ ಅರಿವು ಮೂಡಿಸಲಾಯಿತು.

**ಬೀದಿ ನಾಟಕ ಆಯೋಜನೆ:** ಘನತ್ಯಾಜ್ಯ ನಿರ್ವಹಣೆ ಕುರಿತಂತೆ ವಿವಿಧ ಸ್ಥಳಗಳಲ್ಲಿ ಬೀದಿ ನಾಟಕಗಳನ್ನು ಆಯೋಜಿಸಿ ನಾಟಕದ ಮೂಲಕ ಕಸ ವಿಂಗಡಣೆ, ಪ್ಲಾಸ್ಟಿಕ್ ನಿಷೇಧ ಸೇರಿದಂತೆ ಇನ್ನಿತರ ವಿಚಾರಗಳ ಕುರಿತು ನಾಗರಿಕರಲ್ಲಿ ಅರಿವು ಮೂಡಿಸಲಾಯಿತು.

ಜಾಗೃತಿ ಕಾರ್ಯದಲ್ಲಿ ಘನತ್ಯಾಜ್ಯ ವಿಭಾಗದ ಅಧಿಕಾರಿಗಳು, ಕಿರಿಯ ಆರೋಗ್ಯ ಪರಿವೀಕ್ಷಕರು, ಲಿಂಕ್ ವರ್ಕರ್ಸ್, ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಪ್ರತಿನಿಧಿಗಳು, ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಮಾರ್ಷಲ್ ಗಳು, ವಿದ್ಯಾರ್ಥಿಗಳು ಸೇರಿದಂತೆ ಇನ್ನಿತರರು ಹಾಜರಿದ್ದರು.

### ಬಟ್ಟೆ ಬ್ಯಾಗ್ ವಿತರಿಸಿ ಜಾಗೃತಿ

ನಗರದ ಮಡಿವಾಳ ಹಾಗೂ ಸಾರಕ್ಕಿ ಮಾರುಕಟ್ಟೆಗೆ ಬಂದಂತಹ ನಾಗರಿಕರಿಗೆ, ಒಮ್ಮೆ ಬಳಸುವ ಪ್ಲಾಸ್ಟಿಕ್ ಅನ್ನು ಸಂಪೂರ್ಣ ನಿಷೇಧಿಸಲಾಗಿದೆ. ಪ್ಲಾಸ್ಟಿಕ್ ಬಳಕೆ ಪರಿಸರಕ್ಕೆ ಮಾರಕವಾಗಿದ್ದು, ಮುಂದಿನ ದಿನಗಳಲ್ಲಿ ಹೆಚ್ಚು ದುಷ್ಪರಿಣಾಮ ಬೀರಲಿದೆ.ಆದ್ದರಿಂದ ಬಟ್ಟೆಯಿಂದ, ನಾರಿನಿಂದ ಹಾಗೂ ಪೇಪರ್‌ನಿಂದ ತಯಾರಿಸಿದ ಬ್ಯಾಗ್?ಗಳನ್ನು ಮಾತ್ರ ಬಳಸಲು ಅರಿವು ಮೂಡಿಸಲಾಯಿತು. ಜೊತೆಗೆ ಪಾಲಿಕೆಯಿಂದಲೇ ಬಟ್ಟೆಯಿಂದ ತಯಾರಿಸಿರುವ ಬ್ಯಾಗ್‌ಗಳನ್ನು ನಾಗರಿಕರಿಗೆ ವಿತರಿಸಿ ಇನ್ನು ಮುಂದೆ ಯಾವುದೇ ಕಾರಣಕ್ಕೂ ಪ್ಲಾಸ್ಟಿಕ್ ಕೈಚೀಲಗಳನ್ನು ಬಳಸದಂತೆ ಅರಿವು ಮೂಡಿಸಲಾಯಿತು.

# ಸುಸ್ಥಿರ ಅಭಿವೃದ್ಧಿಗೆ ಸ್ಕೌಟ್ಸ್‌ಗೈಡ್ಸ್ ಸಹಕಾರಿ: ಪಿ.ಜಿ.ಆರ್. ಸಿಂಧ್ಯ



**ಮೈಸೂರು:** ಮಕ್ಕಳಲ್ಲಿನ ರಾಷ್ಟ್ರಭಕ್ತಿ, ಸಹನೆ, ತಾಳ್ಮೆಯ ಶಕ್ತಿಯನ್ನು ಪರಿಚಯಿಸುವಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಯಾವಾಗಲೂ ಉದಾಹರಣೆಯಾಗಿ ನಿಲ್ಲುತ್ತದೆ ಎಂದು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್ ಸಿಂಧ್ಯ ಹೇಳಿದರು.

ನಗರದ ಗೋಕುಲಂನ ಕೆ.ಪುಟ್ಟಸ್ವಾಮಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶನಿವಾರ ನಡೆದ ಮೈಸೂರು ವಿಭಾಗೀಯ ಮಟ್ಟದ ರೋವರ್ಸ್ ಅಂಡ್ ರೆಂಜರ್ಸ್ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸಕ್ತ ವರ್ಷ ರಾಜ್ಯದಲ್ಲಿ 6 ಲಕ್ಷ ಸ್ಕೌಟ್ಸ್ ಅಂಡ್ ಗೈಡ್ಸ್ ಮಕ್ಕಳ ಮೂಲಕ ಸುಸ್ಥಿರ ಅಭಿವೃದ್ಧಿಯನ್ನು ದೃಷ್ಟಿಯಾಗಿರಿಸಿ ಚಟುವಟಿಕೆ ಮಾಡಲಿದ್ದೇವೆ. ಸುಸ್ಥಿರ ಅಭಿವೃದ್ಧಿಗೆ ಕೊಡುಗೆ ನೀಡುತ್ತಿರುವ ಹಲವು ವ್ಯಕ್ತಿಗಳನ್ನು ನಮ್ಮ ಆದರ್ಶವಾಗಿ ಇರಿಸಿಕೊಳ್ಳಬೇಕು. ಸೇವಾ ಮನೋಭಾವವುಳ್ಳ ಶಿಸ್ತುಬದ್ಧ ಸಮಾಜ ನಿರ್ಮಿಸುವುದು. ಅಭಿವೃದ್ಧಿಯನ್ನು ಎಲ್ಲೆಡೆ ಪಸರಿಸುವುದು ನಮ್ಮ ಗುರಿಯಾಗಬೇಕು ಎಂದರು. ನಾಡಿನ ಹಲವು ಜಾತ್ರೆಗಳಲ್ಲಿ, ಇತ್ತೀಚಿನ ಹಾಸನಾಂಬಾ ಜಾತ್ರೆಯಲ್ಲೂ ಸ್ಕೌಟ್ಸ್ ಅಂಡ್ ಗೈಡ್ಸ್ ಹುಡುಗರನ್ನು ನಿರ್ವಹಣೆಗೆ ಬಳಸಿಕೊಳ್ಳಲಾಗಿದೆ. ನಮ್ಮ ವಿದ್ಯಾರ್ಥಿಗಳು ಹೊಂದಿರುವ ಸಹನೆ, ತಾಳ್ಮೆ ಮತ್ತು ವಿಧೇಯ ಗುಣದಿಂದ ಈ ಜವಾಬ್ದಾರಿಗಳನ್ನು ನೀಡಲಾಗಿತ್ತು. ಒಂದು ಬೃಹತ್ ಸಂಘಟನೆಯಾಗಿ ನಾವು ಬದ್ಧತೆಯ ಸಮಾಜ ಕಟ್ಟಲು ಶ್ರಮಿಸುತ್ತಿದ್ದೇವೆ ಎಂದರು.

ಮೈಸೂರು, ಚಾಮರಾಜನಗರ, ಹಾಸನ, ಮಂಡ್ಯ ಹಾಗೂ ಕೊಡಗಿನಿಂದ 55 ಶಾಲೆಗಳ 1,150 ರೇಂಜರ್ಸ್ ಮತ್ತು ರೋವರ್ಸ್ ಸಮಾವೇಶದಲ್ಲಿ ಭಾಗವಹಿಸಿದ್ದರು. ಸುಸ್ಥಿರ ಅಭಿವೃದ್ಧಿ ಗುರಿಗಳು ಎಂಬ ವಿಷಯ ಕುರಿತು ಸಂಪನ್ಮೂಲ ವ್ಯಕ್ತಿಗಳಿಂದ ಮೂರು ಗೋಷ್ಠಿಗಳು ನಡೆದವು. ಇದೇ ವಿಷಯದಲ್ಲಿ ನಾಟಕ ಸ್ಪರ್ಧೆ ಆಯೋಜಿಸಲಾಗಿತ್ತು. ಸುಮಾರು 20 ತಂಡಗಳು ಭಾಗವಹಿಸಿದವು.

ಕಾರ್ಯಕ್ರಮದಲ್ಲಿ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ, ಕಾಲೇಜು ಶಿಕ್ಷಣ ಇಲಾಖೆ ಜಂಟಿ ನಿರ್ದೇಶಕಿ ಎ.ಎಚ್.ಎಂ.ವಿಜಯಲಕ್ಷ್ಮಿ, ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಆಯುಕ್ತ ಪಿ. ವಿಶ್ವನಾಥ್, ಖಜಾಂಚಿ ಗುರುಮೂರ್ತಿ, ಕಾರ್ಯದರ್ಶಿ ಅಬ್ದುಲ್ ಜಮೀಲ್, ಪ್ರಾಂಶುಪಾಲ ಎಂ.ಶಿವಲಿಂಗೇಗೌಡ, ಸಂಚಾಲಕ ಚಂದ್ರು, ಕಾಲೇಜಿನ ರೋವರ್ಸ್ ಅಂಡ್ ರೇಂಜರ್ಸ್ ಅಧಿಕಾರಿ ಲಾವಣ್ಯಾ ಉಪಸ್ಥಿತರಿದ್ದರು.

# ಮರಣದ ನಂತರವೂ ಜೀವಿಸಿರುವ ಪುನೀತ್: ರಾಮೇಗೌಡರು ಬಣ್ಣನೆ

**ಮೈಸೂರು:** ಕರುನಾಡು ರತ್ನ ಡಾಕ್ಟರ್ ಪುನೀತ್ ರಾಜ್ ಕುಮಾರ್ ರವರ 49ನೇ ಜನ್ಮದಿನಾಚರಣೆ ಅಂಗವಾಗಿ ಭುವನೇಶ್ವರಿ ಸೇವಾ ಟ್ರಸ್ಟ್ ಹಾಗೂ ಪುನೀತ್ ರಾಜಕುಮಾರ್ ಅಭಿಮಾನಿ ಬಳಗದ ವತಿಯಿಂದ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನ ಮುಂಭಾಗದಲ್ಲಿರುವ ಡಾಕ್ಟರ್ ರಾಜಕುಮಾರ್ ಉದ್ಯಾನವನದಲ್ಲಿ ವಿವಿಧ ಜಾತಿಯ ಸಸಿಗಳನ್ನು ನೆಟ್ಟು ಆನಂತರ ಸಿಹಿ ವಿತರಿಸಿ ಡಾಕ್ಟರ್ ರಾಜಕುಮಾರ್ ಸಂಘದ ಸಂಸ್ಥಾಪಕ ಅಧ್ಯಕ್ಷರಾದ ರಾಮೇಗೌಡ ತಿಳಿಸಿದರು.

ಮಾತನಾಡಿದ ಅವರು ಜನನವಾದ ಮೇಲೆ ಮರಣ ನಿಶ್ಚಿತ. ಮರಣಿಸಿದ ನಂತರವೂ ಜನರ ಮನಸ್ಸಿನಲ್ಲಿ ಜೀವಂತ ವಾಗಿರುವಂತೆ ಬದುಕಬೇಕು. ಅಂಥ ಬದುಕು ಪುನೀತ್ ರಾಜ್‌ಕುಮಾರ್ ಅವರದ್ದಾಗಿತ್ತು ಅಭಿಪ್ರಾಯಪಟ್ಟರು.

ಶ್ರೀಮಂತಿಕೆ, ಜೀವಿತಾವಧಿ ಮುಖ್ಯವಲ್ಲ. ಹೇಗೆ ಬದುಕಿದ್ದರು ಎಂಬುದೇ ಮುಖ್ಯ. ಸಂತ ಕಬೀರರು ಹೇಳಿದಂತೆ ನಾವು ಮರಣಿಸಿದಾಗ ಜನರಿಗೆ ದುಃಖವಾದರೆ ಅದು ಸಾರ್ಥಕ ಬದುಕಾಗುತ್ತದೆ. ಅವರ ಬದುಕಿನ ದಿನಗಳಲ್ಲಿ ಪುನೀತ್ ಸಾವಿರಾರು ಜನರಿಗೆ ಆಸರೆಯಾಗಿದ್ದರು. ಅನೇಕ ವೃದ್ಧಾಶ್ರಮ, ಅನಾಥಾಶ್ರಮಗಳಿಗೆ ಧನ ಸಹಾಯ ಮಾಡಿದ್ದರು. ಪ್ರಚಾರ ಬಯಸದೇ ಕರ್ಣನ ರೀತಿಯಲ್ಲಿ ಕೊಡುಗೈ ದಾನಿಯಾಗಿದ್ದರು. ಸಂಬಂಧ ವಿಲ್ಲದವರು ಕೂಡ ಅವರ ಸಾವಿಗೆ ದುಃಖಪಟ್ಟಿದ್ದಾರೆ. ಶಾರೀರಿಕವಾಗಿ ನಮ್ಮನ್ನಗಲಿದರೂ ಅವರಿಗೆ ಸಾವಿಲ್ಲ, ಅವರು ಅಜರಾಮರ ಎಂದು ಬಂದರು. ಪುನೀತ್ ರಾಜಕುಮಾರ್ ಅದ್ಭುತ ನಟ. ಬಾಲ್ಯದಿಂದಲೇ ನಟನೆ ಯಲ್ಲಿ ತೊಡಗಿಕೊಂಡಿದ್ದ ಅವರ ಅಕಾಲಿಕ ನಿಧನದಿಂದ ರಾಜ್ಯಕ್ಕೆ ತುಂಬಲಾರದ ನಷ್ಟವಾಗಿದೆ. ಅಂತಹ ಅಭಿಮಾನದ ವಿದಾಯ ಎಲ್ಲರಿಗೂ ಸಿಗುವುದಿಲ್ಲ ಎಂದು ಹೇಳಿದರು. ಸಮಾಜ ಸೇವಕರಾದ ವಿದ್ಯಾ, ಸೇತುರಾಮ್, ಚಂದ್ರು, ಗಂಗಪ್ಪ, ಬೇಗೂರು ಮೂರ್ತಿ, ವಿಶ್ವಮಾನವ ಡಾಕ್ಟರ್ ರಾಜಕುಮಾರ್ ಅಭಿಮಾನಿಗಳ ಸಂಘದ ಅಧ್ಯಕ್ಷರಾದ ರಾಘವೇಂದ್ರ ರಾವ್, ಸೌಮ್ಯರಾವ್, ಕಾರ್ಯದರ್ಶಿ ರಮೇಶ್, ಶ್ರೀ ಭುವನೇಶ್ವರಿ ಸೇವಾ ಟ್ರಸ್ಟ್ ಅಧ್ಯಕ್ಷರಾದ ನಾಗಶ್ರೀ ಸುಚಿಂದ್ರ, ಗಂಧದಗುಡಿ ಅಪ್ಪು ಅಭಿಮಾನಿಗಳ ಬಳಗ ಅಧ್ಯಕ್ಷರಾದ ರವಿ, ಆಟೋ ಶಿವ, ಕೃಷ್ಣಣ್ಣ, ರಾಜೇಂದ್ರ, ಜಯರಾಮ್, ಚಕ್ರಪಾಣಿ, ಅರಿವು ಸಂಸ್ಥೆ ಅಧ್ಯಕ್ಷರಾದ ಶ್ರೀಕಾಂತ್ ಕಶ್ಯಪ್, ಸುಚಿಂದ್ರ, ಹಾಗೂ ಇನ್ನಿತರರು ಭಾಗವಹಿಸಿದರು.



# ನೋಂದಾಯಿತ ಎಲ್ಲ ಟ್ಯಾಂಕರಗಳ ಮೇಲೆ ಸ್ಟಿಕ್ಕರ್

**ಬೆಂಗಳೂರು:** ಬೆಂಗಳೂರು ಜಲಮಂಡಳಿಯು ಪ್ರತಿನಿತ್ಯ ಪೂರೈಸುವ 1450 ಎಂಎಲ್‌ಡಿ ನೀರು ಪೂರೈಕೆಗೆ ತೊಂದರೆ ಇಲ್ಲ. ಆದರೆ ಅಂತರ್ಜಲ ಕುಸಿತ ಇನ್ನಿತರೆ ಕಾರಣಗಳಿಂದ ನಗರದ ಹಲವೆಡೆ ನೀರಿನ ಅಭಾವ ಸೃಷ್ಟಿಯಾಗಿದೆ. ಇದರ ಪರಿಹಾರಕ್ಕೆ ನಗರದಲ್ಲಿ ಎಲ್ಲ ಎಂಟು ವಲಯದಿಂದ ಒಟ್ಟು 1732 ಟ್ಯಾಂಕರ್ ಮಾಲೀಕರು ಸ್ವಯಂ ನೋಂದಣಿ ಮಾಡಿಕೊಂಡಿದ್ದಾರೆ. ಇದಕ್ಕೆ ಸ್ಟಿಕ್ಕರ್ ಅಂಟಿಸಲು ಬಿಬಿಎಂಪಿ ಕಡ್ಡಾಯ ಸೂಚನೆ ನೀಡಿದೆ. ನೀರಿನ ಸಮಸ್ಯೆಗೆ ಕಡಿವಾಣ ಹಾಕಲು ಮುಂದಾಗಿರುವ ಬಿಬಿಎಂಪಿ ಮತ್ತು ಬೆಂಗಳೂರು ಜಲಮಂಡಳಿಯು ಜನರಿಗೆ ತೊಂದರೆ ಆಗದಂತೆ, ಹೆಚ್ಚು ಹಣ ಕೀಳದಂತೆ ಉಪಾಯ ಮಾಡಿದೆ. ಸಹಾಯವಾಣಿ ನಂಬರ್ ಸಹ ಕೊಡಲಾಗಿದೆ. ನಗರದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಈಗಾಗಲೆ ಸ್ವಯಂ ನೋಂದಣಿಯಾಗಿರುವ ಟ್ಯಾಂಕರ್ ಗಳನ್ನು ಆಯಾ ವಲಯವಾರು ನಿಯೋಜಿಸಲಾಗಿದೆ. ನೋಂದಣಿ ಯಾಗಿರುವ ಟ್ಯಾಂಕರ್ ಗಳಿಗೆ ಜಲಮಂಡಳಿ ನೀಡಿರುವ ಸ್ಟಿಕರ್ ಅಂಟಿಸುವುದನ್ನು ಬಿಬಿಎಂಪಿ ಕಡ್ಡಾಯಗೊಳಿಸಿದೆ.

**ಬೆಂಗಳೂರಿನ 'ಮಂತ್ರಿ' ಮಾಲ್ ಮತ್ತೆ ಬೀಗ:** ಲೈಸೆನ್ಸ್ ರದ್ದುಗೊಳಿಸಿದ ಬಿಬಿಎಂಪಿ ಸ್ಟಿಕ್ಕರ್ ಕಡ್ಡಾಯ ಜತೆ ಇತರ ಸೂಚನೆಗಳು ಜಲಮಂಡಳಿಯಿಂದ ಸ್ಟಿಕ್ಕರ್ ಸಿದ್ದಪಡಿಸಿ ಪಾಲಿಕೆಗೆ ನೀಡಿದೆ. ಪ್ರತಿ ಟ್ಯಾಂಕರ್ ಮಾಲೀಕರು ಪಾಲಿಕೆಯಲ್ಲಿ ಸ್ವಂ ನೋಂದಣಿ ಮಾಡಿಕೊಂಡಿರುವ ನೋಂದಣಿ ಪ್ರಮಾಣ ಪತ್ರವನ್ನು ಹಾಗೂ ಪಾಲಿಕೆ ನೀಡಿರುವ ಸ್ಟಿಕರ್ ನಲ್ಲಿ ವಾಹನದ ಸಂಖ್ಯೆ, ಮಾಲೀಕರ ಹೆಸರು, ದೂರುವಾಣಿ ಸಂಖ್ಯೆ ಹಾಗೂ ಸ್ವಂ ನೋಂದಣಿಯಾಗಿರುವ ಸಂಖ್ಯೆಯನ್ನು ಹಾಗೂ ವಲಯದ ಹೆಸರು ನಮೂದಿಸಿ ವಾಹನದ ಮೇಲೆ ಕಡ್ಡಾಯವಾಗಿ ಅಂಟಿಸಬೇಕು. ಇಲ್ಲವಾದಲ್ಲಿ ಅಂತಹ ಟ್ಯಾಂಕರ್ ಮಾಲೀಕರ ವಿರುದ್ಧ ಶಿಸ್ತು ಕ್ರಮ ಜರಿಸಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ.

# ಚುನಾವಣೆ ಬಳಿಕ ರಾಜ್ಯ ಸರ್ಕಾರ ಪತನ ಗ್ಯಾರಂಟಿ: ಸಿಪಿ ಯೋಗೇಶ್ವರ್ ಭವಿಷ್ಯ

**ಆನೇಕಲ್:** ಲೋಕಸಭೆ ಚುನಾವಣೆ ನಂತರ ಕಾಂಗ್ರೆಸ್ ಸರ್ಕಾರ ಪತನವಾಗಲಿದೆ ಎಂದು ಮೇಲ್ಮನೆ ಸದಸ್ಯ ಸಿಪಿ ಯೋಗೇಶ್ವರ್ ಭವಿಷ್ಯ ನುಡಿದಿದ್ದು, ಆಡಳಿತಾರೂಢ ಕಾಂಗ್ರೆಸ್ ವಿರುದ್ಧವೇ ಪಕ್ಷದ ಶಾಸಕರಿದ್ದು ಅದು ಬೂದಿ ಮುಚ್ಚಿದ ಕೆಂಡದಂತಿದೆ ಎಂದು ಹೇಳಿದರು. ಅವರು ಅನೇಕಲ್ ತಾಲೂಕಿನ ಚಂದಾಪುರದಲ್ಲಿ ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ನೇತೃತ್ವದಲ್ಲಿ ನಡೆದ ಬಿಜೆಪಿ ಮತ್ತು ಜೆಡಿಎಸ್ ಜಂಟಿ ಸಮಾವೇಶ ಹಾಗೂ ಪ್ರಚಾರ ಸಭೆಯಲ್ಲಿ ಸಹಸ್ರಾರು ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದರು. ಈ ಬಾರಿ 400+ ಎಂಬ ಧ್ಯೆಯದೊಂದಿಗೆ ದೇಶಾದ್ಯಂತ ಬಿಜೆಪಿ ಹಾಗೂ ಎನ್‌ಡಿಎ ಕಾರ್ಯ ಕರ್ತರು ಟೊಂಕ ಕಟ್ಟಿ ಓಡಾಡುತ್ತಿದ್ದಾರೆ. ನಮ್ಮ ರಾಜ್ಯದಿಂದ 28 ಕ್ಷೇತ್ರಗಳನ್ನೂ ಬಿಜೆಪಿ ಮಡಿಲಿಗೆ ತುಂಬಬೇಕೆಂದು ಕಾರ್ಯಕರ್ತರನ್ನು ಹುರಿದುಂಬಿಸಿದರು. ಬಿಜೆಪಿ ಶಾಸಕ ಮುನಿರತ್ನ ಮಾತನಾಡಿ, ಡಾ.ಮಂಜುನಾಥ್‌ರವರು ಯಶಸ್ವಿ ವೈದ್ಯರಾಗಿದ್ದು, ತಮ್ಮ ಪಾಲಿನ ಕರ್ತವ್ಯವನ್ನು ಚೆನ್ನಾಗಿ ನಿರ್ವಹಿಸಿ ರಾಜ್ಯದ ಜನ ಮಾನಸದಲ್ಲಿ ನೆಲೆಸಿದ್ದಾರೆ.

ಕರ್ತವ್ಯ ನಿಷ್ಠೆಗೆ ಹೆಸರಾಗಿರುವ ಅವರು ಸಿದ್ದರಾಮಯ್ಯನವರ ಆದಿಯಾಗಿ ಎಲ್ಲಾ ಮುಖಂಡರರಿಂದ ಪ್ರಶಂಸೆಗೆ ಒಳಗಾಗಿದ್ದಾರೆ. ಬಿಜೆಪಿ ಅಭ್ಯರ್ಥಿಯಾಗಿ ಡಾ. ಮಂಜುನಾಥ್ ರವರ ಗೆಲುವಿಗೆ ಎಲ್ಲರೂ ಪ್ರಾಮಾಣಿಕವಾಗಿ ಶ್ರಮಿಸಿ ಅತಿ ಹೆಚ್ಚು ಮತಗಳಿಂದ ಗೆಲ್ಲಿಸಬೇಕು. ಅವರು ಇನ್ನೂ ಹೆಚ್ಚಿನ ಸ್ಥಾನ ಪಡೆದು ದೇಶಾಸ್ಯಂತ ಬಡ ಜನಗಳ ಸೇವೆ ಸಲ್ಲಿಸಲೂ ಅವಕಾಶ ಒದಗಿಬರಬಹದೆಂದು ಹೇಳಿದರು. ಇನ್ನೂ ಕಾಂಗ್ರೆಸ್ ಶಾಸಕ ಇಕ್ಬಾಲ್ ಹುಸೇನ್ ನನ್ನ ಬಗ್ಗೆ ಹಗುರವಾಗಿ ಮಾತನಾಡಿದ್ದಾರೆ. ಅವರ ಸವಾಲೇನಿದ್ದರೂ ಸ್ವೀಕರಿಸಿ ನಾನೇ ರಾಮನಗರಕ್ಕೂ, ಕನಕಪುರಕ್ಕೋ ಬರುವೆ ಎಂದವರು ಸವಾಲೆಸೆದರು. ಇನ್ನು, ಮಾಗಡಿ ಬಾಲಕೃಷ್ಣರವರ ಬಗ್ಗೆ ಮಾತನಾಡಿ ರಾಜಕಾರಣ ಒಬ್ಬರ ಸ್ವತ್ತಲ್ಲ. ಕ್ಷೇತ್ರ ಪರಿಚಯ, ಸೇವೆ ಮಾಡುವುದು ಅವರ ಇಚ್ಛಾಶಕ್ತಿಯನ್ನು ಅಲವಂಬಿಸುತ್ತದೆ. ತೆಗಳಿಕೆ ಹೊಗಳಿಕೆ ಮಾನದಂಡವಲ್ಲ ಎಂದು ಹೇಳಿದರು. ಯೋಗ್ಯತೆ ಇಲ್ಲ ಎಂದು ಹೇಳಿದರು.

# ಕಾವೇರಿ ನೀರು ಹರಿಸುವುದನ್ನು ನಿಲ್ಲಿಸಿ

**ಮೈಸೂರು:** ಕಾವೇರಿ ನೀರನ್ನು ತಮಿಳುನಾಡಿಗೆ ಬಿಡುತ್ತಿರುವುದನ್ನು ಖಂಡಿಸಿ ಕಾವೇರಿ ಕ್ರಿಯಾ ಸಮಿತಿ ಸದಸ್ಯರು ಶನಿವಾರ ಕಾವೇರಿ ನೀರಾವರಿ ನಿಗಮ ಇಲಾಖೆ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟಿಸಿದರು.

ಕಚೇರಿ ಮುಂದೆ ಜಮಾಯಿಸಿದ ಪ್ರತಿಭಟನಕಾರರು ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಕೂಡಲೇ ರಾಜ್ಯ ಸರ್ಕಾರ ತಮಿಳುನಾಡಿಗೆ ಬಿಡುತ್ತಿರುವ ನೀರನ್ನು ನಿಲ್ಲಿಸಬೇಕು. ನಮ್ಮ ರಾಜ್ಯದಲ್ಲಿ ಬರ ತಾಂಡವವಾಡುತ್ತಿದ್ದು, ಕುಡಿಯುವ ನೀರಿನ ಸಮಸ್ಯೆಯಾಗಿದೆ. ಈ ಸಮಯದಲ್ಲಿ ರಾಜ್ಯ ಸರ್ಕಾರ ತಮಿಳುನಾಡಿಗೆ ನೀರು ಬಿಡುತ್ತಿರುವುದು ಖಂಡನೀಯ. ಮುಖ್ಯಮಂತ್ರಿಗೆ ಪತ್ರ ಬರೆದು ಕೂಡಲೇ ನೀರು ಹರಿಸುತ್ತಿರುವುದನ್ನು ನಿಲ್ಲಿಸಬೇಕು? ಎಂದರು.

ಸಮಿತಿಯ ಅಧ್ಯಕ್ಷ ಎಸ್.ಜಯಪ್ರಕಾಶ್, ಪ್ರಧಾನ ಸಂಚಾಲಕ ಮೂಗೂರು ನಂಜುಂಡಸ್ವಾಮಿ, ತೇಜೇಶ್ ಲೋಕೇಶ್ ಗೌಡ, ಆಟೋ ಮಹದೇವು, ಹನುಮಂತೇ ಗೌಡ, ನಾಗರಾಜ್, ಪ್ರಭುಶಂಕರ್, ಹನುಮಂತಯ್ಯ, ನೇಹಾ, ಮಂಜುಳಾ, ಭಾಗ್ಯಮ್ಮ, ಸಿಂದುವಳ್ಳಿ ಶಿವಕುಮಾರ್, ಪುಷ್ಪವತಿ , ರವೀಶ್, ರಘು, ವಿಷ್ಣು, ಪ್ರಭಾಕರ, ಪ್ರಮೋದ್, ವರಕೂಡು ಕೃಷ್ಣೇಗೌಡ, ಬಸವರಾಜು ಇದ್ದರು.



# ಪ್ರಾರ್ಥನೆಗೆ ಅಡಿ ಆರೋಪ; ಅಂಗಡಿ ಮಾಲೀಕನ ಮೇಲೆ ಹಲ್ಲೆ

**ಬೆಂಗಳೂರು:** ಮೊಬೈಲ್ ಅಂಗಡಿಯಲ್ಲಿ ಹಾಕಲಾಗಿದ್ದ ಹಾಡಿನ ಸೌಂಡ್ ಜಾಸ್ತಿಯಾಯಿತು ಎಂದು ಆಕ್ರೋಶ ವ್ಯಕ್ತಪಡಿಸಿ, ಅಂಗಡಿ ಮಾಲೀಕನ ಮೇಲೆ ಯುವಕರು ಸೇರಿಕೊಂಡು ಹಲ್ಲೆ ನಡೆಸಿರುವ ಘಟನೆ ಹಲಸೂರು ಗೇಟ್ ಪೊಲೀಸ್ ಠಾಣಾ ವ್ಯಾಪ್ತಿಯ ನಗರ್ತಪೇಟೆಯಲ್ಲಿ ಭಾನುವಾರ ನಡೆದಿದೆ. ಅಂಗಡಿಯಲ್ಲಿ ಹಾಕಿರುವ ಹಾಡಿನಿಂದ ತಮ್ಮ ಧಾರ್ಮಿಕ ಕೇಂದ್ರದಲ್ಲಿ ಪ್ರಾರ್ಥನೆ ನಡೆಸಲು ತೊಂದರೆಯಾಗುತ್ತಿದೆ ಎಂಬ ಕಾರಣಕ್ಕೆ ಹಲ್ಲೆ ನಡೆಸಿದ್ದಾರೆ ಎಂದು ತಿಳಿದುಬಂದಿದೆ. ಹಲ್ಲೆಗೊಳಗಾದ ಮುಖೇಶ್ ಎಂಬವರು ನಗರ್ತಪೇಟೆಯಲ್ಲಿ ಕೃಷ್ಣ ಟೆಲಿಕಾಂ ಮೊಬೈಲ್ ಅಂಗಡಿ ಮಾಲೀಕರರು. ಇವರು ನೀಡಿದ ದೂರಿನ ಮೇರೆಗೆ ಸುಲೇಮಾನ್, ಶಹನವಾಜ್, ರೋಹಿತ್, ದ್ಯಾನೀಶ್ ಹಾಗೂ ತರುಣ್ ಎಂಬವರ ಮೇಲೆ ಪೊಲೀಸರು ಎಫ್ ಐಆರ್ ದಾಖಲಿಸಿಕೊಂಡಿದ್ದಾರೆ. ಮುಖೇಶ್ ಕೆಲವು ವರ್ಷಗಳಿಂದ ನಗರ್ತಪೇಟೆಯಲ್ಲಿ ಮೊಬೈಲ್ ಅಂಗಡಿ ಇಟ್ಟುಕೊಂಡು ಜೀವನ ನಡೆಸುತ್ತಿದ್ದರು. ಇವರ ಅಂಗಡಿ ಸಮೀಪದಲ್ಲೇ ಒಂದು ಕೋಮಿನ ಪೂಜಾ ಕೇಂದ್ರವಿದೆ. ಭಾನುವಾರ ಸಂಜೆ 6.30 ಸುಮಾರಿಗೆ ಮುಖೇಶ್ ಅವರ ಅಂಗಡಿಗೆ ಬಂದ ಯುವಕರು, ನಮಗೆ ಪ್ರಾರ್ಥನೆ ಮಾಡಲು ತೊಂದರೆಯಾಗುತ್ತಿದೆ. ಕೂಡಲೇ ಸ್ಪೀಕರ್‌ನಲ್ಲಿ ಹಾಕಲಾಗಿದ್ದ ಹಾಡು ನಿಲ್ಲಿಸುವಂತೆ ಒತ್ತಾಯಿಸಿದ್ದಾರೆ. ಈ ವಿಚಾರಕ್ಕೆ ಅಂಗಡಿ ಮಾಲೀಕನಿಗೂ ಯುವಕರಿಗೂ ಮಾತಿನ ಚಕಮಕಿ ನಡೆದಿದೆ. ನೋಡುನೋಡುತ್ತಿದ್ದಂತೆ ಗುಂಪಿನಲ್ಲಿದ್ದ ಓರ್ವ ಯುವಕ ಮುಖೇಶ್ ಮೇಲೆ ಹಲ್ಲೆ ಮಾಡಿದ್ದಾನೆ. ಇದಕ್ಕೆ ಪ್ರತಿರೋಧ ವ್ಯಕ್ತಪಡಿಸಿದ ಮುಖೇಶ್ ಅಂಗಡಿಯಿಂದ ಹೊರಬಂದಿದ್ದಾರೆ. ಮತ್ತೆ ಮಾಲೀಕನ ಮೇಲೆ ಯುವಕರು ಮನಬಂದಂತೆ ಹಲ್ಲೆ ಮಾಡಿದ್ದು, ತಮ್ಮ ಬಳಿಯಿದ್ದ ಚಾಕುವಿನಿಂದಲೂ ಚುಚ್ಚಿದ್ದಾರೆ.

ಮುಖೇಶ್ ಮೇಲೆ ಹಲ್ಲೆ ಮಾಡಿರುವ ದೃಶ್ಯ ಅಂಗಡಿ ಹೊರಗೆ ಅಳವಡಿಸಿದ್ದ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಆರೋಪಿಗಳ ಬಂಧನಕ್ಕೆ ತನಿಖೆ ಕೈಗೊಂಡಿದ್ದಾರೆ.

# ಕಿರುಕುಳ ಆರೋಪ: ಸಿಎಂ, ಸಾರಿಗೆ ಸಚಿವರಿಗೆ ಪತ್ರ ಬರೆದ ನಿರ್ವಾಹಕಿ

**ಬೆಂಗಳೂರು:** ಸಮಸ್ಯೆ ಇದೆ ಎಂದು ಹೇಳಿಕೊಂಡರೂ ಹೆಚ್ಚಿನ ಕೆಲಸ ಕೊಟ್ಟು ಅಧಿಕಾರಿಗಳು ಮಹಿಳಾ ನಿರ್ವಾಹಕರಿಗೆ ಕಿರುಕುಳ ನೀಡುತ್ತಿದ್ದಾರೆ ಎಂದು ಆರೋಪಿಸಿ, ದೀಪಾಂಜಲಿ ನಗರದ ಕೆಎಸ್‌ಆರ್‌ಟಿಸಿ ಡಿಪೋ 5ರ ನಿರ್ವಾಹಕಿಯೊಬ್ಬರು ಸಾರಿಗೆ ಸಚಿವರು ಹಾಗೂ ಮುಖ್ಯಮಂತ್ರಿಯವರಿಗೆ ಪತ್ರ ಬರೆದಿದ್ದಾರೆ. ರಾಜ್ಯ ಸರ್ಕಾರವು ಮಹಿಳಾ ಸಬಲೀಕರಣಕ್ಕಾಗಿ ಶಕ್ತಿ ಯೋಜನೆಯನ್ನು ಆರಂಭಿಸಲಾಗಿದ್ದು, ಈ ಸಲುವಾಗಿ ಕೆಎಸ್‌ಆರ್‌ಟಿಸಿಯಲ್ಲಿ ಮಹಿಳಾ ನಿರ್ವಾಹಕರಿಗೆ ಹಗಲು ರಾತ್ರಿಯೆನ್ನದೆ ಕೆಲಸ ಮಾಡುವಂತೆ ಕಿರುಕುಳ ನೀಡುತ್ತಿದ್ದಾರೆ ಎನ್ನುವ ಆರೋಪ ಕೇಳಿ ಬಂದಿದೆ. ತಿಂಗಳ ಋತುಚಕ್ರದ ಸಮಸ್ಯೆ ಇದ್ದರೂ ಡ್ಯೂಟಿ ಮಾಡಿ ಎಂದು ಹೇಳುತ್ತಾರೆ ಎಂದು ದೀಪಾಂಜಲಿ ನಗರದ ಡಿಪೋ 5ರ ನಿರ್ವಾಹಕಿಯೊಬ್ಬರು ಆರೋಪಿಸಿದ್ದಾರೆ. ಅಧಿಕಾರಿಗಳ ಕಿರುಕುಳದ ಕುರಿತಂತೆ ಸಿಟಿಎಂ ಅವರ ಗಮನಕ್ಕೆ ತಂದರೆ ದರ್ಪದ ಮಾತುಗಳನ್ನಾಡುತ್ತಾರೆ ಎಂದು ಮಹಿಳಾ ಕಂಡಕ್ಟರ್ ಆರೋಪಿಸಿದ್ದು, ಅಧಿಕಾರಿಗಳ ಕಿರುಕುಳದ ಬಗ್ಗೆ ಸಿಎಂ ಸಿದ್ದರಾಮಯ್ಯ ಹಾಗೂ ಸಾರಿಗೆ ಸಚಿವ ರಾಮಲಿಂಗಾರೆಡ್ಡಿಯವರಿಗೆ ಪತ್ರ ಬರೆದಿದ್ದಾರೆ. ದೀಪಾಂಜಲಿ ನಗರದ ಡಿಪೋ 5ರ 44 ಜನರ ಸಹಿ ಹಾಕಿ ಸಾರಿಗೆ ಸಚಿವರಿಗೆ ಪತ್ರ ಬರೆದಿದ್ದಾರೆ. ಕಿರುಕುಳದ ಬಗ್ಗೆ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದಿರುವ ಹಿನ್ನೆಲೆ ಮಹಿಳಾ ನಿರ್ವಾಹಕಿಗೆ ಡ್ಯೂಟಿ ನೀಡುತ್ತಿಲ್ಲ ಎಂಬ ಆರೋಪ ಕೇಳಿ ಬಂದಿದೆ. ಡಿಪೋ ಮ್ಯಾನೇಜರ್ ಬೇಗ ಬಂದರೂ ಲೇಟ್ ಆಗಿ ಡ್ಯೂಟಿ ನೀಡುತ್ತಿದ್ದಾರೆ. ಎಷ್ಟೇ ತಡವಾದರೂ ಕೆಲಸ ಮುಗಿಸಿ ಮನೆಗೆ ಹೋಗುವಂತೆ ಕಿರುಕುಳ ನೀಡುತ್ತಾರೆ. ಡಿಪೋದ ಇತರ ಅಧಿಕಾರಿಗಳ ಗಮನಕ್ಕೂ ತಂದರೂ ಅವರಿಂದಲೂ ಹಿಂಸೆಯಾಗುತ್ತಿದೆ. ಅಧಿಕಾರಿಗಳ ಈ ಟಾರ್ಚರ್ ಗೆ ರೋಸಿ ಸಾರಿಗೆ ಸಚಿವರಿಗೆ ಪತ್ರ ಬರೆದಿದ್ದೇನೆ. ನಾನು ಸೇರಿ 44 ಸಿಬ್ಬಂದಿ ಸಹಿ ಹಾಕಿದ್ದೇವೆ ಎಂದು ವಿಡಿಯೋದಲ್ಲಿ ಮಹಿಳಾ ಕಂಡಕ್ಟರ್ ಹೇಳಿದ್ದಾರೆ.

**ಪತ್ರದಲ್ಲಿ ಏನಿದೆ?:** ಬೆಳಗ್ಗೆಯಿಂದ ಸಂಜೆವರೆಗೂ ಡ್ಯೂಟಿ ನೀಡದೆ ಸುಮ್ಮನೆ ರಜೆ ಎಂದು ಬರೆಯುತ್ತಿದ್ದಾರೆ. ತಡವಾಗಿ ಗಾಡಿ ಕೊಟ್ಟು ಪೂರ್ತಿ ಕಿಲೋ ಮೀಟರ್ ಮಾಡಬೇಕು ಎಂದು ಹೇಳುತ್ತಾರೆ. ಈ ಕುರಿತು ಡಿಪೋ ಮ್ಯಾನೇಜರ್‌ರನ್ನು ಕೇಳಿದರೆ ಬಾಯಿಗೆ ಬಂದ ಹಾಗೆ ಬೈಯುತ್ತಾರೆ. ಘಟಕದಲ್ಲಿ ಸುಮ್ಮನೆ ಮೂರು ನಾಲ್ಕು ದಿನ ಕೂರಿಸಿಕೊಂಡು ರಜೆ ಅರ್ಜಿ ಬರೆಸಿಕೊಳ್ಳುತ್ತಿದ್ದಾರೆ. ಮಹಿಳೆಯರಿಗೆ ತೊಂದರೆ ಇದೆ ಅಂದರೂ, ತಡವಾಗಿ ಗಾಡಿಕೊಟ್ಟು ಟ್ರಿಪ್ ಪೂರ್ತಿ ಮಾಡಲು ಕಿರುಕುಳ ನೀಡುತ್ತಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. 44 ಜನರ ಸಹಿ : ಡಿಪೋ 5ರ 44 ಜನರು ಸಹಿ ಹಾಕಿ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಪತ್ರ ನೀಡಲಾಗಿದೆ. ಇನ್ನು ಕಂಡಕ್ಟರ್ ಅವರು ಈ ಹಿಂದೆ ಸಿಎಂಗೆ ಜನಸ್ಪಂದನ ಕಾರ್ಯಕ್ರಮದಲ್ಲಿ ದೂರು ನೀಡಿದ್ದರು.

# ರಾಜಕೀಯ ಪಕಗಳ ಪ್ರತಿನಿಧಿಗಳೊಂದಿಗೆ ಮುಖ್ಯ ಚುನಾವಣಾಧಿಕಾರಿ ಸಭೆ

**ಬೆಂಗಳೂರು:** ಸಾರ್ವತ್ರಿಕ ಚುನಾವಣೆ –2024ರ ಘೋಷಣೆಯ ಹಿನ್ನೆಲೆ ರಾಜಕೀಯ ಪಕ್ಷಗಳು ಹಾಗೂ ಅಭ್ಯರ್ಥಿಗಳು ಅನುಸರಿಸಬೇಕಾದ ವಿಷಯಗಳ ಕುರಿತು ಭಾನುವಾರ ರಾಷ್ಟ್ರ ಹಾಗೂ ರಾಜ್ಯ ಮಟ್ಟದ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆಯನ್ನು ನಡೆಸಲಾಯಿತು. ಮುಖ್ಯ ಚುನಾವಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಲವು ವಿಷಯಗಳನ್ನು ಪ್ರಸ್ತಾಪಿಸಿದರು. ಮುಖ್ಯವಾಗಿ ಮತಗಟ್ಟೆ ಮಟ್ಟದ ಪಕ್ಷದ ಏಜೆಂಟರುಗಳ ಮುಖಾಂತರ ಪ್ರಸ್ತುತ ನಡೆಯುತ್ತಿರುವ ಚುನಾವಣೆಯ ಮತದಾರರ ಪಟ್ಟಿಯಲ್ಲಿ ಸಾರ್ವಜನಿಕರು ತಮ್ಮ ಹೆಸರು ಇರುವುದನ್ನು ಪರಿಶೀಲಿಸುವಂತೆ ಜಾಗೃತಿ ಮೂಡಿಸಲು ಸಹಕರಿಸಬೇಕು ಎಂದು ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಮೀನಾ ರಾಜಕೀಯ ಪಕ್ಷಗಳಿಗೆ ಮನವಿ ಮಾಡಿದರು.

# ಗಿಡ ನೆಡುವ ಮುಖಾಂತರ ಪುನೀತ್ ರಾಜಕುಮಾರ್ ಜನ್ಮದಿನೋತ್ಸವ

**ಮೈಸೂರು:** ಕನ್ನಡ ಚಿತ್ರರಂಗದ ಮರೆಯಲಾಗದ ಮಾಣಿಕ್ಯ ಪವರ್ ಸ್ಟಾರ್ ಯುವರತ್ನ ಪುನೀತ್ ರಾಜಕುಮಾರ್ ರವರ ಜನ್ಮದಿನೋತ್ಸವದ ನೆನಪಿಗಾಗಿ 'ಶ್ರೀರಾಮ ಗೆಳಯರ ಬಳಗದ' ವತಿಯಿಂದ ರಾಮಾನುಜ ರಸ್ತೆಯಲ್ಲಿರುವ ಅಕ್ಕಮಣ್ಣಿ ಉದ್ಯಾನವನದಲ್ಲಿ ಗಿಡ ನೆಡುವ ಮುಖಾಂತರ ಅರ್ಥಪೂರ್ಣವಾಗಿ ಆಚರಿಸಲಾಯಿತು,

ಇದೇ ಸಂಧರ್ಭದಲ್ಲಿ ಶ್ರೀರಾಮ ಗೆಳೆಯರ ಬಳಗದ ಅಧ್ಯಕ್ಷರಾದ ಸಿ ಸಂದೀಪ್ ರವರು ಮಾತನಾಡಿ ಪುನೀತ್ ರಾಜಕುಮಾರ್ ರವರು ಮಾಡಿರುವ ಸೇವಾ ಕಾರ್ಯವು ಪ್ರತಿಯೊಬ್ಬರಿಗೂ ಪ್ರೇರಣೆಯಾಗಿರಲಿ ಎಂದು ಸ್ಪೂರ್ತಿ ದಿನವಾಗಿ ಆಚರಿಸಲಾಗುತ್ತಿದೆ,

ಜನಸಾಮಾನ್ಯರು ಅವರು ಮಾಡಿರುವ ಸೇವಾ ಕಾರ್ಯವನ್ನು ಸ್ಪೂರ್ತಿಯಾಗಿ ತೆಗೆದುಕೊಂಡು ಸಾರ್ವಕಜನಿಕ ಜೀವನದಲ್ಲಿ ಸೇವಾಮನೋಭಾವದ ದೃಷ್ಠಿಯಲ್ಲಿ ಆರೋಗ್ಯ ಶಿಬಿರ, ರಕ್ತದಾನ, ನೇತ್ರದಾನ, ಸಾಮೂಹಿಕ ವಿವಾಹ ಸೇರಿದಂತೆ ಸಾಂಸ್ಕೃತಿಕ ಧಾರ್ಮಿಕ ಕ್ರೀಡಾ ಅನ್ನ ದಾಸೋಹ ಕಾರ್ಯಕ್ರಮಗಳನ್ನ ಆಯೋಜಿಸುತ್ತಾ ಬಂದಿದ್ದಾರೆ ಪರಿಸರ ಕಾಳಜಿ ಮತ್ತು ಕನ್ನಡ ಭಾಷೆಗಾಗಿ ಅವರ ಸೇವೆ ಅವಿಸ್ಮರಣೀಯ ಎಂದರು. ಈ ಗಿಡ ನೆಡುವ ಕಾರ್ಯಕ್ರಮದಲ್ಲಿ ಶ್ರೀರಾಮ ಗೆಳೆಯರ ಬಳಗದ ಅಧ್ಯಕ್ಷರಾದ ಸಿ ಸಂದೀಪ್, ಧರ್ಮೇಂದ್ರ, ಬಸವರಾಜು, ರಾಕೇಶ್, ಪ್ರೇಮ್, ಶ್ರೀಧರ್, ಭಾಸ್ಕರ್, ವರುಣ್, ನಾರಾಯಣ್, ಗಿರೀಶ್, ಕಿರಣ್, ಧನುಷ್, ಕುಶಾಲ್, ಧನುಷ್, ವಿನಯ್ ಸಾಗರ್, ಮಧುಸೂಧನ್, ಭಾನುಪ್ರಕಾಶ್, ಪವನ್, ಪ್ರಸಾದ್, ಅಭಿನವ್, ಸಂತೋಷ್, ಗುರು, ಲಿಖಿತ್ ಮುಂತಾದವರು ಹಾಜರಿದ್ದರು



# ಹೊಗೆಮುಕ್ತ ಮನೆಗೆ ಉಜ್ವಲ ಸಹಕಾರಿ

**ಮೈಸೂರು:** ಕೇಂದ್ರ ಸರ್ಕಾರದ ಉಜ್ವಲ ಯೋಜನೆಯಿಂದಾಗಿ ಕೋಟ್ಯಂತರ ಮನೆಗಳು ಹೊಗೆ ಮುಕ್ತವಾಗಿದ್ದು, ಇದನ್ನು ಇನ್ನಷ್ಟು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ಮಂಡ್ಯ ವಿಶ್ವವಿದ್ಯಾಲಯದ ಸರ್ ಎಂ.ವಿ. ಸ್ನಾತಕೋತ್ತರ ಕೇಂದ್ರದ ಅರ್ಥಶಾಸ್ತ್ರ ವಿಭಾಗದ ಪ್ರಾಧ್ಯಾಪಕಿ ಪ್ರೊ. ಎಚ್.ಆರ್. ಉಮಾ ಹೇಳಿದರು.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ನಳ ಸಭಾಂಗಣದಲ್ಲಿ ಅರ್ಥಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ಕೇಂದ್ರ ಹಾಗೂ ನವದೆಹಲಿಯ ಐಸಿಎಸ್ ಎಸ್‌ಆರ್ ಸಹಯೋಗದಲ್ಲಿ ಶನಿವಾರ ಆಯೋಜಿಸಿದ್ದ ?ಗ್ರಾಮೀಣ ಕರ್ನಾಟಕದಲ್ಲಿ ಪ್ರಧಾನಮಂತ್ರಿ ಉಜ್ವಲ ಯೋಜನೆಯಡಿಯಲ್ಲಿ ಸಾಮಾಜಿಕ–ಆರ್ಥಿಕ ಮೌಲ್ಯಮಾಪನ? ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಪಿ.ವಿ.ನರಸಿಂಹರಾವ್ ಕಾಲದಲ್ಲಿ ಪೆಟ್ರೋಲಿಯಂ ಕಂಪನಿಗಳ ಖಾಸಗೀಕರಣವಾದ್ದರಿಂದ, ಹೆಚ್ಚು ಕಂಪನಿಗಳು ಸಿಲಿಂಡರ್ ವಿತರಣೆಗೆ ಆಸಕ್ತಿ ತೋರಿ ಜನರಿಗೆ ಸುಲಭವಾಗಿ ಸಿಲಿಂಡರ್ ಸಿಗುವಂತಾಯಿತು. ರಾಜೀವ್ ಗಾಂಧಿ ಸಮಯದಲ್ಲಿ ಹಳ್ಳಿಗಳಿಗೂ ಸಿಲಿಂಡರ್ ತಲುಪಿತು ಎಂದು ತಿಳಿಸಿದರು.

ಕೇಂದ್ರ ಸರ್ಕಾರ ಮೊದಲಿಗೆ 2016ರಲ್ಲಿ ಉತ್ತರಪ್ರದೇಶದಲ್ಲಿ ಉಜ್ವಲ್ ಯೋಜನೆ ಜಾರಿಗೊಳಿಸಿತು. ಈ ಯೋಜನೆ ಮೂಲಕ ಒಟ್ಟಾರೆ 10 ಕೋಟಿ ಜನರಿಗೆ ಅನಿಲ ಸಂಪರ್ಕ ನೀಡುವ ಉದ್ದೇಶ ಸಾಕಾರಗೊಂಡಿದೆ. ಮನೆಗಳಲ್ಲಿ ಹೊಗೆಯ ವಾತಾವರಣ ತಪ್ಪಿದೆ. ಆದಾಗ್ಯೂ ಗ್ರಾಮೀಣ ಭಾಗಗಳಲ್ಲಿ ಅಡುಗೆ ಸಿಲಿಂಡರ್‌ಗಳನ್ನು ವಾಣಿಜ್ಯ ಉಪಯೋಗಕ್ಕೆ ನೀಡಲಾಗುತ್ತಿದೆ ಎಂಬ ದೂರುಗಳಿವೆ. ಈ ಯೋಜನೆಯ ಸಮರ್ಪಕ ಬಳಕೆ ಆಗಬೇಕಿದೆ ಎಂದು ಸಲಹೆ ನೀಡಿದರು. ಐಸಿಎಸ್ ಎಸ್‌ಎಸ್ ಸಂಶೋಧನಾ ನಿರ್ದೇಶಕಿ ಆರ್.ಎಚ್. ಪವಿತ್ರಾ ಸಿದ್ಧಪಡಿಸಿರುವ ಪ್ರಧಾನ ಮಂತ್ರಿ ಉಜ್ವಲ ಯೋಜನೆಯ ಉದ್ದೇಶ, ಗ್ರಾಮೀಣ ಮಹಿಳೆಯರಿಗೆ ಅರಿವು, ಆರ್ಥಿಕ ಮತ್ತು ಸಾಮಾಜಿಕ ಸ್ಥಿತಿ ಮತ್ತು ಅನುಷ್ಠಾನಗೊಳಿಸುವಲ್ಲಿ ಇರುವ ಅಡೆತಡೆಗಳು ಹಾಗೂ ಅದರ ಯಶಸ್ವಿ ಕಾರ್ಯಾಚರಣೆಗೆ ಶಿಫಾರಸುಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಆಹಾರ ಇಲಾಖೆಯ ನಿವೃತ್ತ ಜಂಟಿ ನಿರ್ದೇಶಕ ಕೆ. ರಾಮೇಶ್ವರಪ್ಪ ಮಾತನಾಡಿದರು. ವಿ.ವಿ. ಕುಲಪತಿ ಪ್ರೊ. ಶರಣಪ್ಪ ಹಲಸೆ ಅಧ್ಯಕ್ಷತೆ ವಹಿಸಿದ್ದರು. ಕುಲಸಚಿವರಾದ ಪ್ರೊ. ಎಚ್.ವಿಶ್ವನಾಥ್, ಕೆಎಲ್‌ಎನ್ ಮೂರ್ತಿ, ಪ್ರಾಧ್ಯಾಪಕ ಎಂ.ರಾಮನಾಥಂ ನಾಯ್ಡು, ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥ ಎಂ.ಎಸ್. ರಮಾನಂದ, ಆರ್.ಎಚ್. ಪವಿತ್ರಾ ಇದ್ದರು.



## ತುಟ್ಟಿಭತ್ಯೆ ಹಿಂಬಾಕಿ ಪಾವತಿಸಲು ಆದೇಶ

**ಬೆಂಗಳೂರು:** ಸಾರಿಗೆ ಹಾಗೂ ಮುಜರಾಯಿ ಸಚಿವರು , ಮತ್ತು ಮಾನ್ಯ ಅಧ್ಯಕ್ಷರು , ಕೆ ಎಸ್ ಆರ್ ಟಿ ಸಿ ರವರ ನಿರ್ದೇಶನದಂತೆ, ಕೆ ಎಸ್ ಆರ್ ಟಿ ಸಿ ಸಿಬ್ಬಂದಿಗಳ ತುಟ್ಟಿಭತ್ಯೆ ಹಿಂಬಾಕಿ, ಗಳಿಕೆ ರಜೆ ನಗದೀಕರಣ ಹಾಗೂ ಉಪಧನದ ಬಾಕಿ ಮೊತ್ತ ಒಟ್ಟು ರೂ. 84 ಕೋಟಿ ಪಾವತಿಸಲು ಆದೇಶ ಹೊರಡಿಸಿದ್ದಾರೆ. ಕೆಎಸ್ಆರ್‌ಟಿಸಿ ಯ ಸಿಬ್ಬಂದಿಗಳಿಗೆ ( ಸದರಿ ಅವಧಿಯಲ್ಲಿನ ನಿವೃತ್ತ ಸಿಬ್ಬಂದಿಗಳನ್ನು ಸೇರಿ) 2022-23 ಮೇ ಸಾಲಿನ ಗಳಿಕೆ ರಜೆ ನಗದೀಕರಣದ ಮೊತ್ತ ರೂ.24 ಕೋಟಿಯನ್ನು ಹಾಗೂ ಜುಲೈ-2022 ರಿಂದ ನವೆಂಬರ್-2022 ರ ಮಾಹೆಯ 5 ತಿಂಗಳು, ಜನವರಿ-2023 ರಿಂದ ಜುಲೈ-2023 ರವರೆಗಿನ 7 ತಿಂಗಳು ಮತ್ತು ಜುಲೈ-2023 ರಿಂದ ಅಕ್ಟೋಬರ್-2023 ರವರೆಗಿನ 4 ತಿಂಗಳುಗಳ ಹಿಂಬಾಕಿ ತುಟ್ಟಿಭತ್ಯೆ ಮೊತ್ತ ರೂ.54 ಕೋಟಿಯನ್ನು ಪಾವತಿಸಲು ಆದೇಶಿಸಲಾಗಿದೆ. ಮುಂದುವರೆದು, ಜನವರಿ-2024 ರಲ್ಲಿ ಸಂಸ್ಥೆಯ ಸೇವೆಯಿಂದ ನಿವೃತ್ತರಾದ ಸಿಬ್ಬಂದಿಗಳ ಉಪಧನ ರೂ.6 ಕೋಟಿ ಮೊತ್ತವನ್ನು ದಿನಾಂಕ:15.03.2024 ರಂದು ವ್ಯವಸ್ಥಾಪಕ ನಿರ್ದೇಶಕರು ಬಿಡುಗಡೆಗೊಳಿಸಲು ಆದೇಶಿಸಿದ್ದಾರೆ.

## ನೀರಿಗೆ ಹಾಹಾಕಾರ: ಇಂದು ಸಿಎಂ ನೇತೃತ್ವದಲ್ಲಿ ಮಹತ್ವದ ಸಭೆ

**ಬೆಂಗಳೂರು:** ರಾಜ್ಯ ರಾಜಧಾನಿ ಬೆಂಗಳೂರಲ್ಲಿ ಕುಡಿಯುವ ನೀರಿನ ಸಮಸ್ಯೆ ದಿನೇ ದಿನೇ ಉಲ್ಬಣಿಸುತ್ತಿದೆ. ಇದರಿಂದ ಎಚ್ಚೆತ್ತುಕೊಂಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು (ಸೋಮವಾರ) ಗೃಹ ಕಚೇರಿ ಕೃಷ್ಣಾದಲ್ಲಿ ಸಭೆ ನಡೆಸಲಿದ್ದಾರೆ. ಮಧ್ಯಾಹ್ನ 1 ಗಂಟೆಗೆ ಅಧಿಕಾರಿಗಳ ಜೊತೆ ಸಭೆ ನಡೆಸಲಿರುವ ಸಿಎಂ, ಪರಿಹಾರೋಪಾಯಗಳ ಬಗ್ಗೆ ಚರ್ಚಿಸಲಿದ್ದಾರೆ. ಈ ಸಭೆಯಲ್ಲಿ ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಬಿಬಿಎಂಪಿ ಅಧಿಕಾರಿಗಳು, ಜಲಮಂಡಳಿ ಅಧಿಕಾರಿಗಳು ಭಾಗವಹಿಸಲಿದ್ದಾರೆ. ಕಳೆದೊಂದು ತಿಂಗಳಿಂದ ಬೆಂಗಳೂರಲ್ಲಿ ನೀರಿನ ಸಮಸ್ಯೆ ಬಿಗಡಾಯಿಸುತ್ತಿದೆ. ಒಂದೆಡೆ ಕಾವೇರಿ ನೀರಿನ ಅಭಾವ, ಇನ್ನೊಂದೆಡೆ ಬರಿದಾದ ಕೊಳವೆ ಬಾವಿಗಳು, ಇದರ ಮಧ್ಯೆ ಖಾಸಗಿ ಟ್ಯಾಂಕರ್??ಗಳ ಹಗಲು ದರೋಡೆಯಿಂದ ಜನರು ನೀರಿಗಾಗಿ ಪರದಾಡುವಂತಾಗಿದೆ. ಪ್ರತಿಪಕ್ಷಗಳು ಇದು ಸರ್ಕಾರದ ವೈಫಲ್ಯವೆಂದು ಆರೋಪಿಸಿ ಈಗಾಗಲೇ ಪ್ರತಿಭಟನೆ ನಡೆಸುತ್ತಿವೆ. ಲೋಕಸಭೆ ಚುನಾವಣೆಯ ಬೆನ್ನಲ್ಲೇ ಬೆಂಗಳೂರಲ್ಲಿ ನೀರಿನ ಬವಣೆ ಕಾಂಗ್ರೆಸ್ ಸರ್ಕಾರಕ್ಕೆ ನುಂಗಲಾರದ ತುತ್ತಾಗಿ ಪರಿಣಮಿಸುತ್ತಿದೆ.

ಈಗಾಗಲೇ ಡಿಸಿಎಂ ಡಿ.ಕೆ.ಶಿವಕುಮಾರ್ ಅಧಿಕಾರಿಗಳ ಜೊತೆ ಸಭೆ ನಡೆಸಿ, ನಗರದ ನೀರಿನ ಸಮಸ್ಯೆ ಪರಿಹರಿಸಲು ಯತ್ನಿಸಿದ್ದರು. ಆದರೂ ಸಮಸ್ಯೆ ತೀವ್ರಗೊಳ್ಳುತ್ತಿದೆ. ಖಾಸಗಿ ಟ್ಯಾಂಕರ್‌ಗಳು ನೋಂದಾಯಿಸಿಕೊಳ್ಳುವಂತೆ ಡಿಸಿಎಂ ಖಡಕ್ ಸೂಚನೆ ಕೊಟ್ಟರೂ, ಅತ್ಯಲ್ಪ ಸಂಖ್ಯೆಯಲ್ಲಿ ಟ್ಯಾಂಕರ್‌ಗಳು ನೋಂದಣಿ ಮಾಡಿಸಿಕೊಂಡಿವೆ. **ಕುಡಿಯುವ ನೀರು ಪೋಲು ಮಾಡಿದ್ರೆ ದಂಡ:** ಸಿಲಿಕಾನ್ ಸಿಟಿಯಲ್ಲಿ ಜಲಕ್ಷಾಮ ಉಂಟಾಗಿರುವುದರಿಂದ ಕುಡಿಯುವ ನೀರನ್ನು ಸ್ವಚ್ಛತೆ, ಕೈತೋಟ, ಕಟ್ಟಡ ನಿರ್ಮಾಣ ಸೇರಿ ಅನ್ಯ ಉದ್ದೇಶಕ್ಕೆ ಬಳಸಿದರೆ ದಂಡ ವಿಧಿಸುವುದಾಗಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಈಗಾಗಲೇ ಆದೇಶ ಹೊರಡಿಸಿದೆ. ಈ ಆದೇಶ ಉಲ್ಲಂಘಿಸುವವರ ವಿರುದ್ಧ ಜಲಮಂಡಳಿ ಕಾಯ್ದೆ 1964ರ ಕಲಂ 109ರಂತೆ 5,000 ರೂಪಾಯಿಗಳ ದಂಡ ವಿಧಿಸಲಾಗುವುದು. ಉಲ್ಲಂಘನೆ ಮರುಕಳಿಸಿದಲ್ಲಿ ದಂಡದ ಮೊತ್ತದ ಜೊತೆಗೆ ಹೆಚ್ಚುವರಿಯಾಗಿ ಪ್ರತಿ ದಿನಕ್ಕೆ 500 ರೂಪಾಯಿ ದಂಡ ಹಾಕಲಾಗುವುದು ಎಂದು ಎಚ್ಚರಿಕೆ ನೀಡಿತ್ತು.

## ಮದುವೆಯಾಗುವಂತೆ ಒತ್ತಾಯಿಸಿ ಕಟ್ಟಡವೇರಿ ಯುವಕನಿಗೆ ವಿವಾಹಿತೆ ಬೆದರಿಕೆ

**ಮೈಸೂರು:** ಯುವಕನೊಬ್ಬನಿಗೆ ತನ್ನನ್ನು ಮದುವೆ ಆಗುವಂತೆ ಒತ್ತಾಯಿಸಿ ವಿವಾಹಿತ ಮಹಿಳೆಯೊಬ್ಬಳು ಕಟ್ಟಡ ಏರಿಕೊಂಡು ಬೆದರಿಕೆ ಹಾಕಿದ ಘಟನೆ ಜಿಲ್ಲೆಯ ನಂಜನಗೂಡು ಪಟ್ಟಣದಲ್ಲಿ ಭಾನುವಾರ ನಡೆದಿದೆ. ಬೆದರಿಕೆ ಹಾಕಿದ ಮಹಿಳೆ ಹಾಗೂ ಯುವಕ ಇಬ್ಬರೂ ಕೂಡ ಬಿಹಾರ ಮೂಲದವರು ಎಂದು ತಿಳಿದುಬಂದಿದೆ. ಇದೀಗ ನಂಜನಗೂಡು ಪಟ್ಟಣ ಪೊಲೀಸರ ವಶದಲ್ಲಿದ್ದಾರೆ. ಕಳೆದ ಒಂದು ವರ್ಷದಿಂದ ಬಿಹಾರ ಮೂಲದ ಮಹಿಳೆ ಹಾಗೂ ಯುವಕ ಆಸಿಬೂರ್ ರೆಹಮಾನ್ ಸಾಮಾಜಿಕ ಜಾಲತಾಣ ಇನ್ಸ್ಟಾಗ್ರಾಂ ಮೂಲಕ ಪರಸ್ಪರ ಪರಿಚಯವಾಗಿದ್ದರು. ಮೂರು ತಿಂಗಳ ಹಿಂದಷ್ಟೇ ಯುವಕ ನಂಜನಗೂಡು ತಾಲೂಕಿನ ಹಿಮ್ಮಾವು ಗ್ರಾಮದಲ್ಲಿ ಕೆಲಸವೊಂದಕ್ಕೆ ಸೇರಿಕೊಂಡಿದ್ದ ಹಾಗೂ ಗ್ರಾಮದಲ್ಲೇ ರೂಂ ಬಾಡಿಗೆ ಪಡೆದು ವಾಸವಾಗಿದ್ದ. ಶನಿವಾರ ಬಿಹಾರದಿಂದ ನೇರವಾಗಿ ನಂಜನಗೂಡಿಗೆ ಬಂದ ಮಹಿಳೆ ಖಾಸಗಿ ಲಾಡ್ಜ್‌ನಲ್ಲಿ ರೂಂ ಮಾಡಿದ್ದಳು. ಅಲ್ಲಿಗೆ ಯುವಕನನ್ನು ಕರೆಸಿಕೊಂಡು ಮದುವೆ ಆಗುವಂತೆ ಒತ್ತಾಯಿಸಿದ್ದಾಳೆ. ಇಬ್ಬರಿಗೂ ವಯಸ್ಸಿನ ಅಂತರವಿದೆ ಎಂದು ಹೇಳಿ ಯುವಕ ಮದುವೆಗೆ ನಿರಾಕರಿಸಿದ್ದಾನೆ. ಇದ್ದಕ್ಕಿದ್ದಂತೆ ಲಾಡ್ಜ್ ಕಟ್ಟಡದ ಟೆರೆಸ್ ಮೇಲೆ ತೆರಳಿ ಕೆಳಗೆ ಜಿಗಿಯುವುದಾಗಿ ಬೆದರಿಕೆ ಹಾಕಿದ್ದಾಳೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ಅರಿತ ನಂಜನಗೂಡು ಪಟ್ಟಣ ಠಾಣೆ ಪೊಲೀಸರು ಸ್ಥಳಕ್ಕೆ ಧಾವಿಸಿ, ಮಹಿಳೆಯ ಮನವೊಲಿಸಿ ವಶಕ್ಕೆ ಪಡೆದಿದ್ದಾರೆ. ಮಹಿಳೆಗೂ ನನಗೂ ಯಾವುದೇ ಸಂಬಂಧವಿಲ್ಲವೆಂದು ಯುವಕ ಪೊಲೀಸರಿಗೆ ದೂರು ನೀಡಿದ್ದಾನೆ. ಈ ಸಂಬಂಧ ನಂಜನಗೂಡು ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮಡಿವಾಳ ಸಮುದಾಯ ಸಂಘಟಿತರಾದರೆ ಮಾತ್ರ ಉತ್ತಮ ಸ್ಥಾನ



**ಪಿರಿಯಾಪಟ್ಟಣ:** ರಾಜ್ಯದಲ್ಲಿ ಮಡಿವಾಳ ಸಮುದಾಯ ಸಂಘಟಿತರಾದರೆ ಮಾತ್ರ ರಾಜಕೀಯ ಹಾಗೂ ಆರ್ಥಿಕವಾಗಿ ಉತ್ತಮ ಸ್ಥಾನಮಾನ ಗಳಿಸಲು ಸಾಧ್ಯವೆಂದು ಬಿಜೆಪಿ ರಾಜ್ಯ ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷರಾದ ಆರ್ ರಘು ಕೌಟಿಲ್ಯ ತಿಳಿಸಿದರು.

ಪಟ್ಟಣದ ದೇವರಾಜ ಅರಸು ಕಲಾಭವನದಲ್ಲಿ ತಾಲೂಕು ಮಡಿವಾಳ ಮಾಚಿದೇವ ಸಂಘದ ವತಿಯಿಂದ ಏರ್ಪಡಿಸಿದ ಮಡಿವಾಳ ಬಂಧುಗಳ ಪುನಶ್ಚೇತನ ಶಿಬಿರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಅನಾದಿಕಾಲದಿಂದಲೂ ತೀರ ಸಂಕಷ್ಟಕ್ಕೆ ಒಳಗಾದ ಅತಿ ತಳ ಸಮುದಾಯ ಮಡಿವಾಳ ಸಮುದಾಯವಾಗಿದ್ದು ಯಾವುದೇ ವೃತ್ತಿಪರ ಆರ್ಥಿಕ ಸಫಲತೆ ಇಲ್ಲದೆ ಹಾಗೂ ರಾಜಕೀಯ ಮುಖಂಡರು ಇಲ್ಲದ ತೀರ ಹೀನಾಯ ಸ್ಥಿತಿಯಲ್ಲಿ ನಮ್ಮ ಸಮುದಾಯವು ತಮ್ಮ ಬದುಕನ್ನು ಸಾಧಿಸುತ್ತಿದ್ದು ಉತ್ತಮ ನಾಯಕತ್ವ ಹಾಗೂ ಸಂಘಟನೆಯ ಸಮಸ್ಯೆಯಿಂದಾಗಿ ಈ ಸಮುದಾಯವು ಪ್ರಸ್ತುತ ಸಂಕಷ್ಟಕ್ಕೆ ಸಿಲುಕಿದೆ ಸರ್ಕಾರವು ಈ ನಮ್ಮ ಸಮುದಾಯವನ್ನು ಪರಿಶಿಷ್ಟ ವರ್ಗಕ್ಕೆ ಸೇರಿಸಬೇಕೆಂದು ಹಾಗೂ ಸಮುದಾಯದ ಪ್ರತಿಯೊಬ್ಬ ವ್ಯಕ್ತಿಗೂ ಸರ್ಕಾರದ ಯೋಜನೆಗಳು ತಲುಪಬೇಕೆಂದು ಆಗ್ರಹಿಸಿದರು. ಕರ್ನಾಟಕ ರಾಜ್ಯ ಮಡಿವಾಳರ ಮಹಿಳಾ ಸಂಘದ ರಾಜ್ಯಾಧ್ಯಕ್ಷೆ ಶ್ರೀಮತಿ ವಿಜಯಲಕ್ಷ್ಮಿ ಅಂಜನಪ್ಪ ಮಾತನಾಡಿ. ಸಮುದಾಯದ ಮಹಿಳೆಯರು ಜಾಗೃತರಾಗಿ ತಮ್ಮದೇ ಆದ ಸ್ವ ಸಹಾಯ ಗುಂಪುಗಳನ್ನು ರಚಿಸಿಕೊಂಡು ಸ್ವಉದ್ಯೋಗವನ್ನು ಮಾಡುವ ಮೂಲಕ ಆರ್ಥಿಕ ಸದೃಢರಾಗಬೇಕು ಹಾಗೂ ನಮ್ಮ ಮಡಿವಾಳ ಸಮುದಾಯವು ರಾಜ್ಯದ್ಯಂತ ಹಿಂದುಳಿದ ಜಾತಿಯಾಗಿದ್ದು ಸರ್ಕಾರದ ಯಾವ ಯೋಜನೆಗಳು ಸಹ ಬಲಾಢ್ಯ ಸಮುದಾಯದ ಪಾಲಾಗುತ್ತಿದೆ ಇದಕ್ಕೆ ಮೂಲ ಮಂತ್ರ ಎಂದರೆ ನಮ್ಮ ಸಮುದಾಯವು ಸಂಘಟಿತರಾಗಬೇಕು ಹಾಗೂ ಸಂಘಗಳ ಮೂಲಕ ಸಂಘಟನಾ ಶಕ್ತಿಯನ್ನು ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ತಾಲೂಕು ಮಡಿವಾಳ ಸಂಘದ ಅಧ್ಯಕ್ಷ ಮಾದೇಶ್ ಕುಮಾರ್, ಕೆ ಆರ್ ನಗರ ತಾಲೂಕು ಮಡಿವಾಳ ಸಂಘದ ಅಧ್ಯಕ್ಷ ಸಿದ್ದನ ಕೊಪ್ಪಲು ಕುಮಾರ್, ಟೌನ್ ಮಡಿವಾಳ ಸಂಘದ ಅಧ್ಯಕ್ಷ ಸತೀಶ್, ಕಾರ್ಯದರ್ಶಿ ಶಿವಸ್ವಾಮಿ, ರಾಮಚಂದ್ರ ಶೆಟ್ಟರು, ರಾಘವ, ವೆಂಕಟೇಶ್ ಸೋಮು, ಸತೀಶ್, ಪ್ರದೀಪ್, ಸೇರಿದಂತೆ ಸಂಘದ ಸದಸ್ಯರು ಭಾಗವಹಿಸಿದ್ದರು.

# ಖಾಸಗಿ ಕಟ್ಟಡಗಳ ಮೇಲೂ ರಾಜಕೀಯ ಪ್ರತಿನಿಧಿಗಳ ಪೋಟೋ ಹಾಕುವಂತಿಲ್ಲ




**ಚಿಕ್ಕಬಳ್ಳಾಪುರ:** ಸಾರ್ವಜನಿಕವಾಗಿ ಕಾಣುವ ಅಥವಾ ಪ್ರದರ್ಶನಗೊಳ್ಳುವ ಹಾಗೆ ಯಾವುದೇ ರಾಜಕೀಯ ಪ್ರತಿನಿಧಿಗಳ, ಅಭ್ಯರ್ಥಿಗಳ ಛಾಯಾಚಿತ್ರಗಳನ್ನು, ಜಾಹೀರಾತು ವಿವರವುಳ್ಳ ಪ್ರಕಟಣೆಗಳನ್ನು ಖಾಸಗಿ ಕಟ್ಟಡಗಳ ಮೇಲು ಸಹ ಅನುಮತಿ ಇಲ್ಲದೆ ಹಾಕುವಂತಿಲ್ಲ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಅವರು ತಿಳಿಸಿದರು.

2024ರ ಲೋಕಸಭೆ ಚುನಾವಣಾ ನೀತಿ ಸಂಹಿತೆ ಜಾರಿಯಾದ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ರಾಜಕೀಯ ಪ್ರತಿನಿಧಿಗಳೊಂದಿಗೆ ಭಾನುವಾರ ಸಭೆ ನಡೆಸಿ ಮುಂದಿನ ಚುನಾವಣಾ ಪ್ರಕ್ರಿಯೆಗಳ ಬಗ್ಗೆ ಅವರು ತಿಳಿಸಿಕೊಟ್ಟರು.

ಯಾವುದೇ ಸಾರ್ವಜನಿಕ ಸ್ಥಳಗಳಲ್ಲಿ, ಖಾಸಗಿ ಸ್ಥಳಗಳಲ್ಲಿ ಚುನಾವಣಾ ಪ್ರಚಾರ, ರಾಜಕೀಯ ಅಭ್ಯರ್ಥಿಗಳ ಪರ ಪ್ರಚಾರ ಮಾಡಲು ಅನುಮತಿ ಪಡೆದು ಮಾಡಬೇಕಾಗಿರುತ್ತದೆ. ನಾಮಪತ್ರ ಸಲ್ಲಿಕೆವರೆಗೆ ಈ ಚುನಾವಣಾ ವೆಚ್ಚವು ಪಕ್ಷದ ಲೆಕ್ಕಕ್ಕೆ ಸೇರಿಸಲಾಗುತ್ತದೆ. ನಾಮಪತ್ರ ಸಲ್ಲಿಕೆಯಾದ ಮೇಲೆ ಅಭ್ಯರ್ಥಿಯ ಲೆಕ್ಕಕ್ಕೆ ಸೇರ್ಪಡೆ ಮಾಡಲಾಗುತ್ತದೆ. ಈ ಬಾರಿ ಲೋಕಸಭಾ ಚುನಾವಣೆಗೆ ಸ್ಪರ್ಧಿಸುವ ಅಭ್ಯರ್ಥಿಗೆ 95 ಲಕ್ಷಗಳವರೆಗೆ ಚುನಾವಣಾ ವೆಚ್ಚ ಮಾಡಲು ಅವಕಾಶವಿರುತ್ತದೆ. ಅದನ್ನು ಮೀರಿ ವೆಚ್ಚ ಮಾಡಿದ ಅಭ್ಯರ್ಥಿಗಳು ಅನರ್ಹಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಚುನಾವಣಾ ಅಧಿಸೂಚನೆ, ನಾಮಪತ್ರ ಸಲ್ಲಿಕೆ, ಹಿಂಪಡೆಯುವಿಕೆ, ಮತದಾನ ದಿನಾಂಕ, ಎಣಿಕೆ ದಿನಾಂಕ ಸೇರಿದಂತೆ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಮತದಾರರ ವಿವರ, ಮತಗಟ್ಟೆಗಳ ವಿವರ, ಚುನಾವಣಾ ಕರ್ತವ್ಯದ ಸಿಬ್ಬಂದಿ ವಿವರದ ಸಂಪೂರ್ಣ ವಿವರವನ್ನು ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ತಿಳಿಸಿದರು.

ಚುನಾವಣಾ ಸಂದರ್ಭದಲ್ಲಿ ಯಾವುದೇ ಅಭ್ಯರ್ಥಿಗಳು ಮತದಾರರಿಗೆ ಆಮಿಷ ಒಡ್ಡುವ ವಸ್ತುಗಳನ್ನು ವಿತರಿಸುವುದು ಕಂಡುಬಂದಲ್ಲಿ ಅಥವಾ ಚುನಾವಣೆಗೆ ಸಂಬಂಧಿಸಿದ ಇತರ ದೂರುಗಳಿದ್ದಲ್ಲಿ ಸಾರ್ವಜನಿಕರು cVIGIL App ಮುಖಾಂತರ ದೂರು ಸಲ್ಲಿಸಿದರೆ 100 ನಿಮಿಷಗಳ ಒಳಗಡೆ ಕ್ರಮವಹಿಸಲಾಗುವುದು. ಅಲ್ಲದೆ ಚುನಾವಣೆಗೆ ಸಂಬಂಧಿಸಿದ ಮಾಹಿತಿ ಹಾಗೂ ಮತದಾರರ ನೋಂದಣಿಗೆ ಸಂಬಂಧಿಸಿದಂತೆ Voter helpline ಮೂಲಕ ಸಂಪರ್ಕಿಸಬಹುದು. ಜೊತೆಗೆ ಟೋಲ್ ಫ್ರೀ ನಂ. 1950 ಕರೆ ಮಾಡಿ ತಿಳಿಸಬಹುದು. ಚುನಾವಣೆಗೆ ಸಂಬಂಧ ಪಟ್ಟಂತೆ ಸಭೆ ಸಮಾರಂಭ, ಮೆರವಣಿಗೆ ಇನ್ನಿತರ ಅನುಮತಿಗೆ ಏಕಗವಾಕ್ಷಿ ಪದ್ಧತಿ ಮೂಲಕ ಕ್ರಮವಹಿಸಲಾಗಿದ್ದು, Suvidha App ಮುಖಾಂತರ ಅನುಮತಿಗೆ ಅರ್ಜಿ ಸಲ್ಲಿಸಬಹುದು. ವಿಶೇಷ ಚೇತನರು ಮನೆ ಮತದಾನಕ್ಕಾಗಿ Saksham App ಮೂಲಕ ನೋಂದಣಿಯಾಗಬಹುದು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಿ.ಎಲ್.ನಾಗೇಶ್, ಅಪರ ಜಿಲ್ಲಾಧಿಕಾರಿ ಡಾ. ಎನ್.ತಿಪ್ಪೇಸ್ವಾಮಿ, ಜಿಲ್ಲಾ ಪಂಚಾಯತ್ ಮುಖ್ಯಲೆಕ್ಕಾಧಿಕಾರಿ ಹಾಗೂ ಜಿಲ್ಲಾ ಚುನಾವಣಾ ವೆಚ್ಚ ಅಧಿಕಾರಿ ಹರೀಶ್, ಚುನಾವಣಾ ತಹಸೀಲ್ದಾರ್ ಮುನಿಶಾಮಿರೆಡ್ಡಿ, ಬಹುಜನ ಸಮಾಜ ಪಕ್ಷದ ಪ್ರತಿನಿಧಿ ಕಾಂತರಾಜು.ಸಿ, ಭಾರತೀಯ ಜನತಾ ಪಕ್ಷದ ಪ್ರತಿನಿಧಿ ಲಕ್ಷ್ಮೀ ನಾರಾಯಣ ಗುಪ್ತ, ಭಾರತ ಕಮ್ಯೂನಿಸ್ಟ್ ಪಕ್ಷದ ಪ್ರತಿನಿಧಿ ಬಿ.ಎನ್. ಮುನಿಕೃಷ್ಣಪ್ಪ, ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಪ್ರತಿನಿಧಿ ಮಧುಸೂದನ್, ಜಾತ್ಯಾತೀತ ಜನತಾದಳ ಪಕ್ಷದ ಪ್ರತಿನಿಧಿ ನಾರಾಯಣಸ್ವಾಮಿ, ಆಮ್ ಆದ್ಮಿ ಪಕ್ಷದ ಪ್ರತಿನಿಧಿ ನಂದಿ ಭಾಷಾ ಇತರರು ಇದ್ದರು.

# ಡಿ.ವಿ.ಗುಂಡಪ್ಪನವರ ಜನ್ಮ ದಿನ ಆಚರಣೆ



**ಕೋಲಾರ:** ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ಭಾನುವಾರ ಪತ್ರಕರ್ತರ ಭವನದಲ್ಲಿ ಡಿವಿಜಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಡಿ.ವಿ.ಗುಂಡಪ್ಪ ಅವರ ಜನ್ಮದಿನವನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ರಾಜ್ಯ ಕಾರ್ಯಕಾರಿಣಿ ಸದಸ್ಯ ಕೆ.ಎಸ್.ಗಣೇಶ್ ಮಾತನಾಡಿ, ಡಿವಿಜಿ ಪತ್ರಕರ್ತರ ಸಂಘ ಹುಟ್ಟು ಹಾಕಿದ್ದು ಮಾತ್ರವಲ್ಲ; ಪತ್ರಕರ್ತರಾಗಿಯೂ ಕೆಲಸ ಮಾಡಿದ್ದಾರೆ. ಹೊಟ್ಟೆಪಾಡಿಗಾಗಿ ಪತ್ರಕರ್ತ ಆದೆ ಎಂದಿದ್ದರು. ಆದರೆ, ಎಲ್ಲೂ ಕೈಚಾಚಲಿಲ್ಲ, ನೈತಿಕತೆ ಕಳೆದುಕೊಳ್ಳಲಿಲ್ಲ. ಯಾರ ಹಂಗಿಗೂ ಒಳಗಾಗುವುದಿಲ್ಲ ಎಂದು ಖಡಕ್ಕಾಗಿ ಹೇಳಿದ್ದರು ಎಂದರು.

ಡಿವಿಜಿ ಬರೆದೊರುವ ವೃತ್ತ ಪತ್ರಿಕೆ ಎಂಬ ಕೃತಿ ಈಗಲೂ ಪ್ರಸ್ತುತ. ತಂತ್ರಜ್ಞಾನ ಬೆಳೆದಿದ್ದರೂ ಪತ್ರಿಕೋದ್ಯಮ ಹಾಗೂ ಪತ್ರಕರ್ತರ ಮೂಲ ಸಿದ್ಧಾಂತ ಬದಲಾಗಿಲ್ಲ ಎಂದು ಹೇಳಿದರು.

ಪತ್ರಕರ್ತರನ್ನು ಡಿವಿಜಿ ಯೋಧರಿಗೆ ಹೋಲಿಸಿದ್ದಾರೆ ಎಂದರು. ಸಂಘದ ಪ್ರಧಾನ ಕಾರ್ಯದರ್ಶಿ ಎಸ್.ಕೆ.ಚಂದ್ರಶೇಖರ್ ಮಾತನಾಡಿ, ಸಂಘದಿಂದ ಪ್ರತಿ ವರ್ಷ ಡಿ.ವಿ.ಗುಂಡಪ್ಪ ಜಯಂತಿ ಆಚರಣೆ ಮಾಡಲಾಗುತ್ತಿದೆ. ಅವರು ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಸಂಸ್ಥಾಪಕ ಅಧ್ಯಕ್ಷರು ಕೂಡ. ಪತ್ರಕರ್ತರಿಗೆ ಮೌಲ್ಯಯುತ ಹಾದಿ ಕಟ್ಟಿಕೊಟ್ಟವರು. ದುರದೃಷ್ಟಕರವೆಂದರೆ ಈಗ ಪತ್ರಿಕೋದ್ಯಮದಲ್ಲಿ ಆದರ್ಶ ಇಲ್ಲವಾಗಿದೆ. ವೃತ್ತಿ ಧರ್ಮ ಕೈಬಿಟ್ಟರೆ ಆ ವೃತ್ತಿಗೆ ಗೌರವ ಇರುವುದಿಲ್ಲ. ಡಿವಿಜಿ ಹಾಕಿಕೊಟ್ಟ ಮಾರ್ಗದಲ್ಲಿ ನಡೆದರೆ ಉತ್ತಮ ಎಂದರು.

ಸಂಘದ ರಾಜ್ಯ ಕಾರ್ಯಕಾರಿಣಿ ಸದಸ್ಯ ವಿ. ಮುನಿರಾಜು ಮಾತನಾಡಿ, ಸಂಘ ಡಿ.ವಿ. ಗುಂಡಪ್ಪ ಹಾದಿಯಲ್ಲಿ ನಡೆಯಬೇಕು. ಅವರಂತೆ ನಾವು ಆಗಲು ಅಸಾಧ್ಯ. ಆದರೆ, ಶೇ 60 ರಷ್ಟಾದರೂ ಅವರ ಮೌಲ್ಯ ಅಳವಡಿಸಿಕೊಂಡು ಅವರ ಹಾದಿಯಲ್ಲಿ ನಡೆಯಬೇಕು ಎಂದರು.

ಸಹಕಾರ ಸಂಘದ ಉಪಾಧ್ಯಕ್ಷ ಅಬ್ಬಣಿ ಶಂಕರ್ ಮಾತನಾಡಿ, ಕರ್ನಾಟಕಕ್ಕೆ ಹೆಸರಾದವರು ಡಿವಿಜಿ. ಸಂಘ ಈ ಮಟ್ಟಕ್ಕೆ ಬೆಳೆಯಲು ಅವರೇ ಕಾರಣ. ಕೋಲಾರ ಜಿಲ್ಲೆಯವರು ಎಂಬುದು ನಮ್ಮ ಹೆಮ್ಮೆ. ಅವರ ಮೌಲ್ಯ ಅಳವಡಿಸಿಕೊಳ್ಳಬೇಕು. ಆದರೆ, ಆ ಪ್ರಯತ್ನ ನಡೆಯುತ್ತಿಲ್ಲ. ಪತ್ರಿಕೋದ್ಯಮ ಕ್ಷೀಣಿಸಿದರೆ ಲಕ್ಷಾಂತರ ಕುಟುಂಬಗಳಿಗೆ ತೊಂದರೆ ಆಗಲಿದೆ. ಒಗ್ಗಟ್ಟಾಗಿ ಇರಬೇಕು ಎಂದರು. ಹಿರಿಯ ಪತ್ರಕರ್ತ ಎಂ.ಜಿ.ಪ್ರಭಾಕರ್ ಮಾತನಾಡಿ, ಸ್ವಾತಂತ್ರ್ಯಪೂರ್ವದಲ್ಲೇ ಅವರು ಸಂಘದ ಕನಸು ಕಂಡವರು, ಆದರ್ಶದ ಮಾರ್ಗ ಹಾಕಿ ಕೊಟ್ಟವರು. ಅವರು ಹಾಕಿಕೊಟ್ಟ ಹಾದಿಯಲ್ಲಿ ನಡೆಯೋಣ. ಸಾವಧಾನವಾಗಿ ವಿಚಾರ ತಿಳಿದುಕೊಳ್ಳಬೇಕು. ಸಲುಗೆ ಕೊಡದೆ ವೃತ್ತಿ ಜೀವನ ನಡೆಸಬೇಕು. ಅದೇ ಗುಂಡಪ್ಪ ಅವರಿಗೆ ಸಲ್ಲಿಸುವ ಗೌರವ ಎಂದರು. ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತರಾದ ಎಸ್.ಸಚ್ಚಿದಾನಂದ, ಓಂಕಾರಮೂರ್ತಿ, ಕೆ.ಬಿ.ಜಗದೀಶ್, ಚಾಂದ್ ಪಾಷ, ಕೆ.ಎಸ್. ಸುದರ್ಶನ್, ಕೋಲಾರನ್ಯೂಸ್ ಚಂದ್ರು, ಪುರುಷೋತ್ತಮ, ಸತೀಶ್ ಎನ್, ಸಿ.ಅಮರೇಶ, ಶ್ರೀನಿವಾಸ್ ಉಪಸ್ಥಿತರಿದ್ದರು.

# ಮಕ್ಕಳ ನೇತ್ರ ತಪಾಸಣೆ ಆರಂಭ

**ಬೆಂಗಳೂರು:** ಜಮೀನ್ದಾರ್ ಮೈಕ್ರೊ ಸರ್ಜಿಕಲ್ ಐಸೆಂಟರ್ ತನ್ನ ಮಕ್ಕಳ ನೇತ್ರ ತಪಾಸಣೆ ಕೇಂದ್ರ ಮತ್ತು ಡ್ರೈಐಕ್ಲಿನಿಕ್ ಅನ್ನು 2024ರಂದು ಜಿ.ಕೆ. ಆರ್ಕೇಡ್, 252, 1ನೇಬ್ಲಾಕ್, ಎಚ್‌ಆರ್‌ಬಿಆರ್ ಲೇಔಟ್, ಕಲ್ಯಾಣನಗರ, ಬೆಂಗಳೂರುಇಲ್ಲಿ ಆರಂಭಿಸಿದೆ. ಐಸೆಂಟರ್‌ಅನ್ನು ಮುಖ್ಯ ಅತಿಥಿ ಡಾ.ಶಾಲಿನಿಚಂದ್ರಶೇಖರನಾಯಿ, ಪ್ರಿನ್ಸಿಪಲ್ ಮತ್ತು ಡೀನ್,ರಾಮಯ್ಯ ಮೆಡಿಕಲ್‌ಕಾಲೇಜ್, ಪ್ರೊಫೆಸರ್, ಡಿಪಾರ್ಟ್‌ಮೆಂಟ್‌ಆಫ್‌ಕಮ್ಯುನಿಟಿ ಮೆಡಿಸಿನ್ ಮತ್ತು ತಾಂತ್ರಿಕನಿರ್ದೇಶಕರು- ರಾಮಯ್ಯ ಇಂಟರ್‌ನ್ಯಾಷನಲ್‌ಸೆಂಟರ್‌ಫಾರ್ ಪಬ್ಲಿಕ್‌ಹೆಲ್ತ್ ಇನ್ನೊವೇಷನ್ಸ, ಪ್ರೊ.(ಡಾ)ಪಿ.ಬಾಲಕೃಷ್ಣಶೆಟ್ಟಿ, ಡೈರೆಕ್ಟರ್ ಅಂಡ್ ಚೀಫ್‌ಆಫ್‌ರೇಡಿಯಾಲಜಿ, ಐಎಸ್‌ಎಚ್‌ಎಡಯಾಗ್ನೊಸ್ಟಿಕ್ಸ್, ಫೆಲೊ- ಪೀಡಿಯಾಟ್ರಿಕ್‌ರೇಡಿಯಾಲಜಿ, ಟೆಕ್ಸಾಸ್ ಯೂನಿವರ್ಸಿಟಿ, ಉಪಕುಲಪತಿ, ಶ್ರೀಸಿದ್ಧಾರ್ಥ ಉನ್ನತ ಶಿಕ್ಷಣಅಕಾಡೆಮಿ (ಡೀಮ್ಡ್‌ಟುಬಿಯೂನಿವರ್ಸಿಟಿ) ಅವರು ಡಾ.ಸಮೀನಾಎಫ್. ಜಮೀನ್ದಾರ್,ಸ್ಥಾಪಕರು ಮತ್ತು ಮುಖ್ಯವೈದ್ಯಕೀಯ ನಿರ್ದೇಶಕರು,ಜಮೀನ್ದಾರ್‌ಮೈಕ್ರೊಸರ್ಜಿಕಲ್ ಐಸೆಂಟರ್‌ಅವರ ಉಪಸ್ಥಿತಿಯಲ್ಲಿಉದ್ಘಾಟಿಸಿದರು.

ಉದ್ಘಾಟನಾಕಾರ್ಯಕ್ರಮದಲ್ಲಿಕೇಂದ್ರವ ್ರಮಕ್ಕಳನೇತ್ರಕಾಯಿಲೆಮತ್ತುಮುನ್ನೆಚ್ಚರಿಕೆಕ್ರಮಗಳಕುರಿತುತಜ್ಞರಜತೆಸಂವಾದಆಯೋಜಿಸಿತ್ತು. ಸಮೀನಾಎಫ್.ಜಮೀನ್ದಾರ್,ಸ್ಥಾಪಕರುಮತ್ತುಮುಖ್ಯವೈದ್ಯಕೀಯನಿರ್ದೇಶಕರು,ಜಮೀನ್ದಾರ್‌ಮೈಕ್ರೊಸರ್ಜಿಕಲ್‌ಐಸೆಂಟರ್ ಅವರುಈಸಂದರ್ಭದಲ್ಲಿಹೇಳಿದರು, '

# ಎಯು ಸ್ಮಾಲ್ ಫೈನಾನ್ಸ್‌ಬ್ಯಾಂಕ್ ಶಾಖೆ ಉದ್ಘಾಟನೆ



**ಬೆಂಗಳೂರು:** ಭಾರತದ ಅತಿದೊಡ್ಡ ಸಣ್ಣ ಹಣಕಾಸು ಬ್ಯಾಂಕ್ ಆಗಿರುವ ಎಯು ಸ್ಮಾಲ್ ಫೈನಾನ್ಸ್ ಬ್ಯಾಂಕ್ ಬೆಂಗಳೂರಿನ ಸಂಜಯನಗರದಲ್ಲಿ ಹೊಸ ಶಾಖೆಯನ್ನು ಆರಂಭಿಸಿದೆ. ಇದು ಕರ್ನಾಟಕದಲ್ಲಿ ಬ್ಯಾಂಕಿನ 12ನೇ ಶಾಖೆಯಾಗಿದ್ದು, ಬೆಂಗಳೂರಿಗೆ ಕೊಡುಗೆ ನೀಡಲು ಮತ್ತು ದಕ್ಷಿಣ ಭಾರತದ ಗ್ರಾಹಕರಿಗೆ ತಂತ್ರಜ್ಞಾನ ಆಧಾರಿತ ಹಣಕಾಸು ಸೇವೆಗಳನ್ನು ಒದಗಿಸುವಲ್ಲಿ ಬ್ಯಾಂಕಿಗೆ ಇರುವ ಬದ್ಧತೆಯನ್ನು ಸೂಚಿಸುತ್ತದೆ. ಮಾಜಿ ಮುಖ್ಯಮಂತ್ರಿ ಮತ್ತು ಸಂಸತ್ ಸದಸ್ಯ ಡಿ.ವಿ. ಸದಾನಂದಗೌಡ ಹೊಸ ಶಾಖೆಯನ್ನು ಉದ್ಘಾಟಿಸಿದರು. ಬ್ಯಾಂಕಿನ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಕರ್ನಾಟಕ ಹೊಂದಿರುವ ಸದೃಢ ಅರ್ಥವ್ಯವಸ್ಥೆಯಿಂದಾಗಿ ಠೇವಣಿ ಮತ್ತು ಸಾಲ ಸೇವೆಗಳಿಗೆ ಅಪಾರ ಅವಕಾಶವಿದೆ. ಬೆಂಗಳೂರು ನಗರವೊಂದೇ ಕರ್ನಾಟಕದ ಒಟ್ಟು ಠೇವಣಿಗಳಲ್ಲಿ 9 ಲಕ್ಷ ಠೇವಣಿ ಹೊಂದಿದ್ದು, ದಕ್ಷಿಣ ಭಾರತದಲ್ಲಿ ಎಯು ಎಸ್‌ಎಫ್‌ಬಿ ಹೊಂದಿರುವ ವಿಸ್ತರಣಾ ಕಾರ್ಯತಂತ್ರದ ಕೇಂದ್ರಸ್ಥಾನವಾಗಿದೆ. ಉತ್ತಮ ಮೂಲಸೌಕರ್ಯ, ವಿಲಾಸಿ ವಸತಿ ಯೋಜನೆಗಳು, ಗುಣಮಟ್ಟದ ಶಿಕ್ಷಣ ಸಂಸ್ಥೆಗಳು ಮತ್ತು ಆರೋಗ್ಯ ಸೇವೆಗಳ ಲಭ್ಯತೆಯಿಂದಾಗಿ ಸಂಜಯನಗರ ಉತ್ತಮ ಸ್ಥಾನವಾಗಿದೆ. ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದಗೌಡ ಅವರು ''ಬೆಂಗಳೂರು ಉದ್ಯಮ ಕೇಂದ್ರವಾಗಿದ್ದು, ರಾಜ್ಯದ ಮತ್ತು ರಾಷ್ಟ್ರದ ಅರ್ಥವ್ಯವಸ್ಥೆಗೆ ಗಣನೀಯ ಕೊಡುಗೆ ನೀಡುತ್ತಿದೆ. ಹಲವು ವರ್ಷಗಳಿಂದ ಎಯು ಎಸ್‌ಎಫ್‌ಬಿ ಗ್ರಾಹಕ ಕೇಂದ್ರಿತ ಬ್ಯಾಂಕಿಂಗ್ ಪರಿಹಾರಗಳನ್ನು ಒದಗಿಸುತ್ತಿರುವುದಕ್ಕೆ ಹೆಸರಾಗಿದೆ. ಈ ಶಾಖೆಯಿಂದಾಗಿ ಸಂಜಯನಗರದ ನಿವಾಸಿಗಳು ಪ್ರಯೋಜನ ಪಡೆಯಲಿದ್ದಾರೆ. ಉತ್ತಮ ಬ್ಯಾಂಕಿಂಗ್ ಸೇವೆ ಹೆಚ್ಚು ಪ್ರಮಾಣದಲ್ಲಿ ಉದ್ಯಮಿಗಳು ಮತ್ತು ಜನಸಾಮಾನ್ಯರಿಗೆ ದೊರೆಯುತ್ತಿದ್ದರೆ, ರಾಜ್ಯ ಇನ್ನಷ್ಟು ಸಂಪತ್ಭರಿತವಾಗುವುದರಲ್ಲಿ ಸಂಶಯವಿಲ್ಲ'' ಎಂದು ಹೇಳಿದರು. ಎಯು ಸ್ಮಾಲ್ ಫೈನಾನ್ಸ್ ಬ್ಯಾಂಕಿನ ಎಕ್ಸಿಕ್ಯೂಟಿವ್ ಡೈರೆಕ್ಟರ್ ಉತ್ತಮ್ ಟಿಬ್ರೆವಾಲ್ ಮಾತನಾಡಿ ''ಗ್ರಾಹಕ ಕೇಂದ್ರಿತ ಬ್ಯಾಂಕ್ ಆಗಿ ನಾವು ಬೆಂಗಳೂರಿನ ಗ್ರಾಹಕರಿಗೆ ದೀರ್ಘಾವಧಿ ಸಂಬಂಧ ಉಳಿಸಿಕೊಳ್ಳುವ ದೃಷ್ಟಿಯಿಂದಲೇ ಸೇವೆ ಒದಗಿಸುತ್ತಿದ್ದೇವೆ. ಇದುವರೆಗೂ ಬೆಂಗಳೂರಿನ ತಂತ್ರಜ್ಞಾನಪ್ರಿಯ ಗ್ರಾಹಕರಿಂದ ಸಕಾರಾತ್ಮಕ ಪ್ರತಿಕ್ರಿಯೆ ಮತ್ತು ನಂಬಿಕೆ ನಮಗೆ ದೊರಕಿದ್ದು, ನಮಗೆ ಇನ್ನಷ್ಟು ವಿಶ್ವಾಸ ತುಂಬಿದೆ. ಸಂಯುನಗರದಲ್ಲಿ ನಮ್ಮ ಎಲ್ಲ ಪ್ರಮುಖ ಸೇವೆಗಳು ದೊರೆಯಲಿವೆ ಎಂದರು.

# ನೀರಿಲ್ಲದೆ ಬಸ್ ನಿಲ್ದಾಣ ಶೌಚಾಲಯಕ್ಕೆ ಬೀಗ ಹಾಕಿದ ಸಾರಿಗೆ ಇಲಾಖೆ



**ಪಿರಿಯಾಪಟ್ಟಣ:** ರಾಜ್ಯದಲ್ಲಿ ಬರದ ಛಾಯೆ ಆವರಿಸಿದೆ ನಗರ ಪ್ರದೇಶಗಳಲ್ಲಿ ನೀರಿಗಾಗಿ ಪರದಾಡುತ್ತಿದ್ದಾರೆ ಆದರೆ ಪಿರಿಯಾಪಟ್ಟಣದಲ್ಲಿನ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣದಲ್ಲಿ ನೀರಿಲ್ಲದೆ ಶೌಚಾಲಯಕ್ಕೆ ಬೀಗ ಹಾಕಿರುವ ಘಟನೆ ನಡೆದಿದೆ ರಾಜ್ಯದ ಎಲ್ಲಾ ಸರ್ಕಾರಿ ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರ ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ ಶೌಚಾಲಯಗಳನ್ನು ನಿರ್ಮಿಸಲಾಗಿದೆ ಆದರೆ ಪಟ್ಟಣದಲ್ಲಿ ಕಳೆದ ನಾಲ್ಕು ದಿನಗಳಿಂದ ನೀರಿನ ಅಭಾವದ ನೆಪ ಹೇಳಿ ಶೌಚಾಲಯಕ್ಕೆ ಬೀಗ ಹಾಕಿ ಸಾರಿಗೆ ಇಲಾಖೆ ಜನರ ಆಕ್ರೋಶಕ್ಕೆ ಕಾರಣವಾಗಿದೆ

ಪಟ್ಟಣದ ಬಸ್ ನಿಲ್ದಾಣದ ಸುತ್ತಮುತ್ತಲಿನ ಪ್ರದೇಶದಲ್ಲಿ ಶಾಲಾ ಕಾಲೇಜುಗಳು, ತಾಲೂಕು ಆಸ್ಪತ್ರೆ, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಪೊಲೀಸ್ ಠಾಣೆ, ಶಿಕ್ಷಣ ಇಲಾಖೆ ಮತ್ತು ನೋಂದಣಿ ಇಲಾಖೆಯ ಕಚೇರಿಗಳಿದ್ದು, ದಿನನಿತ್ಯ ರೈತರು, ಮಹಿಳೆಯರು, ವಿದ್ಯಾರ್ಥಿಗಳು, ವಯೋವೃದ್ಧರು, ರೋಗಿಗಳು ಸೇರಿದಂತೆ ಸಾವಿರಾರು ಜನ ಬರುತ್ತಾರೆ ನೀರಿಲ್ಲವೆಂದು ಶೌಚಾಲಯ ನಿರ್ವಹಣೆ ಮಾಡಲಾಗದೆ ಬೀಗ ಹಾಕಿದ್ದರಿಂದ ಜನರು ಕಿರಿಕಿರಿ ಅನುಭವಿಸುತ್ತಿದ್ದಾರೆ ರಸ್ತೆಯ ಅಕ್ಕ ಪಕ್ಕದಲ್ಲಿ ಮೂತ್ರ ವಿಸರ್ಜಿಸಬೇಕಾದ ಅನಿವಾರ್ಯತೆ ಎದುರಾಗಿದೆ. ಈ ಕುರಿತು ಸಾರಿಗೆ ಇಲಾಖೆ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಪ್ರಯೋಜನವಾಗಿಲ್ಲ ಇವತ್ತು, ನಾಳೆ ರೆಡಿ ಮಾಡಿಸುತ್ತೇವೆ ಎಂದು ಸಬೂಬು ಹೇಳುತ್ತಿದ್ದಾರೆ ಎಂದು ಸಾರ್ವಜನಿಕರು ದೂರುತ್ತಿದ್ದಾರೆ. ಇನ್ನಾದರೂ ಇತ್ತಕಡೆ ಗಮನ ಹರಿಸಿ ಪಟ್ಟಣದ ಪ್ರಾಯಾಣಿಕರ ಕಷ್ಟವನ್ನು ಅರ್ಥ ಮಾಡಿಕೊಂಡು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿರುವ ಶೌಚಾಲಯಗಳಿಗೆ ಸಮರ್ಪಕ ನೀರು ಪೂರೈಕೆಮಾಡಿ ಶೌಚಾಲಯದ ಬೀಗ ತೆಗೆಯಬೇಕು ಎನ್ನುವುದು ಜನತೆಯ ಆಗ್ರಹವಾಗಿದೆ. ಪ್ರಯಾಣಿಕ ನಟರಾಜ್ ಮಾತನಾಡಿ ದಿನನಿತ್ಯ ಸಾವಿರಾರು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಕೆಲಸದ ನಿಮಿತ್ತ ಪಿರಿಯಾಪಟ್ಟಣಕ್ಕೆ ಬಸ್ ನಲ್ಲಿ ಬರುತ್ತೇನೆ ಜನರಿಗೆ ಶೌಚಾಲಯದ ಅಗತ್ಯತೆ ಹೆಚ್ಚಾಗಿದೆ. ಶೌಚಾಲಯಕ್ಕೆ ಬೀಗ ಹಾಕಿರುವುದರಿಂದ ಅಕ್ಕ ಪಕ್ಕದ ರಸ್ತೆಗಳ ಬಳಿ ಮೂತ್ರ ವಿಸರ್ಜಿಸಬೇಕಾದ ಅನಿವಾರ್ಯತೆ ಎದುರಾಗಿದೆ' ಎಂದು ಅಸಹಾಯಕತೆ ವ್ಯಕ್ತಪಡಿಸಿದರು.

# ಮತದಾನ ಜಾಗೃತಿ ಕಾರ್ಯಕ್ರಮ




**ಬೆಂಗಳೂರು:** ಲೋಕಸಭಾ ಚುನಾವಣೆಯಲ್ಲಿ ಸಾರ್ವಜನಿಕರ ಸಕ್ರಿಯ ಭಾಗವಹಿಸುವಿಕೆ, ಮತದಾನ ಕುರಿತು ಜಾಗೃತಿ ಮೂಡಿಸಲು ಮುಖ್ಯ ಚುನಾವಣಾಧಿಕಾರಿಗಳ ಕಚೇರಿ, ಬಿಬಿಎಂಪಿ ಮತ್ತು ನಗರದ ಕಾವೇರಿ ಆಸ್ಪತ್ರೆಯ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಮಹಿಳಾ ದಿನಾಚರಣೆ ವಿಶೇಷ ವಾಕಾಥಾನ್‌ನಲ್ಲಿ ಸಾವಿರಾರು ಹೆಣ್ಣುಮಕ್ಕಳು, ನಾಗರಿಕರು ಅತ್ಯುತ್ಸಾಹದಿಂದ ಭಾಗವಹಿಸಿದರು.

ಮಾರತಹಳ್ಳಿಯಲ್ಲಿರುವ ಕಾವೇರಿ ಆಸ್ಪತ್ರೆಯ ಆವರಣದಲ್ಲಿ ಭಾನುವಾರ ಬೆಳಗ್ಗೆ 6:30ಕ್ಕೆ ಖ್ಯಾತ ನಟಿ ಪ್ರಣಿತ ಸುಭಾ್? ಅವರು ವಾಕಾಥಾನ್, ಬೈಕ್ ರ್ಯಾಲಿ ಮತ್ತು ಬೈಸಿಕಲ್ ರ್ಯಾಲಿಗೆ ಚಾಲನೆ ನೀಡಿದರು.

ಸುಮಾರು 500 ಬೈಕುಗಳು 1200 ಸೈಕಲ್‌ಗಳು ಹಾಗೂ ನೂರಾರು ಸಂಖ್ಯೆಯಲ್ಲಿ ಸಾರ್ವಜನಿಕರು, ವಿಶೇಷವಾಗಿ ಮಹಿಳೆಯರು ಉತ್ಸಾಹದಿಂದ ಭಾಗವಹಿಸಿದರು. ಮಾರತಹಳ್ಳಿ ಸುತ್ತಮುತ್ತಲಿನ ಪ್ರದೇಶಗಳಲ್ಲಿ ನಡೆದ ವಾಕಾಥಾನ್ ವೇಳೆ ಮತದಾನದ ಮಹತ್ವದ ಕುರಿತು ಜಾಗೃತಿ ಮೂಡಿಸಲಾಯಿತು. ಈ ವೇಳೆ ಮಾತನಾಡಿದ ನಟಿ ಪ್ರಣಿತ ಸುಭಾ್?, ಇದೊಂದು ಅರ್ಥಪೂರ್ಣ ಕಾರ್ಯಕ್ರಮ. ಪ್ರಜಾಪ್ರಭುತ್ವದ ಅತಿ ದೊಡ್ಡ ಉತ್ಸವವಾಗಿರುವ ಲೋಕಸಭಾ ಚುನಾವಣೆಯಲ್ಲಿ ನಾವು ಮತದಾನ ಮಾಡುವ ಮೂಲಕ ಭಾಗವಹಿಸಬೇಕು. ಅದರಲ್ಲೂ ವಿಶೇಷವಾಗಿ ಹೆಣ್ಣು ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಮತಗಟ್ಟೆಗೆ ತೆರಳಿ ಮತದಾನ ಮಾಡಬೇಕು. ಮಹಿಳಾ ದಿನಾಚರಣೆ ಸಂದರ್ಭದಲ್ಲೇ ಈ ಮತದಾನ ಜಾಗೃತಿ ಕಾಯಕ್ರಮ ಆಯೋಜಿಸಿರುವುದು ಸ್ಫೂರ್ತಿದಾಯಕ. ನಾಗರಿಕರು ತಮಗೆ ಏನು ಬೇಕು? ಏನು ಬೇಡ ಎನ್ನುವ ಕುರಿತಾದ ದೇಶದ ಅಭಿವೃದ್ಧಿ ಕುರಿತಾದ ಪರಿಕಲ್ಪನೆಗಳು ಸಾಕಾರಗೊಳ್ಳಲು ಮತದಾನದ ಹಕ್ಕು ಚಲಾಯಿಸುವುದು ಅವಶ್ಯಕ ಎಂದು ಹೇಳಿದರು.

ದೇಶದ ಐಟಿ ರಾಜಧಾನಿ ಆಗಿರುವ ಬೆಂಗಳೂರಿನಲ್ಲಿ ನಾಗರಿಕರು ತಪ್ಪದೇ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಬೇಕು. ತಮ್ಮ ಪರಿಚಿತರಿಗೆ, ಸ್ನೇಹಿತರಿಗೆ ಮತದಾನ ಮಾಡುವಂತೆ ತಿಳಿಸಬೇಕು. ಪ್ರಜಾಪ್ರಭುತ್ವದ ಯಶಸ್ಸು ನಾಗರಿಕರು ಮತ ಚಲಾವಣೆಯಿಂದ ನಿರ್ಧಾರವಾಗುತ್ತದೆ ಎಂದು ಬಿಬಿಎಂಪಿ ಚುನಾವಣೆಗಳ ವಿಶೇಷ ಆಯುಕ್ತರಾದ ಡಾ. ಆರ್. ಸೇಲ್ವಮಣಿ ಹೇಳಿದರು. ಚುನಾವಣಾ ಆಯೋಗದ ಮಾಧ್ಯಮ ಮುಖ್ಯಸ್ಥರಾದ ಜಡಿಯಪ್ಪ ಗೆದ್ಲಗಟ್ಟಿ, ಕಾವೇರಿ ಆಸ್ಪತ್ರೆಯ ಕಾರ್ಯನಿರ್ವಾಹಕ ನಿರ್ದೇಶಕ ಡಾ. ಎಸ್. ವಿಜಯಭಾಸ್ಕರನ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಕಠಿಣ ಪರಿಶ್ರಮವೇ ಯಶಸ್ಸಿನ ಗುಟ್ಟು



**ಚಾಮರಾಜನಗರ:** ಸತತ ಅಧ್ಯಯನ, ಆತ್ಮವಿಶ್ವಾಸ ಯಶಸ್ಸಿನ ಮೂಲವಾಗಿವೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ರಾಮಚಂದ್ರ ರಾಜೇ ಅರಸ್ ಅವರು ಅಭಿಪ್ರಾಯಪಟ್ಟರು.

ನಗರದ ಸಂತ ಪೌಲರ ಪ್ರೌಢಶಾಲೆಯಲ್ಲಿ ಶನಿವಾರ (ಮಾ. 16) ಚಾಮರಾಜನಗರ ತಾಲೂಕು ಶಿಕ್ಷಣ ಇಲಾಖೆ ವತಿಯಿಂದ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಗೆ ಸಿದ್ಧರಾಗುತ್ತಿರುವ ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾಗಿದ್ದ ಪರೀಕ್ಷಾ ಮಾರ್ಗದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮದೆ ಆದ ಗುರಿ ಇಟ್ಟುಕೊಂಡು ವೇಳಾ ಪಟ್ಟಿ ಸಿದ್ದಪಡಿಸಿಕೊಂಡು ಅಧ್ಯಯನ ಮಾಡಿ ಪರೀಕ್ಷೆಗೆ ಸಿದ್ದರಾಗಬೇಕು. ಕಠಿಣ ವಿ?ಯಗಳನ್ನು ಬರೆದು ಅಭ್ಯಾಸ ಮಾಡಬೇಕು. ವ?ರ್ವವೆಲ್ಲ ಕೇಳಿದ, ಓದಿದ ವಿ?ಯಗಳನ್ನು ಪರೀಕ್ಷೆಯ ದಿನದ ನಿಗದಿತ ಸಮಯದಲ್ಲಿ ಪರಿಣಾಮಕಾರಿಯಾಗಿ ಪ್ರಸ್ತುತ ಪಡಿಸುವುದೇ ಮುಖ್ಯವಾಗಿರುತ್ತದೆ. ಹಾಗಾಗಿ ಸಮಯ ನಿರ್ವಹಣೆ, ಅಂದವಾದ ಬರವಣಿಗೆ, ಅಂಕಗಳಿಗೆ ಅನುಸಾರ ಉತ್ತರ ಬರೆಯುವಿಕೆ ಕಡೆಗೆ ಹೆಚ್ಚಿನ ಗಮನ ನೀಡಿ ಎಂದು ರಾಮಚಂದ್ರ ರಾಜೇ ಅರಸ್ ಅವರು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಕ್ಷೇತ್ರ ಶಿಕ್ಷಣಾಧಿಕಾರಿ ಸೋಮಣ್ಣೇಗೌಡ ಅವರು ಮಾತನಾಡಿ ಹತ್ತನೇ ತರಗತಿ ವಾರ್ಷಿಕ ಪರೀಕ್ಷೆ ಯಲ್ಲಿ ಎಲ್ಲಾ ವಿದ್ಯಾರ್ಥಿಗಳು ಗುಣ ಮಟ್ಟದ ಫಲಿತಾಂಶ ಪಡೆಯಲು ಇಂತಹ ಮಾರ್ಗದರ್ಶನ ಕಾರ್ಯಕ್ರಮ ಉಪಯುಕ್ತ ವಾಗಿದೆ. ಇದರ ಸದುಪಯೋಗ ಪಡೆಯುವಂತೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ಶಿಕ್ಷಕರಾದ ಕೆಸ್ತೂರು ಪ್ರೌಢಶಾಲೆಯ ಕನ್ನಡ ಭಾ?ಾ ಶಿಕ್ಷಕರಾದ ಶಿವಕುಮಾರ ಸ್ವಾಮಿ, ಗೂಳಿಪುರ ಪ್ರೌಢಶಾಲೆಯ ಹೇಮಚಂದ್ರ, ಆದರ್ಶ ವಿದ್ಯಾಲಯದ ಹರವಿ ಬಸವರಾಜು, ಬಾಲಕರ ಪ್ರೌಢಶಾಲೆಯ ಬಸವಲಿಂಗಪ್ಪ, ಹರದನಹಳ್ಳಿ ಪ್ರೌಢಶಾಲೆಯ ನಾಗರಾಜು ವಿಷಯವಾರು ವಿದ್ಯಾರ್ಥಿಗಳ ಪರೀಕ್ಷಾ ಸಿದ್ದತೆ ಬಗ್ಗೆ ಹಾಗೂ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸುವ ಬಗ್ಗೆ ಮಾರ್ಗದರ್ಶನ ನೀಡಿದರು.

ಶಿಕ್ಷಣ ಸಂಯೋಜಕ ಹಾಗೂ ಪರೀಕ್ಷಾ ನೋಡಲ್ ಅಧಿಕಾರಿ ಸಿದ್ದಮಲ್ಲಪ್ಪ, ನೇಮಿರಾಜ್, ಮುಖ್ಯ ಶಿಕ್ಷಕರಾದ ಕುಳಂದೈಸ್ವಾಮಿ, ಮಂಜುಳಾ, ಅರ್ಕಪ್ಪ, ನಟರಾಜು, ಸಿದ್ದರಾಜು, ಸುಮನಕುಮಾರಿ, ಗೌರಮ್ಮ, ರಾಜಶೇಖರ್, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಚಾ.ನಗರ ಲೋಕಸಭಾ ಕ್ಷೇತ್ರದಿಂದ ನಾನು ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿ

**ಚಾಮರಾಜನಗರ:** ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಚಾಮರಾಜನಗರ ಮೀಸಲು ಕ್ಷೇತ್ರದಿಂದ ನಾನು ಕೂಡ ಕಾಂಗ್ರೆಸ್‌ನಿಂದ ಪ್ರಬಲ ಟಿಕೆಟ್ ಆಕಾಂಕ್ಷಿಯಾಗಿದ್ದೇನೆ ಎಂದು ವಕೀಲರಾದ ಪಿ.ಪುರುಷೋತ್ತಮ್ ಹೇಳಿದರು. ನಗರದ ಖಾಸಗಿ ಹೋಟಲ್ ವೊಂದರಲ್ಲಿ ಸಭೆ ನಡೆಸಿ, ನಾನು ಚಾಮರಾಜನಗರ ಟೌನ್ ರಾಮಸಮುದ್ರ ಬಡಾವಣೆಯ ನಿವಾಸಿಯಾಗಿದ್ದು, ಕಳೆದ 30ವರ್ಷಗಳಿಂದ ಕಾಂಗ್ರೆಸ್‌ನಲ್ಲಿ ಮೂಲ ಕಾಂಗ್ರೆಸ್ಸಿಗನಾಗಿ ಸಕ್ರಿಯವಾಗಿ ಗುರುತಿಸಿಕೊಂಡಿದ್ದೇನೆ. ಎಲ್ಲ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸುತ್ತಾ ಬಂದಿದ್ದೇನೆ ಎಂದರು. ನಮ್ಮ ತಂದೆಯವರಾದ ಎಚ್. ಎಂ.ಪುಟ್ಟಮಾದಯ್ಯ, ತಾತ ಪಿ.ಬಸವಣ್ಣ ಅವರು ಕೂಡ ಮೂಲ ಕಾಂಗ್ರೆಸ್ಸಿಗರಾಗಿದ್ದರು. ದಿವಗಂತ ಮಾಜಿ ಸಂಸದ ಆರ್. ಧ್ರುವನಾರಾಯಣ್ ಅವರು ಕೂಡ ನಮ್ಮ ದೊಡ್ಡಪ್ಪನ ಮಗ ಆಗಿದ್ದರು. ಅವರ ಕಾಲವಾದ ನಂತರ ಅವರ ಸ್ಥಾನವನ್ನು ತುಂಬುವ ಸಲುವಾಗಿ ನಾನು ಕಾಂಗ್ರೆಸ್ ಪಕ್ಷದ ಟಿಕೆಟ್ ಆಕಾಂಕ್ಷಿಯಾಗಿದ್ದೇನೆ ನಾನು ಸ್ಥಳೀಕನಾಗಿರುವುದರಿಂದ ಪಕ್ಷದ ವರಿಷ್ಠರು ನನಗೊಂದು ಅವಕಾಶ ಮಾಡಿಕೊಡಬೇಕು ಎಂದು ಮನವಿ ಮಾಡಿದರು. ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಭೇಟಿ ಮಾಡುವುದಾಗಿ ತಿಳಿಸಿದರು. ವಕೀಲರಾದ ರಾಜಣ್ಣ ಮಹದೇವಸ್ವಾಮಿ ತೇಜಸ್ವಿ ಮೈತ್ರಿ ಭಾಗವಹಿಸಿದ್ದರು.



# ನನಗೆ ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯತ್ವ ಬೇಡ: ಸಿಎಂಗೆ ಅಕ್ಕಯ್ ಪದ್ಮಶಾಲಿ ಪತ್ರ

**ಬೆಂಗಳೂರು:** ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯತ್ವದಿಂದ ನನ್ನ ಹೆಸರು ಕೈಬಿಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಗೆ ಲೈಂಗಿಕ ಅಲ್ಪಸಂಖ್ಯಾತರ ಪರ ಹೋರಾಟಗಾರ್ತಿ ಅಕ್ಕಯ್ ಪದ್ಮಶಾಲಿ ಬರೆದಿದ್ದಾರೆ. ನಿನ್ನೆ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಸದಸ್ಯರನ್ನಾಗಿ ಅಕ್ಕಯ್ ಪದ್ಮಶಾಲಿ ಅವರನ್ನು ಸರ್ಕಾರ ಆಯ್ಕೆ ಮಾಡಿತ್ತು. ಈಗ ಸದಸ್ಯತ್ವ ಬೇಡ ಎಂದು ಸರ್ಕಾರಕ್ಕೆ ಅಕ್ಕಯ್ ಪದ್ಮಶಾಲಿ ಪತ್ರ ಬರೆದಿದ್ದಾರೆ.ನಮ್ಮ ಸಮುದಾಯದ ಶೇಯೋಭಿವೃದ್ಧಿಗಾಗಿ ಕರ್ನಾಟಕ ವಿಧಾನ ಪರಿಷತ್ ಅಥವಾ ರಾಜ್ಯಸಭೆಯ ಸದಸ್ಯತ್ವ ನೀಡಬೇಕಾಗಿ ಮನವಿ ಮಾಡಿದ್ದಾರೆ. ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯತ್ವ ನೀಡಿದ್ದಕ್ಕೆ ಸಂತೋಷ ಇದೆ. ಆದರೆ ನನ್ನ ಸಮುದಾಯದ ಸರ್ವತೋಮುಖ ಅಭಿವೃದ್ಧಿಗಾಗಿ ಪ್ರಾತಿನಿಧ್ಯ ನೀಡುವಂತೆ ಕೋರಿದ್ದಾರೆ.

**ಪತ್ರದಲ್ಲೇನಿದೆ?:** ಕರ್ನಾಟಕ ಸಾಹಿತ್ಯ ಅಕಾಡೆಮಿಯ ಸದಸ್ಯರನ್ನಾಗಿ ನನ್ನನ್ನು ಗುರುತಿಸಿ ಆಯ್ಕೆ ಮಾಡಿರುವುದಕ್ಕೆ ತಮಗೆ ಹಾಗೂ ತಮ್ಮ ನೇತೃತ್ವದ ಸರ್ಕಾರಕ್ಕೆ ಅಭಿನಂದನೆ ಸಲ್ಲಿಸುತ್ತಿದ್ದೇನೆ. ಆದರೆ ನನ್ನ ಸದಸ್ಯತ್ವವನ್ನು ಕೈಬಿಡಬೇಕಾಗಿ ಮನವಿ ಮಾಡಿಕೊಳ್ಳುತ್ತಿದ್ದೇನೆ. ಲೈಂಗಿಕ ಅಲ್ಪಸಂಖ್ಯಾತ ಸಮುದಾಯದ ಸಾಮಾಜಿಕ ಹಾಗೂ ರಾಜಕೀಯದ ವಿಚಾರವಾಗಿನ ನನ್ನ ಹೋರಾಟವು ಪ್ರಪಂಚದಾದ್ಯಂತ ಪಸರಿಸಿದೆ. ನಮ್ಮ ಸಮುದಾಯದ ಸಂಪೂರ್ಣ ಶ್ರೇಯೋಭಿವೃದ್ಧಿಗಾಗಿ ಹಾಗೂ ಸಾಮಾಜಿಕ ಬಹಿಷ್ಕಾರದ ವಿರುದ್ಧ ನನ್ನ ಹೋರಾಟ ಮುಂದುವರಿಸಲಿದ್ದೇನೆ. ತಾವು ಇದರ ಬಗ್ಗೆ ಗಮನಹರಿಸಿ ನನ್ನನ್ನು ಮುಂಬರುವ ಕರ್ನಾಟಕ ರಾಜ್ಯ ವಿಧಾನ ಪರಿಷತ್ತಿನ ಸದಸ್ಯರನ್ನಾಗಿ ಅಥವಾ ರಾಜ್ಯಸಭೆ ಸದಸ್ಯರನ್ನಾಗಿ ಸ್ಥಾನಮಾನ ನೀಡಿ. ಶಾಸನಸಭೆಯ ಭಾಗವಾಗಿ ನಮ್ಮ ಸಮುದಾಯದ ರಾಜಕೀಯ ಪ್ರಾತಿನಿಧ್ಯವನ್ನು ಸರ್ವ ಜನಾಂಗದ ಶಾಂತಿಯ ತೋಟದ ನಾಡಿನಲ್ಲಿ ಸಾಕ್ಷಿಯಾಗಬೇಕಾಗಿರುವ ವಾತಾವರಣ ನಿರ್ಮಾಣವಾಗಬೇಕಿದೆ. ಇದರ ಬಗ್ಗೆ ತಾವು ವಿಶೇಷ ಕಾಳಜಿವಹಿಸಿ ಕ್ರಮವಹಿಸಿಬೇಕೆಂದು ವಿನಂತಿಸುತ್ತೇನೆ ಎಂದು ಅಕ್ಕಯ್ ಪದ್ಮಶಾಲಿ ಪತ್ರದಲ್ಲಿ ಆಶಯ ವ್ಯಕ್ತಪಡಿಸಿದ್ದಾರೆ.



# ಸಿಸಿ ರಸ್ತೆ, ಚರಂಡಿ ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿಪೂಜೆ



**ಚಾಮರಾಜನಗರ:** ಚಾಮರಾಜನಗರದ ವಿಧಾನಸಭೆ ಕ್ಷೇತ್ರ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ಸಿಸಿ ರಸ್ತೆ, ಚರಂಡಿ ಅಭಿವೃದ್ಧಿ ಕಾಮಗಾರಿಗಳಿಗೆ ಶನಿವಾರ ಬೆಳಗ್ಗೆ ಎಂಎಸ್‌ಐಎಲ್‌ಅಧ್ಯಕ್ಷರಾದ ಶಾಸಕ ಸಿ.ಪುಟ್ಟರಂಗಶೆಟ್ಟಿ ಗುದ್ದಲಿಪೂಜೆ ನೆರವೇರಿಸಿದರು.

ತಾಲೂಕಿನ ನಾಗವಳ್ಳಿ, ಆಲೂರು, ಕೋಡಿಮೋಳೆ, ನಂಜೇದೇವನಪುರ, ಕಾಗಲವಾಡಿಮೋಳೆ, ತಮ್ಮಡಹಳ್ಳಿ, ಮೇಗಲಹುಂಡಿ, ವಡ್ಗಲ್ ಪುರ, ಮಂಗಲ, ಮಾದಾಪುರ, ಹಳೇಹೊಸಬ್ಯಾಡಮೂಡ್ಲು, ಚಿಕ್ಕಮೋಳೆ, ಯಾನಗಳ್ಳಿ, ಉಗನೇದಗಹುಂಡಿ, ಬೆಂಡರವಾಡಿ, ಮರಿಯಾಲ, ಕೆಲ್ಲಂಬಳ್ಳಿಬಸವನಪುರ, ಕಿರಗಸೂರು, ಜಾಲಹಳ್ಳಿಹುಂಡಿ, ಮೂಡ್ಲುಮೋಳೆ, ಯಣಗುಂಬ, ಮಂಚುಗುಂಡಿಪುರ, ಬಂದಿಗೌಡನಹಳ್ಳಿ, ಬೊಕ್ಕೆಪುರ ಮರಿಯಾಲ, ಚಂದಕವಾಡಿ, ಕಾಡಳ್ಳಿ ಶಾಲಾಕೊಠಡಿ ನಿರ್ಮಾಣಕ್ಕೆ ಗುದ್ದಲಿಪೂಜೆ ನೆರವೇರಿಸಲಾಯಿತು.

ಇದೇವೇಳೆ ಅವರು ಮಾತನಾಡಿ, ತಮ್ಮ ವಿಧಾನಸಭೆಕ್ಷೇತ್ರ ವ್ಯಾಪ್ತಿಯ ಗ್ರಾಮಗಳಲ್ಲಿ ಸಿಸಿರಸ್ತೆ ಮತ್ತುಚರಂಡಿಸೌಲಭ್ಯಗಳಿಲ್ಲದಿರುವುದನ್ನು ಮನಗಂಡುಇಂದು ಅವುಗಳ ನಿರ್ಮಾಣಕಾರ್ಯಕ್ಕೆಗುದ್ದಲಿಪೂಜೆ ನೆರವೇರಿಸಲಾಗಿದೆ.ಕಾಮಗಾರಿ ನಿರ್ವಹಣೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ತ್ವರಿತಗತಿಯಲ್ಲಿ ಕಾಮಗಾರಿಆರಂಭಿಸಿ ಸಾರ್ವಜನಿಕರಿಗೆ ಲೋಕಾರ್ಪಣೆ ಮಾಡಬೇಕುಎಂದು ಸೂಚಿಸಿದರು. ಗ್ರಾಪಂಅಧ್ಯಕ್ಷರಾದರೂಪೇಶ್,ಅಣ್ಣಪ್ಪಸ್ವಾಮಿ, ಕುಮಾರಸ್ವಾಮಿ, ರಮೇಶ್, ದುಂಡಮ್ಮ. ಮಂಜುಳಾ, ಗೀತ, ಲಾವಣ್ಯ, ಮಂಗಳಮ್ಮ, ದಾಕ್ಷಾಯಣಮ್ಮಉಪಾಧ್ಯಕ್ಷೆಜ್ಯೋತಿ, ಸದಸ್ಯರು, ಎಪಿಎಂಸಿ ಅಧ್ಯಕ್ಷ ಸೋಮೇಶ್, ಸದಸ್ಯ ಎ.ಎಸ್.ಪ್ರದೀಪ್, ತಾ.ಪಂ ಮಾಜಿಅಧ್ಯಕ್ಷಚಿಕ್ಕಮಹದೇವ, ಮಾಜಿಅಧ್ಯಕ್ಷ ಬಿ.ಕೆ. ರವಿಕುಮಾರ್, ಮಾಜಿಸದಸ್ಯ ಶಿವಸ್ವಾಮಿ, ಎ.ಎಸ್‌ಗುರುಸವಾಮಿ, ರಾಜೇಂದ್ರ,ಕೋಡಿಮೋಳೆ ಗೋವಿಂದಶೆಟ್ಟಿ, ಪ್ರಕಾಶ್, ಪಿ,ಲಿಂಗರಾಜು, ಬಿಸಲವಾಡಿರವಿ, ಸಿದ್ದರಾಜು, ದೂಡ್ಡಸ್ವಾಮಿ, ರಾಜಶೇಖರ್, ಕುಮಾರ್, ಪ್ರವೀಣ್, ನಾಗಯ್ಯ,ನಾಗರಾಜು, ದೂರಸ್ವಾಮಿ,ಕೆ,ಆರ್,ಡಿ,ಎಲ್ ,ಇಂಜಿನಿಯರ್,ಮಧು ಗ್ರಾಮದ ಗ್ರಾಮಸ್ಥರು ಹಾಜರಿದ್ದರು.

# ನೀತಿ ಸಂಹಿತೆ ಕಟ್ಟುನಿಟ್ಟಾಗಿ ಪಾಲಿಸಿ

## ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಸಭೆ



**ಚಾಮರಾಜನಗರ:** ಮುಕ್ತ, ನ್ಯಾಯಸಮ್ಮತ ಹಾಗೂ ಪಾರದರ್ಶಕವಾಗಿ ಚುನಾವಣೆ ನಡೆಸಲು ರಾಜಕೀಯ ಪಕ್ಷಗಳ ಸಹಕಾರ ಅಗತ್ಯವಾಗಿದ್ದು, ಚುನಾವಣಾ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಲೋಕಸಭಾ ಸಾರ್ವತ್ರಿಕ ಚುನಾವಣಾ ಸಂಬಂಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚುನಾವಣಾ ಆಯೋಗ ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ವೇಳಾಪಟ್ಟಿ ಪ್ರಕಟಿಸಿದ್ದು, ನೀತಿ ಸಂಹಿತೆ ಈಗಾಗಲೇ ಜಾರಿಯಲ್ಲಿದೆ. ಚುನಾವಣೆ ಪ್ರಕ್ರಿಯೆಯು ಮುಕ್ತಾಯಗೊಳ್ಳುವ ಜೂನ್ 6ರ ವರೆಗೂ ಸದಾಚಾರ ಸಂಹಿತೆ ಜಾರಿಯಲ್ಲಿರುತ್ತದೆ. ರಾಜಕೀಯ ಪಕ್ಷಗಳು ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಅನುಸರಿಸಬೇಕು. ನೀತಿ ಸಂಹಿತೆ ಪಾಲನೆ ಸಂಬಂಧ ನಿಗಾ ವಹಿಸಲು ವಿವಿಧ ತಂಡಗಳು ಕಾರ್ಯನಿರ್ವಹಿಸುತ್ತಿವೆ ಎಂದರು.

ಮಾರ್ಚ್ 28ರಂದು ಚುನಾವಣೆಗೆ ಅಧಿಸೂಚನೆ ಹೊರಡಿಸಲಾಗುತ್ತದೆ. ನಾಮಪತ್ರ ಸಲ್ಲಿಸಲು ಏಪ್ರಿಲ್ 4 ಕಡೆಯ ದಿನವಾಗಿದೆ. ನಾಮಪತ್ರಗಳ ಪರಿಶೀಲನಾ ಕಾರ್ಯ ಏಪ್ರಿಲ್ 5ರಂದು ನಡೆಯಲಿದೆ. ಉಮೇದುವಾರಿಕೆ ಹಿಂಪಡೆಯಲು ಏಪ್ರಿಲ್ 8 ಕೊನೆಯ ದಿನವಾಗಿದೆ. ಏಪ್ರಿಲ್ 26ರಂದು ಮತದಾನ ನಡೆಯಲಿದೆ. ಜೂನ್ 4ರಂದು ಮತ ಎಣಿಕೆ ಕಾರ್ಯ ನಡೆಯಲಿದೆ. ಜೂನ್ 6ರಂದು ಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ನಾಮಪತ್ರ ಸ್ವೀಕರಿಸಲಾಗುತ್ತದೆ. ಚುನಾವಣೆಯಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳು ನಾಮಪತ್ರದ ನಮೂನೆ-2ಎ ಜೊತೆಗೆ ತಿದ್ದುಪಡಿಯಾಗಿರುವ ನಮೂನೆ-26ರ ಅಫಿಡವಿಟ್ ಸಲ್ಲಿಸಬೇಕು. ಅಲ್ಲದೆ ಅಭ್ಯರ್ಥಿಗಳು ಸರ್ಕಾರಕ್ಕೆ ಪಾವತಿಸಬೇಕಾದ ಬಾಕಿ ಯಾವುದು ಇರುವುದಿಲ್ಲ ಎಂಬ ಬಗ್ಗೆ ದೃಢೀಕರಣ ಪತ್ರ ನೀಡಬೇಕು. ನಾಮಪತ್ರದೊಂದಿಗೆ ಇತರೆ ಸಂಬಂಧಪಟ್ಟ ಸೂಚಿಸಿರುವ ದಾಖಲಾತಿಗಳನ್ನು ಸಲ್ಲಿಸಬೇಕು ಎಂದು ತಿಳಿಸಿದರು. ಚುನಾವಣೆಯಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳು ಹಾಗೂ ರಾಜಕೀಯ ಪಕ್ಷಗಳು ರಾತ್ರಿ 10ರಿಂದ ಬೆಳಿಗ್ಗೆ 6 ಗಂಟೆಯವರೆಗೆ ಯಾವುದೇ ತರಹದ ಧ್ವನಿವರ್ಧಕಗಳನ್ನು ಚುನಾವಣಾ ಪ್ರಚಾರಕ್ಕಾಗಿ ಬಳಸುವಂತಿಲ್ಲ, ರಾಜಕೀಯ ಪಕ್ಷಗಳು, ಸ್ಪರ್ಧಿಸುವ ಅಭ್ಯರ್ಥಿಗಳು ಸಭೆ, ಸಮಾರಂಭ ನಡೆಸಲು ಮತ್ತು ಚುನಾವಣಾ ಪ್ರಚಾರಕ್ಕಾಗಿ ಅನುಮತಿ ನೀಡುವ ಸಂಬಂಧ ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಹಾಗೂ ಚಾಮರಾಜನಗರ ಲೋಕಸಭಾ ಕ್ಷೇತ್ರದ 8 ವಿಧಾನಸಭಾ ಕ್ಷೇತ್ರಗಳ ಸಹಾಯಕ ಚುನಾವಣಾ ಆಧಿಕಾರಿಗಳ ಕಚೇರಿಯಲ್ಲಿ ಏಕಗವಾಕ್ಷಿ ಕೇಂದ್ರ (ಸಿಂಗಲ್ ವಿಂಡೋ ಸಿಸ್ಟಮ್) ಸ್ಥಾಪಿಸಲಾಗಿದೆ. ಕನಿಷ್ಠ ಮೂರು ದಿನಗಳ ಮೊದಲು ಅರ್ಜಿ ಸಲ್ಲಿಸಿ ಅನುಮತಿ ಪಡೆಯಬಹುದಾಗಿದೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು. ಚುನಾವಣೆಗೆ ಸ್ಪರ್ಧಿಸುವ ಅಭ್ಯರ್ಥಿಗಳಿಗೆ ಚುನಾವಣಾ ವೆಚ್ಚದ ಗರಿಷ್ಠಮಿತಿ 95 ಲಕ್ಷರೂ. ಗಳಾಗಿದೆ. ಅಭ್ಯರ್ಥಿಗಳು ಪ್ರತಿದಿನ ಚುನಾವಣಾ ಖರ್ಚು ವೆಚ್ಚಗಳನ್ನು ಸಲ್ಲಿಸಬೇಕಾಗಿದೆ. ಸ್ಪರ್ಧಿಸುವ ಪ್ರತಿ ಅಭ್ಯರ್ಥಿಯು ಚುನಾವಣಾ ಫಲಿತಾಂಶ ಘೋಷಣೆಯಾದ 30 ದಿನದೊಳಗೆ ಚುನಾವಣಾ ವೆಚ್ಚಗಳ ಲೆಕ್ಕದ ಯಥಾ ಪ್ರತಿಯೊಂದನ್ನು ಚುನಾವಣಾಧಿಕಾರಿಗಳಿಗೆ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ರಾಜಕೀಯ ಪಕ್ಷಗಳ ಪ್ರತಿನಿಧಿಗಳಾದ ನಸ್ರುಲ್ಲಾ ಖಾನ್, ನಾಗಯ್ಯ, ವೃಷಭೇಂದ್ರಪ್ಪ, ಮಹದೇವಪ್ರಸಾದ್, ಎಸ್. ಮಹೇಶ್ ಗೌಡ, ಬ್ಯಾಡಮೂಡ್ಲು ಬಸವಣ್ಣ ಸಭೆಯಲ್ಲಿ ಉಪಸ್ಥಿತರಿದ್ದರು.

# ಭವಿಷ್ಯದ ಬೆಳಕು ಮತದಾರರ ಜಾಗೃತಿ ಕಾರ್ಯಕ್ರಮ



**ಚಾಮರಾಜನಗರ:** ಚಾಮರಾಜನಗರ ತಾಲೂಕಿನ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಭವಿಷ್ಯದ ಬೆಳಕು ಮತದಾರರ ಜಾಗ್ರತಿ ಕಾರ್ಯಕ್ರಮದ ಅಂಗವಾಗಿ ವಿವಿಧ ಸ್ಪರ್ಧೆಗಳನ್ನು ಜೆ.ಎಸ್.ಎಸ್. ಬಾಲಕರ ಹಾಗೂ ಬಾಲಕಿಯರ ಪ್ರೌಢಶಾಲೆಯಲ್ಲಿ ಇತ್ತೀಚಿಗೆ ಹಮ್ಮಿಕೊಳ್ಳಲಾಗಿತ್ತು. ಶಾಲಾ ಮಕ್ಕಳಿಗೆ ಚಿತ್ರಕಲೆ, ಪ್ರಬಂಧ, ಚರ್ಚಾಸ್ಪರ್ಧೆ, ಕ್ಷೇತ್ರಭೇಟಿ, ನಾಟಕ, ವೀಡಿಯೋ, ಪೋಷಕರಿಗೆ ಪತ್ರ ಬರೆಯುವ ಸ್ಪರ್ಧೆ, ಇತರೆ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜೆ.ಎಸ್.ಎಸ್. ಬಾಲಕರ ಪ್ರೌಢಶಾಲೆಯ ಮುಖ್ಯ ಶಿಕ್ಷಕರಾದ ಸಿದ್ದಪ್ಪನವರು ಮಾತನಾಡಿ ಮತದಾನ ಮಹತ್ವದ ಬಗ್ಗೆ ವಿವರವಾಗಿ ತಿಳಿಸಿಕೊಟ್ಟರು. ಜೆ.ಎಸ್.ಎಸ್. ಬಾಲಕಿಯರ ಪ್ರೌಢಶಾಲೆಯ ಮುಖ್ಯ ಶಿಕ್ಷಕರಾದ ನಾಗೇಶ್ವರಿ ಅವರು ಪ್ರಜಾಪ್ರಭುತ್ವದಲ್ಲಿ ಮತದಾನದ ಪ್ರಾಮುಖ್ಯತೆ ಹಾಗೂ ಈ ಬಗ್ಗೆ ಅರಿವು ಮೂಡಿಸಬೇಕಾದ ವಿಷಯಗಳ ಕುರಿತು ವಿವರಿಸಿದರು.

# ಅರ್ಚಕ ಕುಟುಂಬಗಳ ನಡುವೆ ಪ್ರತಿಷ್ಠೆಯ ಜಗಳ: ಬ್ರಹ್ಮರಥೋತ್ಸವ ರದ್ದು

**ಕೋಲಾರ:** ಎರಡು ಅರ್ಚಕ ಕುಟುಂಬಗಳ ನಡುವೆ ಇರುವ ಪ್ರತಿಷ್ಠೆಯಿಂದ ಗೌರಿಗಂಗಾಧರೇಶ್ವರ ಸ್ವಾಮಿ ಬ್ರಹ್ಮರಥೋತ್ಸವಕ್ಕೆ ತಡೆಯಾಜ್ಞೆ ತಂದಿರುವ ಘಟನೆ ಕೋಲಾರದಲ್ಲಿ ನಡೆದಿದೆ. ಕೋಲಾರ ತಾಲೂಕು ತೇರಹಳ್ಳಿ ಗ್ರಾಮದ ಪುರಾತನ ಗೌರಿಗಂಗಾಧರೇಶ್ವರ ಸ್ವಾಮಿ ದೇವಾಲಯದ ಬ್ರಹ್ಮರಥೋತ್ಸವ ಮಾರ್ಚ್ 17 ರಂದು ನಡೆಯಬೇಕಿತ್ತು. ಆದರೆ ಅರ್ಚಕರ ಕುಟುಂಬಗಳ ನಡುವಿನ ವಿವಾದದ ನಡೆದ ಕಾರಣ ಹೈಕೋರ್ಟ್ ತಡೆಯಾಜ್ಞೆ ನೀಡಿದ್ದು ಬ್ರಹ್ಮರಥೋತ್ಸವವನ್ನು ಮುಂದೂಡಲಾಗಿದೆ. ಅರ್ಚಕರಾದ ಮಂಜುನಾಥ್ ದೀಕ್ಷಿತ್ ಹಾಗೂ ಚಂದ್ರಶೇಖರ ದೀಕ್ಷಿತ್ ನಡುವೆ ರಥೋತ್ಸವ ಮಾಡುವ ವಿಚಾರದಲ್ಲಿ ಮೊದಲಿನಿಂದಲೂ ವಿವಾದ ಇತ್ತು. ಆದರೆ ಮುಜರಾಯಿ ತಹಶಿಲ್ದಾರ್ ಮಾರ್ಚ್ 17 ರಂದು ಬ್ರಹ್ಮರಥೋತ್ಸವಕ್ಕೆ ಅನುಮತಿ ನೀಡಿದ್ದರು. ಆಗಮ ಶಾಸ್ತ್ರದ ಪ್ರಕಾರ ಒಂದೇ ವರ್ಷದಲ್ಲಿ ಎರಡು ಬಾರಿ ಬ್ರಹ್ಮರಥೋತ್ಸವ ಮಾಡಬಾರದೆಂದು ಕೋರಿ ಮಂಜುನಾಥ್ ದೀಕ್ಷಿತ್ ಕೋರ್ಟ್ ಮೊರೆ ಹೋಗಿದ್ದರು. ಹೈಕೋರ್ಟ್ ತಡೆಯಾಜ್ಞೆ ಹಿನ್ನಲೆ ನಿಗದಿ ಮಾಡಿದ್ದ ಬ್ರಹ್ಮರಥೋತ್ಸವ ರದ್ದು ಮಾಡಿ ತಹಶೀಲ್ದಾರ್ ಆದೇಶ ಮಾಡಿದ್ದಾರೆ. ಸದ್ಯ ಗ್ರಾಮಸ್ಥರ ಮನವೊಲಿಸಿ ಮುಜರಾಯಿ ಅಧಿಕಾರಿಗಳು ಬ್ರಹ್ಮರಥೋತ್ಸವವ ದಿನಾಂಕವನ್ನು ಮುಂದೂಡಿದ್ದಾರೆ.

# ಅರ್ಜಿ ಹಾಕಿ ಮನೆಯಲ್ಲಿ ಮಲಗಿದ್ರೂ ನಾನು ಗೆಲ್ಲುತ್ತಿದ್ದೆ

**ತುಮಕೂರು:** ಗೋವಿಂದರಾಜನಗರ ಕ್ಷೇತ್ರದಿಂದ ಆರಾಮಾಗಿ ಗೆಲ್ಲುತ್ತಿದ್ದೆ. ಅರ್ಜಿ ಹಾಕಿ ಮನೆಯಲ್ಲಿ ಮಲಗಿದರೂ ನಾನು ಗೆಲ್ಲುತ್ತಿದ್ದೆ. ಆದರೆ ಅಮಿತ್ ಶಾ ಹೇಳಿದ್ದಕ್ಕೆ 2 ಕಡೆ ಸ್ಪರ್ಧಿಸಿ ಸೋತಿದ್ದೇನೆ ಎಂದು ವಿಧಾನಸಭೆ ಸೋಲನ್ನು ಮಾಜಿ ಸಚಿವ ಸೋಮಣ್ಣ ನೆನೆದಿದ್ದಾರೆ. ನಗರದ ಮುರುಘಾ ರಾಜೇಂದ್ರ ಸಮುದಾಯ ಭವನದಲ್ಲಿ ನಡೆದ ಬಿಜೆಪಿ ಟಿಕೆಟ್ ಆಕಾಂಕ್ಷಿಯಾಗಿದ್ದ ಸಿದ್ದಗಂಗಾ ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕ ಮತ್ತು ಬಿಜೆಪಿ ಮುಖಂಡ ಡಾ. ಪರಮೇಶ್‌ರವರ ಹಿತೈಷಿಗಳ ಸಭೆಯಲ್ಲಿ ಮಾತನಾಡಿದ ಅವರು, ಈಗ ತುಮಕೂರು ಕ್ಷೇತ್ರದ ಅಭ್ಯರ್ಥಿಯಾಗಿದ್ದೇನೆ. ನನಗಾದ ಅಪಚಾರ ನೋಡಿ ಎಂಪಿ ಟಿಕೆಟ್ ಕೊಟ್ಟಿದ್ದಾರೆ ಎಂದು ಹೇಳಿದ್ದಾರೆ. ಇಂದಿರಾ ಗಾಂಧಿಗೂ ಚಿಕ್ಕಮಗಳೂರಿಗೂ ಏನು ಸಂಬಂಧ ಆದರೂ ವಿರೋಧಿಗಳು ನನ್ನ ವಲಸಿಗ ಎಂದು ಹೇಳುತ್ತಾರೆ ಎಂದು ಪರೋಕ್ಷವಾಗಿ ಮಾಧುಸ್ವಾಮಿಗೆ ಟಾಂಗ್ ಕೊಟ್ಟರು. ತುಮಕೂರನ್ನ ವಾರಣಾಸಿ ಮಾಡೋದು ನನ್ನ ಗುರಿ. ಹೈಕಮಾಂಡ್ ಈಗಲೂ ಹೇಳಿದರೆ ನಿರ್ಧಾರ ಬದಲಿಸುತ್ತೇನೆ. ಹೈಕಮಾಂಡ್ ನಿರ್ಧಾರಕ್ಕೆ ನಾನು ಬದ್ಧ ಎಂದಿದ್ದಾರೆ.

# 3 ರಿಂದ 6 ವರ್ಷದೊಳಗಿನ ಗ್ರಾಮೀಣ ಮಕ್ಕಳಿಗೆ ಉಚಿತ ಇಂಗ್ಲಿಷ್ ಕಲಿಕೆ

**ಕೊಳ್ಳೇಗಾಲ:** ಅಮೇಗಾ ಸ್ವಯಂ ಸೇವಾ ಸಂಸ್ಥೆ ವತಿಯಿಂದ ಕೊಳ್ಳೇಗಾಲ ಪಟ್ಟಣದ ಉಪ್ಪ ಲಗೇರಿ ಅಂಗನವಾಡಿ ಕೇಂದ್ರ 2 ಮತ್ತು3. ಬಸ್ತಿಪುರ ಹಾಗೂ ಹೊಸ ಹಂಪಾಪುರ ಕೇಂದ್ರಗಳಲ್ಲಿ ಅಮೇಗಾ ಸ್ವಯಂ ಸೇವಾ ಸಂಸ್ಥೆ ವತಿಯಿಂದ ವಾರ್ಷಿಕ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಅಮೇಗಾ ಸ್ವಯಂ ಸೇವಾ ಸಂಸ್ಥೆಯ ವ್ಯವಸ್ಥಾಪಕಿ ಶ್ರೀಮತಿ ಲಕ್ಷ್ಮಿ ರಾಮಮೂರ್ತಿ ಹಾಗೂ ಟ್ರಸ್ಟಿಯಾದ ಶ್ರೀಯುತ ಮಂಜರಿ ಧರ್ಮರಾಜನ್ ರವರು ಮಾತನಾಡಿ ಅಮೆಗಾ ಸ್ವಯಂ ಸೇವ ಸಂಸ್ಥೆ ಹಲವಾರು ವರ್ಷಗಳಿಂದ ಸೇವೆ ಸಲ್ಲಿಸುತ್ತಾ ಬರುತ್ತಿದ್ದು ಮೂರರಿಂದ ಆರು ವರ್ಷದೊಳಗಿನ ಅಂಗನವಾಡಿ ಮಕ್ಕಳಿಗೆ ಆಂಗ್ಲ ಭಾಷಾ ಮಾತಟೆ ಸ್ಸರಿ ಉಚಿತ ಶಿಕ್ಷಣವನ್ನು ನೀಡುತ್ತಾ ಬಂದಿದೆ ಖಾಸಗಿ ಸಂಸ್ಥೆಗಳಲ್ಲಿ ಸುಮಾರು 50ರಿಂದ 60,000 ಶುಲ್ಕವಿರುತ್ತದೆ ಆದರೆ ಅಮೇಗಾ ಸಂಸ್ಥೆ ಗ್ರಾಮೀಣ ಭಾಗದ ಮಕ್ಕಳಿಗೆ ಉಚಿತವಾಗಿ ಇಂಗ್ಲಿಷ್ ಶಿಕ್ಷಣವನ್ನು ನೀಡುತ್ತಿದ್ದು ಇದಕ್ಕಾಗಿ ಸಂಸ್ಥೆಯು ಹಲವಾರು ಶಿಕ್ಷಕಿಯರಿಗೆ ಉಚಿತ ತರಬೇತಿಯನ್ನು ನೀಡುತ್ತಿದ್ದು ಉಚಿತ ತರಬೇತಿ ಪಡೆದಂತಹ ಶಿಕ್ಷಕಿಯರು ಕೊಳ್ಳೇಗಾಲದ ಗ್ರಾಮೀಣ ಭಾಗದ ಉಪ್ಪಲಗೇರಿ ಎರಡು ಮತ್ತು ಮೂರನೇ ಕೇಂದ್ರ.ಬಸ್ತಿಪುರ ಹಾಗೂ ಹೊಸ ಹಂಪಾಪುರ ಕೇಂದ್ರಗಳಲ್ಲಿ ಈಗಾಗಲೇ ಮಂಟಸ್ಸರಿ ಶಿಕ್ಷಣವನ್ನು ಒಂದು ವರ್ಷದಿಂದ ನೀಡುತ್ತಿದ್ದು ಹಾಗೂ ಗ್ರಾಮೀಣ ಭಾಗದ ಮಕ್ಕಳ ಕಲಿಕೆಗಾಗಿ ಶ್ರಮಿಸುತ್ತಿದ್ದು ಈ ಶಿಕ್ಷಣದಿಂದ ಸಣ್ಣ ವಯಸ್ಸಿನಲ್ಲೇ ಮಕ್ಕಳ ಭೌತಿಕ ಸಾಮರ್ಥ್ಯ ವೃದ್ಧಿಯಾಗುತ್ತದೆ ಹಾಗೂ ಉನ್ನತ ಹುದ್ದೆಗೆ ಸೇರಲು ಅನುಕೂಲವಾಗುತ್ತದೆ ನಮ್ಮ ಸಂಸ್ಥೆ ಕರ್ನಾಟಕ ಮತ್ತು ತಮಿಳುನಾಡಿನಲ್ಲಿ ಸುಮಾರು 20 ಕೇಂದ್ರಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದು ಸುಮಾರು 500 ಮಕ್ಕಳಿಗೆ ಉಚಿತ ಇಂಗ್ಲಿಷ್ ಶಿಕ್ಷಣವನ್ನು ನೀಡುತ್ತಿದೆ ಎಂದರು

ಇದೇ ಸಂದರ್ಭದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದ ಸಂದರ್ಭದಲ್ಲಿ ಮಕ್ಕಳ ಕಲಿಕೆಯನ್ನು ನೋಡಿದಂತಹ ಪೋಷಕರು ಮಕ್ಕಳ ಕಲಿಕೆಯನ್ನು ನೋಡಿ ಅಮೇಗಾ ಸ್ವಯಂ ಸೇವಾ ಸಂಸ್ಥೆಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ

ಈ ಕಾರ್ಯಕ್ರಮದಲ್ಲಿ ಅಂಗನವಾಡಿ ಶಿಕ್ಷಕಿಯರುಗಳಾದ ಭಾಗ್ಯಮ್ಮ. ಪ್ರೇಮ ಹಾಗೂ ಅಮೇಗಾ ಸ್ವಯಂ ಸೇವಾ ಸಂಸ್ಥೆ ವತಿಯಿಂದ ಮಕ್ಕಳ ಕಲಿಕೆಗಾಗಿ ಶಿಕ್ಷಣ ನೀಡುತ್ತಿರುವ ಶ್ರೀಮತಿ ಮಹೇಶ್ವರಿ. ಉಮಾವತಿ. ಅನಿತಾ. ಶ್ವೇತಾ. ಶಿಲ್ಪ. ದಿವ್ಯ ವರ್ಷಿಣಿ. ಅಶ್ವಿನಿ. ನಂದಿನಿ ಹಾಗೂ ಕುಸುಮ ಹಾಗೂ ಅಂಗನವಾಡಿಯ ಸಿಬ್ಬಂದಿ ವರ್ಗದವರು ಹಾಜರಿದ್ದರು.



# ವಸತಿ ಮಂಜೂರಾತಿ ಆದೇಶಪತ್ರ ವಿತರಣೆ



**ಹನೂರು:** ಸರ್ಕಾರದಿಂದ ಸಿಗುವ ಸಹಾಯಧನವನ್ನು ಸದ್ಬಳಕೆ ಮಾಡಿಕೊಂಡು ಮಂಜೂರಾಗಿರುವ ಮನೆಯನ್ನು ಅಚ್ಚುಕಟ್ಟಾಗಿ ನಿರ್ಮಿಸಿಕೊಳ್ಳಬೇಕು ಎಂದು ಫಲಾನುಭವಿಗಳಿಗೆ ಎಂದು ಶಾಸಕ ಎಂ.ಆರ್.ಮಂಜುನಾಥ್ ಕಿವಿ ಮಾತು ಹೇಳಿದರು. ಹನೂರು ತಾಲೂಕಿನ ಬಂಡಳ್ಳಿ, ಶಾಗ್ಯ, ಮಣಗಳ್ಳಿ ಗ್ರಾಮ ಪಂಚಾಯಿತಿ ಗಳಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಅರ್ಹ ಫಲಾನುಭವಿಗಳಿಗೆ ವಸತಿ ಮಂಜೂರಾತಿ ಹಾಗೂ ಆದೇಶಪತ್ರವನ್ನು ವಿತರಣೆ ಮಾಡಿ ಬಳಿಕ ಅವರು ಮಾತನಾಡಿದರು. ಪ್ರತಿ ಕುಟುಂಬಕ್ಕೆ ಒಂದು ಸೂರು ಅಗತ್ಯವಾಗಿದ್ದು ಮನಗೊಂಡು ಸರ್ಕಾರ ಸೂರು ಒದಗಿಸುತ್ತಿದೆ ಹೀಗಾಗಿ ವಸತಿ ಮಂಜೂರಾತಿ ಪಡೆದಿರುವ ಜನರು ನಿಗದಿ ಅವಧಿಯೊಳಗೆ ಮನೆ ಪೂರ್ಣಗೊಳಿಸಬೇಕು ಯಾವುದೇ ಕಾರಣಕ್ಕೂ ಅರ್ಧಕ್ಕೆ ಮೋಟಕುಗೊಳಿಸಬಾರದು. ಒಂದಷ್ಟು ಉಳಿಕೆ ಮನೆಗಳು ಇದೆ ಇದನ್ನು ತರಲು ಸಂಬಂಧಪಟ್ಟ ಇಲಾಖೆಯವರ ಜೊತೆ ಚರ್ಚೆ ನೆಡೆಸಲಾಗುವುದು ಚುನಾವಣೆ ಬಳಿಕ ಗ್ರಾಮಗಳಿಗೆ ಭೇಟಿ ನೀಡಿ ಖುದ್ದು ಪರಿಶೀಲಿಸುವ ಕಾರ್ಯ ಮಾಡುವ ಚಿಂತನೆ ಇದೆ ಎಂದರು. ಗುಂಡಾಲ್ ಡ್ಯಾಂ ನೀರು ಈ ಭಾಗದ ರೈತರಿಗೆ ಅನುಕೂಲವಾಗಲಿದೆ ಈ ನಿಟ್ಟಿನಲ್ಲಿ ನೀರು ಸಂಗ್ರಹ ಮಾಡಲು ಕ್ರಮವಹಿಸಲಾಗುವುದು. ಮಣಗಳ್ಳಿ, ಬಂಡಳ್ಳಿ ಶಾಗ್ಯ ಭಾಗಕ್ಕೆ ನೀರಾವರಿ ಅಗತ್ಯವಾಗಿದೆ. ಇದಕ್ಕಾಗಿ ಯಾವ ಕೆರೆಗಳ ಮೂಲಕ ನೀರು ಸಂಗ್ರಹ ಮಾಡಬಹುದು ಎಂಬ ದೊಡ್ಡ ಚಿಂತನೆ ನೆಡೆಲಾಗಿದ್ದು ಇದಕ್ಕಾಗಿಯೂ ಸಹ ಶ್ರಮಿಸಲಾಗುತ್ತಿದೆ. ಕ್ಷೇತ್ರದ ಮುಖ್ಯ ರಸ್ತೆಗಳು ತೀರ ಹದಗೆಟ್ಟಿದ್ದು ಗಮನಕ್ಕೆ ಬಂದಿದೆ ಈಗಾಗಲೇ ಅಂದಾಜು 25ಕೋಟಿ ವೆಚ್ಚದ ನಾಲಾರೋಡ್ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ಆಗಿದೆ. ಮತ್ತಷ್ಟು ರಸ್ತೆ ಅಭಿವೃದ್ಧಿ ಆಗಬೇಕಿದ್ದು ಇದಕ್ಕೆ ಅನುದಾನ ಸಹ ಬೇಕಿದೆ. ಮುಖ್ಯವಾಗಿ ಲೊಕ್ಕನಹಳ್ಳಿ ಹಾಗೂ ಬಂಡಳ್ಳಿ ಮಾರ್ಗ ರಸ್ತೆಗೆ ಅನುದಾನ ತರಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುತ್ತಿದೆ ಈಗಾಗಲೇ ಅಧಿಕಾರಿಗಳ ಜೊತೆ ಚರ್ಚೆ ನೆಡೆಸಿ ಪ್ರಸ್ತಾವನೆ ಸಹ ಕಳುಹಿಸಲಾಗಿದೆ ಮುಂದಿನ ದಿನಗಳಲ್ಲಿ ಅಭಿವೃದ್ಧಿ ಖಂಡಿತ ಆಗಲಿದೆ ಎಂದು ಹೇಳಿದರು. ಬಂಡಳ್ಳಿ-ಚಿಕ್ಕಲ್ಲೂರು ರಸ್ತೆ ಅಭಿವೃದ್ಧಿ ಆಗಿದ್ದು ಅಲ್ಪ ಬಾಕಿ ಉಳಿದಿದೆ. ಶಾಲೆ ದುರಸ್ಥಿ ಕಾರ್ಯ ಸೇರಿದಂತೆ ವಿದ್ಯುತ್ ಕಲ್ಪಿಸಲು ಸೋಲಾರ್ ವ್ಯವಸ್ಥೆ ಹಾಗೂ ಅಗತ್ಯ ಮೂಲಸೌಕರ್ಯ ಒದಗಿಸಲು ಕ್ರಮವಹಿಸಲಾಗುವುದು ಎಂದರಲ್ಲದೆ ವಸತಿ ನಿರ್ಮಾಣಕ್ಕೆ ನೀಡುತ್ತಿರುವ ಸಹಾಯ ಧನ ಸಾಲುತ್ತಿಲ್ಲ ಹೀಗಾಗಿ ನಾಲ್ಕರಿಂದ ಐದು ಲಕ್ಷಕ್ಕೆ ಹೆಚ್ಚಿಸಬೇಕು ಈ ಬಗ್ಗೆ ಸದನದಲ್ಲಿ ದ್ವನಿ ಎತ್ತಲಾಗುವುದು ಎಂದರು. ಲೊಕ್ಕನಹಳ್ಳಿ ಹಾಗೂ ಚಿಕ್ಕಮಾಲಾಪುರ ಗ್ರಾಮ ಪಂಚಾಯಿತಿಗೆ ಒಟ್ಟು 460 ಮನೆ ಮಂಜೂರಾಗಿದ್ದು, ಕಣ್ಣೂರು, ಮಂಗಲ ಸೇರಿ ಒಟ್ಟು 209 ಮಂಜೂರು, ಬಂಡಳ್ಳಿ 168, ಮಣಗಳ್ಳಿ 160, ಶಾಗ್ಯ 63, ಹುತ್ತೂರು 150, ಪಿಜಿ ಪಾಳ್ಯ 211, ಬೈಲೂರು 182 ವಸತಿಗಳು ಮಂಜೂರು ಆಗಿದೆ ಎಂದು ಮಾಹಿತಿ ನೀಡಿದರು. ಇದೇ ಸಂದರ್ಭದಲ್ಲಿ , ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಉಮೇಶ್, ತಾಲ್ಲೂಕು ಪಂಚಾಯತಿ ನೋಡಲ್ ಅಧಿಕಾರಿ ಸತೀಶ್,ಅಧ್ಯಕ್ಷರಾದ ಯಶೋಧ, ಸದಸ್ಯರುಗಳಾದ ಮಮತಾ ನಾಗಯ್ಯ, ತಮ್ಮಯ್ಯ, ಸೋಮಣ್ಣ,ಮಹದೇವಪ್ಪ ಮಾಜಿ. ಜಿಲ್ಲಾ ಪಂಚಾಯತ್ ಸದಸ್ಯರಾದ ನಾಗೇಂದ್ರಪ್ಪ,ಪಿಡಿಓ ವಿಶ್ವನಾಥ್, ರಾಮು,ಸಿದ್ದಪ್ಪ,ಸಾರ್ವಜನಿಕರು ಉಪಸ್ಥಿತರಿದ್ದರು.

# ಕಾವೇರಿ ಕಿಚ್ಚು: ಕರ್ನಾಟಕ ಸೇನಾಪಡೆ ಪ್ರತಿಭಟನೆ

**ಚಾಮರಾಜನಗರ:** ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವ ಕ್ರಮವನ್ನು ಖಂಡಿಸಿ ಕರ್ನಾಟಕ ಸೇನಾ ಪಡೆ ವತಿಯಿಂದ ನಗರದಲ್ಲಿ ಕಳೆದ 194ದಿನಗಳಿಂದ ನಿರಂತರವಾಗಿ ಪ್ರತಿಭಟನೆ ನಡೆಸುತ್ತಿದ್ದು ಇಂದು ಕೂಡ ರಾಷ್ಟ್ರೀಯ ಹೆದ್ದಾರಿಯಲ್ಲಿ ಖಾಲಿ ಪೇಪರ್ ತಟ್ಟೆ ಹಿಡಿದು ವಿನೂತನ ಪ್ರತಿಭಟನೆ ನಡೆಸಲಾಯಿತು. ನಗರದ ಚಾಮರಾಜೇಶ್ವರ ಉದ್ಯಾನವನದ ಮುಂಭಾಗದಲ್ಲಿ ಕರ್ನಾಟಕ ಸೇನಾಪಡೆ ಅಧ್ಯಕ್ಷ .ಚಾ.ರಂ.ಶ್ರೀನಿವಾಸಗೌಡ ಅವರ ನೇತೃತ್ವದಲ್ಲಿ ಸಮಾವೇಶಗೊಂಡ ಪ್ರತಿಭಟನಾನಿರತರು ಅಲ್ಲಿಂದ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತಕ್ಕೆ ತೆರಳಿ, ರಾಷ್ಟ್ರೀಯ ಹೆದ್ದಾರಿಯಲ್ಲಿ ಸರ್ಕಾರಗಳು, ಕಾವೇರಿ ನೀರು ನಿರ್ವಹಣಾ ಮಂಡಳಿ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆ ನೇತೃತ್ವ ವಹಿಸಿದ್ದ ಶ್ರೀನಿವಾಸಗೌಡ ಮಾತನಾಡಿ, ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವ ಕ್ರಮವನ್ನು ಖಂಡಿಸಿ ಕರ್ನಾಟಕ ಸೇನಾ ಪಡೆ ವತಿಯಿಂದ ನಗರದಲ್ಲಿ ಕಳೆದ 194ದಿನಗಳಿಂದ ನಿರಂತರವಾಗಿ ಪ್ರತಿಭಟನೆ ನಡೆಸುತ್ತಿದ್ದು ಇಂದು ಕೂಡ ರಾಷ್ಟ್ರೀಯ ಹೆದ್ದಾರಿಯಲ್ಲಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಖಾಲಿ ಪೇಪರ್ ತಟ್ಟೆ ಹಿಡಿದು ಕಾವೇರಿ ಕೊಳ್ಳದಲ್ಲಿ ನೀರು ಖಾಲಿ ಮಾಡಿ ರಾಜ್ಯದ ಜನತೆಯನ್ನು ಖಾಲಿತಟ್ಟೆಯಂತೆ ಮಾಡುತ್ತಾರೆಎಂದು ಆರೋಪಿಸಿ ಪ್ರತಿಭಟನೆ ನಡೆಸಲಾಗಿದೆ ಎಂದರು. ರಾಜ್ಯದಲ್ಲಿ ತೀವ್ರ ಬರಗಾಲ ಇದ್ದರೂ ಕೂಡ ರಾಜ್ಯ ಸರ್ಕಾರ ತಮಿಳುನಾಡಿಗೆ 4 ಸಾವಿರ ಕ್ಯೂ ಸೆಕ್ಸ್ ನೀರನ್ನು ಬಿಟ್ಟಿರುವುದು ಅತ್ಯಂತ ಖಂಡನೀಯ. ತಮಿಳುನಾಡಿಗೆ ನೀರು ಬಿಟ್ಟು ರಾಜ್ಯದ ಜನತೆಗೆ ಅನ್ಯಾಯ ಮಾಡುವ ಮೂಲಕ ರಾಜ್ಯದವಜನರ ಹಿತಕಾಯುವಲ್ಲಿ ವಿಫಲರಾಗಿರುವ ಮುಖ್ಯ ಮಂತ್ರಿ ಸಿದ್ದರಾಮಯ್ಯನವರು ನೈತಿಕಹೊಣೆ ಹೊತ್ತುತಮ್ಮರಾಜೀನಾಮೆ ನೀಡಬೇಕು ಎಂದು ಶ್ರೀನಿವಾಸಗೌಡ ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಪಣ್ಯದಹುಂಡಿ ರಾಜು, ಚಾ.ವೆಂ.ರಾಜ್ ಗೋಪಾಲ್, ಗು.ಪುರುಷೋತ್ತಮ್, ಚಾ.ರಾ.ಕುಮಾರ್, ಮಹೇಶ್ ಗೌಡ, ಆಟೋ ನಾಗೇಶ್, ಪ್ರಕಾಶ್ ಭಾಗವಹಿಸಿದ್ದರು.



# ಸಂಜೆ ಟಿಪ್ಸ್

## ಟೆಕ್ನೋ ಸ್ಪಾರ್ಕ್ 20ಇ ಸ್ಮಾರ್ಟ್‌ಫೋನ್ ವಿಶೇಷ



ಜನಪ್ರಿಯ ಇ ಕಾಮರ್ಸ್ ತಾಣ ಆಗಿ ಗುರುತಿಸಿಕೊಂಡಿರುವ ಅಮೆಜಾನ್ನಲ್ಲಿ ಈಗ ಹೋಳಿ ಹಬ್ಬದ ಪ್ರಯುಕ್ತ ವಿಶೇಷಸೇಲ್ ಆಯೋಜಿಸಿದೆ. ಅದುವೇ ಸ್ಮಾರ್ಟ್‌ಫೋನ್ ಹೋಳಿ ಸೇಲ್ ಆಗಿದ್ದು, ಈ ಮಾರಾಟ ಮೇಳದಲ್ಲಿ ಟೆಕ್ನೋ ಸಂಸ್ಥೆಯ ಕೆಲವು ಆಯ್ದ ಫೋನ್ಗಳು ಭಾರೀ ರಿಯಾಯಿತಿ ದರದಲ್ಲಿ ಕಾಣಿಸಕೊಂಡಿವೆ. ಆ ಪೈಕಿ ಅತೀ ಅಗ್ಗದ ಬೆಲೆಯಲ್ಲಿ ಟೆಕ್ನೋ ಸ್ಪಾರ್ಕ್ 20A ಸ್ಮಾರ್ಟ್‌ಫೋನ್ ಖರೀದಿಗೆ ಲಭ್ಯ ಇದೆ. ಹೌದು, ಅಮೆಜಾನ್ ತಾಣದ ಹೋಳಿ ಹಬ್ಬದ ಸೇಲ್ನಲ್ಲಿ ಟೆಕ್ನೋ ಸ್ಪಾರ್ಕ್ 20C ಸ್ಮಾರ್ಟ್‌ಫೋನ್ ಶೇ 14% ರಷ್ಟು ರಿಯಾಯಿತಿ ಪಡೆದಿದೆ. ಈ ಫೋನಿನ 16GB + 128ಉಃ ಸ್ಟೋರೇಜ್ ವೇರಿಯಂಟ್ ಆಫರ್ನಲ್ಲಿ 8,999ರೂ. ಗಳಿಗೆ ಲಭ್ಯ ಇದೆ. ಅಲ್ಲದೇ ಅಮೆಜಾನ್ನಲ್ಲಿ ಲಭ್ಯವಾಗುವ ಇತರೆ ಕೊಡುಗೆಗಳನ್ನು ಪಡೆದುಕೊಂಡರೆ, ಈ ಫೋನ್ ಅನ್ನು 6,999ರೂ. ಗಳಿಗೆ ಖರೀದಿಸಬಹುದು. ಉಳಿದಂತೆ ಈ ಮೊಬೈಲ್ 8GB + 128GB ಸ್ಟೋರೇಜ್ ವೇರಿಯಂಟ್ ಆಯ್ಕೆ ಒಳಗೊಂಡಿದ್ದು, ಹೆಚ್ಚುವರಿಯಾಗಿ 8ಉಃ ವರ್ಚುವಲ್ ಖಂಒ ಸೌಲಭ್ಯ ಸಹ ಪಡೆದುಕೊಂಡಿದೆ. ಇದರೊಂದಿಗೆ ಈ ಫೋನ್ 50 ಮೆಗಾ ಪಿಕ್ಸಲ್ ಮುಖ್ಯ ಕ್ಯಾಮೆರಾ ರಚನೆ ಕೂಡಾ ಪಡೆದಿರುವುದು ಪ್ಲಸ್ ಪಾಯಿಂಟ್ ಎನಿಸಿದೆ ಈ ಮೊಬೈಲ್ 6.6 ಇಂಚಿನ ಎಲ್ಸಿಡಿ ಡಿಸ್ಪ್ಲೇ ಅನ್ನು ಪಡೆದಿದ್ದು, ಇನ್ನು ಡಿಸ್ಪ್ಲೇಯು 720‌1612 ಸ್ಕ್ರೀನ್ ರೆಸಲ್ಯೂಶನ್ ಸಾಮರ್ಥ್ಯದ ಆಯ್ಕೆ ಹೊಂದಿದೆ. ಅಲ್ಲದೇ ಈ ಡಿಸ್ಪ್ಲೇಯು 90ಊದ ರಿಫ್ರೆಶ್ ರೇಟ್ ಬೆಂಬಲ ಪಡೆದಿದ್ದು, ಇದಲ್ಲದೆ ಡಿಸ್ಪ್ಲೇ ಸೆಂಟರ್ಡ್ ಪಂಚ್ ಹೋಲ್ ನಾಚ್, ಮತ್ತು ಡೈನಾಮಿಕ್ ಪೋರ್ಟ್ ಆಯ್ಕೆಗಳನ್ನು ಪಡೆದುಕೊಂಡಿದೆ. ಅದೇ ರೀತಿ ಟೆಕ್ನೋ ಸ್ಪಾರ್ಕ್ 20C ಸ್ಮಾರ್ಟ್‌ಫೋನ್ ಮೀಡಿಯಾ ಟೆಕ್ ಹಿಲಿಯೋ ಕ35 ಖಿಅಅ ಪ್ರೊಸೆಸರ್ ಪವರ್ನಲ್ಲಿ ಕೆಲಸ ಮಾಡಲಿದ್ದು, ಇದಕ್ಕೆ ಪೂರಕವಾಗಿ ಆಂಡ್ರಾಯ್ಡ್ 13 ಓಎಸ್ ಸಪೋರ್ಟ್‌ನೊಂದಿಗೆ ಕೆಲಸ ನಿರ್ವಹಿಸಲಿದೆ. ಅಲ್ಲದೇ ಈ ಫೋನ್ ಕಠತಿಜಡಿಗಿಖ ಉಇ8320 ಉಕಗ ಬೆಂಬಲ ಕೂಡಾ ಪಡೆದುಕೊಂಡಿದೆ. ಹಾಗೆಯೇ 8GB + 128GBಸ್ಟೋರೇಜ್ ವೇರಿಯಂಟ್ ಆಯ್ಕೆ ಒಳಗೊಂಡಿದ್ದು, ಹೆಚ್ಚುವರಿಯಾಗಿ 8GB ವರ್ಚುವಲ್ RAM ಸೌಲಭ್ಯ ಸಹ ಒಳಗೊಂಡಿದೆ.

## ಸಬ್ಬಸಿಗೆ ಕೂಟು

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಸಬ್ಬಸಿಗೆ ಸೊಪ್ಪು-ಎರಡು ಕಟ್ಟು, ತೊಗರಿಬೇಳೆ- ಅರ್ಧಪಾವು, ಎಣ್ಣೆ- ಸ್ವಲ್ಪ, ಉಪ್ಪು- ರುಚಿಗೆ ತಕ್ಕಷ್ಟು, ಉದ್ದಿನ ಬೇಳೆ- ಸ್ವಲ್ಪ, ಬ್ಯಾಡಗಿ ಒಣಮೆಣಸಿನ ಕಾಯಿ- ನಾಲ್ಕು, ಇಂಗು- ಸ್ವಲ್ಪ. ಕಾಳು ಮೆಣಸು-ಸ್ವಲ್ಪ, ಜೀರಿಗೆ- ಒಂದು ಚಮಚ, ಗಸಗಸ- ಎರಡು ಚಮಚ, ಕಾಯಿತುರಿ- ಅರ್ಧ ಬಟ್ಟಲು

### ಮಾಡುವ ವಿಧಾನ

ಮೊದಲಿಗೆ ತೊಗರಿ ಬೇಳೆಯನ್ನು ಪಾತ್ರೆಯಲ್ಲಿ ಹಾಕಿ ಸುಮಾರು ಅರ್ಧದಷ್ಟು ಬೇಯಿಸಬೇಕು. ಇನ್ನೊಂದೆಡೆ ಒಂದು ಪಾತ್ರೆಯಲ್ಲಿ ಎಣ್ಣೆ ಹಾಕಿ ಅದರಲ್ಲಿ ಉದ್ದಿನ ಬೇಳೆ, ಒಣಮೆಣಸು, ಇಂಗು, ಕರಿಮೆಣಸು ಹಾಕಿ ಹುರಿಯಬೇಕು. ಬಳಿಕ ಇಳಿಸಿ ಅದಕ್ಕೆ ಜೀರಿಗೆ, ಗಸಗಸ, ಕಾಯಿತುರಿಯನ್ನು ಹಾಕಿ ಎಲ್ಲವನ್ನು ಸೇರಿಸಿ ಮಿಕ್ಸಿಯಲ್ಲಿ ರುಬ್ಬಬೇಕು. ಇಷ್ಟು ತಯಾರಿ ಮಾಡಿಕೊಂಡ ಬಳಿಕ ಅರೆ ಬೆಂದ ಬೇಳೆಯ ಪಾತ್ರೆಗೆ ಚಿಕ್ಕದಾಗಿ ಹಚ್ಚಿದ ಸಬ್ಬಸಿಗೆ ಸೊಪ್ಪನ್ನು ಹಾಕಿ ಬೇಯಿಸಿಬೇಕು. ಸೊಪ್ಪು ಮತ್ತು ಬೇಳೆ ಚೆನ್ನಾಗಿ ಬೆಂದ ಬಳಿಕ ಅದಕ್ಕೆ ರುಬ್ಬಿಟ್ಟು ಕೊಂಡಿದ್ದ ಮಸಾಲೆಯನ್ನು ಹಾಕಿ ಚೆನ್ನಾಗಿ ಕುದಿಸಿ ರುಚಿ ನೋಡಿಕೊಂಡು ಉಪ್ಪು ಹಾಕಬೇಕು. ಹುಳಿಯ ಅಗತ್ಯವಿದ್ದರೆ ನಿಂಬೆ ರಸವನ್ನು ಹಾಕಬಹುದು. ಹೀಗೆ ಮಾಡಿದರೆ ಸಬ್ಬಸಿಗೆ ಕೂಟು ತಯಾರಾದಂತೆಯೇ.

## ಮುಂಜಾನೆ ಬೇಡ ಹುಳಿ ಪದಾರ್ಥ

### ಹೆಲ್ತ್ ಟಿಪ್ಸ್



ಕೆಲವರು ತಿನ್ನಲು ಟೈಮ್ ನೋಡುವುದಿಲ್ಲ. ಯಾವಾಗ ಮನಸ್ಸು ಬರುತ್ತದೋ ಆಗ ತಿನ್ನಲು ಮುಂದಾಗುತ್ತಾರೆ. ಕೆಲವೊಮ್ಮೆ ಏನು ತಿನ್ನುತ್ತಿದ್ದೇವೆ ಎಂಬುದರತ್ತಲು ಗಮನ ಹರಿಸುವುದಿಲ್ಲ. ಈ ಅಭ್ಯಾಸದಿಂದ ಅನೇಕ ಸಮಸ್ಯೆಗಳು ಎದುರಾಗುತ್ತವೆ. ಬಹಳಷ್ಟು ಜನರು ನಿದ್ರೆಯಿಂದ ಎದ್ದೊಡನೆಯೇ ಕಾಫಿ ಅಥವಾ ಟೀ ಸೇವಿಸುತ್ತಾರೆ. ಹಾಳು ಹೊಟ್ಟೆಯಲ್ಲಿ ಇದನ್ನು ಸೇವಿಸುವುದು ಒಳ್ಳೆಯದಲ್ಲ. ಕಾಫಿ ಟೀ ಕುಡಿಯುವ ಮುನ್ನ ಉಗುರು ಬೆಚ್ಚಗಿನ ನೀರನ್ನು ಕುಡಿಯುವುದರ ಮೂಲಕ ದಿನಚರಿ ಆರಂಭಿಸಬೇಕು. ಇಲ್ಲದಿದ್ದರೆ ಹಾರ್ಮೋನ್ ಅಸಮತೋಲನ ಉಂಟಾಗುತ್ತದೆ.

ತಡವಾಗಿ ಎದ್ದಾಗ ಅಥವಾ ಖಾಲಿ ಹೊಟ್ಟೆಯಲ್ಲಿ ಇದ್ದಾಗ ಸೋಡಾ, ತಂಪು ಪಾನೀಯಗಳನ್ನು ಸೇವಿಸಲೇಬಾರದು. ಈ ರೀತಿ ಮಾಡಿದರೆ ಜೀರ್ಣಾಂಗಗಳಲ್ಲಿ ಹಾನಿ ಉಂಟು ಮಾಡುವ ಆಮ್ಲಗಳು ಬಿಡುಗಡೆಯಾಗುತ್ತದೆ. ಅಲ್ಲದೆ ಅನಾರೋಗ್ಯವು ಕಾಡುತ್ತದೆ. ಜೊತೆಗೆ ವಾಂತಿ ಕೂಡ ಎದುರಾಗಬಹುದು. ಹಾಗಾಗಿ ಇವೆಲ್ಲವನ್ನು ಸೇವಿಸುವುದಕ್ಕಿಂತ ಮೊದಲು ನೀರನ್ನು ಕುಡಿಯುವುದು ಒಳಿತು. ತೀಕ್ಷ್ಣವಾದ ಮಸಾಲೆಗಳನ್ನು ಹೊಂದಿರುವ ಹುಳಿಯಾದ ಗ್ರೇವಿ ಪದಾರ್ಥಗಳನ್ನು ಮುಂಜಾನೆ ಸಮಯದಲ್ಲಿ ತಿನ್ನಬಾರದು.

ಇವುಗಳಿಗೆ ಬಳಸಿರುವ ಎಣ್ಣೆಯಿಂದ ಅನಾರೋಗ್ಯ ಉಂಟಾಗುತ್ತದೆ. ಇದೇ ರೀತಿ ಹೆಚ್ಚು ಕಾಲ ಇದ್ದಲ್ಲಿ ಅಲ್ಸರ್ ಎದುರಾಗುವ ಸಂಭವವಿರುತ್ತದೆ.

## ಈರುಳ್ಳಿಯಲ್ಲಿದೆ ಕೂದಲಿನ ಗುಟ್ಟು

### ಬ್ಯೂಟಿ ಟಿಪ್ಸ್



ಕೂದಲು ಉದುರುವುದು ಇತ್ತೀಚೆಗೆ ಹೆಚ್ಚಿನವರಲ್ಲಿ ಕಂಡು ಬರುತ್ತಿರುವ ಸಮಸ್ಯೆಯಾಗಿದೆ. ಒತ್ತಡದ ಜೀವನ, ಫಾಸ್ಟ್ ಫುಡ್ ಗಳ ಮೊರೆ ಹೋಗಿ ಪೋಷಕಾಂಶಗಳ ಆಹಾರ ಸೇವಿಸದೇ ಇರುವುದು, ನಿದ್ದೆ ಇಲ್ಲದಿರುವುದು, ನೀರಿನ ಸಮಸ್ಯೆ ಹೀಗೆ ಅನೇಕ ಕಾರಣಗಳಿಂದ ಕೂದಲು ಉದುರುತ್ತದೆ.

ಕೆಲವೊಂದು ಸರಳ ಮನೆ ಮದ್ದಿನ ಪ್ರಯೋಗ ಮಾಡಿ ತಲೆ ಹೊಟ್ಟು, ಕೂದಲು ಉದುರುವುದನ್ನು ತಡೆಗಟ್ಟಬಹುದು. ಈರುಳ್ಳಿ ಈ ಎಲ್ಲಾ ಸಮಸ್ಯೆ ನಿವಾರಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ.

- ಈರುಳ್ಳಿಯ ರಸ ತೆಗೆದು ತಲೆಗೆ ಹಚ್ಚಿ ಅರ್ಧ ಗಂಟೆಯ ನಂತರ ಸ್ನಾನ ಮಾಡಿದರೆ ತಲೆ ಹೊಟ್ಟು ನಿಧಾನವಾಗಿ ನಿವಾರಣೆಯಾಗುತ್ತದೆ. ವಾರದಲ್ಲಿ ಎರಡು ಬಾರಿ ಹೀಗೆ ಮಾಡಿದರೆ ಉತ್ತಮ ಫಲಿತಾಂಶ ಸಿಗುತ್ತದೆ.
- ತಲೆಗೆ ಶ್ಯಾಂಪೂ ಬಳಸಿ ಸ್ನಾನ ಮಾಡಿದ ಬಳಿಕ ಕೊನೆಯಲ್ಲಿ ಬಿಸಿ ನೀರಿಗೆ ಈರುಳ್ಳಿ ರಸ ಹಾಕಿ ತೊಳೆಯುವುದನ್ನು ಅಭ್ಯಾಸ ಮಾಡಿಕೊಳ್ಳಬೇಕು. ಈ ರೀತಿ ಮಾಡುತ್ತಾ ಬಂದರೆ ಕೂದಲ ಎಲ್ಲಾ ಸಮಸ್ಯೆಗಳು ಬಹುಬೇಗ ಕಡಿಮೆಯಾಗುತ್ತದೆ.
- ಕೊಬ್ಬರಿ ಎಣ್ಣೆಯ ಜೊತೆಗೆ ಒಂದು ಚಮಚ ಈರುಳ್ಳಿ ರಸ, ಒಂದು ಚಮಚ ಬಾದಾಮಿ ಎಣ್ಣೆ ಮಿಶ್ರಣ ಮಾಡಿಕೊಂಡು ತಲೆಗೆ ಮಸಾಜ್ ಮಾಡುವುದರಿಂದ ಕೂದಲಿಗೆ ಕಾಂತಿ ಬರುವುದರ ಜೊತೆಗೆ ಹೊಟ್ಟು ಕೂಡ ನಿವಾರಣೆಯಾಗುತ್ತದೆ.
- ಈರುಳ್ಳಿಗೆ ಜೇನುತುಪ್ಪ ಸೇರಿಸಿಕೊಂಡು ದಿನನಿತ್ಯ ಸೇವಿಸುವುದರಿಂದ ಕೂದಲು ಉದುರುವುದು ಕಡಿಮೆಯಾಗುತ್ತದೆ.
- ಈರುಳ್ಳಿಯನ್ನು ಸಣ್ಣದಾಗಿ ಹೆಚ್ಚಿ ಅದಕ್ಕೆ ಒಂದು ಚಮಚ ಆಲೀವ್ ಎಣ್ಣೆ ಸೇರಿಸಿ ತಲೆಗೆ ಹಚ್ಚಿ ಎರಡು ಗಂಟೆಯ ನಂತರ ಸ್ನಾನ ಮಾಡಿದರೆ ಕೂದಲು ಆರೋಗ್ಯವಾಗಿರುತ್ತದೆ.

# ದಿ ಥಿಯೇಟರ್ ಆಫ್ ಡ್ರೀಮ್ಸ್: 5 ಮಂದಿಯ ತಂಡದ ಫುಟ್ಬಾಲ್ ಟೂರ್ನಿ ಗೆಲ್ಲಿ ಮತ್ತು ಓಲ್ಡ್ ಟ್ರಾಫೋರ್ಡ್‌ನಲ್ಲಿ ಆಟವಾಡಿ



ಪ್ರಮುಖ ಟೈರ್ ತಯಾರಕ ಕಂಪನಿಯಾದ ಅಪೊಲೊ ಟೈರ್ಸ್ ಇಂದು ರೋಡ್ ಟು ಓಲ್ಡ್ ಟ್ರಾಫರ್ಡ್ನ ಎರಡನೇ ಆವೃತ್ತಿಯನ್ನು ಪ್ರಾರಂಭಿಸಿದೆ. ಇದು ಮ್ಯಾಂಚೆಸ್ಟರ್ ಯುನೈಟೆಡ್ ಬೆಂಬಲಿಸುವ ಒಂದು ತಂಡದಲ್ಲಿ ಐದು ಮಂದಿ ಇರುವ ಫುಟ್ಬಾಲ್ ಪಂದ್ಯಾವಳಿಯಾಗಿದ್ದು, ಭಾರತದಾದ್ಯಂತ ನಡೆಯಲಿದೆ. ಮಾರ್ಚ್ 23 ರಂದು ಬೆಂಗಳೂರಿನ ಆವೃತ್ತಿ ಕೋರಮಂಗಲದ ಟರ್ಫ್ ಪಾರ್ಕ್‌ನಲ್ಲಿ ನಡೆಯಲಿದೆ.

ತಮ್ಮ ಅತ್ಯುತ್ತಮ ಸಾಮರ್ಥ್ಯವನ್ನು ಇಲ್ಲಿ ಪ್ರದರ್ಶಿಸುವ ಪ್ರತಿಭಾವಂತ ಫುಟ್ಬಾಲ್ ಆಟಗಾರರು ಯುಕೆ ಮ್ಯಾಂಚೆಸ್ಟರ್‌ಗೆ ಪ್ರಯಾಣಿಸಲು ಮತ್ತು ದಂತಕಥೆ ಎನಿಸಿದ ಓಲ್ಡ್ ಟ್ರಾಫರ್ಡ್‌ನಲ್ಲಿ ಆಡಲು ಮ್ಯಾಂಚೆಸ್ಟರ್‌ಗೆ ಪ್ರಯಾಣಿಸಲು ಸರಿಸಾಟಿಯಿಲ್ಲದ ಮತ್ತು ಜೀವಮಾನದಲ್ಲಿ ಒಮ್ಮೆ ಮಾತ್ರ ಸಿಗುವ ಅವಕಾಶವನ್ನು ಗಳಿಸುತ್ತಾರೆ. ಮ್ಯಾಂಚೆಸ್ಟರ್ ಯುನೈಟೆಡ್ ಕ್ರೀಡಾಂಗಣ ಎಷ್ಟಿಯ ತವರು. ಜಾಗತಿಕ ವಿಜೇತರನ್ನು ಆಯ್ಕೆ ಮಾಡಲು ಅಪೊಲೊ ಟೈರ್ಸ್ 'ರೋಡ್ ಟು ಓಲ್ಡ್ ಟ್ರಾಫರ್ಡ್' ನ ಗ್ರಾಂಡ್ ಫಿನಾಲೆಯು ಮೇ 31, 2024 ರಂದು ಐಕಾನಿಕ್ ಸ್ಟೇಡಿಯಂನಲ್ಲಿ ನಡೆಯಲಿದೆ.

ಪಂದ್ಯಾವಳಿಯು ದೊಡ್ಡ ಸ್ವರೂಪದಲ್ಲಿ ಹಿಂತಿರುಗುತ್ತಿದೆ ಮತ್ತು ದೆಹಲಿ, ಪುಣೆ, ಕೊಲ್ಕತ್ತಾ, ಬೆಂಗಳೂರು, ಚೆನ್ನೈ ಮತ್ತು ಕೊಚ್ಚಿ ಆರು ನಗರಗಳಲ್ಲಿ ಪ್ರಾರಂಭಗೊಳ್ಳಲಿದೆ, ಇದರಲ್ಲಿ ಬೆಂಗಳೂರು ಆವೃತ್ತಿಯ ವಿಜೇತರು ಚೆನ್ನೈನಲ್ಲಿ ನಡೆಯಲಿರುವ ರಾಷ್ಟ್ರೀಯ ಫೈನಲ್ನಲ್ಲಿ ಪರಸ್ಪರ ಮುಖಾಮುಖಿಯಾಗಲಿದ್ದಾರೆ.

ಅಪೊಲೊ ಟೈರ್ಸ್ ಲಿಮಿಟೆಡ್ನ ಏಷ್ಯಾ ಪೆಸಿಫಿಕ್, ಮಧ್ಯಪ್ರಾಚ್ಯ ಮತ್ತು ಆಫ್ರಿಕಾ (ಎಪಿಎಂಇಎ), ಮಾರ್ಕೆಟಿಂಗ್ ಗ್ರೂಪ್ ಹೆಡ್ ವಿಕ್ರಮ್ ಗರ್ಗಾ ಈ ಬಗ್ಗೆ ಮಾತನಾಡಿ, ಓಲ್ಡ್ ಟ್ರಾಫರ್ಡ್‌ನಲ್ಲಿ ಆಡುವುದು ಒಂದು ಮಹತ್ವದ ಮೈಲಿಗಲ್ಲು ಮತ್ತು ಕ್ರೀಡಾಂಗಣದ ಶ್ರೀಮಂತ ಇತಿಹಾಸ, ಉತ್ಸಾಹಭರಿತ ಅಭಿಮಾನಿ ಬಳಗದ ಕಾರಣದಿಂದ ಮತ್ತು ಜಾಗತಿಕವಾಗಿ ಅತ್ಯಂತ ಯಶಸ್ವಿ ಫುಟ್ಬಾಲ್ ಕ್ಲಬ್ಗಳಲ್ಲಿ ಒಂದಾದ ಮ್ಯಾಂಚೆಸ್ಟರ್ ಯುನೈಟೆಡ್ಗೆ ಸಂಬಂಧಿಸಿದ ಭವ್ಯತೆ ಕಾರಣದಿಂದ ಇದು ಪ್ರತಿಷ್ಠಿತ ಅವಕಾಶವಾಗಿದೆ. 'ರೋಡ್ ಟು ಓಲ್ಡ್ ಟ್ರಾಫರ್ಡ್' ಉಪಕ್ರಮದೊಂದಿಗೆ, ನಾವು ಭಾರತದಲ್ಲಿ ಫುಟ್ಬಾಲ್ನ ಉತ್ಸಾಹವನ್ನು ಆಚರಿಸಲು ಮತ್ತು ಪ್ರತಿಭಾವಂತ ಫುಟ್ಬಾಲ್ ಆಟಗಾರರಿಗೆ ತಮ್ಮ ಸಾಮರ್ಥ್ಯವನ್ನು ಪ್ರದರ್ಶಿಸಲು ವೇದಿಕೆ ನೀಡುವ ಗುರಿಯನ್ನು ಹೊಂದಿದ್ದೇವೆ. ಈ ಸಣ್ಣ ಹೆಜ್ಜೆಯು ಯುವ ಭಾರತೀಯ ಫುಟ್ಬಾಲ್ ಆಟಗಾರರನ್ನು ತಮ್ಮ ಆಟವನ್ನು ಮುಂದಿನ ಹಂತಕ್ಕೆ ಕೊಂಡೊಯ್ಯಲು ಪ್ರೇರೇಪಿಸುವ ಮತ್ತು ಸ್ಫೂರ್ತಿ ತುಂಬವಲ್ಲಿ ಬಹಳ ದೂರ ಸಾಗುತ್ತದೆ ಎಂದು ನಾವು ಭಾವಿಸುತ್ತೇವೆ ಎಂದು ಹೇಳಿದರು.

ಕಳೆದ ಆವೃತ್ತಿಯನ್ನು ಮುಂಬೈನ ಕಲಿನಾ ರೇಂಜರ್ಸ್ ಗೆದ್ದಿದ್ದರು. ಅವರು ತಮ್ಮ ಅಸಾಧಾರಣ ಫುಟ್ಬಾಲ್ ಕೌಶಲ್ಯಗಳನ್ನು ಪ್ರದರ್ಶಿಸುವ ಮೂಲಕ ಪಂದ್ಯಾವಳಿಯ ಭಾರತ ಆವೃತ್ತಿಯಲ್ಲೂ ವಿಜೇತರಾಗಿದ್ದರು. ಅವರ ವಿರುದ್ಧ ಮಾಜಿ ಮ್ಯಾಂಚೆಸ್ಟರ್ ಯುನೈಟೆಡ್ ಸ್ಟಾರ್ ಡಿಮಿಟರ್ ಬರ್ಬಟೋವ್, ತ್ರಿವಳಿ ವಿಜೇತರಾದ ವೆಸ್ ಬ್ರೌನ್ ಮತ್ತು ಆಂಡಿ ಕೋಲ್ ಅವರನ್ನು ಒಳಗೊಂಡಿರುವ ಲೆಜೆಂಡ್ಸ್ ತಂಡವು ಭಾರತೀಯ ಫುಟ್ಬಾಲ್ ಹೀರೋಗಳಾದ ರೆನೆಡಿ ಸಿಂಗ್, ಜೆಜೆ ಲಾಲ್ಪೆಖ್ಲುವಾ, ರಾಬಿನ್ ಸಿಂಗ್ ಮತ್ತು ತಾನ್ವಿ ಹ್ಯಾನ್ಸ್ ಅವರನ್ನು ಒಳಗೊಂಡಿತ್ತು.

ಪಂದ್ಯಾವಳಿಯ ನೋಂದಣಿಗಳು ಈಗ ಮುಕ್ತವಾಗಿವೆ ಮತ್ತು ಆಸಕ್ತ ತಂಡಗಳು ಇಲ್ಲಿ ನೋಂದಾಯಿಸಿಕೊಳ್ಳಬಹುದು - https://www.apollotyres.com/en-in/stories/campaigns/sports/road-to-old-trafford/rtot-consumer-contest/

# ನಾಚುರಲ್ ಸ್ಟಾರ್ ನಾನಿ ಕುರಿತ ಹೇಳಿಕೆ ವೈರಲ್



ನಾಚುರಲ್ ಸ್ಟಾರ್ ನಾನಿ ತಮ್ಮ ನಟನೆಯಿಂದಲೇ ಸಾಕಷ್ಟು ಹೆಸರುವಾಸಿಯಾಗಿದ್ದಾರೆ. ಕನ್ನಡಿಗರಿಗೂ ಇವರು ಪರಿಚಿತರು. ಕನ್ನಡಕ್ಕೆ ಡಬ್ ಆಗುವ ಅವರ ಸಿನಿಮಾಗಳನ್ನು ನೋಡಲು ಸಿನಿ ರಸಿಕರು ಇಷ್ಟಪಡುತ್ತಾರೆ. ಇದೀಗ ಸ್ಟಾರ್ ನಿರ್ದೇಶಕರೊಬ್ಬರು ನಾನಿ ಕುರಿತು ನೀಡಿರುವ ಹೇಳಿಕೆ ಸಾಕಷ್ಟು ವೈರಲ್ ಆಗಿದೆ.

ಹೌದು, ಟೀಸರ್ ನಿಂದಲೇ ರಜಾಕಾರ್ ಚಿತ್ರ ಉತ್ತಮ ಸ್ಪಂದನೆ ಪಡೆಯುತ್ತಿದೆ. ಈ ನಡುವೆ ಟಾಲಿವುಡ್ ನಲ್ಲಿ ಸಾಕಷ್ಟು ಖ್ಯಾತಿ ಗಳಿಸಿರುವ ನಾಯಕ ನಾನಿ ಬಗ್ಗೆ ಈ ಚಿತ್ರದ ನಿರ್ದೇಶಕರು ಮಾಡಿರುವ ಕಾಮೆಂಟ್ಗಳು ಎಲ್ಲರಲ್ಲೂ ಅಚ್ಚರಿ ಮೂಡಿಸುತ್ತಿವೆ.

ನ್ಯಾಚುರಲ್ ಸ್ಟಾರ್ ಎಂದೇ ಗುರುತಿಸಿಕೊಂಡಿರುವ ನಾನಿ ಕೆಳಮಟ್ಟದಿಂದ ಬಂದು ಸ್ಟಾರ್ ಪಟ್ಟ ಪಡೆದುಕೊಂಡಿದ್ದಾರೆ. ಹಾಗಾಗಿಯೇ ತೆಲುಗಿನಲ್ಲಿ ನಾನಿಗೆ ಸಾಕಷ್ಟು ಅಭಿಮಾನಿಗಳಿದ್ದಾರೆ, ಕನ್ನಡದಲ್ಲೂ ಇದ್ದಾರೆ. ಆದರೆ ಇತ್ತೀಚೆಗಷ್ಟೇ ರಜಾಕಾರ್ ಚಿತ್ರದ ನಿರ್ದೇಶಕರು ಕೂಲ್ ನಾನಿ ಬಗ್ಗೆ ನೀಡಿರುವ ಹೇಳಿಕೆ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.

ನಿರ್ದೇಶಕ ಯಾತ ಸತ್ಯನಾರಾಯಣ, ಖ್ಯಾತ ನಿರ್ದೇಶಕ ಕೆ.ರಾಘವೇಂದ್ರರಾವ್ ಅವರ ಶಿಷ್ಯ. ಈ ನಿರ್ದೇಶಕರು ಹಲವು ಸೂಪರ್ ಹಿಟ್ ಧಾರಾವಾಹಿಗಳನ್ನು ನಿರ್ಮಿಸಿದ್ದರು. ಅಲ್ಲರಿ ಬುಲ್ಲೋಡು ಚಿತ್ರದಲ್ಲಿ ಸಹ ನಿರ್ದೇಶಕರಾಗಿ ಯಾತ ಸತ್ಯನಾರಾಯಣ ಪ್ರವೇಶ ಮಾಡಿದರು. ಅಲ್ಲದೆ, ಯಾತ ಸತ್ಯನಾರಾಯಣ ಅವರಿಗೆ ನಾನಿ ಸಹಾಯಕ ನಿರ್ದೇಶಕನಾಗಿ ಕೆಲಸ ಮಾಡುತ್ತಿದ್ದರು.

ಇನ್ನು ಹಲವು ವರ್ಷಗಳ ಕಾಲ ಸಹಾಯಕ ನಿರ್ದೇಶಕರಾಗಿದ್ದ ನಾನಿ ಹೀರೋ ಆದ ನಂತರ ಸಾಕಷ್ಟು ಬದಲಾಗಿದ್ದಾರೆ ಅಂತ ನಿರ್ದೇಶಕ ಯಾತ ಹೇಳಿದ್ದಾರೆ. ನಾನಿ ಹೀರೋ ಆದ ನಂತರ ನಾನಿ ತಮ್ಮ ಜೊತೆ ಮಾತು ನಿಲ್ಲಿಸಿದರು ಅಂತ ನಿರ್ದೇಶಕರು ಹೇಳಿಕೊಂಡಿದ್ದಾರೆ. 'ಅಷ್ಟಾಚೆಮ್ಮಾ' ಸಿನಿಮಾದ ಮೂಲಕ ನಾನಿ ಹೀರೋ ಆಗಿ ಲಾಂಚ್ ಆದಾಗಲೂ ನಾನಿ ಅವರಿಗೆ ಒಂದು ಮಾತನ್ನೂ ಹೇಳಲಿಲ್ಲ ಎಂದು ಯಾತ ಹೇಳಿದ್ದಾರೆ.

ಅಲ್ಲದೆ, ಅವರ ಜೊತೆ ಸಿನಿಮಾ ಮಾಡಿದರೆ.. ಹಿಂದಿನಂತೆ ಸರ್ ಅನ್ನಬೇಕು ಅಂತ ಫೋನ್ ಎತ್ತುವುದನ್ನೂ ಬಿಟ್ಟರು.. ಹೀರೋ ಆಗುವ ಮುನ್ನ ನಾನಿ ಹೇಗಿದ್ದರು, ಇವಾಗ ಬದಲಾಗಿದ್ದಾರೆ ಅಂತ ನಿರ್ದೇಶಕ ಯಾತ ಸತ್ಯನಾರಾಯಣ ಹೇಳಿದರು.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಅತಿಯಾದ ಒಳ್ಳೆಯತನ, ಸ್ಥಿರಾಸ್ತಿ ತಗಾದೆ, ಸಂಕಷ್ಟ, ಆರೋಗ್ಯ ಸಮಸ್ಯೆ.

**ವೃಷಭ:** ಮಿತ್ರರಿಂದ ನಷ್ಟ, ವ್ಯವಹಾರದಲ್ಲಿ ಕಿರಿಕಿರಿ, ನಿದ್ರಾ ಭಂಗ.

**ಮಿಥುನ:** ಅನ್ಯ ಜನರಲ್ಲಿ ವೈಮನಸ್ಸು, ಅನಾವಶ್ಯಕ ಮಾತುಗಳಿಂದ ದೂರವಿರಿ, ಆದಾಯ ಕಡಿಮೆ ಖರ್ಚು ಜಾಸ್ತಿ.

**ಕಟಕ:** ಪುಣ್ಯಕ್ಷೇತ್ರ ದರ್ಶನ, ದುರಾಲೋಚನೆ, ನಿಷ್ಠುರ, ಅನಾರೋಗ್ಯ, ಸಣ್ಣಪುಟ್ಟ

**ಸಿಂಹ:** ಮನೆಯಲ್ಲಿ ಸಂತಸ, ಹಿರಿಯರಲ್ಲಿ ಭಕ್ತಿ, ಉತ್ತಮ ವಹಿವಾಟು, ಉದ್ಯೋಗ.

**ಕನ್ಯಾ:** ಶತ್ರುಗಳಿಂದ ತೊಂದರೆ, ಅಧಿಕ ಖರ್ಚು, ಚಂಚಲ ಮನಸ್ಸು, ಉದ್ಯೋಗದಲ್ಲಿ ಬಡ್ತಿ, ಪರರ ಧನಪ್ರಾಪ್ತಿ.

**ತುಲಾ:** ಬಂಧು ಮಿತ್ರರ ಭೇಟಿ, ಅನ್ಯ ಜನರಲ್ಲಿ ಪ್ರೀತಿ, ವಿವಾಹ ಯೋಗ, ಶರೀರದಲ್ಲಿ ತಳಮಳ.

**ವೃಶ್ಚಿಕ:** ಕೆಲಸ ಕಾರ್ಯಗಳಲ್ಲಿ ವಿಘ್ನ, ಸ್ಥಳ ಬದಲಾವಣೆ, ಹಣಕಾಸಿನ ತೊಂದರೆ, ವಾಹನದಿಂದ ಕಂಟಕ.

**ಧನಸ್ಸು:** ಮಾನಸಿಕ ಒತ್ತಡ, ಪರಸ್ತ್ರಿ ಸಹವಾಸ, ಸೌಜನ್ಯದಿಂದ ವರ್ತಿಸಿ, ವ್ಯರ್ಥ ಧನಹಾನಿ.

**ಮಕರ:** ಅತಿಯಾದ ಭಯ, ವಾದ ವಿವಾದ, ಮಿತ್ರರ ಬೆಂಬಲ.

**ಕುಂಭ:** ಹಿತಶತ್ರು ಭಾದೆ, ವಿವೇಚನೆ ಕಳೆದುಕೊಳ್ಳಬೇಡಿ, ಮಾತಾಪಿತರಲ್ಲಿ ಪ್ರೀತಿ.

**ಮೀನ:** ವಿಧೇಯತೆಯೇ ಯಶಸ್ಸಿನ ಮೆಟ್ಟಿಲು, ಅನಾವಶ್ಯಕ ದುಂದು ವೆಚ್ಚ, ಕಾರ್ಯ ವಿಕಲ್ಪ.

## ಇಂಟರ್ ನ್ಯಾಷನಲ್ ಟೀಚ್ ಮ್ಯೂಸಿಕ್ ವೀಕ್



ಅಂತರರಾಷ್ಟ್ರೀಯ ಟೀಚ್ ಮ್ಯೂಸಿಕ್ ವೀಕ್ ಅನ್ನು ಪ್ರತಿ ವರ್ಷ ಮಾರ್ಚ್ ಮೂರನೇ ವಾರದಲ್ಲಿ ಪ್ರಪಂಚದಾದ್ಯಂತ ಆಚರಿಸಲಾಗುತ್ತದೆ. ಈ ವರ್ಷ, ಇದು ಮಾರ್ಚ್ 18 ರಿಂದ 24 ರವರೆಗೆ ನಡೆಯುತ್ತದೆ. ವಾರವು ಸಂಗೀತ ಪ್ರೇಮಿಗಳು, ಸಂಗೀತಗಾರರು ಮತ್ತು ಸಂಗೀತ ಶಾಲೆಗಳನ್ನು ಹೊಸ ವಿದ್ಯಾರ್ಥಿಗಳನ್ನು ತೆಗೆದುಕೊಳ್ಳಲು ಮತ್ತು ಅವರನ್ನು ಸಂಗೀತದ ಜಗತ್ತಿಗೆ ಪರಿಚಯಿಸಲು ಪ್ರೋತ್ಸಾಹಿಸುತ್ತದೆ. ಅನೇಕವೇಳೆ, ಮೊದಲ ಹೆಜ್ಜೆಯು ತೆಗೆದುಕೊಳ್ಳಲು ಕಷ್ಟಕರವಾಗಿರುತ್ತದೆ ಮತ್ತು ಸಂಗೀತವನ್ನು ಕಲಿಯಲು ಉತ್ಸುಕರಾಗಿರುವವರು ತಮ್ಮ ಪ್ರಯಾಣವನ್ನು ಪ್ರಾರಂಭಿಸಲು ಸರಿಯಾದ ಮಾರ್ಗದರ್ಶನವನ್ನು ಕಂಡುಕೊಳ್ಳುತ್ತಾರೆ ಎಂದು ಅಂತರರಾಷ್ಟ್ರೀಯ ಟೀಚ್ ಮ್ಯೂಸಿಕ್ ವೀಕ್ನಂತಹ ಆಚರಣೆಗಳು ಖಚಿತಪಡಿಸುತ್ತವೆ. ಸಂಗೀತ ಸಮುದಾಯಕ್ಕೆ ಹೆಜ್ಜೆ ಹಾಕಲು ಇದು ಅದ್ಭುತ ಸಮಯ. ಸಂಗೀತದ ಸಂತೋಷವನ್ನು ಹಂಚಿಕೊಂಡ ಎಲ್ಲರಿಗೂ ಅಂತರರಾಷ್ಟ್ರೀಯ ಕಲಿಸುವ ಸಂಗೀತ ವಾರದ ಶುಭಾಶಯಗಳು. ಇಂಟರ್ನ್ಯಾಷನಲ್ ಟೀಚ್ ಮ್ಯೂಸಿಕ್ ವೀಕ್ ಅನ್ನು ಮೊದಲ ಬಾರಿಗೆ 2014 ರಲ್ಲಿ ಆಚರಿಸಲಾಯಿತು. ಈ ವಾರದ ಅವಧಿಯ ವಾರ್ಷಿಕ ಆಚರಣೆಯು ಹೊಸ ವಿದ್ಯಾರ್ಥಿಗಳಿಗೆ ಉಚಿತ ಪಾಠ ಅಥವಾ ತರಗತಿಗಳನ್ನು ನೀಡಲು ಸಂಗೀತಗಾರರು, ಸಂಗೀತ ಶಾಲೆಗಳು, ಸಂಗೀತ ಮಳಿಗೆಗಳು ಮತ್ತು ಇತರ ಸಂಗೀತ ಸಂಸ್ಥೆಗಳನ್ನು ಆಹ್ವಾನಿಸುತ್ತದೆ. ಪಾಠಗಳನ್ನು ವಯಸ್ಕರು ಮತ್ತು ಮಕ್ಕಳು ಇಬ್ಬರಿಗೂ ಲಭ್ಯವಾಗುವಂತೆ ಮಾಡಲಾಗಿದೆ. ಪ್ರಾರಂಭದಿಂದಲೂ, ಇಂಟರ್ನ್ಯಾಷನಲ್ ಟೀಚ್ ಮ್ಯೂಸಿಕ್ ವೀಕ್ ಅನ್ನು ಯುಎಸ್, ಆಸ್ಟ್ರೇಲಿಯಾ, ಬ್ರೆಜಿಲ್, ಕೆನಡಾ, ಕ್ರೊಯೇಷಿಯಾ, ಭಾರತ, ಐರ್ಲೆಂಡ್, ಜಪಾನ್, ಮಾಲ್ಟಾ, ಮೆಕ್ಸಿಕೋ, ನ್ಯೂಜಿಲೆಂಡ್, ನೈಜೀರಿಯಾ, ನೆದರ್ಲ್ಯಾಂಡ್ಸ್, ಫಿಲಿಪೈನ್ಸ್ ಸೇರಿದಂತೆ 15 ದೇಶಗಳಲ್ಲಿ 1,000 ಕ್ಕೂ ಹೆಚ್ಚು ಸ್ಥಳಗಳಲ್ಲಿ ಆಚರಿಸಲಾಗುತ್ತದೆ. , ಸ್ವಿಟ್ಜರ್ಲೆಂಡ್, ಮತ್ತು ಗ.ಎ. ಸಂಗೀತವು ನಿಜವಾಗಿಯೂ ನಮ್ಮನ್ನು ಬೇರೆಯವರಂತೆ ಬಂಧಿಸುತ್ತದೆ! ಇಂಟರ್ನ್ಯಾಷನಲ್ ಟೀಚ್ ಮ್ಯೂಸಿಕ್ ವೀಕ್ ಕೀಪ್ ಮ್ಯೂಸಿಕ್ ಅಲೈವ್ ಸಂಸ್ಥೆಯ ಮೆದುಳಿನ ಕೂಸು. ವಿನ್ಸೆಂಟ್ ಜೇಮ್ಸ್, ಸಹ-ಸಂಸ್ಥಾಪಕ, ತಮ್ಮ ಸಂಸ್ಥೆಯು ಸಂಗೀತ ಮತ್ತು ಕಲೆಗಳೊಂದಿಗೆ ಪಾಲುದಾರರಾಗಲು ರೋಮಾಂಚನಗೊಂಡಿದೆ ಮತ್ತು ಪ್ರತಿ ವರ್ಷ ಒಂದು ದಶಲಕ್ಷಕ್ಕೂ ಹೆಚ್ಚು ಸಂಗೀತ ಪಾಠಗಳನ್ನು ಕಲಿಸುತ್ತದೆ ಎಂದು ಹೇಳಿದರು. ಸಂಗೀತ ಶಿಕ್ಷಣದ ಸಮರ್ಥನೆಗೆ ಅವರ ಬದ್ಧತೆ ಮತ್ತು ಸಮರ್ಪಣೆಯನ್ನು ಅನೇಕರು ಶ್ಲಾಘಿಸಿದ್ದಾರೆ, ಅವರು ಎಷ್ಟು ಸಾಧ್ಯವೋ ಅಷ್ಟು ವಿದ್ಯಾರ್ಥಿಗಳಿಗೆ ಕಲಿಸುವುದನ್ನು ಮುಂದುವರೆಸಿದ್ದಾರೆ. ಸಂಗೀತದ ಶೈಕ್ಷಣಿಕ, ಚಿಕಿತ್ಸಕ ಮತ್ತು ಸಾಮಾಜಿಕ ಪ್ರಯೋಜನಗಳಿಂದ ಹೆಚ್ಚಿನ ಮಕ್ಕಳು ಮತ್ತು ವಯಸ್ಕರಿಗೆ ಪ್ರಯೋಜನವನ್ನು ಪಡೆಯಲು ಸಹಾಯ ಮಾಡುವ ಉದ್ದೇಶದಿಂದ ಸಂಗೀತವನ್ನು ಜೀವಂತವಾಗಿರಿಸಿಕೊಳ್ಳಿ ರಾಷ್ಟ್ರೀಯ ಲಾಭರಹಿತವಾಗಿದೆ. ಈ ಕಾರ್ಯಾಚರಣೆಯನ್ನು ಬೆಂಬಲಿಸಲು, ಅವರು ಎರಡು ಅಂತರರಾಷ್ಟ್ರೀಯ ಸಂಗೀತ ರಜಾದಿನಗಳನ್ನು ಪ್ರಾರಂಭಿಸಿದರು; ಇಂಟರ್ನ್ಯಾಷನಲ್ ಟೀಚ್ ಮ್ಯೂಸಿಕ್ ವೀಕ್ ಮತ್ತು ಕಿಡ್ಸ್ ಮ್ಯೂಸಿಕ್ ಡೇ! ಸಂಗೀತ ಪಾಠಗಳ ಹೊರತಾಗಿ, ಚಾರಿಟಿ ಕನ್ಸರ್ಟ್‌ಗಳು, ಪ್ರದರ್ಶನಗಳು ಮತ್ತು ಸಂಗೀತ ಕಚೇರಿಗಳನ್ನು ಅಂತರರಾಷ್ಟ್ರೀಯ ಟೀಚ್ ಮ್ಯೂಸಿಕ್ ವೀಕ್ನಲ್ಲಿ ಆಯೋಜಿಸಲಾಗುತ್ತದೆ. ಸಂಗೀತವು ಕೇವಲ ವಿನೋದವಲ್ಲ, ಅದು ನಮ್ಮ ಭಾವನಾತ್ಮಕ ಯೋಗಕ್ಷೇಮದಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸುತ್ತದೆ. ಸಂಗೀತ ಚಿಕಿತ್ಸೆಯು ನಮ್ಮ ಆರೋಗ್ಯಕ್ಕೆ ಪ್ರಯೋಜನಕಾರಿ ಎಂದು ಸಾಬೀತಾಗಿದೆ ಮತ್ತು ಇದು ಒತ್ತಡ ಮತ್ತು ಆತಂಕವನ್ನು ನಿವಾರಿಸುತ್ತದೆ.



## ಅಫ್ಘಾನಿಸ್ತಾನದಲ್ಲಿ ಬಸ್-ಟ್ಯಾಂಕರ್ ಡಿಕ್ಕಿ: 21 ಸಾವು

ಕಾಬೂಲ್: ದಕ್ಷಿಣ ಅಫ್ಘಾನಿಸ್ತಾನದ ಹೆಲ್ಮಂಡ್ ಪ್ರಾಂತದಲ್ಲಿ ಬಸ್ಸೊಂದು ತೈಲ ಟ್ಯಾಂಕರ್ ಮತ್ತು ಬೈಕ್ಗೆ ಡಿಕ್ಕಿಯಾಗಿ 21 ಮಂದಿ ಸಾವನ್ನಪ್ಪಿದ್ದು ಇತರ 38 ಮಂದಿ ಗಾಯಗೊಂಡಿರುವುದಾಗಿ ಪ್ರಾಂತೀಯ ಅಧಿಕಾರಿಗಳು ಹೇಳಿದ್ದಾರೆ. ಹೆಲ್ಮಂಡ್ ಪ್ರಾಂತದ ಗ್ರಿಷಿಕ್ ಜಿಲ್ಲೆಯ ಹೆರಾತ್-ಕಂದಹಾರ್ ಹೆದ್ದಾರಿಯಲ್ಲಿ ರವಿವಾರ ಬೆಳಿಗ್ಗೆ ಅಪಘಾತ ಸಂಭವಿಸಿದ್ದು ಮೂರೂ ವಾಹನಗಳು ಹೊತ್ತಿ ಉರಿದಿವೆ. 21 ಮಂದಿ ಮೃತಪಟ್ಟಿದ್ದು 38 ಮಂದಿ ಗಾಯಗೊಂಡಿದ್ದಾರೆ. 11 ಗಾಯಾಳುಗಳ ಸ್ಥಿತಿ ಗಂಭೀರವಾಗಿದೆ ಎಂದು ಹೆಲ್ಮಂಡ್ ಗವರ್ನರ್‌ರ ವಕ್ತಾರ ಮುಹಮ್ಮದ್ ಖಾಸಿನ್ ರಿಯಾಝ್‌ರನ್ನು ಉಲ್ಲೇಖಿಸಿ ಎಎಫ್ಪಿ ಸುದ್ದಿಸಂಸ್ಥೆ ವರದಿ ಮಾಡಿದೆ. ಹೆರಾತ್ ನಗರದಿಂದ ರಾಜಧಾನಿ ಕಾಬೂಲ್ಗೆ ತೆರಳುತ್ತಿದ್ದ ಪ್ರಯಾಣಿಕರ ಬಸ್ ಮೋಟಾರ್ ಬೈಕ್ಗೆ ಡಿಕ್ಕಿಯಾಗಿದ್ದು ಬೈಕ್ನಲ್ಲಿ ಪ್ರಯಾಣಿಸುತ್ತಿದ್ದ ಇಬ್ಬರು ಮೃತಪಟ್ಟಿದ್ದಾರೆ. ಇದರಿಂದ ಚಾಲಕನ ನಿಯಂತ್ರಣ ಕಳೆದುಕೊಂಡ ಬಸ್ ಕಂದಹಾರ್ನಿಂದ ಹೆರಾತ್ಗೆ ತೈಲ ಸಾಗಿಸುತ್ತಿದ್ದ ಟ್ಯಾಂಕರ್ಗೆ ಡಿಕ್ಕಿ ಹೊಡೆದಿದ್ದು ಟ್ಯಾಂಕರ್ ನಲ್ಲಿದ್ದ ಮೂವರು ಹಾಗೂ 16 ಬಸ್ ಪ್ರಯಾಣಿಕರು ಸಾವನ್ನಪ್ಪಿದ್ದಾರೆ ಎಂದು ಅಫ್ಘಾನಿಸ್ತಾನದ ಮಾಹಿತಿ ಸಚಿವಾಲಯ ಹೇಳಿದೆ.

## ಅಮೆರಿಕಕ್ಕೆ ನಮ್ಮ ಇತಿಹಾಸ ಬಗ್ಗೆ ಗೊತ್ತಿಲ್ಲ: ಜೈಶಂಕರ್

ಪೌರತ್ವ ತಿದ್ದುಪಡಿ ಕಾಯ್ದೆ (ಸಿಎಎ) ಕುರಿತು ಟೀಕಿಸಿದ ಅಮೆರಿಕಕ್ಕೆ ಭಾರತೀಯ ವಿದೇಶಾಂಗ ಸಚಿವ ಎಸ್ ಜೈಶಂಕರ್ ತಿರುಗೇಟು ನೀಡಿದ್ದಾರೆ. ಕಾನೂನಿನ ಐತಿಹಾಸಿಕ ಸಂದರ್ಭದ ಬಗ್ಗೆ ತಿಳಿದುಕೊಳ್ಳದೇ ಅಮೆರಿಕ ಟೀಕೆ ಮಾಡಿದೆ. ದೇಶ ಒಡೆದುದ್ದರಿಂದ ಸೃಷ್ಟಿಯಾದ ಸಮಸ್ಯೆಗಳನ್ನು ನಿವಾರಿಸಲು ಈ ಕಾಯ್ದೆ ಜಾರಿ ಮಾಡಲಾಗಿದೆ. ಆದರೆ, ಜಗತ್ತು ಮಾತ್ರ ದೇಶ ಒಡದೇ ಇಲ್ಲ ಎಂಬ ರೀತಿಯಲ್ಲಿ ಪ್ರತಿಕ್ರಿಯಿಸುತ್ತಿದೆ ಎಂದು ಜೈಶಂಕರ್ ಹೇಳಿದ್ದಾರೆ. ಅಮೆರಿಕದ ರಾಯಭಾರಿ ಎರಿಕ್ ಗಾರ್ಸೆಟಿ ಸಿಎಎ ಕಾಯ್ದೆ ಜಾರಿಯನ್ನು ಅಮೆರಿಕ ಸೂಕ್ಷ್ಮವಾಗಿ ಗಮನಿಸುತ್ತಿದೆ ಎಂದಿದ್ದರು. ಅದಕ್ಕೆ ಪ್ರತಿಕ್ರಿಯಿಸಿರುವ ವಿದೇಶಾಂಗ ಸಚಿವ ಜೈಶಂಕರ್, ಭಾರತವನ್ನು ಟೀಕಿಸುತ್ತಿರುವ ದೇಶಗಳು ತಮ್ಮ ನೀತಿಗಳನ್ನು ಪರಿಶೀಲಿಸಿಕೊಳ್ಳುವುದು ಒಳಿತು ಎಂದರು.?ಪ್ರಭುತ್ವ ತತ್ವಗಳ ನ್ಯೂನತೆಗಳ ಬಗ್ಗೆ ಮಾತನಾಡುತ್ತಿಲ್ಲ. ನಮ್ಮ ಇತಿಹಾಸದ ಬಗೆಗಿನ ಅವರ ತಿಳಿವಳಿಕೆಯನ್ನು ಪ್ರಶ್ನಿಸುತ್ತಿದ್ದೇನೆ ಎಂದರು.



## ಇಸ್ರೇಲ್ ದಾಳಿಯಲ್ಲಿ 13,000ಕ್ಕೂ ಹೆಚ್ಚು ಮಕ್ಕಳು ಸಾವು

**ಗಾಝಾ:** ಇಸ್ರೇಲ್ ದಾಳಿಯಲ್ಲಿ ಗಾಝಾದಲ್ಲಿ 13,000 ಕ್ಕೂ ಹೆಚ್ಚು ಮಕ್ಕಳು ಸಾವನ್ನಪ್ಪಿದ್ದಾರೆ ಎಂದು ವಿಶ್ವಸಂಸ್ಥೆಯ ಮಕ್ಕಳ ಸಂಸ್ಥೆ ಭಾನುವಾರ ಹೇಳಿದೆ, ಅನೇಕ ಮಕ್ಕಳು ತೀವ್ರ ಅಪೌಷ್ಟಿಕತೆಯಿಂದ ಬಳಲುತ್ತಿದ್ದಾರೆ ಮತ್ತು ಅಳಲು ಸಹ ಶಕ್ತಿಯಿಲ್ಲ ಎಂದು ಹೇಳಿದೆ.

ಸಾವಿರಾರು ಜನರು ಗಾಯಗೊಂಡಿದ್ದಾರೆ ಅಥವಾ ಅವರು ಎಲ್ಲಿದ್ದಾರೆಂದು ನಾವು ನಿರ್ಧರಿಸಲು ಸಾಧ್ಯವಿಲ್ಲ. ಅವರು ಅವಶೇಷಗಳ ಅಡಿಯಲ್ಲಿ ಸಿಲುಕಿರಬಹುದು ವಿಶ್ವದ ಬೇರೆ ಯಾವುದೇ ಸಂಘರ್ಷದಲ್ಲಿ ಮಕ್ಕಳಲ್ಲಿ ಸಾವಿನ ಪ್ರಮಾಣವನ್ನು ನಾವು ನೋಡಿಲ್ಲ ಎಂದು ಯುನಿಸೆಫ್ ಕಾರ್ಯನಿರ್ವಾಹಕ ನಿರ್ದೇಶಕ ಕ್ಯಾಥರೀನ್ ರಸ್ಸೆಲ್ ಭಾನುವಾರ ಸಿಬಿಎಸ್ ನ್ಯೂಸ್ನ ಫೇಸ್ ದಿ ನೇಷನ್ ಕಾರ್ಯಕ್ರಮದಲ್ಲಿ ಹೇಳಿದರು.

ನಾನು ತೀವ್ರ ರಕ್ತಹೀನತೆ ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳ ವಾರ್ಡ್ಗಳಲ್ಲಿದ್ದೆ, ಇಡೀ ವಾರ್ಡ್ ಸಂಪೂರ್ಣವಾಗಿ ಶಾಂತವಾಗಿದೆ. ಏಕೆಂದರೆ ಮಕ್ಕಳು, ಶಿಶುಗಳು ಅಳಲು ಸಹ ಶಕ್ತಿಯೂ ಇಲ್ಲ.ಎಂದು ಹೇಳಿದರು. ಗಾಝಾದ ಸ್ಥಳಾಂತರಗೊಂಡವರು ತಮ್ಮ ರಂಜಾನ್ ಉಪವಾಸವನ್ನು ಅವಶೇಷಗಳಲ್ಲಿ ಸಿದ್ಧಪಡಿಸಿದ ಆಹಾರದೊಂದಿಗೆ ಮುರಿಯುತ್ತಾರೆ, ಸಹಾಯಕ್ಕಾಗಿ ಗಾಝಾಗೆ ಟ್ರಕ್ ಗಳನ್ನು ಸಾಗಿಸುವುದು ಬಹಳ ದೊಡ್ಡ ಅಧಿಕಾರಶಾಹಿ ಸವಾಲುಗಳು ಎಂದು ರಸೆಲ್ ಹೇಳಿದರು. ಯುದ್ಧದಲ್ಲಿ ಸಾವನ್ನಪ್ಪಿದವರ ಸಂಖ್ಯೆ, ಗಾಝಾದಲ್ಲಿನ ಹಸಿವಿನ ಬಿಕ್ಕಟ್ಟು ಮತ್ತು ಎನ್ಕ್ಲೇವ್ಗೆ ಸಹಾಯ ವಿತರಣೆಯನ್ನು ತಡೆಯುವ ಆರೋಪಗಳಿಂದಾಗಿ ಇಸ್ರೇಲ್ ಮೇಲೆ ಅಂತರರಾಷ್ಟ್ರೀಯ ಟೀಕೆಗಳು ಹೆಚ್ಚಿವೆ.



## ಗೂಡ್ಸ್ ರೈಲಿಗೆ ಡಿಕ್ಕಿ ಹೊಡೆದು ಹಳಿ ತಪ್ಪಿದ ಸೂಪರ್‌ಫಾಸ್ಟ್ ರೈಲು!

**ಗೂಡ್ಸ್ ರೈಲಿಗೆ ಡಿಕ್ಕಿ ಹೊಡೆದ ನಂತರ ಸಬರಮತಿ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ಹಳಿ ತಪ್ಪಿರುವ ಘಟನೆ ರಾಜಸ್ಥಾನದ ಅಜ್ಮೀರ್‌ನಲ್ಲಿ ನಡೆದಿದೆ. ಮಧ್ಯರಾತ್ರಿ 1.04 ರ ಸುಮಾರಿಗೆ ಮದರ್ ರೈಲು ನಿಲ್ದಾಣದ ಬಳಿ ಈ ಘಟನೆ ಸಂಭವಿಸಿದ್ದು, ಸಬರಮತಿ-ಆಗ್ರಾ ಕ್ಯಾಂಟ್ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್, ಗೂಡ್ಸ್ ರೈಲಿಗೆ ಡಿಕ್ಕಿ ಹೊಡೆದಿದೆ.**

**ಅಜ್ಮೀರ್:** ಗೂಡ್ಸ್ ರೈಲಿಗೆ ಡಿಕ್ಕಿ ಹೊಡೆದ ನಂತರ ಸಬರಮತಿ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ಹಳಿ ತಪ್ಪಿರುವ ಘಟನೆ ರಾಜಸ್ಥಾನದ ಅಜ್ಮೀರ್‌ನಲ್ಲಿ ನಡೆದಿದೆ. ಮಧ್ಯರಾತ್ರಿ 1.04 ರ ಸುಮಾರಿಗೆ ಮದರ್ ರೈಲು ನಿಲ್ದಾಣದ ಬಳಿ ಈ ಘಟನೆ ಸಂಭವಿಸಿದ್ದು, ಸಬರಮತಿ-ಆಗ್ರಾ ಕ್ಯಾಂಟ್ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್, ಗೂಡ್ಸ್ ರೈಲಿಗೆ ಡಿಕ್ಕಿ ಹೊಡೆದಿದೆ.

ಬಳಿಕ ಕನಿಷ್ಠ ನಾಲ್ಕು ಕೋಚ್‌ಗಳು ಹಳಿತಪ್ಪಿದ್ದು, ಘಟನೆಯಲ್ಲಿ ಕೆಲವರಿಗೆ ಸಣ್ಣಪುಟ್ಟ ಗಾಯಗಳಾಗಿರುವ ಬಗ್ಗೆ ವರದಿಯಾಗಿದೆ. ರೈಲಿನ ಲೋಕೋ ಪೈಲಟ್ ತುರ್ತು ಬ್ರೇಕ್ ಹಾಕಿದರೂ ಡಿಕ್ಕಿಯನ್ನು ತಪ್ಪಿಸಲು ಸಾಧ್ಯವಾಗಲಿಲ್ಲ ಎಂದು ರೈಲ್ವೆ ಅಧಿಕಾರಿಗಳು ತಿಳಿಸಿದ್ದಾರೆ.

ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ತಕ್ಷಣ ಅಧಿಕಾರಿಗಳು ಅಪಘಾತ ಸ್ಥಳವನ್ನು ತಲುಪಿಸಿದ್ದು, ಹಳಿ ಮರುಸ್ಥಾಪನೆ ಕಾರ್ಯವನ್ನು ಮಾಡಲಾಗುತ್ತಿದೆ ಎಂದು ವಾಯುವ್ಯ ರೈಲ್ವೆಯ ಹಿರಿಯ ಅಧಿಕಾರಿಯೊಬ್ಬರು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

ಅಜ್ಮೀರ್ ನಿಲ್ದಾಣದಲ್ಲಿ ಸಹಾಯ ಕೇಂದ್ರವನ್ನು ಸ್ಥಾಪಿಸಲಾಗಿದೆ ಮತ್ತು ಸಹಾಯವಾಣಿ ಸಂಖ್ಯೆ 0145-2429642 ನೀಡಲಾಗಿದೆ ಎಂದು ಅವರು ಹೇಳಿದರು.ಈ ವರ್ಷದ ಜನವರಿಯಲ್ಲಿ ಭೋಪಾಲ್‌ಗೆ ತೆರಳುತ್ತಿದ್ದ ಎಕ್ಸ್‌ಪ್ರೆಸ್ ರೈಲಿನ ಎರಡು ಬೋಗಿಗಳು ರಾಜಸ್ಥಾನದ ಕೋಟಾದಲ್ಲಿ ಹಳಿತಪ್ಪಿದವು.



## ವಿಶ್ವಸಂಸ್ಥೆಯಲ್ಲಿ ಜೈ ಶ್ರೀರಾಮ್ ಎಂದ ದಲಿತ ಯುವತಿ

**ವಿಶ್ವಸಂಸ್ಥೆ :** ದಲಿತ ಪೌರಕಾರ್ಮಿಕರೊಬ್ಬರ ಮಗಳಾದ ರೋಹಿಣಿ ಘವರಿ ಶನಿವಾರ ವಿಶ್ವಸಂಸ್ಥೆಯ ಕಾರ್ಯಕ್ರಮವನ್ನುದ್ದೇಶಿಸಿ ಭಾಷಣ ಮಾಡಿದ್ದಾರೆ. ಈ ವೇಳೆ ಜೈ ಶ್ರೀರಾಮ್ ಘೋಷಣೆಯೊಂದಿಗೆ ಭಾಷಣ ಪ್ರಾರಂಭ ಮಾಡಿರುವುದು ಹಲವು ಚರ್ಚೆಗಳಿಗೆ ಕಾರಣವಾಗಿದೆ. ಜೈ ಶ್ರೀರಾಮ್ ಘೋಷಣೆಯನ್ನು ಸಮರ್ಥಿಸಿಕೊಂಡ ರೋಹಿಣಿ, ನಾನು ವಾಲ್ಮೀಕಿ ಜನಾಂಗಕ್ಕೆ ಸೇರಿದವಳು. ಇಡೀ ವಿಶ್ವಕ್ಕೆ ರಾಮ ಎಂಬ ಆದರ್ಶಮಾರ್ಗವನ್ನು ನೀಡಿದ ವಾಲ್ಮೀಕಿ ಜನಾಂಗಕ್ಕೆ ನಾನು ಸೇರಿದವಳಾಗಿದ್ದೇನೆ ಎಂದು ಹೇಳಿಕೊಂಡಿದ್ದರು. ದೇಶದ್ಯಂತ ಈ ಹೇಳಿಕೆಗೆ ಸಾಮಾಜಿಕ ಜಾಲತಾಣಗಳಲ್ಲಿ ಪರ ವಿರೋಧ ಚರ್ಚೆಗಳು ಪ್ರಾರಂಭವಾಗಿದೆ. ದಲಿತರ ಮೀಸಲಾತಿಯ ಅಡಿಯಲ್ಲಿ ಶಿಕ್ಷಣ ಪಡೆದವಳು ಇಂದು ಜೈ ಶ್ರೀರಾಮ್ ಎಂದು ಕೂಗುತ್ತಿದ್ದಾಳೆ ಎಂದು ಕೆಲವರು ಕಮೆಂಟ್ ಮಾಡಿದ್ದರೆ, ಇನ್ನೂ ಕೆಲವರು ನಮ್ಮ ದೇಶದಲ್ಲಿ ಪಾಕಿಸ್ತಾನಕ್ಕೆ ಜೈಕಾರ ಕೂಗುವುದು ತಪ್ಪಲ್ಲ. ಆದರೆ ಶ್ರೀರಾಮನಿಗೆ ಜೈಕಾರ ಹಾಕುವುದು ಅಪರಾಧ ಎಂದು ಕಿಡಿಕಾರಿದ್ದಾರೆ.




## ಕಾಂಗ್ರೆಸ್ ತೊರೆದು ಬಿಜೆಪಿ ಸೇರಿದ ಬದರಿನಾಥ್ ಶಾಸಕ ರಾಜೇಂದ್ರ ಭಂಡಾರಿ

ಉತ್ತರಾಖಂಡ ಲೋಕಸಭೆ ಚುನಾವಣೆಗೆ ಅಭ್ಯರ್ಥಿಗಳ ಹೆಸರು ಘೋಷಣೆಯಾದಾಗಿನಿಂದ ಕಾಂಗ್ರೆಸ್ ಪಕ್ಷಕ್ಕೆ ರಾಜೀನಾಮೆ ನೀಡುವ ಪ್ರಕ್ರಿಯೆ ತೀವ್ರಗೊಂಡಿದೆ.

ಉತ್ತರಾಖಂಡ ಲೋಕಸಭೆ ಚುನಾವಣೆಗೆ ಅಭ್ಯರ್ಥಿಗಳ ಹೆಸರು ಘೋಷಣೆಯಾದಾಗಿನಿಂದ ಕಾಂಗ್ರೆಸ್ ಪಕ್ಷಕ್ಕೆ ರಾಜೀನಾಮೆ ನೀಡುವ ಪ್ರಕ್ರಿಯೆ ತೀವ್ರಗೊಂಡಿದೆ.

ಬದರಿನಾಥ ಕ್ಷೇತ್ರದ ಶಾಸಕ ರಾಜೇಂದ್ರ ಭಂಡಾರಿ ಭಾನುವಾರ ಕಾಂಗ್ರೆಸ್ ತೊರೆದು ಬಿಜೆಪಿ ಸೇರಿದ್ದಾರೆ. ರಾಜೇಂದ್ರ ಭಂಡಾರಿ ಅವರ ರಾಜೀನಾಮೆಯನ್ನು ವಿಧಾನಸಭೆಯ ಸ್ಪೀಕರ್ ಸಹ ಅಂಗೀಕರಿಸಿದ್ದಾರೆ. ಇದೀಗ ಬದರಿನಾಥ್ ವಿಧಾನಸಭಾ ಸ್ಥಾನವು ಮಾರ್ಚ್ 17ರಿಂದ ತೆರವಾಗಿದೆ.

ಉತ್ತರಾಖಂಡದ ಬದರಿನಾಥ್ ವಿಧಾನಸಭಾ ಕ್ಷೇತ್ರದ ಶಾಸಕ ರಾಜೇಂದ್ರ ಸಿಂಗ್ ಭಂಡಾರಿ ಅವರು ಭಾನುವಾರ ಮಧ್ಯಾಹ್ನ (ಮಾರ್ಚ್ 17) ಕಾಂಗ್ರೆಸ್‌ಗೆ ರಾಜೀನಾಮೆ



ನೀಡಿ ಬಿಜೆಪಿಗೆ ಸೇರ್ಪಡೆಗೊಂಡಿದ್ದಾರೆ. ದೆಹಲಿಯ ಬಿಜೆಪಿ ರಾಷ್ಟ್ರೀಯ ಕಚೇರಿಯಲ್ಲಿ ಸಿಎಂ ಪುಷ್ಕರ್ ಸಿಂಗ್ ಧಾಮಿ ಮತ್ತು ಅನಿಲ್ ಬಲುನಿ ಅವರ ಸಮ್ಮುಖದಲ್ಲಿ ರಾಜೇಂದ್ರ ಭಂಡಾರಿ ಬಿಜೆಪಿ ಸೇರಿದರು. ರಾಜೇಂದ್ರ ಭಂಡಾರಿ ಪ್ರಸ್ತುತ ಕಾಂಗ್ರೆಸ್‌ನಿಂದ ಬದರಿನಾಥ್‌ನ ಶಾಸಕರಾಗಿದ್ದಾರೆ. 2022ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಯ ಪ್ರಸ್ತುತ ರಾಜ್ಯಾಧ್ಯಕ್ಷರನ್ನು ಸೋಲಿಸಿದ್ದರು.

ಬಿಜೆಪಿ ಸೇರಿದ ನಂತರ ರಾಜೇಂದ್ರ ಭಂಡಾರಿ ಅವರು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿಯಾದರು. ಕಳೆದ 15 ದಿನಗಳಿಂದ ರಾಜೇಂದ್ರ ಭಂಡಾರಿ ಬಿಜೆಪಿ ಸೇರುತ್ತಾರೆ ಎಂಬ ಊಹಾಪೋಹಗಳಿದ್ದರೂ ರಾಜೇಂದ್ರ ಭಂಡಾರಿ ಸೇರಿದಂತೆ ಅವರ ಬೆಂಬಲಿಗರು ಇದನ್ನು ನಿರಾಕರಿಸುತ್ತಲೇ ಬಂದಿದ್ದಾರೆ. ಕೇವಲ 24 ಗಂಟೆಗಳ ಹಿಂದೆ, ಕಾಂಗ್ರೆಸ್ ನ ಪೌರಿ ಅಭ್ಯರ್ಥಿ ಗಣೇಶ್ ಗೋಡಿಯಾಲ್ ಅವರ ಸಾರ್ವಜನಿಕ ಸಭೆಯಲ್ಲಿ, ರಾಜೇಂದ್ರ ಭಂಡಾರಿ ಅವರು ಬಿಜೆಪಿ ಸೇರುವ ಎಲ್ಲಾ ವದಂತಿಗಳನ್ನು ತಳ್ಳಿಹಾಕಿದ್ದರು. ಆದರೆ ಕೇವಲ 24 ಗಂಟೆಗಳ ನಂತರ ರಾಜೇಂದ್ರ ಭಂಡಾರಿ ಬಿಜೆಪಿಗೆ ಸೇರ್ಪಡೆಗೊಂಡರು.

## ದಾನಿಗಳ ಗೌಪ್ಯತೆಯನ್ನೂ ರಕ್ಷಿಸಬೇಕು: ಸಿಇಸಿ

ಚುನಾವಣಾ ಆಯೋಗವು ಚುನಾವಣಾ ಬಾಂಡ್ ಗಳ ವಿಷಯದಲ್ಲಿ ಯಾವಾಗಲೂ ಪಾರದರ್ಶಕತೆಯ ಪರವಾಗಿದೆ, ಆದರೆ ದಾನಿಗಳ ಗೋಪ್ಯತೆಯನ್ನೂ ರಕ್ಷಿಸುವ ಅಗತ್ಯವಿದೆ ಎಂದು ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ರಾಜೀವ್ ಕುಮಾರ್ ಅವರು ಹೇಳಿದ್ದಾರೆ. ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಕುಮಾರ್, 'ದೇಶವು ಈಗ ದಾನಿಗಳ ಗೋಪ್ಯತೆಯೂ ಪರಿಗಣಿಸಲ್ಪಡುವ ಸಾಂಸ್ಥಿಕ ಕಾರ್ಯ ವಿಧಾನದ ಮೂಲಕ ಪರಿಹಾರಗಳನ್ನು ಕಂಡುಕೊಳ್ಳಬೇಕು. ಆದರೆ ಚುನಾವಣೆಗಳಲ್ಲಿ ಕಪ್ಪುಹಣವೂ ಬಳಕೆಯಾಗುತ್ತಿದೆ ಮತ್ತು ಚುನಾವಣೆ ಸಂದರ್ಭದಲ್ಲಿ ಅದನ್ನು ನಿಯಂತ್ರಿಸಲು ನಾವು ಪ್ರಯತ್ನಿಸುತ್ತಿದ್ದೇವೆ. ಲೆಕ್ಕಕ್ಕೆ ಸಿಗದ ದೇಣಿಗೆಗಳನ್ನು ಹೇಗೆ ನಿಯಂತ್ರಿಸಬೇಕು ಎನ್ನುವ ಬಗ್ಗೆ ಇಡೀ ರಾಷ್ಟ್ರವು ಒಂದಾಗಿ ಕಾರ್ಯಾಚರಿಸಬೇಕಿದೆ 'ಎಂದರು. ಎಲ್ಲ ರಾಜಕೀಯ ಪಕ್ಷಗಳು ತಾವು ಸ್ವೀಕರಿಸಿರುವ ದೇಣಿಗೆಗಳು ಮತ್ತು ಆ ಪೈಕಿ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ ಎಂಬ ವಿವರಗಳನ್ನು ಬಹಿರಂಗಗೊಳಿಸುವುದನ್ನು ಚುನಾವಣಾ ಆಯೋಗವು ಕಡ್ಡಾಯಗೊಳಿಸಿದೆ ಎಂದೂ ಕುಮಾರ್ ಹೇಳಿದರು.




## ಹೋಟೆಲ್‌ಗೆ ನುಗ್ಗಿ ಮಚ್ಚಿನಿಂದ ಕೊಚ್ಚಿ ಯುವಕನ ಬರ್ಬರ ಹತ್ಯೆ

**ಪುಣೆ:** ಮಹಾರಾಷ್ಟ್ರ ಹೋಟೆಲ್ ಒಂದರಲ್ಲಿ ಊಟಕ್ಕೆ ಕುಳಿತಿದ್ದ ಯುವಕನನ್ನು ಹಿಂದೆ ಯಿಂದಬಂದ ದುಷ್ಕರ್ಮಿಗಳು ಕೊಚ್ಚಿ ಕೊಲೆ ಮಾಡಿದ್ದಾರೆ ಈ ದೃಶ್ಯ ಸಿಸಿಟಿಯಲ್ಲಿ ಸೆರೆಯಾಗಿದೆ. ತನ್ನ ಮೂವರು ಸ್ನೇಹಿತರೊಂದಿಗೆ ಊಟಕ್ಕೆ ಮಾಡುತ್ತಿದ್ದ ವೇಳೆ ಇದ್ದಕಿದ್ದಂತೆ ಬಂದ ಮೂವರು ಕೊಲೆ ಗಡುಕರು ಮೊದಲು ಶೂಟ್ ಮಾಡಿ ನಂತರ ಮಾರಕಾಸ್ತ್ರಗಳಿಂದ ತಾರಮಾರ ಕೊಚ್ಚಿ ಕೊಲೆ ಮಾಡಿ ಅಲ್ಲಿ ಪರಾರಿಯಾಗಿದ್ದಾರೆ ಇದೀಗ ಈ ದೃಶ್ಯ ಸಿಸಿಟಿವಿ ಯಲ್ಲಿ ಸಂಪೂರ್ಣವಾಗಿ ಸರೆಯಾಗಿದೆ.ಪುಣೆ-ಸೋಲ್ಲಾಪುರ ಹೆದ್ದಾರಿಯ ಇಂದಾಪುರ ಬಳಿಯ ಹೋಟೆಲ್ ಜಗದಂಬಾ ಎಂಬಲ್ಲಿ ಈ ಭೀಕರ ಘಟನೆ ನಡೆದಿದೆ. ಮೃತ ಯುವಕನನ್ನು ಅವಿನಾಶ್ ಬಾಲು ಧನ್ವೆ ಎಂದು ಪೊಲೀಸರು ಗುರುತಿಸಿದ್ದಾರೆ.



## ಭರ್ಜರಿ ಗೆಲುವು ಸಾಧಿಸಿದ ವ್ಲಾದಿಮಿರ್ ಪುಟಿನ್

ರಷ್ಯಾದ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅಧ್ಯಕ್ಷೀಯ ಚುನಾವಣೆಯಲ್ಲಿ ಜಯಗಳಿಸಿದ್ದಾರೆ, ಶೇಕಡಾ 70 ರಷ್ಟು ಚುನಾವಣಾ ಪ್ರೋಟೋಕಾಲ್ಗಳನ್ನು ಸಂಸ್ಕರಿಸಿದ ಫಲಿತಾಂಶದ ಆಧಾರದ ಮೇಲೆ ಶೇಕಡಾ 87.17 ರಷ್ಟು ಮತಗಳನ್ನು ಪಡೆದಿದ್ದಾರೆ ಎಂದು ರಷ್ಯಾ ಮೂಲದ ಟಾಸ್ ವರದಿ



ಮಾಡಿದೆ. ಕಮ್ಯುನಿಸ್ಟ್ ಪಾರ್ಟಿ ಆಫ್ ದಿ ರಷ್ಯನ್ ಫೆಡರೇಶನ್ ಅಭ್ಯರ್ಥಿ ನಿಕೋಲಾಯ್ ಖರಿಟೋನೊವ್ ಶೇ 4.1ರಷ್ಟು ಮತಗಳನ್ನು ಪಡೆದು ಎರಡನೇ ಸ್ಥಾನ ಪಡೆದರೆ, ನ್ಯೂ ಪೀಪಲ್ಸ್ ಪಾರ್ಟಿ ಅಭ್ಯರ್ಥಿ ವ್ಲಾಡಿಸ್ಲಾವ್ ಡಾವಂಕೊವ್ ಶೇ 4.8ರಷ್ಟು ಮತಗಳನ್ನು ಪಡೆದು ಮೂರನೇ ಸ್ಥಾನ ಪಡೆದರು. ಲಿಬರಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ರಷ್ಯಾ (ಎಲ್ಡಿಪಿಆರ್) ಅಭ್ಯರ್ಥಿ ಲಿಯೋನಿಡ್ ಸ್ಲಟ್ಸ್ಕಿ ಕೇವಲ 3.15 ಪ್ರತಿಶತದಷ್ಟು ಮತಗಳನ್ನು ಪಡೆದಿದ್ದಾರೆ. ಭಾನುವಾರ ಸಂಜೆ 6 ಗಂಟೆಗೆ (ಮಾಸ್ಕೋ ಸಮಯ) ಪ್ರಾಥಮಿಕ ಮಾಹಿತಿಯ ಪ್ರಕಾರ, ಮಾರ್ಚ್ 15-17 ರಿಂದ ಮೂರು ದಿನಗಳಲ್ಲಿ ಮೊದಲ ಬಾರಿಗೆ ನಡೆದ ಅಧ್ಯಕ್ಷೀಯ ಚುನಾವಣೆಯಲ್ಲಿ ಮತದಾನದ ಪ್ರಮಾಣವು ಶೇಕಡಾ 74.22 ರಷ್ಟಿದೆ. 2018ರ ಚುನಾವಣೆಯಲ್ಲಿ ಶೇ.67.54ರಷ್ಟು ಮತದಾನವಾಗಿತ್ತು.

## ನಮ್ಮ ಅಧಿಕಾರ ವ್ಯಾಪ್ತಿಯ ಕಣ್ಗಾವಲು ನಮ್ಮ ಹಕ್ಕು : ಮಾಲ್ಡೀವ್ಸ್‌ನ ಅಧ್ಯಕ್ಷ

**ಮಾಲೆ:** ಮಾಲ್ಡೀವ್ಸ್‌ನ ಭದ್ರತೆಯನ್ನು ಸ್ವತಃ ಖಚಿತಪಡಿಸಿಕೊಳ್ಳಲು ತನ್ನ ಸರಕಾರ ಕೈಗೊಂಡ ಕ್ರಮಗಳ ಬಗ್ಗೆ ಯಾವುದೇ 'ಬಾಹ್ಯ ಪಕ್ಷ' ಕಳವಳ ಪಡುವ ಅಗತ್ಯವಿಲ್ಲ ಎಂದು ಮಾಲ್ಡೀವ್ಸ್ ಅಧ್ಯಕ್ಷ ಮುಹಮ್ಮದ್ ಮುಯಿಝ್ಝು ಹೇಳಿದ್ದಾರೆ.

ಮಾಲ್ಡೀವ್ಸ್‌ಗೆ ಭಾರತ ಕೊಡುಗೆ ನೀಡಿದ ಹೆಲಿಕಾಪ್ಟರ್ ಅನ್ನು ನಿರ್ವಹಿಸುವ ಭಾರತದ ಸೇನಾ ಸಿಬಂದಿಯ ಪ್ರಥಮ ತಂಡ ದ್ವೀಪರಾಷ್ಟ್ರದಿಂದ ತೆರಳಿದ ಕೆಲವೇ ದಿನಗಳಲ್ಲಿ ಮುಯಿಝ್ಝು ಈ ಹೇಳಿಕೆ ನೀಡಿದ್ದಾರೆ. ಚೀನಾ ಪರ ನಿಲುವು ಹೊಂದಿರುವ ಮುಯಿಝ್ಝು ಕಳೆದ ನವೆಂಬರ್ ನಲ್ಲಿ ಅಧಿಕಾರ ವಹಿಸಿಕೊಂಡ ಕೂಡಲೇ ಮಾಲ್ಡೀವ್ಸ್‌ನಲ್ಲಿರುವ ಸುಮಾರು 90 ಸೇನಾ ಸಿಬಂದಿಯನ್ನು ವಾಪಾಸು ಕರೆಸಿಕೊಳ್ಳುವಂತೆ ಭಾರತವನ್ನು ಆಗ್ರಹಿಸಿದ್ದರು. ಮಾಲ್ಡೀವ್ಸ್ ನ್ಯಾಷನಲ್ ಡಿಫೆನ್ಸ್ ಫೋರ್ಸ್(ಎಂಎನ್ಡಿಎಫ್)ನ ಏರ್ ಕ್ರಾಫ್ಟ್ ಮತ್ತು ಮಾನವರಹಿತ ವೈಮಾನಿಕ ವಾಹನಗಳ ವಿಭಾಗದ ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು. ಮಾಲ್ಡೀವ್ಸ್ ಸಣ್ಣ ರಾಷ್ಟ್ರವಲ್ಲ ಮತ್ತು ತನ್ನ ಅಧಿಕಾರ ವ್ಯಾಪ್ತಿಯನ್ನು ಮೇಲ್ವಿಚಾರಣೆ ಮಾಡುವ ಸಾಮರ್ಥ್ಯವನ್ನು ಹೊಂದಿದೆ. ಸ್ವತಂತ್ರ ಮತ್ತು ಸಾರ್ವಭೌಮ ದೇಶವಾಗಿರುವ ಮಾಲ್ಡೀವ್ಸ್ ನ ಅಧಿಕಾರ ವ್ಯಾಪ್ತಿಯ ಕಣ್ಗಾವಲು ಯಾವುದೇ ಬಾಹ್ಯ ಪಕ್ಷಗಳಿಗೆ ಸಂಬಂಧಿಸಬಾರದು ಎಂದು ಯಾವುದೇ ದೇಶವನ್ನು ಹೆಸರಿಸದೆ ಮುಯಿಝ್ಝು ಹೇಳಿದರು. ಸ್ವಾವಲಂಬನೆಯ ಕಡೆಗೆ ತನ್ನ ನಡೆಯನ್ನು ನಿರ್ದೇಶಿಸುವ ಮಹತ್ವವನ್ನು ಮತ್ತು ಎಲ್ಲಾ ಕ್ಷೇತ್ರಗಳಲ್ಲೂ ಸ್ವತಂತ್ರ ಮತ್ತು ಸಾರ್ವಭೌಮ ರಾಷ್ಟ್ರವಾಗಿ ಉಳಿಯುವ ಅಗತ್ಯವನ್ನು ಒತ್ತಿಹೇಳಿದರು.

## ಅರುಣಾಚಲ ಪ್ರದೇಶವು ತನ್ನ ಅವಿಭಾಜ್ಯ ಅಂಗ: ಚೀನಾ

ಅರುಣಾಚಲ ಪ್ರದೇಶದ ಮೇಲಿನ ತನ್ನ ಹಕ್ಕನ್ನು ಮತ್ತೆ ಪುನರುಚ್ಚರಿಸಿರುವ ಚೀನಾ ಮಿಲಿಟರಿಯು, ಈ ಪ್ರದೇಶವು ಚೀನಾದ ಅವಿಭಾಜ್ಯ ಅಂಗ ಎಂದಿದೆ.

ಪ್ರಧಾನಿ ನರೇಂದ್ರ ಮೋದಿ ಅವರು ಅರುಣಾಚಲ ಪ್ರದೇಶಕ್ಕೆ ಇತ್ತೀಚೆಗೆ ಭೇಟಿ ನೀಡಿದ್ದಕ್ಕೆ ಬೀಜಿಂಗ್ ಆಕ್ಷೇಪ ವ್ಯಕ್ತಪಡಿಸಿದ್ದು ಇದನ್ನು ಭಾರತ ತಿರಸ್ಕರಿಸಿತ್ತು. ಇದರ ಬೆನ್ನಲ್ಲೇ ಚೀನಾ ಮಿಲಿಟರಿ ಈ ರೀತಿಯಾಗಿ ಪ್ರತಿಕ್ರಿಯಿಸಿದೆ.

'ಝೀಂಗ್ನಾನ್ನ (ಟಿಬೆಟ್ಗೆ ಚೀನಾ ಇಟ್ಟಿರುವ ಹೆಸರು) ದಕ್ಷಿಣ ಭಾಗ (ಅರುಣಾಚಲ ಪ್ರದೇಶ) ಚೀನಾದ ಭೂ ಪ್ರದೇಶದ ಅವಿಭಾಜ್ಯ ಅಂಗ. ಅದನ್ನು ಭಾರತ ಅಕ್ರಮವಾಗಿ ತನ್ನದೆಂದು ಹೇಳುತ್ತಿದೆ. ಅದನ್ನು ಚೀನಾ ಎಂದಿಗೂ ಒಪ್ಪಿಕೊಳ್ಳುವುದಿಲ್ಲ ಮತ್ತು ಬಲವಾಗಿ ವಿರೋಧಿಸುತ್ತದೆ' ಎಂದು ಚೀನಾದ ರಕ್ಷಣಾ ಸಚಿವಾಲಯದ ವಕ್ತಾರ ಕರ್ನಲ್ ಜಾಂಗ್ ಕ್ಸಿಯೋಗಾಂಗ್ ಹೇಳಿದ್ದಾರೆ.

ಚೀನಾ ರಕ್ಷಣಾ ಸಚಿವಾಲಯದ ವೆಬ್ಸೈಟ್ನಲ್ಲಿ ಪೋಸ್ಟ್ ಮಾಡಲಾದ ವರದಿಯ ಪ್ರಕಾರ, ಅರುಣಾಚಲ ಪ್ರದೇಶದ ಸೆಲಾ ಸುರಂಗದ ಮೂಲಕ ಭಾರತವು ತನ್ನ ಸೇನಾ ಸನ್ನದ್ಧತೆಯನ್ನು ಹೆಚ್ಚಿಸಿದ್ದಕ್ಕೆ ಜಾಂಗ್ ಪ್ರತಿಕ್ರಿಯಿಸಿದ್ದಾರೆ.

ಅರುಣಾಚಲ ಪ್ರದೇಶವನ್ನು 'ದಕ್ಷಿಣ ಟಿಬೆಟ್'



ಎಂದು ಚೀನಾ ಪ್ರತಿಪಾದಿಸುತ್ತದೆ. ಅಲ್ಲದೆ ಅಲ್ಲಿಗೆ ತನ್ನ ಹಕ್ಕುಗಳನ್ನು ಎತ್ತಿಹಿಡಿಲು ಭಾರತೀಯ ನಾಯಕರು ಭೇಟಿ ನೀಡಿದಾಗೆಲ್ಲ ಚೀನಾ ವಿರೋಧ ವ್ಯಕ್ತಪಡಿಸಿ, ಪ್ರತಿಭಟನೆ ದಾಖಲಿಸುವುದನ್ನು ವಾಡಿಕೆ ಮಾಡಿಕೊಂಡಿದೆ.

ಭಾರತವು ಅರುಣಾಚಲ ಪ್ರದೇಶದ ಮೇಲೆ ಚೀನಾದ ಹಕ್ಕುಗಳನ್ನು ಪದೇ ಪದೇ ತಿರಸ್ಕರಿಸಿದೆ

## ಪೆನಿನ್ಸುಲಾದಲ್ಲಿ ಮತ್ತೆ ಜ್ವಾಲಾಮುಖಿ

**ರೇಕ್ ಜಾವಿಕ್:** ಐಸ್ಲ್ಯಾಂಡ್ ನ ರೇಕ್ಜಾನೆಸ್ ಪರ್ಯಾಯ ದ್ವೀಪದಲ್ಲಿ ಜ್ವಾಲಾಮುಖಿ ಸ್ಫೋಟಗೊಂಡಿದ್ದು ಇದು ಡಿಸೆಂಬರ್ ನಿಂದ ಸಂಭವಿಸುತ್ತಿರುವ ನಾಲ್ಕನೇ ಜ್ವಾಲಾಮುಖಿ ಸ್ಫೋಟವಾಗಿದೆ.



ಈ ಸ್ಫೋಟವನ್ನು ಐಸ್ಲ್ಯಾಂಡ್ ಹವಾಮಾನ ಕಚೇರಿ ದೃಢಪಡಿಸಿದ್ದು, ಸ್ಟೋರಾ ಸ್ಕೋಗ್ಫೆಲ್ ಮತ್ತು ಹಗಾಫೆಲ್ ನಡುವಿನ ಪ್ರದೇಶದಲ್ಲಿ ಜ್ವಾಲಾಮುಖಿ ಸ್ಫೋಟವಾಗಿದೆ.

ಸ್ಫೋಟಕ್ಕೆ ಮುನ್ನ ಈ ಪ್ರದೇಶದಲ್ಲಿ ಭೂಕಂಪನವೂ ಆಗಿದೆ ಎಂದು ತಿಳಿಸಿದೆ.

ಸ್ಫೋಟದಿಂದಾಗಿ ಜನಪ್ರಿಯ ಪ್ರವಾಸಿ ತಾಣವಾದ ಬ್ಲೂ ಲಗೂನ್ ನಿಂದ ಜನರನ್ನು ಬೇರೆ ಸ್ಥಳಕ್ಕೆ ಸ್ಥಳಾಂತರಿಸಲಾಗಿದೆ. ಮುನ್ನೆಚ್ಚರಿಕಾ ಕ್ರಮವಾಗಿ ಜ್ವಾಲಾಮುಖಿ ಸಂಭವಿಸಿದ ಪ್ರದೇಶದ ಸುತ್ತಮುತ್ತಲ ನಗರಗಳನ್ನು ಮುಚ್ಚಲಾಗಿದೆ ಎಂದು ಅಲ್ಲಿನ ಅಧಿಕಾರಿಗಳು ತಿಳಿಸಿದ್ದಾರೆ. ಕಳೆದ ಡಿಸೆಂಬರ್ ಯಿಂದ ಸಂಭವಿಸಿದ ನಾಲ್ಕನೇ ಜ್ವಾಲಾಮುಖಿ ಇದಾಗಿದ್ದು, ಪದೆ ಪದೇ ಸಂಭವಿಸುತ್ತಿರುವ ಜ್ವಾಲಾಮುಕಿಯಿಂದ ಜನರಲ್ಲಿ ಆತಂಕ ಮನೆ ಮಾಡಿದೆ. ಇಲ್ಲಿಯವರೆಗೆ ಸಂಭವಿಸಿದ ಜ್ವಾಲಾಮುಖಿಯಿಂದ ವಾತಾವರಣ ಸಾಕಷ್ಟು ಹಾನಿಗೊಳಗಾಗಿದ್ದು, ಜ್ವಾಲಾಮುಖಿ ಸ್ಫೋಟಗೊಂಡ ಸ್ಥಳದ ಸುತ್ತಮುತ್ತಲಿನ ಜನ ಬೇರೆ ಪ್ರದೇಶಗಳಿಗೆ ಗುಳೆ ಹೋಗಿದ್ದಾರೆ ಎನ್ನಲಾಗಿದೆ.

## ನಾನು ಅಧ್ಯಕ್ಷನಾಗಿ ಆಯ್ಕೆಯಾಗದಿದ್ದರೆ ರಕ್ತಪಾತವಾಗುತ್ತದೆ: ಟ್ರಂಪ್ !

**ಅಮೆರಿಕಾ:** ಅಮೆರಿಕ ಅಧ್ಯಕ್ಷೀಯ ಚುನಾವಣೆ ಜಗತ್ತಿನಾದ್ಯಂತ ತೀವ್ರ ಕುತೂಹಲ ಕೆರಳಿಸಲಿದೆ. ನಾನು ಅಧ್ಯಕ್ಷನಾಗಿ ಆಯ್ಕೆಯಾಗದಿದ್ದರೆ ರಕ್ತಪಾತವಾಗುತ್ತದೆ ಎಂದು ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಕೆ ನೀಡಿದ್ದಾರೆ.



ಚುನಾವಣಾ ಪ್ರಚಾರದ ಭಾಗವಾಗಿ ಡೊನಾಲ್ಡ್ ಟ್ರಂಪ್ ಓಹಿಯೋದಲ್ಲಿ ಭಾಗವಹಿಸಿದ್ದರು. ಅಧ್ಯಕ್ಷೀಯ ಚುನಾವಣೆಯು ಅಮೆರಿಕದ ಇತಿಹಾಸದಲ್ಲಿ ಅತ್ಯಂತ ಮಹತ್ವದ ದಿನಾಂಕವಾಗಿದೆ. ಹಿಂಸಾಕೃತ್ಯಗಳಲ್ಲಿ ಜನ ಸಾಯುವುದು ಖಚಿತ. ನನ್ನನ್ನು ಆಯ್ಕೆ ಮಾಡದಿದ್ದರೆ ರಕ್ತಪಾತ ಮಾಡುವುದಾಗಿ ಬೆದರಿಕೆ ಹಾಕಿದರು. ನಮ್ಮ ದೇಶಕ್ಕೆ ಇತಿಹಾಸ ನಿರ್ಮಿಸಲಿದೆ ಎಂದು ನಾನು ನಂಬುತ್ತೇನೆ. ಚೀನಾ ಮೆಕ್ಸಿಕೊದಲ್ಲಿ ಕಾರು ಉತ್ಪಾದಿಸಿ ಅದನ್ನು ಅಮೆರಿಕಕ್ಕೆ ಮಾರಾಟ ಮಾಡುವ ಯೋಜನೆಯನ್ನು ಟೀಕಿಸಿ, ತಾನು ಮರು ಆಯ್ಕೆಯಾದರೆ ಚೀನಾವು ಅಮೆರಿಕಕ್ಕೆ ಯಾವುದೇ ವಾಹನಗಳನ್ನು ಮಾರಾಟ ಮಾಡಲು ಸಾಧ್ಯವಾಗುವುದಿಲ್ಲ. ಒಂದು ವೇಳೆ ನಾನು ಗೆಲ್ಲದಿದ್ದರೆ, ಇಡೀ ವ್ಯವಸ್ಥೆಗೇ ಅಪಾಯ ಬರಲಿದೆ. ಅದು ದೇಶಕ್ಕೇ ಸಂಭವಿಸಲಿದೆ ಎಂದರು. ಜೋ ಬಿಡೆನ್ ಮತ್ತು ಡೊನಾಲ್ಡ್ ಟ್ರಂಪ್ ಯುನೈಟೆಡ್ ಸ್ಟೇಟ್ಸ್ ಅಧ್ಯಕ್ಷ ಸ್ಥಾನಕ್ಕಾಗಿ ಹೋರಾಡುತ್ತಿದ್ದಾರೆ. ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸತತ ಗೆಲುವಿನೊಂದಿಗೆ ಅಧ್ಯಕ್ಷೀಯ ಚುನಾವಣೆಯಲ್ಲಿ ತಮ್ಮ ಸ್ಥಾನವನ್ನು ಭದ್ರಪಡಿಸಿಕೊಂಡಿದ್ದಾರೆ. ಈಗ ಭಯಂಕರ ಬೆದರಿಕೆ ಹಾಕಿದ್ದಾರೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ಜಾಕಿ' ಚಿತ್ರದ ಹಾಡಿಗೆ ಸ್ಟೈಲೀಶ್ ಆಗಿ ಹೆಜ್ಜೆ ಹಾಕಿದ ಕಾರ್ತಿಕ್ ಮಹೇಶ್, ಕಿಶನ್

ಕರ್ನಾಟಕ ರತ್ನ ಪುನೀತ್ ರಾಜ್‌ಕುಮಾರ್ ಅವರ ಹುಟ್ಟುಹಬ್ಬಕ್ಕೆ ಇದೀಗ ಬಿಗ್ ಬಾಸ್ ವಿನ್ನರ್ ಕಾರ್ತಿಕ್ ಮಹೇಶ್, ಕಿಶನ್ ವಿಶೇಷವಾಗಿ ಶುಭಕೋರಿದ್ದಾರೆ. 'ಜಾಕಿ' ಸಿನಿಮಾದ ಹಾಡಿಗೆ ಸ್ಟೈಲೀಶ್ ಆಗಿ ಹೆಜ್ಜೆ ಹಾಕಿ ಪ್ರೀತಿಯ ಅಪ್ಪುಗೆ ಶುಭಹಾರೈಸಿದ್ದಾರೆ.

ದೊಡ್ಮನೆ ಆಟ ಗೆದ್ದ ಮೇಲೆ ಕಾರ್ತಿಕ್ ಮಹೇಶ್ ಅವರು ಮತ್ತಷ್ಟು ಆಕ್ಟೀವ್ ಆಗಿದ್ದಾರೆ. ಬಿಗ್ ಬಾಸ್ ಸೀಸನ್ 7ರ ಸ್ಪರ್ಧಿ ಕಿಶನ್ ಬಿಳಗಲಿ ಜೊತೆ ಸೇರಿ ಸಖತ್ ಆಗಿ ಡ್ಯಾನ್ಸ್ ಮಾಡಿದ್ದಾರೆ. ಮೊದಲೇ ಇಬ್ಬರು ಸೂಪರ್ ಡ್ಯಾನ್ಸರ್ಸ್, ಅಪ್ಪು ಸಾಂಗ್ ಹಾಕಿದ ಮೇಲೆ ಕೇಳಬೇಕೆ. ಮಸ್ತ್ ಆಗಿ ಡ್ಯಾನ್ಸ್ ಮಾಡುವ ಅಭಿಮಾನಿಗಳ ಮೆಚ್ಚುಗೆ ಗಳಿಸಿದ್ದಾರೆ.

ಕಾರ್ತಿಕ್ ಮಹೇಶ್- ಕಿಶನ್ ಇಬ್ಬರೂ ಸೂಟು ಬೂಟು ಧರಿಸಿ, ಜಾಕಿ ಹಾಡಿಗೆ ಸಖತ್ ಸ್ಟೈಲೀಶ್ ಆಗಿ ಹೆಜ್ಜೆ ಹಾಕುವ ಮೂಲಕ ಅಪ್ಪುಗೆ ಅರ್ಪಣೆ ಮಾಡಿದ್ದಾರೆ. ಸರಳತೆಯ ಸಾಮ್ರಾಟ, ನಗುವಿನ ಒಡೆಯ, ಪ್ರೀತಿಗೆ ಪರಮಾತ್ಮ, ಬದುಕಿಗೆ ಸ್ಪೂರ್ತಿ ನಮ್ಮ ಪವರ್ ಸ್ಟಾರ್. ಹುಟ್ಟುಹಬ್ಬದ



ಶುಭಾಶಯಗಳು ಎಂದು ವಿಡಿಯೋ ಶೇರ್ ಮಾಡುವಾಗ ಕಾರ್ತಿಕ್ ಅಡಿಬರಹ ನೀಡಿದ್ದಾರೆ.

ಇನ್ನೂ ಬಿಗ್ ಬಾಸ್ ನಮ್ರತಾ ಗೌಡ ಅವರು ಅಭಿಮಾನಿಗಳಿಗೆ ಅನ್ನಸಂತರ್ಪಣೆ ಮಾಡುವ ಮೂಲಕ ಇನ್ಮುಂದೆ ಪ್ರತಿ ವರ್ಷ ಈ ಕಾರ್ಯ ಮಾಡುವುದಾಗಿ ನಟಿ ತಿಳಿಸಿದ್ದಾರೆ.

# ಚಿರಂಜೀವಿ ಕುಟುಂಬದ ಕುಡಿ ನಿಹಾರಿಕಾ ಬರ್ತ್ ಡೇ

## ಎರಡನೇ ಮದುವೆ ಆಲೋಚನೆ ಮಾಡಿದ ನಟಿ

ನಿಹಾರಿಕಾ ಕೊನಿಡೆಲಾ ಅವರು ಇತ್ತೀಚೆಗೆ ಸಖತ್ ಸುದ್ದಿಯಲ್ಲಿದ್ದಾರೆ. ಅವರು ಚಿರಂಜೀವಿ ಸಹೋದರ ನಾಗಬಾಬು ಅವರ ಮಗಳು. ಅವರು ಉದ್ಯಮಿ ಚೈತನ್ಯ ಜೊನ್ನಲಗಡ್ಡ ಅವರನ್ನು ಪ್ರೀತಿಸಿ ಮದುವೆ ಆದರು. ಸೆಲೆಬ್ರಿಟಿ ಮನೆಯ ಮದುವೆ ಎಂಬ ಕಾರಣಕ್ಕೆ ದೊಡ್ಡ ಮಟ್ಟದಲ್ಲೇ ನಡೆಯಿತು. ಆದರೆ, ಕೆಲವೇ ವರ್ಷಗಳಲ್ಲಿ ಇವರ ಸಂಬಂಧ ಕೊನೆಯಾಗಿದೆ. ಇಂದು (ಮಾರ್ಚ್ 18) ಅವರ ಜನ್ಮದಿನ. ಈ ವಿಶೇಷ ದಿನದ ಸಂದರ್ಭದಲ್ಲೇ ಅವರು ಎರಡನೇ ಮದುವೆ ಆಗುವ ಆಲೋಚನೆ ಮಾಡಿದ್ದಾರೆ. ಹಾಗಂತ ಅವರು ಕೆಲವೇ ದಿನಗಳಲ್ಲಿ ವಿವಾಹ ಆಗುತ್ತಿಲ್ಲ. ಅವರು ಈ ಬಗ್ಗೆ ಹೆಚ್ಚು ಆಲೋಚಿಸಿ ನಿರ್ಧಾರ ತೆಗೆದುಕೊಳ್ಳಲಿದ್ದಾರಂತೆ.

ನಿಹಾರಿಕಾ ಅವರ ಜನ್ಮದಿನಕ್ಕೆ ಎಲ್ಲರೂ ಶುಭಾಶಯ ಕೋರುತ್ತಿದ್ದಾರೆ. ಅವರು 2020ರ ಡಿಸೆಂಬರ್ 9ರಂದು ಮದುವೆ ಆದರು. ರಾಜಸ್ಥಾನದಲ್ಲಿ ಈ ಮದುವೆ ನಡೆದಿತ್ತು. ಅವರು ಕಳೆದ ವರ್ಷ ಜುಲೈನಲ್ಲಿ ವಿಚ್ಛೇದನ ವಿಚಾರ ಘೋಷಣೆ ಮಾಡಿದರು. ಅವರ ವಿಚ್ಛೇದನಕ್ಕೆ ಹಲವು ಕಾರಣಗಳು ಇದ್ದವಂತೆ. ಆದರೆ, ಅದೆಲ್ಲವನ್ನೂ ವಿವರಿಸೋದು ಕಷ್ಟ ಎಂದು ಅವರು ಹೇಳಿದ್ದಾರೆ. ಜೊತೆಗೆ ಮತ್ತೊಂದು ಮದುವೆಯ ಬಗ್ಗೆಯೂ ಮಾತನಾಡಿದ್ದಾರೆ.





'ನನಗೆ ಮಕ್ಕಳು ಎಂದರೆ ಇಷ್ಟ. ಆದರೆ, ಮದುವೆ ಆಗೋಕೆ ಅದೊಂದೇ ಕಾರಣ ಅಲ್ಲ. ನನಗೆ ಪ್ರೀತಿ ಬಗ್ಗೆ ಯಾವುದೇ ನೆಗೆಟಿವ್ ಆಲೋಚನೆ ಇಲ್ಲ. ಒಂದು ಸಂಬಂಧ ಕೆಟ್ಟಿದೆ ಎಂದರೆ ಅದಕ್ಕೆ ಹಲವು ಕಾರಣಗಳು ಇರುತ್ತವೆ. ಒಂದು ಕಾರಣಕ್ಕೆ ಯಾರಾದರೂ ಬ್ರೇಕಪ್ ಮಾಡಿಕೊಳ್ಳುತ್ತಾರಾ' ಎಂದು ಪ್ರಶ್ನೆ ಮಾಡಿದ್ದಾರೆ. ಈ ಮೂಲಕ ತಮ್ಮ ಡಿವೋರ್ಸ್ ಗೆ ಹಲವು ಕಾರಣ ಇದೆ ಎಂದು ಅವರು ಪರೋಕ್ಷವಾಗಿ ಒಪ್ಪಿಕೊಂಡಿದ್ದಾರೆ.

'ನಾನು ಮತ್ತೆ ಮದುವೆ ಆಗಬಹುದು. ಆದರೆ, ಸದ್ಯಕ್ಕಂತೂ ಅಲ್ಲ' ಎಂದಿದ್ದಾರೆ. 'ಎರಡನೇ ಮದುವೆಗೆ ಲವ್ ಮ್ಯಾರೇಜ್ ಆಯ್ಕೆ ಮಾಡಿಕೊಳ್ಳುತ್ತೀರೋ ಅಥವಾ ಅರೇಂಜ್ ಮ್ಯಾರೇಜ್ ಆಯ್ಕೆ ಮಾಡಿಕೊಳ್ಳುತ್ತೀರೋ' ಎನ್ನುವ ಪ್ರಶ್ನೆ ಕೇಳಲಾಯಿತು. ಇದಕ್ಕೆ ಅವರು ನೇರ ಉತ್ತರ ನೀಡಿಲ್ಲ. 'ನಾನು ಸದ್ಯಕ್ಕೆ ಕೆಲಸದ ಮೇಲೆ ಹೆಚ್ಚು ಗಮನ ಹರಿಸುತ್ತಿದ್ದೇನೆ' ಎಂದು ಅವರು ಹೇಳಿದ್ದಾರೆ.

ನಿಹಾರಿಕಾ ಕೊನಿಡೆಲಾ ಸ್ಟಾರ್ ಕಿಡ್. ಹೀಗಾಗಿ ಚಿತ್ರರಂಗದಲ್ಲಿ ಸುಲಭದಲ್ಲಿ ಅವಕಾಶ ಸಿಕ್ಕಿತು. ಆದರೆ, ಅವರಿಗೆ ಅಷ್ಟು ಸುಲಭದಲ್ಲಿ ಗೆಲುವು ಸಿಕ್ಕಿಲ್ಲ. 2016ರಲ್ಲಿ ರಿಲೀಸ್ ಆದ 'ಒಕ ಮನಸು' ಸಿನಿಮಾ ಮೂಲಕ ಅವರು ಚಿತ್ರರಂಗಕ್ಕೆ ಕಾಲಿಟ್ಟರು. ಆ ಬಳಿಕ ಅವರು ಸಿನಿಮಾ ಆಯ್ಕೆಯಲ್ಲಿ ಸಖತ್ ಚ್ಯೂಸಿ ಆದರು. 2019ರಲ್ಲಿ ರಿಲೀಸ್ ಆದ 'ಸೈರಾ ನರಸಿಂಹ ರೆಡ್ಡಿ' ಅವರ ನಟನೆಯ ಕೊನೆಯ ಚಿತ್ರ. ಇದಾದ ಬಳಿಕ ಅವರ ನಟನೆಯ ಯಾವುದೇ ಸಿನಿಮಾ ರಿಲೀಸ್ ಆಗಿಲ್ಲ. ಇತ್ತೀಚೆಗೆ ಅವರು ಹೊಸ ಸಿನಿಮಾ ಒಪ್ಪಿಕೊಳ್ಳುತ್ತಿದ್ದಾರೆ. ಅವರು ನಿರ್ಮಾಣದಲ್ಲೂ ತೊಡಗಿಕೊಂಡಿದ್ದಾರೆ.

# ವರ್ತೂರು ಸಂತೋಷ್ ಹೆಸರು ಹೇಳದೇ ಕ್ಷಮೆ ಕೇಳಿದ ಜಗ್ಗೇಶ್



ನವರಸನಾಯಕ ಜಗ್ಗೇಶ್ ಅವರಿಗೆ ನಿನ್ನೆ ಹುಟ್ಟುಹಬ್ಬದ ಸಂಭ್ರಮ. ಅಪ್ಪು ಅಗಲಿಕೆಯ ನಂತರ ಜಗ್ಗೇಶ್ ತಮ್ಮ ಹುಟ್ಟುಹಬ್ಬವನ್ನು ಆಚರಿಸಿಕೊಳ್ಳುತ್ತಿರಲಿಲ್ಲ. ಆದರೆ ಈ ಬಾರಿ ಮಂತ್ರಾಲಯದಲ್ಲಿ ರಾಯರ ಸನ್ನಿಧಿಗೆ ಭೇಟಿ ನೀಡಿದ್ದಾರೆ. ಫೇಸ್‌ಬುಕ್ ಲೈವ್ ಗೆ ಬಂದು ಅಭಿಮಾನಿಗಳು ಜೊತೆ ಜಗ್ಗೇಶ್ ಮಾತನಾಡಿದ್ದಾರೆ. ಈ ವೇಳೆ, ವರ್ತೂರು ಸಂತೋಷ್ ಹೆಸರು ಬಳಸದೇ ಅವರಿಗೆ ಜಗ್ಗೇಶ್ ಕ್ಷಮೆ ಕೇಳಿದ್ದಾರೆ.

ಲೈವ್‌ನಲ್ಲಿ ಜಗ್ಗೇಶ್, ನನ್ನ ಬೆಳವಣಿಗೆಗೆ ಮುಖ್ಯ ಕಾರಣ ನನ್ನ ಗುರುಗಳು ರಾಘವೇಂದ್ರ ಸ್ವಾಮಿಗಳು ಎಂದು ಹೇಳಿದರು. ಮುಖ್ಯ ವಿಚಾರಕ್ಕೆ ಬರುತ್ತೇನೆ ಎಂದ ಜಗ್ಗೇಶ್, ನಾನು ನೇರವಾಗಿ ಮಾತಾಡುವ ಮನುಷ್ಯ, ಹಳ್ಳಿಯ ಸೊಗಡಿನವನು, ನನ್ನ ಮಾತುಗಳಲ್ಲಿ ಹಳ್ಳಿ ಪದಗಳು ಬಂದು ಬಿಡುತ್ತವೆ ಎಂದಿದ್ದಾರೆ.

ನಾನು ಎಂದಿಗೂ ಯಾರಿಗೂ ಕೆಟ್ಟದ್ದನ್ನು ಬಯಸುವುದಿಲ್ಲ ಎಂದು ಮಾತನಾಡಿದ್ದಾರೆ. ಬಳಿಕ ಜಗ್ಗೇಶ್, ಮೈಕ್ ಹಿಡಿದ ಮಾತಾಡುವಾಗ ನನ್ನ ಮಾತಿನಿಂದ ಯಾರಿಗಾದ್ರೂ ಬೇಜಾರಾಗಿದ್ದರೆ ಕ್ಷಮಿಸಿಬಿಡಿ. ನಿಮ್ಮ ತಂದೆಯ ವಯಸ್ಸಿನವನು ಅಂದುಕೊಂಡು ಕ್ಷಮಿಸಿ ಎಂದು ಮಾತನಾಡಿದ್ದಾರೆ.

ಸಿನಿಮಾವೊಂದರ ಪ್ರಚಾರದ ವೇಳೆ, ಹುಲಿ ಉಗುರು ಪ್ರಕರಣದ ಬಗ್ಗೆ ಮಾತನಾಡುತ್ತಾ, ಬಿಗ್ ಬಾಸ್ ಸ್ಪರ್ಧಿ ವರ್ತೂರು ಸಂತೋಷ್ ಅವರನ್ನು 'ಕಿತ್ತೋದ್ ನನ್ ಮಗ' ಎಂಬ ಪದ ಬಳಸಿದ್ದರು. ಇದಕ್ಕೆ ಭಾರೀ ವಿರೋಧ ವ್ಯಕ್ತವಾಗಿತ್ತು. ಆದರೆ ಈಗ ಜಗ್ಗೇಶ್, ವರ್ತೂರು ಸಂತೋಷ್ ಹೆಸರು ಹೇಳದೇ ಕ್ಷಮೆ ಕೇಳಿದ್ದಾರೆ.

# ಚೊಚ್ಚಲ ಮಗುವಿಗೆ ಜನ್ಮ ನೀಡಲಿದ್ದಾರೆ ದೀಪಿಕಾ ಪಡುಕೋಣೆ

ಬಾಲಿವುಡ್ ಬೆಡಗಿ ದೀಪಿಕಾ ಪಡುಕೋಣೆ ಇತ್ತೀಚೆಗೆ ತಾವು ತಾಯಿಯಾಗುತ್ತಿರುವ ಗುಡ್ ನ್ಯೂಸ್ ಹಂಚಿಕೊಂಡಿದ್ದರು. ಇದೀಗ ಬೆಂಗಳೂರಿನಲ್ಲಿಯೇ ಚೊಚ್ಚಲ ಮಗುವಿಗೆ ದೀಪಿಕಾ ಜನ್ಮ ನೀಡಲಿದ್ದಾರೆ ಎಂಬ ಸುದ್ದಿ ಸಿಕ್ಕಿದೆ.



ಕನ್ನಡತಿ ದೀಪಿಕಾ ಪಡುಕೋಣೆ- ರಣ್‌ವೀರ್ ಜೋಡಿ ಹಲವು ವರ್ಷಗಳು ಪ್ರೀತಿಸಿ 2018ರಲ್ಲಿ ವೈವಾಹಿಕ ಜೀವನಕ್ಕೆ ಕಾಲಿಟ್ಟರು. ಇದೀಗ 6 ವರ್ಷಗಳ ನಂತರ ಈ ಜೋಡಿ ಪೋಷಕರಾಗುತ್ತಿದ್ದಾರೆ. ಇನ್ನೂ ದೀಪಿಕಾ ಮೂಲತಃ ಮಂಗಳೂರಿನವರಾಗಿದ್ದು, ನಟಿಯ ಪೋಷಕರು ಸಾಕಷ್ಟು ವರ್ಷಗಳಿಂದ ಬೆಂಗಳೂರಿನಲ್ಲಿ ನೆಲೆಸಿದ್ದಾರೆ.

ಮಗುವಿಗೆ ಬೆಂಗಳೂರಿನಲ್ಲಿಯೇ ಜನ್ಮ ನೀಡಲು ದೀಪಿಕಾ ನಿಶ್ಚಯಿಸಿದ್ದಾರೆ. ಇಂದಿರಾ ನಗರದಲ್ಲಿ ದೀಪಿಕಾ ಪಡುಕೋಣೆ ಮನೆಯಿದ್ದು, ಇಲ್ಲಿಯೇ ಅವರು ಹಲವು ತಿಂಗಳುಗಳ ಕಾಲ ಸಮಯ ಕಳೆಯಲಿದ್ದಾರೆ. ನಗರದ ಪ್ರತಿಷ್ಠಿತ ಆಸ್ಪತ್ರೆಗೆ ನೆರವನ್ನು ಪಡೆದುಕೊಳ್ಳಲಿದ್ದಾರೆ. ಯಾವ ಆಸ್ಪತ್ರೆ, ಯಾವ ವೈದ್ಯರು ದೀಪಿಕಾ ಪಡುಕೋಣೆ ಹೆರಿಗೆ ಮಾಡಿಸಲಿದ್ದಾರೆ ಎಂಬುದು ಬಹಿರಂಗವಾಗಿಲ್ಲ.

ಬೆಂಗಳೂರಿನ ತಮ್ಮ ಇಷ್ಟದ ಜಾಗಗಳಲ್ಲಿ ಓಡಾಡಲಿದ್ದಾರೆ. ಬೆಂಗಳೂರಿನ ದೀಪಿಕಾ ಇಷ್ಟದ ಹೋಟೆಲ್ ಗಳಾದ ಗೀತಾ ಸ್ಟೋರ್ಸ್, ಮೇಘನಾ, ವಿದ್ಯಾರ್ಥಿ ಭವನ್, ಸಿಟಿಆರ್ ಇನ್ನಿತರೆ ಹೋಟೆಲ್‌ಗಳಿಗೆ ಭೇಟಿ ನೀಡಲಿದ್ದಾರೆ.

### ಆರ್‌ಸಿಬಿ ಚೊಚ್ಚಲ ಚಾಂಪಿಯನ್!

# ಹೆಣ್ಮಕ್ಕಳೇ ಸ್ಟ್ರಾಂಗು ಗುರು

16 ಆವೃತ್ತಿ ಕಳೆದರೂ ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಒಮ್ಮೆಯೂ ಟ್ರೋಫಿ ಎತ್ತಿಹಿಡಿಯದ ಆರ್‌ಸಿಬಿ ಪುರುಷರ ತಂಡಕ್ಕೆ, ರಾಯಲ್ ಚಾಲೆಂಜರ್ಸ್ ಬೆಂಗಳೂರು ಮಹಿಳಾ ತಂಡ ಮಾದರಿಯಾಗಿದೆ. ಮಹಿಳಾ ಪ್ರೀಮಿಯರ್ ಲೀಗ್‌ನ 2ನೇ ಆವೃತ್ತಿಯಲ್ಲೇ ಚಾಂಪಿಯನ್ ಕಿರೀಟ ಮುಡಿಗೇರಿಸಿಕೊಂಡಿದ್ದು, ಹೆಣ್ಮಕ್ಕಳೇ ಸ್ಟ್ರಾಂಗು ಗುರು ಎಂಬ ಮಾತನ್ನು ಮತ್ತೊಮ್ಮೆ ಸಾಬೀತು ಮಾಡಿದ್ದಾರೆ.

ಕಳೆದ 16 ಆವೃತ್ತಿಗಳಿಂದ ಪುರುಷರ ತಂಡವನ್ನು ಪ್ರೋತ್ಸಾಹಿಸುತ್ತಾ ಬರುತ್ತಿದ್ದ ಅಭಿಮಾನಿಗಳಂತೂ ಮಹಿಳಾ ತಂಡದ ಗೆಲುವನ್ನು ಹೆಮ್ಮೆಯಿಂದ ಕೊಂಡಾಡಿದರು. ಕೊನೆಯ ರನ್ ಸಿಡಿಸುತ್ತಿದ್ದಂತೆ ಅಭಿಮಾನಿಗಳು ಮಹಿಳಾಮಣಿಗಳು ಮೈದಾನದಲ್ಲೇ ಕುಣಿದು ಕುಪ್ಪಳಿಸಿದರು. ಆರ್‌ಸಿಬಿ ಪರ ಹರ್ಷೋದ್ಘಾರ ಕೂಗುತ್ತಾ ಗೆಲುವಿನ ಕೇಕೆ ಹಾಕಿದರು. ಆದ್ರೆ, ಚೊಚ್ಚಲ ಆವೃತ್ತಿಯ ಫೈನಲ್‌ನಲ್ಲಿ ಮುಂಬೈ ಇಂಡಿಯನ್ಸ್ ವಿರುದ್ಧ ಸೋತಿದ್ದ ಡೆಲ್ಲಿ ಕ್ಯಾಪಿಟಲ್ಸ್ ಸತತ 2ನೇ ಬಾರಿಯೂ ರನ್ನರ್ ಅಪ್ ಪ್ರಶಸ್ತಿಗೆ ತೃಪ್ತಿಪಟ್ಟುಕೊಂಡಿತು.

ಇಲ್ಲಿನ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆದ ಮಹಿಳಾ ಪ್ರೀಮಿಯರ್ ಲೀಗ್ ಫೈನಲ್ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ್ದ ಡೆಲ್ಲಿ ಕ್ಯಾಪಿಟಲ್ಸ್ ತಂಡ 18.3 ಓವರ್‌ಗಳಲ್ಲಿ 113 ರನ್ ಗಳಿಗೆ ಆಲೌಟ್ ಆಯಿತು. 114 ರನ್‌ಗಳ ಗುರಿ ಬೆನ್ನತ್ತಿದ ಆರ್‌ಸಿಬಿ 19.3 ಓವರ್‌ಗಳಲ್ಲೇ 2 ವಿಕೆಟ್ ನಷ್ಟಕ್ಕೆ 115 ರನ್ ಗಳಿಸಿ ಗೆಲುವು ಸಾಧಿಸಿತು.

114 ರನ್‌ಗಳ ಸುಲಭ ಗುರಿ ಬೆನ್ನತ್ತಿದ್ದ ಆರ್‌ಸಿಬಿ ಸಹ ನಿಧಾನಗತಿ ಬ್ಯಾಟಿಂಗ್ ನಡೆಸಿತು. ವಿಕೆಟ್ ತೆಗೆಯದಿದ್ದರೂ ಡೆಲ್ಲಿ ಕ್ಯಾಪಿಟಲ್ಸ್ ತಂಡ ಉತ್ತಮ ಫೀಲ್ಡಿಂಗ್ ಪ್ರದರ್ಶನ ತೋರಿತ್ತು. ಇದರಿಂದ ವಿಜಯಲಕ್ಷ್ಮಿ ಯಾರ ಪಾಲಿಗೆ ಒಲಿಯುತ್ತಾಳೆ ಎಂಬ




ಕುತೂಹಲ ಕೊನೆಯವರೆಗೂ ಇತ್ತು. ಓವರ್‌ನಲ್ಲೂ ಒಂದೊಂದು ಎಸೆತವೂ ಏನಾಗುತ್ತದೆ ಎಂದು ಅಭಿಮಾನಿಗಳು ಕುತೂಹಲದಿಂದಲೇ ವೀಕ್ಷಿಸುತ್ತಾ, ಕ್ಷಣ ಕ್ಷಣಕ್ಕೂ ಆರ್‌ಸಿಬಿ ಆರ್‌ಸಿಬಿ ಘೋಷಣೆ ಕೂಗುತ್ತಿದ್ದರು. ಆರ್‌ಸಿಬಿ ಪರ ಸ್ಮೃತಿ ಮಂದಾನ 31 ರನ್, ಸೋಫಿ ಡಿವೈನ್ 32 ರನ್, ಗಳಿಸಿದ್ರೆ, ಕೊನೇ ವರೆಗೂ ಹೋರಾಟ ನಡೆಸಿದ ಆಲ್‌ರೌಂಡರ್ ಎಲ್ಲಿಸ್ ಪೆರ್ರಿ 35 ರನ್, ರಿಚಾ ಘೋಷ್ 17 ರನ್ ಗಳಿಸುವ ಮೂಲಕ ಗೆಲುವಿಗೆ ಕಾರಣರಾದರು.

**49 ರನ್‌ಗಳಿಗೆ 10 ವಿಕೆಟ್ ಉಡೀಸ್:** ಇದಕ್ಕೂ ಮುನ್ನ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಆಯ್ದುಕೊಂಡ ಡೆಲ್ಲಿ ಕ್ಯಾಪಿಟಲ್ಸ್ ತಂಡದ ಪರ ನಾಯಕಿ ಮೆಗ್ ಲ್ಯಾನ್, ಶಫಾಲಿ ವರ್ಮಾ ಸ್ಫೋಟಕ ಪ್ರದರ್ಶನ ತೋರಿದ್ದರು. ಪವರ್ ಪ್ಲೇನಲ್ಲಿ 6 ಓವರ್‌ಗಳಿಗೆ ಯಾವುದೇ ವಿಕೆಟ್ ನಷ್ಟವಿಲ್ಲದೇ 61 ರನ್ ಬಾರಿಸಿದ್ದರು. ಇದರಿಂದ ಡೆಲ್ಲಿ ಕ್ಯಾಪಿಟಲ್ಸ್ ತಂಡ 200 ರನ್‌ಗಳ ಗಡಿ ದಾಟಲಿದೆ ಎಂದು ನಿರೀಕ್ಷಿಸಲಾಗಿತ್ತು. ಪವರ್ ಪ್ಲೇ ಮುಗಿಯುತ್ತಿದ್ದಂತೆ ಪೆವಿಲಿಯನ್ ಪೆರೇಡ್ ನಡೆಸಿದ ಡೆಲ್ಲಿ ಕ್ಯಾಪಿಟಲ್ಸ್ ತಂಡ ಮುಂದಿನ 49 ರನ್ ಗಳಿಗೆ ತನ್ನೆಲ್ಲಾ ವಿಕೆಟ್ ಕಳೆದುಕೊಂಡಿತು.

**ಆರ್‌ಸಿಬಿಗೆ ಟರ್ನಿಂಗ್ ಸಿಕ್ಕಿದ್ದೆಲ್ಲಿ?:** ಪವರ್‌ಪ್ಲೇನಲ್ಲಿ ಕಳಪೆ ಬೌಲಿಂಗ್ ಹಾಗೂ ಫೀಲ್ಡಿಂಗ್ ಪ್ರದರ್ಶನದಿಂದಾಗಿ 6 ಓವರ್‌ಗಳಲ್ಲಿ 61 ರನ್ ಚಚ್ಚಿಸಿಕೊಂಡಿದ್ದ ಆರ್‌ಸಿಬಿ, ನಂತರ ಡೆಲ್ಲಿ ಆಟಕ್ಕೆ ಬ್ರೇಕ್ ಹಾಕಿತು. 8ನೇ ಓವರ್‌ನಲ್ಲಿ ಬೌಲಿಂಗ್‌ಗೆ ಇಳಿದ ಸೋಫಿ ಮೊಲಿನೆಕ್ಸ್ ಮೊದಲ 4 ಎಸೆತಗಳಲ್ಲೇ ಅಗ್ರ ಕ್ರಮಾಂಕದ 3 ವಿಕೆಟ್ (ಶಫಾಲಿ ವರ್ಮಾ, ಜೆಮಿಮಾ ರೋಡ್ರಿಗ್ಸ್, ಅಲಿಸ್ ಕ್ಯಾಪ್ಸಿ) ಉರುಳಿಸಿ, ಕೇವಲ 1 ರನ್ ಬಿಟ್ಟುಕೊಟ್ಟರು. ಇದರಿಂದ 7 ಓವರ್‌ಗಳಲ್ಲಿ 64 ರನ್ ಗಳಿಸಿದ್ದ ಡೆಲ್ಲಿ ತಂಡ 81 ರನ್ ಗಳಿಸುವ ವೇಳೆಗೆ ಕೇವಲ 17 ರನ್‌ಗಳ ಅಂತರದಲ್ಲೇ ಪ್ರಮುಖ 6 ವಿಕೆಟ್ ಕಳೆದುಕೊಂಡಿತ್ತು. ಇದು ಆರ್‌ಸಿಬಿಗೆ ಬಹುದೊಡ್ಡ ಲಾಭವಾಯಿತು. ಅಲ್ಲಿಂದ ಒಂದೊಂದು ರನ್ ಕದಿಯುವುದಕ್ಕೂ ಹೆಣಗಾಡುತ್ತಿದ್ದ ಡೆಲ್ಲಿ ತಂಡ ವಿಕೆಟ್‌ಗಳನ್ನು 113 ರನ್‌ಗಳಿಗೆ ಆಲೌಟ್ ಆಯಿತು. ಡೆಲ್ಲಿ ಕ್ಯಾಪಿಟಲ್ಸ್ ಪರ ಸ್ಫೋಟಕ ಪ್ರದರ್ಶನ ನೀಡಿದ ಶಫಾಲಿ ವರ್ಮಾ 27 ಎಸೆತಗಳಲ್ಲಿ 44 ರನ್ ಚಚ್ಚಿದರೆ (3 ಸಿಕ್ಸರ್, 2 ಬೌಂಡರಿ), ಮೆಗ್ ಲ್ಯಾನಿಂಗ್ 23 ರನ್, ರಾಧಾ ಯಾಧವ್ 12 ರನ್ ಗಳಿಸಿ ಪೆವಿಲಿಯನ್ ಸೇರಿದರು. ಅಗ್ರ ಕ್ರಮಾಂಕದ ಬ್ಯಾಟರ್‌ಗಳಾದ ಜೆಮಿಮಾ ರೊಡ್ರಿಗ್ಸ್, ಅಲಿಸ್ ಕ್ಯಾಪ್ಸಿ ಶೂನ್ಯಕ್ಕೆ ವಿಕೆಟ್ ಒಪ್ಪಿಸಿದ್ರೆ, ಜೆಸ್ ಜೊನಾಸೆನ್ 3 ರನ್, ಮಾರಿಜಾನ್ನೆ ಕಪ್ 8 ರನ್, ಮಿನ್ನು ಮಣಿ 5 ರನ್, ಅರುಂಧತಿ ರೆಡ್ಡಿ 10 ರನ್, ಶಿಖಾ ಪಾಂಡೆ 5 ರನ್ ಗಳಿಸಿದರು.

# ಒಂದಲ್ಲ ಎರಡು ಪ್ರಶಸ್ತಿ ಗೆದ್ದ ಕನ್ನಡತಿ ಶ್ರೇಯಾಂಕಾ ಪಾಟೀಲ್

ಮಹಿಳಾ ಪ್ರೀಮಿಯರ್ ಲೀಗ್‌ನಲ್ಲಿ ಆರ್‌ಸಿಬಿ ಪರ ಅತ್ಯುತ್ತಮ ಆಟ ಪ್ರದರ್ಶನ ನೀಡಿದ ಕನ್ನಡತಿ ಶ್ರೇಯಾಂಕಾ ಪಾಟೀಲ್ ಎರಡು ಪ್ರಶಸ್ತಿಗಳನ್ನು ಮುಡಿಗೇರಿಸಿ ಅಭಿಮಾನಿಗಳ ಮೆಚ್ಚುಗೆಗೆ ಪಾತ್ರವಾಗಿದ್ದಾರೆ. ಈ ಟೂರ್ನಿಯಲ್ಲಿ ಒಟ್ಟು13 ವಿಕೆಟ್ ಪಡೆಯುವ ಮೂಲಕ ನೇರಳೆ ಕ್ಯಾಪ್ ಪಡೆದಿದ್ದಾರೆ. ಕೈಗೆ ಗಾಯಗೊಂಡ ಪರಿಣಾಮ ಶ್ರೇಯಾಂಕಾ ಪಾಟೀಲ್ 2 ಪಂದ್ಯ ಆಡಿರಲಿಲ್ಲ. ಹೀಗಾಗಿ ಕೇವಲ 8 ಪಂದ್ಯವಾಡಿ 13 ವಿಕೆಟ್ ಕಿತ್ತು ವಿಶೇಷ ಸಾಧನೆ ಮಾಡಿದ್ದಾರೆ.



ಅಷ್ಟೇ ಅಲ್ಲದೇ ಈ ಟೂರ್ನಿಯ ಉದಯೋನ್ಮುಖ ಆಟಗಾರ್ತಿ ಎಂಬ ಪ್ರಶಸ್ತಿಯನ್ನು 21 ವರ್ಷದ ಶ್ರೇಯಾಂಕಾ ಪಾಟೀಲ್ ಗೆದ್ದುಕೊಂಡಿದ್ದಾರೆ. ಈ ಪ್ರಶಸ್ತಿ ಸಿಗಲು ಕಾರಣ ಇದೆ. ಆರಂಭದ ಪಂದ್ಯಗಳಲ್ಲಿ ಶ್ರೇಯಾಂಕಾ ಪಾಟೀಲ್ ಬೌಲಿಂಗ್ ಲಯ ಕಂಡುಕೊಳ್ಳಲು ವಿಫಲರಾಗಿದ್ದರೂ ಕೊನೆ ಕೊನೆಗೆ ಅತ್ಯುತ್ತಮ ಬೌಲಿಂಗ್ ಪ್ರದರ್ಶನ ನೀಡಿದ್ದರು.

ಮುಂಬೈ ವಿರುದ್ಧ ಎಲಿಮಿನೇಟರ್ ಪಂದ್ಯದಲ್ಲಿ 4 ಓವರ್ ಎಸೆದು 16 ರನ್ ನೀಡಿ 2 ವಿಕೆಟ್ ಪಡೆದಿದ್ದರು. ಈ ಪಂದ್ಯದಲ್ಲಿ ಮುಂಬೈ ನಾಯಕಿ ಹರ್ಮನ್‌ಪ್ರೀತ್ ಕೌರ್ ಅವರ ವಿಕೆಟ್ ಪಡೆಯುವ ಮೂಲಕ ಪಂದ್ಯಕ್ಕೆ ರೋಚಕ ತಿರುವು ನೀಡಿದ್ದರು.

ಫೈನಲ್ ಪಂದ್ಯದಲ್ಲಿ 6ನೇ ಅವರಾಗಿ ಬೌಲಿಂಗ್ ಗೆ ಇಳಿದ ಶ್ರೇಯಾಂಕಾ 3.3 ಓವರ್ ಎಸೆದು 12 ರನ್ ನೀಡಿ 4 ವಿಕೆಟ್ ಪಡೆದರು. ಅದರಲ್ಲೂ ಡೆಲ್ಲಿ ನಾಯಕಿ ಮೆಗ್ ಲ್ಯಾನಿಂಗ್ ಅವರನ್ನು ಎಲ್‌ಬಿಗೆ ಕೆಡವು ಮೂಲಕ ಆರ್‌ಸಿಬಿಗೆ ಮುನ್ನಡೆ ತಂದುಕೊಟ್ಟರು. ಆರ್‌ಸಿಬಿಗೆ ಗೆಲುವಿನ ಹಿಂದಿನ ಈ ಸಾಧನೆಗೆ ಅರ್ಹವಾಗಿಯೇ ಶ್ರೇಯಾಂಕಾ ಪಾಟೀಲ್ ಗೆ ಉದಯೋನ್ಮುಖ ಆಟಗಾರ್ತಿ ಪ್ರಶಸ್ತಿ ಲಭಿಸಿದೆ.

ಸಾಮಾಜಿಕ ಜಾಲತಾಣದಲ್ಲಿ ಶ್ರೇಯಾಂಕಾ ಪರ ಮೆಚ್ಚುಗೆ ವ್ಯಕ್ತವಾಗುತ್ತಿದ್ದು ಆರ್‌ಸಿಬಿ ತನ್ನ ಮೊದಲ ಐಪಿಎಲ್ ಪಂದ್ಯವಾಡಿದಾಗ ಅವರಿಗೆ 5 ವರ್ಷವಾಗಿತ್ತು. ಆದರೆ ವಿರಾಟ್ ಕೊಹ್ಲಿಗಿಂತ ಮೊದಲು ಪ್ರಶಸ್ತಿಗೆ ಮುತ್ತಿಕ್ಕಿದ್ದಾರೆ ಎಂದು ಅಭಿಮಾನಿಗಳು ಶ್ಲಾಘಿಸುತ್ತಿದ್ದಾರೆ.

# ಮೈಸೂರು ಬಿಜೆಪಿ ಅಭ್ಯರ್ಥಿ ಯದುವೀರ್ ಟೆಂಪಲ್ ರನ್

**ಮಂಡ್ಯ:** ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಟೆಂಪಲ್ ರನ್ ಮಾಡುತ್ತಿದ್ದಾರೆ. ಶ್ರೀ ಕ್ಷೇತ್ರ ಆದಿಚುಂಚನಗಿರಿ ಯದುವೀರ್ ಭೇಟಿ ನೀಡಿದ್ದಾರೆ. ಶ್ರೀ ಕ್ಷೇತ್ರದ ಕಾಲಭೈರವೇಶ್ವರ ಸ್ವಾಮಿ ದರ್ಶನ ಪಡೆದು ಯದುವೀರ್ ವಿಶೇಷ ಪೂಜೆ ಸಲ್ಲಿಸಿದ್ದಾರೆ. ಯದುವೀರ್ ಆಗಮನದ ವೇಳೆ ಪೀಠಾಧಿಪತಿ ಶ್ರೀ ನಿರ್ಮಲಾನಂದ ಸ್ವಾಮೀಜಿ ವಿಶೇಷ ಪೂಜಾ ಕೈಂಕರ್ಯ ನಡೆಸಿದರು.

ಯದುವೀರ್ ದೇವಾಲಯಕ್ಕೆ ಆಗಮಿಸುತ್ತಿದ್ದಂತೆ ಯದುವೀರ್‌ಗೆ ದೇಗುಲದಿಂದ ಪೂರ್ಣಕುಂಭ ಸ್ವಾಗತ ಕೋರಲಾಯಿತು. ದೇವರ ದರ್ಶನದ ಬಳಿಕ ಪೀಠಾಧಿಪತಿ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಜೊತೆ ಮಾತುಕತೆ ನಡೆಸಿದರು.

ಅಲ್ಲದೇ, ಆದಿಚುಂಚನಗಿರಿಗೆ ತುಮಕೂರು ಬಿಜೆಪಿ ಅಭ್ಯರ್ಥಿ ವಿ.ಸೋಮಣ್ಣ ಕೂಡ ಭೇಟಿ ನೀಡಿ ಕಾಲಭೈರವೇಶ್ವರನ ದರ್ಶನ ಪಡೆದರು.



ಬಾಲಗಂಗಾಧರನಾಥ ಸ್ವಾಮೀಜಿಯವರ ಗದ್ದುಗೆಗೆ ಪುಷ್ಪ ನಮನ ಸಲ್ಲಿಸಿದರು.

ದೇವರ ದರ್ಶನದ ಬಳಿಕ ಶ್ರೀಕ್ಷೇತ್ರದ ಪೀಠಾಧಿಪತಿ ಶ್ರೀ ನಿರ್ಮಲಾನಂದನಾಥ ಶ್ರೀಗಳ ಆಶೀರ್ವಾದ ಪಡೆದು ಕೆಲಹೊತ್ತು ಮಾತುಕತೆ ನಡೆಸಿದರು. ವಿ.ಸೋಮಣ್ಣಗೆ ಮಾಜಿ ಸಚಿವ ಕೆ.ಗೋಪಾಲಯ್ಯ, ಶಾಸಕ ಸುರೇಶಗೌಡ ಸಾಥ್ ನೀಡಿದರು.

# ಡಿಕೆ ಬ್ರದರ್ಸ್ ವಿರುದ್ಧ ಮುನಿರತ್ನ ಕಿಡಿ

**ಆನೇಕಲ್:** ಡಿಕೆ ಬ್ರದರ್ಸ್ ವರ್ಸಸ್ ದೋಸ್ತಿ ನಾಯಕರ ಜಿದ್ದಾಜಿದ್ದಿಯಿಂದ ಬೆಂಗಳೂರು ಗ್ರಾಮಾಂತರ ಕಣ ಈ ಬಾರಿ ರಣರಣ ಅಂತಿದೆ. ಆನೇಕಲ್‌ನ ಚಂದಾಪುರದಲ್ಲಿ ದೋಸ್ತಿನಾಯಕರು ಬೃಹತ್ ಸಮಾವೇಶ ನಡೆಸಿ ಕಾಂಗ್ರೆಸ್ ನಾಯಕರ ವಿರುದ್ಧ ವಾಗ್ದಾಳಿ ನಡೆಸಿದ್ರು.

ಸಮಾವೇಶದ ಬಳಿಕ ಶಾಸಕ ಮುನಿರತ್ನ ಮಾತಾಡಿ, ಬಡವರ ರಕ್ತ ಹೀರಿದ ರೆಡ್ ಕಲರ್ ನಮಗೆ ಬೇಡ. ಲಕ್ಷಾಂತರ ಜನರ ಜೀವ ಉಳಿಸಿದ ವೈಟ್ ಕಲರ್ ಡಾ.ಮಂಜುನಾಥ್ ಬೇಕು ಅಂದ್ರು. ಮಾಗಡಿ ಬಾಲಕೃಷ್ಣ, ರಾಮನಗರದ ಇಕ್ಬಾಲ್ ಹುಸೇನ್ ವಿರುದ್ಧ ಕೆಂಡ ಕಾರಿದರು.

ಡಾಕ್ಟರ್ ಮಂಜುನಾಥ್ ಬಲಿಕಾ ಬಕ್ರಾ ಎಂಬ ಶಾಸಕ ಇಕ್ಬಾಲ್ ಹುಸೈನ್ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿ, ಬಲೀಕಾ ಬಕ್ರಾ ಅಂದ್ರೆ ಏನು ಅಂತ ಅರ್ಥ ಗೊತ್ತಿದ್ಯಾ?. ಬಲಿ ಕೊಡೋದು ಅಂದ್ರೆ ಕುರಿಯನ್ನು ಸಾಯಿಸಿದ ಹಾಗೆ. ಡಾಕ್ಟರ್ ಮಂಜುನಾಥ್ ಅವರ ಸಾಧನೆ ಬಗ್ಗೆ ನಿಮಗೆ ಅರಿವಿದೆಯಾ?. ಅವರ ಬಗ್ಗೆ ಮಾತನಾಡುವ ಮುಂಚೆ ಆಲೋಚಿಸಬೇಕು ಎಂದು ವಾಗ್ದಾಳಿ ನಡೆಸಿದರು.



ಮತ್ತೊಂದ್ಕಡೆ, ಸಿಪಿ ಯೋಗೇಶ್ವರ್ ಮಾತಾಡಿ, ಎಲೆಕ್ಷನ್ ನಂತರ ಸರ್ಕಾರ ಇರಲ್ಲ. ಡಿಕೆ ಸುರೇಶ್‌ಊಲಿಗೆ ಬಾಲಕೃಷ್ಣ, ಇಕ್ಬಾಲ್ ಹುಸೇನ್ ಕಾರಣ ಆಗ್ತಾರೆ ಅಂದ್ರು. ಇದಕ್ಕೂ ಮುನ್ನ ಚನ್ನಪಟ್ಟಣದಲ್ಲಿ ತಾಲೂಕು ಮಟ್ಟದ ಬಿಜೆಪಿ-ಜೆಡಿಎಸ್ ಕಾರ್ಯಕರ್ತರ ಸಮ್ಮಿಲನ ಕಾರ್ಯಕ್ರಮ ನಡೆಸಿದರು. ಸಮಾವೇಶ ನಡೆಸಿ ಡಿ.ಕೆ. ಸುರೇಶ್‌ರನ್ನು ಕಿತ್ತೆಸೆಯೋದು ನಮ್ಮ ಗುರಿ. ಬಿಜೆಪಿ-ಜೆಡಿಎಸ್ ಕಾರ್ಯಕರ್ತರು ಒಗ್ಗಟ್ಟಿನಿಂದ ಇದನ್ನು ಸಾಧಿಸೋಣ ಅಂತ ಕರೆ ನೀಡಿದ್ರು.

# ಬುಲಾವ್ ಬೆನ್ನಲ್ಲೇ ದಿಢೀರ್ ದೆಹಲಿಗೆ ತೆರಳಿದ ಸಂಸದೆ ಸುಮಲತಾ

**ಮಂಡ್ಯ:** ಮಾಜಿ ಮುಖ್ಯಮಂತ್ರಿ ಹೆಚ್‌ಡಿ ಕುಮಾರಸ್ವಾಮಿ ಅವರನ್ನು ಶನಿವಾರ ಭೇಟಿಯಾದ ಬೆನ್ನಲ್ಲಿಯೇ ಸಂಸದೆ ಸುಮಲತಾ ಅಂಬರೀಶ್ ದೆಹಲಿಗೆ ತೆರಳಿದ್ದಾರೆ.



ಈ ಬಾರಿಯ ಲೋಕಸಭಾ ಚುನಾವಣೆಗೆ ಮಂಡ್ಯ ಕ್ಷೇತ್ರದಿಂದ ಜೆಡಿಎಸ್‌ಗೆ ಬಿಜೆಪಿ ಹೈಕಮಾಂಡ್ ಟಿಕೆಟ್ ನೀಡುವುದು ಫಿಕ್ಸ್ ಆಗಿದೆ ಎನ್ನಲಾಗುತ್ತಿದೆ. ಹೀಗಾಗಿ ಮಂಡ್ಯದಲ್ಲಿ ಸ್ಪರ್ಧೆಗೆ ದಳಪತಿಗಳ ಸಿದ್ಧತೆ ನಡೆಸುತ್ತಿದ್ದಾರೆ. ಇದರ ಬೆನ್ನಲ್ಲೇ ಸುಮಲತಾಗೆ ಬಿಜೆಪಿ ಹೈಕಮಾಂಡ್ ಬುಲಾವ್ ನೀಡಿದೆ.

ಕೂಡಲೇ ದೆಹಲಿಗೆ ಬರಬೇಕೆಂದು ಹೈಕಮಾಂಡ್ ಸೂಚನೆ ನೀಡಿದ ಬೆನ್ನಲ್ಲಿಯೇ ಇಂದು ಮಧ್ಯಾಹ್ನವೇ ಸುಮಲತಾ ಅವರು ರಾಷ್ಟ್ರರಾಜಧಾನಿಗೆ ಹೋಗಿದ್ದಾರೆ. ಕೆಲವೇ ಕ್ಷಣಗಳಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಜೆಪಿ ನಡ್ಡಾ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಲಿದ್ದಾರೆ.

ಒಂದು ವೇಳೆ ಮಂಡ್ಯ ಟಿಕೆಟ್ ಕೈ ತಪ್ಪಿದ್ರೆ ಸುಮಲತಾ ನಡೆಯೇನು..?, ಪಕ್ಷೇತರರಾಗಿ ಸ್ಪರ್ಧಿಸ್ತಾರಾ?? ಕಣದಿಂದ ಸರಿಯುತ್ತಾರಾ ಎಂಬ ಪ್ರಶ್ನೆ ಎದ್ದಿದೆ. ಒಟ್ಟಿನಲ್ಲಿ ಸುಮಲತಾ ಅವರ ಮುಂದಿನ ನಡೆ ತೀವ್ರ ಕುತೂಹಲ ಹುಟ್ಟಿಸಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com